23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 319 | ನವದೆಹಲಿ | ಬೆಲೆ ₹10 | ಮೇ 25 2026, ಸೋಮವಾರ




ಶ್ರೀ ಸಿದ್ದರಾಮಯ್ಯ
ಸನ್ಮಾನ್ಯ ಮುಖ್ಯಮಂತ್ರಿಗಳು,
ಕರ್ನಾಟಕ ಸರ್ಕಾರ

ಕರ್ನಾಟಕ ಸರ್ಕಾರ

ರಾಷ್ಟ್ರೀಯ ಆರೋಗ್ಯ ಅಭಿಯಾನ
राष्ट्रीय स्वास्थ्य मिशन

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ



ಶ್ರೀ ಡಿ. ಕೆ. ಶಿವಕುಮಾರ್
ಮಾನ್ಯ ಉಪ ಮುಖ್ಯಮಂತ್ರಿಗಳು,
ಕರ್ನಾಟಕ ಸರ್ಕಾರ



ಉದ್ಘಾಟನಾ ಕಾರ್ಯಕ್ರಮ :

## ರಾಷ್ಟ್ರದಲ್ಲೇ 1 ಸರ್ಕಾರಿ ಸ್ವಾಮ್ಯದ ಅತ್ಯಾಧುನಿಕ ಮಾದರಿಯ

## ಸಮಗ್ರ ಕಮಾಂಡ್ ಮತ್ತು ಕಂಟ್ರೋಲ್ ಸೆಂಟರ್

**108 ಆರೋಗ್ಯ ಕವಚ ಮತ್ತು 104 ಆರೋಗ್ಯ ಸಹಾಯ ವಾಣಿ** | **ಒಂದು ಕರೆ ನಮಗೆ, ತುರ್ತು ಸೇವೆ ನಿಮಗೆ.**

## ಯೋಜನೆಯ ಪ್ರಮುಖಾಂಶಗಳು:

### ಸರ್ಕಾರದ ಒಡೆತನದ ಸಮಗ್ರ ತುರ್ತು ಆರೋಗ್ಯಜಾಲ

ತುರ್ತು ಆಂಬುಲೆನ್ಸ್ ಸೇವೆಗಳಾದ 108 ಆರೋಗ್ಯಕವಚ, ನಗು-ಮಗು ಮತ್ತು ಇತರ ಆಂಬ್ಯುಲೆನ್ಸ್‌ಗಳ ಸುಗಮ ಕಾರ್ಯಾಚರಣೆಗಾಗಿ ಕರ್ನಾಟಕ ಸರ್ಕಾರವು ಅತ್ಯಾಧುನಿಕ ಕೇಂದ್ರೀಕೃತ ಕಮಾಂಡ್ ಮತ್ತು ಕಂಟ್ರೋಲ್ ಸೆಂಟರ್‌ಅನ್ನು ಪರಿಚಯಿಸುತ್ತಿದೆ.

### ಆರೋಗ್ಯ ಸಂಸ್ಥೆಗಳ ಡಿಜಿಟಲ್ ಮ್ಯಾಪಿಂಗ್


- ಸರ್ಕಾರಿ ಮತ್ತು ಖಾಸಗಿ ಆಸ್ಪತ್ರೆಗಳ ಜಿಐಎಸ್ (GIS) ಮ್ಯಾಪಿಂಗ್
- ಸಮೀಪದ ಸೂಕ್ತ ಚಿಕಿತ್ಸಾ ಸೌಲಭ್ಯವಿರುವ ಆರೋಗ್ಯ ಸಂಸ್ಥೆಗಳ ಗುರುತಿಸುವಿಕೆ.

### ಸದೃಢ ಮತ್ತು ಸುರಕ್ಷಿತ ಮೂಲಭೂತ ಸೌಕರ್ಯಗಳು

- ಕರ್ನಾಟಕ ರಾಜ್ಯ ಡೇಟಾ ಸೆಂಟರ್ (KSDC) ಸುರಕ್ಷಿತ ಸರ್ವರ್‌ಗಳಲ್ಲಿ ಅನುಷ್ಠಾನ ಮಾಡಲಾಗಿದೆ.
- ಕರ್ನಾಟಕ ರಾಜ್ಯ ವೈಡ್ ಏರಿಯಾ ನೆಟ್‌ವರ್ಕ್ (KSWAN) ಮತ್ತು ಡ್ಯುಯಲ್ SIP ಟ್ರಂಕ್ ಲೈನ್‌ಗಳ ಮೂಲಕ ವಿಶ್ವಾಸಾರ್ಹ ಮತ್ತು ಅನಿಯಮಿತ ಸಂಪರ್ಕ ಜಾಲ.

### ರಿಯಲ್ ಟೈಮ್ ಆಂಬುಲೆನ್ಸ್ ಟ್ರಾಕಿಂಗ್

- ಸ್ವಯಂಚಾಲಿತವಾಗಿ ವಾಹನಗಳ ಸಂಚಲನೆಯ ಸ್ಥಳ ಪತ್ತೆ ಮತ್ತು ಅನುಸರಣಾ ವ್ಯವಸ್ಥೆಯನ್ನು ಹೊಂದಿರುವ ಆಂಬುಲೆನ್ಸ್‌ಗಳು.
- ತಲುಪುವ ನಿರೀಕ್ಷಿತ ಸಮಯಕ್ಕೆ (ETA) ಅನುಗುಣವಾಗಿ ಸಮೀಪದ ಆಂಬುಲೆನ್ಸ್ ವ್ಯವಸ್ಥೆ.
- ಕಿರು ಸಂದೇಶಗಳ ಮೂಲಕ ಆಂಬುಲೆನ್ಸ್‌ಗಳ ಸಂಚಲನೆಯ ಅನುಸರಣಾ ವಿವರಗಳುಳ್ಳ ಮಾಹಿತಿ ರವಾನೆ.
- ಮೊಬೈಲ್ ಡೇಟಾ ಟರ್ಮಿನಲ್ (MDT) ಸಾಧನಗಳನ್ನು ಬಳಸಿಕೊಂಡು ಡಿಜಿಟಲ್ ಪೇಷಂಟ್ ಕೇರ್ ರೆಕಾರ್ಡ್ ಮೂಲಕ ರೋಗಿಯ ಪ್ರಮುಖ ಆರೋಗ್ಯ ಮಾಹಿತಿಯ ದಾಖಲಾತಿ.




*ಕರ್ನಾಟಕದ ಜಿಲ್ಲಾವಾರು ಆಂಬುಲೆನ್ಸ್‌ಗಳು

### ತುರ್ತು ಸಂದರ್ಭಗಳಲ್ಲಿ ತ್ವರಿತ ಸ್ಪಂದನೆ

- ತುರ್ತು ಕರೆಗಳಿಗೆ 5 ಸೆಕೆಂಡುಗಳ ಒಳಗೆ ಪ್ರತಿಕ್ರಿಯೆ.
- ಕರೆ ಮಾಡಿದವರ ನಿಖರ ಸ್ಥಳವನ್ನು ಗುರುತಿಸಲು ಸ್ವಯಂಚಾಲಿತ ಸ್ಥಳ ಆಧಾರಿತ ವ್ಯವಸ್ಥೆ (LBS).
- ಅಮೂಲ್ಯವಾದ ಸಮಯವನ್ನು ಉಳಿಸಲು ತ್ವರಿತವಾಗಿ ಆಂಬುಲೆನ್ಸ್ ವ್ಯವಸ್ಥೆ ಮಾಡಲಾಗುವುದು.

### ತಂತ್ರಜ್ಞಾನ ಆಧಾರಿತ ವೈದ್ಯಕೀಯ ಬೆಂಬಲ ವ್ಯವಸ್ಥೆ

- ಆಸ್ಪತ್ರೆಗೆ ದಾಖಲಿಸುವ ಮುನ್ನ ತಜ್ಞ ವೈದ್ಯರ ಮಾರ್ಗದರ್ಶನದಿಂದ ತುರ್ತು ಆರೈಕೆ.
- MDT ಸಾಧನಗಳ ಮೂಲಕ ನೈಜ-ಸಮಯದ (Real-time) ಸಮಾಲೋಚನೆ.
- ತುರ್ತು ಸಮಯದಲ್ಲಿ ರೋಗಿಗಳಿಗೆ ಚಿಕಿತ್ಸೆ ನೀಡಲು ಆಸ್ಪತ್ರೆಗಳಲ್ಲಿ ಪೂರ್ವ ಸಿದ್ಧತೆ ಮಾಡಿಕೊಳ್ಳಲು ಸಂದೇಶ ರವಾನೆ.

### ಜೀವ ರಕ್ಷಣೆಗೆ ಬದ್ಧತೆ

- **ಸಕಾಲದಲ್ಲಿ ತುರ್ತು ವೈದ್ಯಕೀಯ ಆರೈಕೆಯನ್ನು ಒದಗಿಸುವುದು:**
- ಗರ್ಭಿಣಿಯರು
- ಅಪಘಾತದ ಸಂತ್ರಸ್ತರು
- ಆರೋಗ್ಯ ವಿಪತ್ತಿನ ತುರ್ತು ಪರಿಸ್ಥಿತಿಗಳು
- ತುರ್ತು ಚಿಕಿತ್ಸೆಯು ಅಗತ್ಯವಿರುವ ರೋಗಿಗಳು

### ಬೃಹತ್ ಮತ್ತು ಸಮಗ್ರ ತುರ್ತು ವಾಹನಗಳ ಸಮೂಹ

- ಆರೋಗ್ಯ ಮತ್ತು ಆರೋಗ್ಯ ಸಂಬಂಧಿ ಇಲಾಖೆಗಳ ವ್ಯಾಪ್ತಿಯಲ್ಲಿರುವ ಆಂಬುಲೆನ್ಸ್‌ಗಳ ಕೇಂದ್ರೀಕೃತ ಕಾರ್ಯಾಚರಣೆ.
- 104 ಆರೋಗ್ಯ ಸಹಾಯವಾಣಿ, 112 ERSS, 181 ಮಹಿಳಾ ಮತ್ತು ಮಕ್ಕಳ ಸಹಾಯವಾಣಿ ಹಾಗೂ ಇನ್ನಿತರ ಸೇವೆಗಳೊಂದಿಗೆ ಸಂಯೋಜನೆ.
- '112 ಇಂಡಿಯಾ' ಮೊಬೈಲ್ ಅಪ್ಲಿಕೇಷನ್ ಮೂಲಕ ತುರ್ತು ವೈದ್ಯಕೀಯ ನೆರವು.



## ಕರುನಾಡಿನ ಜನತೆಯ ಆರೋಗ್ಯ ರಕ್ಷಣೆಗೆ ತಂತ್ರಜ್ಞಾನ ಆಧಾರಿತ ಸ್ಪಂದನೆ ಮತ್ತು ತುರ್ತು ಆರೈಕೆಯ ಮೂಲಕ ತ್ವರಿತ ಕ್ರಮ.

ಉದ್ಘಾಟನೆ :
**ಶ್ರೀ ಸಿದ್ದರಾಮಯ್ಯ**
ಸನ್ಮಾನ್ಯ ಮುಖ್ಯಮಂತ್ರಿಗಳು,
ಕರ್ನಾಟಕ ಸರ್ಕಾರ.

ಗೌರವ ಉಪಸ್ಥಿತಿ :
**ಶ್ರೀ ಡಿ.ಕೆ. ಶಿವಕುಮಾರ್**
ಮಾನ್ಯ ಉಪಮುಖ್ಯಮಂತ್ರಿಗಳು,
ಕರ್ನಾಟಕ ಸರ್ಕಾರ.

ಮುಖ್ಯ ಅತಿಥಿ :
**ಶ್ರೀ ದಿನೇಶ್ ಗುಂಡೂರಾವ್**
ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು,
ಕರ್ನಾಟಕ ಸರ್ಕಾರ.

| ದಿನಾಂಕ : | ಸಮಯ : |
|---|---|
| 25 ಮೇ 2026 | ಬೆಳಿಗ್ಗೆ 11:00 ಗಂಟೆಗೆ |

ಸ್ಥಳ :
**ಕೇಂದ್ರಿಕೃತ ಕಮಾಂಡ್ ಮತ್ತು ಕಂಟ್ರೋಲ್ ಸೆಂಟರ್**
ಬಸವೇಶ್ವರ ನಗರ, ಬೆಂಗಳೂರು-560079.

ಅಧ್ಯಕ್ಷತೆ :
**ಶ್ರೀ ಎಸ್. ಸುರೇಶ್ ಕುಮಾರ್**
ಮಾನ್ಯ ಶಾಸಕರು,
ರಾಜಾಜಿನಗರ ವಿಧಾನಸಭಾ ಕ್ಷೇತ್ರ.

ಘನ ಉಪಸ್ಥಿತಿ :
**ಶ್ರೀ ಪ್ರಿಯಕೃಷ್ಣ**
ಮಾನ್ಯ ಶಾಸಕರು,
ಗೋವಿಂದರಾಜನಗರ ವಿಧಾನಸಭಾ ಕ್ಷೇತ್ರ.

**ತ್ವರಿತ ಸ್ಪಂದನೆ. ತಂತ್ರಜ್ಞಾನ ಆಧಾರಿತ ವೈದ್ಯಕೀಯ ಆರೈಕೆ. ಜೀವರಕ್ಷಣೆ 24X7.**

**108 ಕ್ಕೆ ಕರೆ ಮಾಡಿ | ಉಚಿತ ತುರ್ತು ಸೇವೆ | 24X7 ಲಭ್ಯ**



ಸನ್ಮಾನ್ಯ ಮುಖ್ಯಮಂತ್ರಿಗಳು, **ಶ್ರೀ ಸಿದ್ದರಾಮಯ್ಯ** ರವರು ಹಾಗೂ **ಶ್ರೀ ದಿನೇಶ್ ಗುಂಡೂರಾವ್** ಮಾನ್ಯ ಆರೋಗ್ಯ ಸಚಿವರು ಇಲಾಖಾ ಕಾರ್ಯಕ್ರಮದಲ್ಲಿ ಭಾಗವಹಿಸಿರುವುದು.

## ನಿತ್ಯ ಪಂಚಾಂಗ 25.05.2026 ಸೋಮವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ-ವಸಂತ/ಗ್ರೀಷ್ಮ ಋತು, ಚಾಂದ್ರಮಾನ, ವೈಶಾಖ ಅಧಿಕ ಜ್ಯೇಷ್ಠ ಮಾಸ

ಅಧಿಕ ಜ್ಯೇಷ್ಠ ಶುದ್ಧ, ನವಮಿ,
ಪುಬ್ಬಾ ನಕ್ಷತ್ರ,
ಕೊಕ್ಕಡ ಪುತ್ತಿಗೆ ವರ್ಧಂತಿ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

## ಕರ್ನಾಟಕ ಮರುನಿರ್ಮಾಣ ನಮ್ಮ ಗುರಿ: ಸಿಎಂ

**ಬೆಂಗಳೂರು, ಮೇ.24:** ರಾಜ್ಯವನ್ನು ಸಶಕ್ತ, ಸಮೃದ್ಧ, ಸ್ವಾಭಿಮಾನಿ ಕರ್ನಾಟಕವನ್ನಾಗಿ ಮರು ನಿರ್ಮಾಣ ಮಾಡುವುದು ರಾಜ್ಯ ಸರ್ಕಾರದ ಸಂಕಲ್ಪ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಈ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಬಹಳಷ್ಟು ದೂರ ಕ್ರಮಿಸಿದ್ದು, ನಮ್ಮ ಪ್ರಯತ್ನ ಇನ್ನಷ್ಟು ಶೀಘ್ರ ಮತ್ತು ಪರಿಣಾಮಕಾರಿಯಾಗಿರಲಿದೆ ಎಂದು ತಿಳಿಸಿದ್ದಾರೆ. ಕಳೆದ ಮೂರು ವರ್ಷಗಳಲ್ಲಿ ಪೊಲೀಸ್ ಗೃಹ ಯೋಜನೆಯಡಿ 1 ಸಾವಿರದ 500 ಕೋಟಿ ರೂ. ವೆಚ್ಚದಲ್ಲಿ 4,914 ವಸತಿ ಗೃಹಗಳ ನಿರ್ಮಾಣ ಕಾಮಗಾರಿಗೆ ಅನುಮೋದನೆ ನೀಡಲಾಗಿದ್ದು, ಅದರಲ್ಲಿ 3,388 ವಸತಿ ಗೃಹಗಳ ನಿರ್ಮಾಣ ಕಾರ್ಯ ಪೂರ್ಣಗೊಂಡಿದೆ ಎಂದಿದ್ದಾರೆ.

ನಿರ್ಭಯ ಯೋಜನೆಯಡಿ 18.85 ಕೋಟಿ ರೂ. ವೆಚ್ಚದಲ್ಲಿ ಬೆಂಗಳೂರು ನಗರದಲ್ಲಿ ಕಮಾಂಡ್ ಸೆಂಟರ್ ಹಾಗೂ ಇಂಟಿಗ್ರೇಟೆಡ್ ಸಪೋರ್ಟ್ ಸೆಂಟರ್ ಕಟ್ಟಡ ಮತ್ತು ವಿವಿಧ ಸ್ಥಳಗಳಲ್ಲಿ 60 ನೆರವು ಮಹಿಳಾ ಹೊರಠಾಣೆಯ ನಿರ್ಮಾಣ ಕಾಮಗಾರಿ ಪೂರ್ಣಗೊಳಿಸಲಾಗಿದೆ. ತುರ್ತು ನೆರವು ಕೋರಿ ಅಗ್ನಿ ಕರೆ ಅಥವಾ ರಕ್ಷಣೆಯಲ್ಲಿ 8 ಸಾವಿರದ 547 ಜನರು ಹಾಗೂ 5 ಸಾವಿರದ 491 ಕೋಟಿ ರೂ.ಗಳಷ್ಟು ಸಾರ್ವಜನಿಕರ ಆಸ್ತಿ ರಕ್ಷಣೆ ಮಾಡಲಾಗಿದೆ ಎಂದು ಸಿಎಂ ಹೇಳಿದ್ದಾರೆ.

# ಬಿಜೆಪಿ ಸಂಘಟನೆ ಚುರುಕುಗೊಳಿಸಿ ಕಾರ್ಯಕರ್ತರಿಗೆ ನಬೀನ್ ಕರೆ




ಸಭೆಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ, ಮಾಜಿ ಮುಖ್ಯಮಂತ್ರಿ ಮತ್ತು ಕೇಂದ್ರೀಯ ಸಂಸದೀಯ ಮಂಡಳಿ ಸದಸ್ಯ ಬಿ.ಎಸ್.ಯಡಿಯೂರಪ್ಪ, ಕರ್ನಾಟಕ ರಾಜ್ಯ ಉಸ್ತುವಾರಿ ಮತ್ತು ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ರಾಧಾಮೋಹನದಾಸ್ ಅಗ್ರವಾಲ್, ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ, ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್.ಅಶೋಕ್, ವಿಧಾನಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ರಾಜ್ಯ ಸಹಉಸ್ತುವಾರಿ ಸುಧಾಕರ್ ರೆಡ್ಡಿ, ಸಂಸದರು, ಶಾಸಕರು, ವಿಧಾನಪರಿಷತ್ ಸದಸ್ಯರು, ರಾಜ್ಯ ಸಮಿತಿ ಸದಸ್ಯರು, ಮೋರ್ಚಾಗಳ ರಾಜ್ಯ ಅಧ್ಯಕ್ಷರು, ರಾಜ್ಯ ಮಾಧ್ಯಮ ತಂಡ, ರಾಜ್ಯ ಪ್ರಧಾನ ಕಾರ್ಯದರ್ಶಿಗಳು, ವಿಭಾಗ ಪ್ರಭಾರಿಗಳು, ಸಹ ಪ್ರಭಾರಿಗಳು, ಜಿಲ್ಲಾ ಅಧ್ಯಕ್ಷರು, ರಾಜ್ಯ ಪ್ರಶಿಕ್ಷಣ ತಂಡದ ಎಲ್ಲ ಸದಸ್ಯರು ಭಾಗವಹಿಸಿದ್ದರು.

**ಬೆಂಗಳೂರು, ಮೇ24:** ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬೀನ್ ಅವರು ತಮ್ಮ ಮೊದಲ ಬೆಂಗಳೂರು ಭೇಟಿ ಸಂದರ್ಭದಲ್ಲಿ ರಾಜ್ಯದ ಪ್ರಮುಖ ನಾಯಕರೊಂದಿಗೆ ಸಭೆ ನಡೆಸಿ, ಪಕ್ಷದ ಸಂಘಟನಾತ್ಮಕ ಚಟುವಟಿಕೆಗಳನ್ನು ಚುರುಕುಗೊಳಿಸುವ ನಿಟ್ಟಿನಲ್ಲಿ ಮಹತ್ವದ ನಿರ್ದೇಶನ ನೀಡಿದ್ದಾರೆ. ಪಕ್ಷದ ರಾಜ್ಯ ಕಚೇರಿಯಲ್ಲಿ ನಡೆದ ಈ ನಿರ್ಣಾಯಕ ಸಭೆಯಲ್ಲಿ, ಸಂಘಟನೆಯಲ್ಲಿ ಶಿಸ್ತು ಮತ್ತು ಬದ್ಧತೆ ಅತ್ಯಗತ್ಯತೆಯನು ಪ್ರತಿಪಾದಿಸಿರುವ ಅವರು, ರಾಜ್ಯ ಘಟಕದ ನಾಯಕರಿಗೆ ಪಕ್ಷದ ತಳಮಟ್ಟದ ಬಲವರ್ಧನೆಗೆ ಒತ್ತು ನೀಡಲು ಸೂಚಿಸಿದ್ದಾರೆ. ಪಕ್ಷದ ಚೌಕಟ್ಟಿನೊಳಗೆ ಪ್ರತಿಯೊಬ್ಬ ಕಾರ್ಯಕರ್ತರೂ ಶಿಸ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಸಾರ್ವಜನಿಕವಾಗಿ ಪಕ್ಷದ ಘನತೆಗೆ ಧಕ್ಕೆಯಾಗುವ ಯಾವುದೇ ಹೇಳಿಕೆ ಅಥವಾ ಚಟುವಟಿಕೆಗಳನ್ನು ಸಹಿಸುವುದಿಲ್ಲ ಎಂದು ಎಚ್ಚರಿಕೆ ನೀಡಿದ್ದಾರೆ. ಕೇವಲ ಕಚೇರಿಗಳಲ್ಲಿ ಕುಳಿತು ಕೆಲಸ ಮಾಡುವುದರ ಬದಲು, ಪ್ರತಿಯೊಬ್ಬ ಪದಾಧಿಕಾರಿಗಳು ಮತ್ತು ಜನಪ್ರತಿನಿಧಿಗಳು ಕ್ಷೇತ್ರಗಳಿಗೆ ಭೇಟಿ ನೀಡಿ ಜನರ ಸಮಸ್ಯೆಗಳನ್ನು ಆಲಿಸಬೇಕು ಎಂದು ತಿಳಿಸಿದ್ದಾರೆ. ಮುಂಬರುವ ದಿನಗಳಲ್ಲಿ ಪಕ್ಷದ ಸಂಘಟನಾತ್ಮಕ ಚಟುವಟಿಕೆಗಳನ್ನು ವಿಸ್ತರಿಸಲು ನಾಯಕರಿಗೆ ನಿರ್ದಿಷ್ಟ ಜವಾಬ್ದಾರಿಗಳನ್ನು ವಹಿಸಲಾಗಿದ್ದು, ಎಲ್ಲರೂ ಸಾಮೂಹಿಕ ನಾಯಕತ್ವದಲ್ಲಿ ಕಾರ್ಯನಿರ್ವಹಿಸುವಂತೆ ಕರೆ ನೀಡಿದ್ದಾರೆ. ರಾಜ್ಯ ಮತ್ತು ರಾಷ್ಟ್ರೀಯ ಮಟ್ಟದ ನಾಯಕರ ನಡುವೆ ಉತ್ತಮ ಸಮನ್ವಯತೆಯನ್ನು ಕಾಪಾಡಿಕೊಂಡು, ಪಕ್ಷದ ಸಿದ್ಧಾಂತಗಳನ್ನು ತಳಮಟ್ಟದವರೆಗೆ ಕೊಂಡೊಯ್ಯಲು ಒತ್ತು ನೀಡಬೇಕು ಎಂದು ಅವರು ಆಶಿಸಿದ್ದಾರೆ. ಈ ಭೇಟಿಯು ರಾಜ್ಯ ಬಿಜೆಪಿಯಲ್ಲಿ ಹೊಸ ಹುರುಪು ತುಂಬಿದ್ದು, ಮುಂದಿನ ಸಾಂಸ್ಥಿಕ ಚುನಾವಣೆಗಳು ಮತ್ತು ಅಭಿವೃದ್ಧಿ ಕಾರ್ಯಗಳ ದೃಷ್ಟಿಯಿಂದ ಈ ಸೂಚನೆಗಳು ಅತ್ಯಂತ ಮಹತ್ವದ್ದಾಗಿವೆ ಎಂದು ಪಕ್ಷದ ಮೂಲಗಳು ತಿಳಿಸಿವೆ. ಪಶ್ಚಿಮ ಬಂಗಾಳದಲ್ಲಿ ಇತ್ತೀಚೆಗೆ ಸಿಕ್ಕ ಜಯದ ಬಳಿಕ, ದಕ್ಷಿಣ ಭಾರತದ ಹೆಬ್ಬಾಗಿಲಾದ ಕರ್ನಾಟಕದಲ್ಲಿ ಬಿಜೆಪಿ ಅಸ್ತಿತ್ವವನ್ನು ಗಟ್ಟಿಗೊಳಿಸುವುದು ಪಕ್ಷದ ಹೈಕಮಾಂಡ್‌ನ ಮುಖ್ಯ ಗುರಿಯಾಗಿದೆ.

ರಾಜ್ಯ ಕೋರ್ ಸಮಿತಿ ಸಭೆಯಲ್ಲಿ ಮುಂದಿನ ಕಾರ್ಯತಂತ್ರಗಳ ಬಗ್ಗೆ ಅಂತಿಮ ರೂಪುರೇಷೆ ಸಿದ್ದಪಡಿಸಿದ್ದಾರೆ. ನಿತಿನ್ ನಬೀನ್ ಅವರ ಈ ಭೇಟಿಯು ಪಕ್ಷದ ಸಂಘಟನೆಗೆ ಹೊಸ ಹುರುಪು ತುಂಬುವ ನಿರೀಕ್ಷೆಯಿದೆ. ವಿಶೇಷವಾಗಿ ಹಿರಿಯ ನಾಯಕ ಯಡಿಯೂರಪ್ಪ ಅವರೊಂದಿಗಿನ ಅವರ ಉಪಾಹಾರ ಸಭೆಯು, ಪಕ್ಷದ ಹಿರಿಯ ಮತ್ತು ಕಿರಿಯ ನಾಯಕರ ನಡುವಿನ ಸಮನ್ವಯದ ಸಂಕೇತವಾಗಿದೆ ಎಂದು ಪಕ್ಷದ ಮುಖಂಡರು ಸಂತಸ ವ್ಯಕ್ತಪಡಿಸಿದ್ದಾರೆ. ಈ ಸಂದರ್ಭದಲ್ಲಿ ರಾಜ್ಯದ ಪ್ರಸ್ತುತ ರಾಜಕೀಯ ವಿದ್ಯಮಾನಗಳು ಹಾಗೂ ಚುನಾವಣಾ ತಂತ್ರಗಾರಿಕೆ ಕುರಿತು ಸುದೀರ್ಘ ಸಮಾಲೋಚನೆ ನಡೆಸಲಾಯಿತು.ರಾಜಕೀಯ ಸಭೆಗಳಿಗೂ ಮುನ್ನ ಧಾರ್ಮಿಕ ವಿಧಿವಿಧಾನಗಳಿಗೆ ಚಾಲನೆ ನೀಡಿದ ನಿತಿನ್ ನಬೀನ್, ಮಲ್ಲೇಶ್ವರಂನಲ್ಲಿರುವ ಪ್ರಸಿದ್ಧ ಇತಿಹಾಸ ಪ್ರಸಿದ್ಧ ಕಾಡುಮಲ್ಲೇಶ್ವರ ಸ್ವಾಮಿ ದೇವಾಲಯಕ್ಕೆ ಭೇಟಿ ನೀಡಿದರು. ದೇವರಿಗೆ ವಿಶೇಷ ಪೂಜೆ ಹಾಗೂ ದರ್ಶನ ಪಡೆದ ಬಳಿಕ ಅವರು ಪಕ್ಷದ ಕಚೇರಿಯತ್ತ ಮುಖ ಮಾಡಿದರು.

ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನಕ್ಕೆ ಆಗಮಿಸಿದ ರಾಷ್ಟ್ರೀಯ ಅಧ್ಯಕ್ಷರಿಗೆ ಪಕ್ಷದ ಕಾರ್ಯಕರ್ತರು ಮತ್ತು ಪದಾಧಿಕಾರಿಗಳು ಭರ್ಜರಿ ಸ್ವಾಗತ ನೀಡಿದರು.

## ಕಾಂಗ್ರೆಸ್ ಸರಕಾರದಿಂದ ವಿಶ್ವಾಸದ್ರೋಹ: ಬಿಜೆಪಿ ಅಧ್ಯಕ್ಷರ ವಾಗ್ದಾಳಿ



**ಬೆಂಗಳೂರು, ಮೇ24:** ಕರ್ನಾಟಕದ ಕಾಂಗ್ರೆಸ್ ಸರಕಾರವು ಇಲ್ಲಿನ ಜನರಿಗೆ ಕಳೆದ 3 ವರ್ಷಗಳಲ್ಲಿ ವಂಚಿಸುವ ಕೆಲಸ ಮಾಡಿದೆ. ಇಲ್ಲಿನ ಜನರಿಗೆ ವಿಶ್ವಾಸದ್ರೋಹ ಎಸಗಿದೆ ಎಂದು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬೀನ್ ಅವರು ಟೀಕಿಸಿದ್ದಾರೆ. ಸುದ್ದಿಗಾರರ ಜೊತೆ ಮಾತನಾಡಿದ ಅವರು, ಕಾಂಗ್ರೆಸ್ ಒಳಜಗಳದಿಂದ ಜನಹಿತದ ಕೆಲಸಗಳನ್ನು ಕಡೆಗಣಿಸಿದ್ದಾರೆ. ಜನಹಿತಕ್ಕೂ ಈ ಸರಕಾರಕ್ಕೂ ಯಾವುದೇ ಸಂಬಂಧ ಇಲ್ಲದಂತಾಗಿದೆ ಎಂದು ಆರೋಪಿಸಿದರು. ಸರಕಾರ ನಡೆಸುತ್ತಿರುವ ನಾಯಕರು ಸರಕಾರವನ್ನು ತಮಗಾಗಿ ಬಳಸಿಕೊಳ್ಳುತ್ತಿದ್ದಾರೆ. ಅಭಿವೃದ್ಧಿ ಕಾರ್ಯಗಳ ವಿಚಾರದಲ್ಲಿ ಸರಕಾರ ಸಂಪೂರ್ಣ ವಿಫಲವಾಗಿದೆ. ಇಲ್ಲಿನ ಸರಕಾರ ದೆಹಲಿ ಕಾಂಗ್ರೆಸ್ಸಿನ ಎಟಿಎಂ ಆಗಿದೆ ಎಂದು ದೂರಿದರು. ನಮ್ಮ ಪಕ್ಷದ ಜಿಲ್ಲಾ ತರಬೇತಿ ಶಿಬಿರಗಳು ನಡೆಯುತ್ತಿವೆ. ಅದರಲ್ಲಿ ಪಾಲ್ಗೊಳ್ಳುವ ಅವಕಾಶ ಸಿಕ್ಕಿದೆ ಎಂದು ತಿಳಿಸಿದರು. ಕರ್ನಾಟಕದಲ್ಲಿ ಪಕ್ಷದ ಚಟುವಟಿಕೆ, ಸಕ್ರಿಯ ಸಂಘಟನೆ ಎಂಬುದನ್ನು ತಿಳಿದುಕೊಂಡಿದ್ದಾಗಿ ಹೇಳಿದರು.

### ಅಮೃತ್ ಭಾರತ್ ರೈಲು ನಿಲ್ದಾಣ ಯೋಜನೆ

# ಮಂಗಳೂರು ರೈಲ್ವೆ ನಿಲ್ದಾಣದ ಕಾಮಗಾರಿಗಳ ಪ್ರಗತಿ ಪರಿಶೀಲನಾ ಸಭೆ: ವಿ.ಸೋಮಣ್ಣ ನೇತೃತ್ವ



**ಮಂಗಳೂರು, ಮೇ 24:** ಮಂಗಳೂರು–ಬೆಂಗಳೂರು ನಡುವೆ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲು ಜೂನ್‌ನಲ್ಲಿ ಸಂಚಾರ ಆರಂಭಿಸಲಿದೆ. ಪ್ರಧಾನಿ ನರೇಂದ್ರ ಮೋದಿ ಅವರು ಮಂಗಳೂರು ಸೇರಿದಂತೆ ದೇಶದ ನಾನಾ ಕಡೆಗಳಲ್ಲಿ ಹೊಸ ರೈಲು ಸಂಚಾರಗಳಿಗೆ ಚಾಲನೆ ನೀಡಲಿದ್ದಾರೆ ಎಂದು ರೈಲ್ವೆ ಖಾತೆ ಸಹಾಯಕ ಸಚಿವ ವಿ.ಸೋಮಣ್ಣ ಹೇಳಿದರು. ಮಂಗಳೂರು ಜಂಕ್ಷನ್ ರೈಲು ನಿಲ್ದಾಣಕ್ಕೆ ಭೇಟಿ ನೀಡಿದ ಅವರು ಅಮೃತ ಭಾರತ್



ಮಂಗಳೂರು ರೈಲ್ವೆ ನಿಲ್ದಾಣದಲ್ಲಿಂದು ಅಮೃತ್ ಭಾರತ್ ರೈಲು ನಿಲ್ದಾಣ ಯೋಜನೆಯಡಿ ಮರು ಅಭಿವೃದ್ಧಿಗೊಳ್ಳುತ್ತಿರುವ ಮಂಗಳೂರು ರೈಲ್ವೆ ನಿಲ್ದಾಣದ ಕಾಮಗಾರಿಗಳ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಕೇಂದ್ರ ಸಚಿವ ವಿ.ಸೋಮಣ್ಣ. ಈ ಸಂದರ್ಭದಲ್ಲಿ, ಮಂಗಳೂರು ಜಿಲ್ಲಾಧಿಕಾರಿ ದರ್ಶನ್, ಸಂಸದ ಕ್ಯಾ. ಬ್ರಿಜೇಶ್ ಚೌಟ ಹಾಗೂ ರೈಲ್ವೆ ಅಧಿಕಾರಿಗಳು ಉಪಸ್ಥಿತರಿದ್ದರು.

ಯೋಜನೆಯಡಿ ರೈಲು ನಿಲ್ದಾಣದ ಅಭಿವೃದ್ಧಿ ಕಾಮಗಾರಿಯ ಪರಿಶೀಲನೆ ನಡೆಸಿದ ಬಳಿಕ ಮಾತನಾಡಿದರು. ಕರಾವಳಿಯ 3 ಜಿಲ್ಲೆಗಳಲ್ಲಿ ಬಿಜೆಪಿ ಸಂಸದರು ಇದ್ದಾರೆ. ಅವರ ಬೇಡಿಕೆಯನ್ನು ಪರಿಶೀಲಿಸಬೇಕಾಗುತ್ತದೆ. ಸಕಲೇಶಪುರ–ಕುಕ್ಕೆ ಸುಬ್ರಹ್ಮಣ್ಯ ಮಾರ್ಗದ ವರೆಗೆ 55 ಕಿ.ಮೀ. ದೂರ ವಿದ್ಯುದ್ದೀಕರಣ ಕಾಮಗಾರಿ ಮುಕ್ತಾಯಗೊಂಡಿದೆ. ಬೆಂಗಳೂರು ಮತ್ತು ಮಂಗಳೂರು ನಡುವೆ ಪೂರ್ತಿಯಾಗಿ ವಿದ್ಯುದ್ದೀಕರಣ ವಾಗಿದ್ದು, ಹೆಚ್ಚುವರಿ ರೈಲು ಸಂಚಾರಕ್ಕೆ ಅವಕಾಶಗಳು ತೆರೆದುಕೊಂಡಿವೆ ಎಂದರು. ಪ್ರಸ್ತಾವಿತ ಶಿವಮೊಗ್ಗ–ಮಂಗಳೂರು ರೈಲು ಮಾರ್ಗ 332 ಕಿ.ಮೀ. ಇರಲಿದೆ. ಇದಕ್ಕೆ, 3,300 ಕೋಟಿ ರೂ. ಯೋಜನಾ ವೆಚ್ಚ ಅಂದಾಜಿಸಲಾಗಿದೆ. ಈ ಮಾರ್ಗದ ಎಫ್‌ಎಲ್‌ಸಿ (ಫೈನಲ್ ಲೊಕೇಷನ್ ಸರ್ವೆ) ನಡೆದು ಅನುಮೋದನೆಗೊಂಡಿದ್ದು, ಶೀಘ್ರ ಟೆಂಡರ್ ಕರೆಯಲಾಗುವುದು ಎಂದು ತಿಳಿಸಿದರು. ಮಂಗಳೂರು ಜಂಕ್ಷನ್ ಮತ್ತು ಮಂಗಳೂರು ಸೆಂಟ್ರಲ್ ರೈಲು ನಿಲ್ದಾಣಗಳ ತ್ವರಿತ ಅಭಿವೃದ್ಧಿಗೆ ಕ್ರಮ ಕೈಗೊಳ್ಳಬೇಕಾಗಿದೆ. ಮಂಗಳೂರು ಜಂಕ್ಷನ್ನಲ್ಲಿ 38 ಕೋಟಿ ರೂ.ಗಳ ಅಭಿವೃದ್ಧಿ ಕಾಮಗಾರಿ ಅಕ್ಟೋಬರ್‌ನಲ್ಲಿ ಮುಕ್ತಾಯಗೊಳ್ಳಬೇಕು. ಇಲ್ಲಿ ಜಂಕ್ಷನ್ ಯಾರ್ಡ್ ಅಭಿವೃದ್ಧಿಗೊಳ್ಳಲಿದ್ದು, ಹೆಚ್ಚುವರಿ ಗೂಡ್ಸ್ ರೈಲು ಹಳಿ ರಚನೆಯಾಗಲಿದೆ. ಇಡೀ ಮಂಗಳೂರು ಪ್ರದೇಶದಲ್ಲಿ ರೈಲ್ವೆ ಅಭಿವೃದ್ಧಿಗೆ ಪ್ರತ್ಯೇಕ ಮಾಸ್ಟರ್ ಪ್ಲಾನ್ ರೂಪಿಸುವಂತೆ ಜಿಲ್ಲಾಧಿಕಾರಿಗೆ ಸೂಚಿಸಿದ ಸಚಿವರು, ಆರು ತಿಂಗಳಲ್ಲಿ ಇನ್ನಷ್ಟು ಪಾರದರ್ಶಕ ಬದಲಾವಣೆ ನಿರೀಕ್ಷಿಸಬಹುದು ಎಂದು ಹೇಳಿದರು. ಬೆಂಗಳೂರು ಸೆಂಟ್ರಲ್ ಹಾಗೂ ಜಂಕ್ಷನ್ ರೈಲು ನಿಲ್ದಾಣದಲ್ಲಿ ಕನ್ನಡ ಬಲ್ಲ ಸಿಬ್ಬಂದಿ ನೇಮಿಸುವಂತೆ ಸಚಿವ ಸೋಮಣ್ಣ ಅವರು ಅಧಿಕಾರಿಗಳಿಗೆ ಸೂಚಿಸಿದರು. ಭಾಷಾ ಸಮಸ್ಯೆ ಉಂಟಾಗ ಬಾರದು, ಬೇರೆ ರಾಜ್ಯದವರಾಗಿದ್ದರೂ ಕರ್ನಾಟಕದಲ್ಲಿ ಕನಿಷ್ಠ ಸಂವಹನ ನಡೆಸಲು ಕನ್ನಡ ಭಾಷೆ ಕಲಿಯಬೇಕು ಎಂದು ತಾಕೀತು ಮಾಡಿದರು.

# ನೈಋತ್ಯ ಮುಂಗಾರು ಪೂರ್ವ ಮಳೆ ಮುಂಗಾರು ಆಗಮನಕ್ಕೆ ದಿನಗಣನೆ

**ಬೆಂಗಳೂರು, ಮೇ24:** ನೈಋತ್ಯ ಮುಂಗಾರು ಆರಂಭಕ್ಕೆ ದಿನಗಣನೆ ಆರಂಭವಾಗಿರುವ ಬೆನ್ನಲ್ಲೇ ರಾಜ್ಯದಲ್ಲಿ ಪೂರ್ವ ಮುಂಗಾರು ಮಳೆ ಚೇತರಿಕೆ ಕಂಡಿದೆ. ರಾಜ್ಯದಲ್ಲಿ ಇಂದು ಮತ್ತು ನಾಳೆ ಭಾರಿ ಮಳೆಯಾಗುವ ಮುನ್ಸೂಚನೆಗಳಿವೆ. ರಾಜ್ಯದ ದಕ್ಷಿಣ ಒಳನಾಡಿನ ಜಿಲ್ಲೆಗಳ ಕೆಲವೆಡೆ ಆಲಿಕಲ್ಲು ಸಹಿತ ಭಾರಿ ಮಳೆಯಾಗುವ ಸಾಧ್ಯತೆಗಳಿವೆ. ಉತ್ತರ ಒಳನಾಡಿನ ಕೆಲವೆಡೆ ಭಾರಿ ಮಳೆಯಾಗುವ ಮುನ್ಸೂಚನೆಗಳ ಹಿನ್ನೆಲೆಯಲ್ಲಿ ಹವಾಮಾನ ಇಲಾಖೆ ಇಂದು ಮತ್ತು ನಾಳೆ ಆರೇಂಜ್ ಅಲರ್ಟ್ ಘೋಷಣೆ ಮಾಡಿದೆ. ಮೇ 26 ಮತ್ತು 27ರಂದು ಯೆಲ್ಲೋ ಅಲರ್ಟ್ ನೀಡಿದೆ.

ದಕ್ಷಿಣ ಒಳನಾಡಿನ ಜಿಲ್ಲೆಗಳಲ್ಲಿ ಇಂದು ಯೆಲ್ಲೋ ಅಲರ್ಟ್ ನೀಡಲಾಗಿದ್ದು, ನಾಳೆ ಮಳೆ ಹೆಚ್ಚಾಗಲಿರುವ ಹಿನ್ನೆಲೆಯಲ್ಲಿ ಆರೇಂಜ್ ಅಲರ್ಟ್ ನೀಡಲಾಗಿದೆ. ಮೇ 26 ಮತ್ತು 27 ರಂದು ಮತ್ತೆ ಯೆಲ್ಲೋ ಅಲರ್ಟ್ ಘೋಷಣೆ ಮಾಡಲಾಗಿದೆ. ಕರಾವಳಿ ಹಾಗೂ ಮಲೆನಾಡು ಭಾಗದಲ್ಲಿ ಚದುರಿದಂತೆ ಅಲ್ಲಲ್ಲಿ ಮಳೆಯಾಗುತ್ತಿದ್ದರೂ ವಾಡಿಕೆ ಪ್ರಮಾಣದಲ್ಲಿ ಪೂರ್ವ ಮುಂಗಾರು ಮಳೆಯಾಗುತ್ತಿಲ್ಲ. ಈ ಭಾಗದಲ್ಲಿ ಸದ್ಯಕ್ಕೆ ಭಾರಿ ಮಳೆ ಮುನ್ನೆಚ್ಚರಿಕೆ ನೀಡಲಾಗಿಲ್ಲ. ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ಮಾಹಿತಿ ಪ್ರಕಾರ ರಾಜ್ಯಾದ್ಯಂತ ಅಲ್ಲಲ್ಲಿ ಮಳೆಯಾಗಲಿದೆ. ಕೆಲವೆಡೆ ಗುಡುಗು, ಮಿಂಚು, ಸಿಡಿಲಿನ ಆರ್ಭಟವೂ ಕಂಡುಬರಲಿದೆ. ಜೊತೆಗೆ ಗಂಟೆಗೆ 50–60 ಕಿ.ಮೀ.ವೇಗದಲ್ಲಿ ಜೋರಾದ ಗಾಳಿಯು ಕೆಲವೆಡೆ ಬೀಸಲಿದೆ. ನಾಳೆ ರಾಜ್ಯದ ದಕ್ಷಿಣ ಒಳನಾಡಿನಲ್ಲಿ ಆಲಿಕಲ್ಲು ಸಹಿತ ಮಳೆಯಾಗುವ ಮುನ್ಸೂಚನೆಗಳಿವೆ.

ನಿನ್ನೆ ಕಲ್ಯಾಣ ಕರ್ನಾಟಕ ಭಾಗದ ವಿಜಯಪುರ, ರಾಯಚೂರು, ಬಾಗಲಕೋಟೆ ಜಿಲ್ಲೆಗಳ ಹಲವೆಡೆ ಉತ್ತಮ ಮಳೆಯಾಗಿದೆ. ಬೆಳಗಾವಿ, ಉತ್ತರ ಕನ್ನಡ, ಗದಗ, ಉಡುಪಿ ಜಿಲ್ಲೆಗಳಲ್ಲೂ ಸಾಕಷ್ಟು ಮಳೆಯಾಗಿದೆ. ಬೆಂಗಳೂರು ಸೇರಿದಂತೆ ರಾಜ್ಯದ ಹಲವೆಡೆ ಹಗುರದಿಂದ ಸಾಧಾರಣ ಮಳೆಯಾಗಿದೆ. ಆಲಿಕಲ್ಲು, ಜೋರಾದ ಗಾಳಿ ಸಹಿತ ಮಳೆಯಾಗಿರುವುದರಿಂದ ಹಲವೆಡೆ, ಬಾಳೆ, ಮಾವು, ಭತ್ತ ಮುಂತಾದ ಬೆಳೆಗಳಿಗೆ ಹಾನಿಯಾಗಿದೆ. ಮರಗಳು, ವಿದ್ಯುತ್ ಕಂಬಗಳು ಮುರಿದು ಬಿದ್ದಿವೆ.

# ಸಮಸಮಾಜಕ್ಕಾಗಿ ಕ್ರಾಂತಿ ನಡೆದಿರುವುದು ಕರ್ನಾಟಕದಲ್ಲಿ ಮಾತ್ರ: ಈಶ್ವರ ಖಂಡ್ರೆ



**ಬೆಂಗಳೂರು, ಮೇ 24:** ಜಗತ್ತಿನಲ್ಲಿ ಹೆಣ್ಣಿಗಾಗಿ, ಹೊನ್ನಿಗಾಗಿ ಹಲವು ಕ್ರಾಂತಿ ನಡೆದಿದೆ. ಆದರೆ ಸರ್ವರ ಸಮಾನತೆಗಾಗಿ, ಸಮ ಸಮಾಜದ ನಿರ್ಮಾಣಕ್ಕಾಗಿ ಮೊದಲಿಗೆ ಕ್ರಾಂತಿ ನಡೆದಿರುವುದು ಕರ್ನಾಟಕದಲ್ಲಿ ಮಾತ್ರ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಖಂಡ್ರೆ ಅಭಿಪ್ರಾಯಪಟ್ಟಿದ್ದಾರೆ.

ವೀರಶೈವ ಲಿಂಗಾಯತ ಮಹಾಸಭಾದ ಬೊಮ್ಮನಹಳ್ಳಿ ವಿಧಾನಸಭಾ ಘಟಕದ ವತಿಯಿಂದ ಆಯೋಜಿಸಲಾಗಿದ್ದ ಜಗದ್ಗುರು ರೇಣುಕಾಚಾರ್ಯರ ಯುಗಮಾನೋತ್ಸವ ಮತ್ತು ಬಸವ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಶ್ರೇಣಿರಹಿತ, ಲಿಂಗಭೇದರಹಿತ, ಸಮಸಮಾಜದ ನಿರ್ಮಾಣಕ್ಕಾಗಿ ಬಸವಾದಿ ಪ್ರಮಥರು ಕಲ್ಯಾಣ ಕ್ರಾಂತಿಯನ್ನೇ ಮಾಡಿದರು ಎಂದರು.

ಶರಣರು ಸಕಲ ಜೀವಾತ್ಮರಿಗೆ ಲೇಸನ್ನೇ ಬಯಸಿದರು. ಜಾತಿಯತೆ, ಮೇಲು–ಕೀಳು ಎಂಬ ಭಾವನೆ, ಅಸ್ಪೃಶ್ಯತೆ, ಕಂದಾಚಾರ, ಮೌಢ್ಯ ತುಂಬಿದ್ದ ಸಮಾಜದಲ್ಲಿ ವೈಚಾರಿಕ ಮನೋಭಾವ ಮೂಡಿಸಲು, ಸೋದರತ್ವ, ಸಹಬಾಳ್ವೆಯ ಭವ್ಯ, ದಿವ್ಯ ಸಮಾಜ ಕಟ್ಟಲು ಯತ್ನಿಸಿದರು ಎಂದರು.

ಮಾನವಧರ್ಮಕ್ಕೆ ಜಯವಾಗಲಿ ಧರ್ಮದಿಂದಲೇ ವಿಶ್ವಕ್ಕೆ ಶಾಂತಿ ಎಂದು ರೇಣುಕಾದಿ ಆಚಾರ್ಯರು ಪ್ರತಿಪಾದಿಸಿದರೆ, ದಯವೇ ಧರ್ಮದ ಮೂಲವಯ್ಯ ಎಂದು ಬಸವಣ್ಣನವರು ಹೇಳಿದ್ದಾರೆ. ನಮ್ಮೆಲ್ಲರಲ್ಲೂ ನಾವೆಲ್ಲಾ ಒಂದೇ ಎಂಬ ಭಾವನೆ ಮೂಡಿದಾಗ ಮಾತ್ರ ಸಮಾಜೋದ್ಧಾರ ಸಾಧ್ಯ ಎಂದರು.

ಯುವಜನರು ಯಾವುದೇ ಸಮಾಜದ ಬೆನ್ನೆಲುಬು. ಇಂದು ಯುವಜನರು ದಾರಿತಪ್ಪುತ್ತಿದ್ದು, ದುಶ್ಚಟಗಳ, ದುರ್ವ್ಯಸನಗಳ ದಾಸರಾಗುತ್ತಿದ್ದು, ದುರ್ಗುಣಗಳಿಗೆ ಬಲಿಯಾಗುತ್ತಿದ್ದಾರೆ. ಮಾತೆಯರು, ತಮ್ಮ ಮಕ್ಕಳನ್ನು ಸರಿದಾರಿಗೆ ತರಲು ಶ್ರಮಿಸಬೇಕು. ಧರ್ಮದ ಉಳಿವಿನಲ್ಲಿ ಮಾತೆಯರ ಪಾತ್ರ ಮಹತ್ವದ್ದೆಂದರು.

ಇಂತಹ ಕಾರ್ಯಕ್ರಮಗಳು ಯುವಜನರಲ್ಲಿ ಧಾರ್ಮಿಕ, ಆಧ್ಯಾತ್ಮಿಕ ಚಿಂತನೆ ಬೆಳೆಸುತ್ತವೆ. ಯುವಜನರನ್ನು ಮುಖ್ಯವಾಹಿನಿಗೆ ತರಲು ಸಹಕಾರಿ ಆಗುತ್ತದೆ ಎಂದು ಈಶ್ವರ ಖಂಡ್ರೆ ಹೇಳಿದರು.

ಇಂದು ಜಗತ್ತಿನಲ್ಲಿ ಹಿಂಸೆ, ಅತ್ಯಾಚಾರ, ದೌರ್ಜನ್ಯ, ದ್ವೇಷ ಹೆಚ್ಚುತ್ತಿದೆ ಹೆಚ್ಚುತ್ತಿದೆ. ಇಂದು ಜಗತ್ತಿಗೆ ನೆಮ್ಮದಿ, ಶಾಂತಿ ಬೇಕಾಗಿದೆ. ನಾವು ಈ ಹಂತದಲ್ಲಿ ವಿಭಜನೆಯ ಹಾದಿ ತೊರೆದು ಏಕತೆಯ ಮಾರ್ಗದಲ್ಲಿ ನಡೆಯಬೇಕು ಎಂದರು.

ಕಾರ್ಯಕ್ರಮದಲ್ಲಿ ರಂಭಾಪುರಿಯ ಜಗದ್ಗುರು ಡಾ.ವೀರಸೋಮೇಶ್ವರ ರಾಜದೇಶಿಕೇಂದ್ರ ಶಿವಾಚಾರ್ಯರು, ಸಿದ್ದರಬೆಟ್ಟದ ಬೀರಭದ್ರ ಶಿವಾಚಾರ್ಯ ಸ್ವಾಮೀಜಿ, ವೀರಶೈವ–ಲಿಂಗಾಯತ ಸಭಾದ ಪಾಲಿಕಾ ಘಟಕದ ಅಧ್ಯಕ್ಷ ಬಿಡದಿ ನಬೀನ್, ಮಾಜಿ ಮೇಯರ್ ಗಂಗಾಂಬಿಕಾ ಮಲ್ಲಿಕಾರ್ಜುನ್ ಮತ್ತಿತರರು ಪಾಲ್ಗೊಂಡಿದ್ದರು.

# ವಂಚಿತ ವರ್ಗವಾದ ಮಾಜಿ ದೇವದಾಸಿಯರ ಮಾಸಾಶನವನ್ನು ಸ್ಥಗಿತಗೊಳಿಸಿ ವಂಚನೆ: ಕಾಂಗ್ರೆಸ್ ವಿರುದ್ಧ ಅಶೋಕ್ ವಾಗ್ದಾಳಿ



**ಬೆಂಗಳೂರು, ಮೇ 24:** ರಾಜ್ಯದ ಕಾಂಗ್ರೆಸ್ ಸರ್ಕಾರವು ಗ್ಯಾರಂಟಿ ಯೋಜನೆಗಳ ಭರ್ಜರಿ ಪ್ರಚಾರಕ್ಕಾಗಿ ಕೋಟ್ಯಂತರ ರೂ.ಗಳನ್ನು ಖರ್ಚು ಮಾಡುತ್ತಿದೆ. ಆದರೆ, ಸಮಾಜದ ಅತ್ಯಂತ ವಂಚಿತ ವರ್ಗವಾದ ಮಾಜಿ ದೇವದಾಸಿಯರ ಮಾಸಾಶನವನ್ನು ಸ್ಥಗಿತಗೊಳಿಸಿ, ಅವರ ಬದುಕನ್ನು ಬೀದಿಗೆ ತಳ್ಳಿದೆ ಎಂದು ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಈ ಕುರಿತು ತಮ್ಮ ಅಧಿಕೃತ ಎಕ್ಸ್ (ಟ್ವಿಟರ್) ಖಾತೆಯಲ್ಲಿ ಸುದೀರ್ಘ ಪೋಸ್ಟ್ ಹಂಚಿಕೊಂಡಿರುವ ಅವರು, ಸಿದ್ದರಾಮಯ್ಯ ನೇತೃತ್ವದ ಸರ್ಕಾರವು ಸಾಮಾಜಿಕ ನ್ಯಾಯ ಹಾಗೂ ಮಹಿಳಾ ಸಬಲೀಕರಣದ ಹೆಸರಿನಲ್ಲಿ ಜನರಿಗೆ ವಂಚನೆ ಮಾಡುತ್ತಿದೆ ಎಂದು ಗಂಭೀರ ಆರೋಪ ಮಾಡಿದ್ದಾರೆ.

ರಾಜ್ಯದಲ್ಲಿರುವ ಸುಮಾರು 26,488 ಮಾಜಿ ದೇವದಾಸಿಯರ ಬದುಕು ಇಂದು ಸರ್ಕಾರದ ನಿರ್ಲಕ್ಷ್ಯದಿಂದಾಗಿ ತೀವ್ರ ಸಂಕಷ್ಟಕ್ಕೆ ಸಿಲುಕಿದೆ ಎಂದು ಕಳವಳ ವ್ಯಕ್ತಪಡಿಸಿರುವ ಆರ್. ಅಶೋಕ್, ಈ ಹಿಂದೆ ನೀಡಲಾಗುತ್ತಿದ್ದ 2,000 ಮಾಸಾಶನವನ್ನೇ ಸರಿಯಾಗಿ ಕೊಡಲು ಯೋಗ್ಯತೆಯಿಲ್ಲದ ಕಾಂಗ್ರೆಸ್ ಸರ್ಕಾರ, ಅದನ್ನು 5,000ಕ್ಕೆ ಹೆಚ್ಚಿಸುವುದಾಗಿ ಸುಳ್ಳು ಘೋಷಣೆ ಮಾಡಿ ಜನರನ್ನು ದಿಕ್ಕು ತಪ್ಪಿಸಿದೆ," ಎಂದು ಕಿಡಿಕಾರಿದ್ದಾರೆ.

ಇಂದು ಮಾಜಿ ದೇವದಾಸಿಯರಿಗೆ ವಾಸಿಸಲು ಸ್ವಂತ ಮನೆಯಿಲ್ಲ, ಉಳುಮೆ ಮಾಡಲು ಭೂಮಿಯಿಲ್ಲ, ಅನಾರೋಗ್ಯ ಎದುರಾದಾಗ ಸರಿಯಾದ ಆರೋಗ್ಯ ಸೌಲಭ್ಯಗಳೂ ಸಿಗುತ್ತಿಲ್ಲ. ಬದುಕಿಗಾಗಿ ನಿತ್ಯ ಹೋರಾಡುತ್ತಿರುವ ಈ ಅಕ್ಕತಂಗಿಯರ ಕಣ್ಣೀರಿಗೂ ಕರಗದಷ್ಟು ಈ ಸರ್ಕಾರ ನಿರ್ದಯಿಯಾಗಿದೆ ಎಂದು ಅವರು ಬೇಸರ ವ್ಯಕ್ತಪಡಿಸಿದ್ದಾರೆ.

ಮಾಜಿ ದೇವದಾಸಿಯರ ಸಬಲೀಕರಣ ಮತ್ತು ಪುನರ್ವಸತಿಗಾಗಿ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ತಂದಿದ್ದ ದೂರದೃಷ್ಟಿಯ ಮಾನವೀಯ ಯೋಜನೆಯನ್ನು ಇಂದಿನ ಕಾಂಗ್ರೆಸ್ ಸರ್ಕಾರ ಸಂಪೂರ್ಣವಾಗಿ ಹಳ್ಳ ಹಿಡಿಸಿದೆ ಎಂದು ಅಶೋಕ್ ಆರೋಪಿಸಿದ್ದಾರೆ. ಗ್ಯಾರಂಟಿ ಯೋಜನೆಗಳ ಅತಿಯಾದ ಹೊರೆಯಿಂದಾಗಿ ರಾಜ್ಯದಲ್ಲಿ ಸದ್ಯ ದಿವಾಳಿ ಆಡಳಿತ ನಡೆಯುತ್ತಿದೆ. ಕೇವಲ ಪ್ರಚಾರಕ್ಕಾಗಿ ಕೋಟಿ ಕೋಟಿ ಹಣ ಸುರಿಯುವ ಸರ್ಕಾರಕ್ಕೆ ಬಡ ಮಾಜಿ ದೇವದಾಸಿಯರ ಹೊಟ್ಟೆ ತುಂಬಿಸಲು ಹಣವಿಲ್ಲವೇ ಎಂದು ಅವರು ಖಾರವಾಗಿ ಪ್ರಶ್ನಿಸಿದ್ದಾರೆ. ಟ್ವೀಟ್ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕಾಂಗ್ರೆಸ್ ಪಕ್ಷವನ್ನು ನೇರವಾಗಿ ತರಾಟೆಗೆ ತೆಗೆದುಕೊಂಡಿರುವ ಅವರು ಕೆಲವು ಪ್ರಮುಖ ಪ್ರಶ್ನೆಗಳನ್ನು ಸರ್ಕಾರದ ಮುಂದಿಟ್ಟಿದ್ದಾರೆ.

ಒಂದೆಡೆ 'ಶಕ್ತಿ' ಯೋಜನೆ ಹೆಸರಿನಲ್ಲಿ ಉಚಿತ ಬಸ್ ಪ್ರಯಾಣ ನೀಡಿ ಭರ್ಜರಿ ಪ್ರಚಾರ ಗಿಟ್ಟಿಸಿಕೊಳ್ಳಲಾಗುತ್ತಿದೆ. ಇನ್ನೊಂದೆಡೆ 'ಗೃಹಲಕ್ಷ್ಮಿ' ಹೆಸರಿನಲ್ಲಿ ಮಹಿಳೆಯರಿಗೆ ಮಾತು ಕೊಟ್ಟ ಕಾಂಗ್ರೆಸ್ ಸರ್ಕಾರ, ಮತ್ತೊಂದೆಡೆ ಸಮಾಜದ ಕೊನೆಯ ಸಾಲಿನಲ್ಲಿರುವ ಮಾಜಿ ದೇವದಾಸಿಯರ ಶಕ್ತಿಯನ್ನೇ ಕುಂದಿಸಿದೆ. ಅವರ ಮನೆಗೆ ತಲುಪುತ್ತಿದ್ದ ಲಕ್ಷ್ಮಿಯನ್ನೇ (ಮಾಸಾಶನ) ಕಸಿದುಕೊಂಡಿರುವ ಈ ಸರ್ಕಾರಕ್ಕೆ ನಾಚಿಕೆಯಾಗಬೇಕು. ಇದೇನಾ ನೀವು ಹೇಳುವ ಮಹಿಳಾ ಪರ ಆಡಳಿತ" ಎಂದು ಆರ್. ಅಶೋಕ್ ತಮ್ಮ ಮಾಧ್ಯಮದ ಹೇಳಿಕೆಯಲ್ಲಿ ತೀವ್ರವಾಗಿ ತರಾಟೆಗೆ ತೆಗೆದುಕೊಂಡಿದ್ದಾರೆ.

# ಜಿಬಿಎ ಚುನಾವಣೆಗೆ ಜೆಡಿಎಸ್ ಸಿದ್ಧತೆ: ಎಚ್.ಎಂ. ರಮೇಶ್‌ಗೌಡ ಅಧ್ಯಕ್ಷತೆಯಲ್ಲಿ ಇಂದು ಸಭೆ

**ಬೆಂಗಳೂರು, ಮೇ24–** ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯ ಪಂಚ ನಗರ ಪಾಲಿಕೆಗಳಿಗೆ ಚುನಾವಣೆ ನಡೆಸಲು ಸುಪ್ರೀಂ ಕೋರ್ಟ್ ಸರ್ಕಾರಕ್ಕೆ ಅಂತಿಮ ಗಡುವು ನೀಡಿರುವ ಹಿನ್ನೆಲೆಯಲ್ಲಿ ಜೆಡಿಎಸ್ ಚುನಾವಣಾ ಪೂರ್ವ ಸಿದ್ಧತೆ ಆರಂಭಿಸಿದೆ. ಪಕ್ಷದ ಗ್ರೇಟರ್ ಬೆಂಗಳೂರು ಅಧ್ಯಕ್ಷ ಎಚ್.ಎಂ. ರಮೇಶ್‌ಗೌಡ ಅಧ್ಯಕ್ಷತೆಯಲ್ಲಿ ಜಿಬಿಎ ವ್ಯಾಪ್ತಿಯ ಪಕ್ಷದ ವಿಧಾನಸಭಾ ಕ್ಷೇತ್ರಗಳ ಅಧ್ಯಕ್ಷರು, ವಿವಿಧ ವಿಭಾಗಗಳ ಅಧ್ಯಕ್ಷರು ಮತ್ತು ಬಿಎಲ್‌ಎ ಗಳ ಸಭೆಯನ್ನು ಸೋಮವಾರ ಬೆಳಗ್ಗೆ 11.30 ಗಂಟೆಗೆ ಜೆಡಿಎಸ್ ಪಕ್ಷದ ಕಚೇರಿ ಜೆ.ಪಿ. ಭವನದಲ್ಲಿ ಕರೆಯಲಾಗಿದೆ.ಈ ಸಭೆಯಲ್ಲಿ ಶಾಸಕರು, ಮಾಜಿ ಶಾಸಕರು ಹಾಗೂ ಜಿಬಿಎ ನಗರ ಪಾಲಿಕೆವಾರು ಜಿಲ್ಲಾಧ್ಯಕ್ಷರು ಭಾಗವಹಿಸಲಿದ್ದಾರೆ ಎಂದು ಜೆಡಿಎಸ್ ಮೂಲಗಳು ತಿಳಿಸಿವೆ.

ಪಂಚ ನಗರಪಾಲಿಕೆಗಳ ಚುನಾವಣೆಗೆ ಸಂಬಂಧಿಸಿದಂತೆ ಚರ್ಚೆ ನಡೆಸಿ ಪ್ರಮುಖರಿಗೆ ಜವಾಬ್ದಾರಿಯನ್ನು ನೀಡಲಾಗುತ್ತದೆ.

ಪಕ್ಷ ಸಂಘಟನೆಯ ಜತೆಗೆ ರಾಜ್ಯ ಸರ್ಕಾರದ ವೈಫಲ್ಯಗಳ ವಿರುದ್ಧ ಜನಾಂದೋಲನ ಮಾಡುವುದು ಹಾಗೂ ವಾರ್ಡ್‌ವಾರು ಅಭ್ಯರ್ಥಿಗಳನ್ನು ಗುರುತಿಸುವ ಬಗ್ಗೆ ಸಭೆಯಲ್ಲಿ ಗಂಭೀರ ಸಮಾಲೋಚನೆ ನಡೆಸಲಾಗುತ್ತದೆ. ಜಿಬಿಎ ಚುನಾವಣೆಯಲ್ಲೂ ಬಿಜೆಪಿ ಜೊತೆ ಮೈತ್ರಿ ಮುಂದುವರಿದರೆ ಯಾವ ಯಾವ ವಾರ್ಡ್‌ಗಳನ್ನು ಉಳಿಸಿಕೊಳ್ಳಬೇಕು ಎಂಬೆಲ್ಲಾ ವಿಚಾರದ ಬಗ್ಗೆ ಚರ್ಚಿಸಿ, ಸೂಕ್ತ ತೀರ್ಮಾನ ಕೈಗೊಂಡು ರಾಜ್ಯ ಘಟಕ್ಕೆ ವರದಿ ನೀಡುವ ಸಾಧ್ಯತೆಗಳಿವೆ.

ಈ ಸಂದರ್ಭದಲ್ಲಿ ಬೆಂಗಳೂರು ನಗರದ ವಿಭಾಗಗಳ ಅಧ್ಯಕ್ಷರುಗಳಿಗೆ ಆಯಾ ವಿಭಾಗಗಳ ಜಿ.ಬಿ.ಎ. ಅಧ್ಯಕ್ಷರಿಗೆ ನೇಮಕಾತಿ ಆದೇಶ ಪತ್ರವನ್ನು ನೀಡಲಾಗುತ್ತದೆ ಎಂದು ಜೆಡಿಎಸ್ ತಿಳಿಸಿದೆ.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

ಮೇ 25 2026, ಸೋಮವಾರ

## ಒಳಪುಟಗಳಲ್ಲಿ

ರಾಜ್ಯದಲ್ಲಿ ಎಸ್‌ಐಆರ್ ಮೂಲಕ 75 ಲಕ್ಷ ಮತದಾರರನ್ನು - ಹೊರಗಿಡುವ ಹುನ್ನಾರ: ಕಾಂಗ್ರೆಸ್ ವಕ್ತಾರ ಲಕ್ಷ್ಮಣ್ ಆರೋಪ - ಪು.5

## ಪ್ರಧಾನಿ ಮೋದಿ ಬೆಂಗಳೂರು ಭೇಟಿ ವೇಳೆ ಭದ್ರತಾ ಲೋಪ: 6 ಪೊಲೀಸರ ತಲೆದಂಡ

**ಬೆಂಗಳೂರು, ಮೇ 24:** ಪ್ರಧಾನಿ ನರೇಂದ್ರ ಮೋದಿಯವರು ಬೆಂಗಳೂರಿಗೆ ಆಗಮಿಸಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ತೆರಳುವ ಮಾರ್ಗದಲ್ಲಿ ಸ್ಫೋಟಕ ಪತ್ತೆಯಾದ ಪ್ರಕರಣಕ್ಕೆ ಸಂಬಂಧಿಸಿದಂತೆ 6 ಪೊಲೀಸ್ ಸಿಬ್ಬಂದಿಗಳ ಅಮಾನತ್ತುಗೊಳಿಸಲಾಗಿದೆ. ಕನಕಪುರ ರಸ್ತೆಯ ಆರ್ಟ್ ಆಫ್ ಲಿವಿಂಗ್‌ನಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಭಾಗಿಯಾಗಲು ಪ್ರಧಾನಿ ಆಗಮಿಸಿದಾಗ ಬೆಂಗಳೂರು ದಕ್ಷಿಣ ತಾಲ್ಲೂಕಿನ ವಡೇಯರಹಳ್ಳಿ ಬಳಿ ಸ್ಫೋಟಕ ಪತ್ತೆಯಾಗಿ ಭಾರಿ ಭದ್ರತಾ ಲೋಪ ಕೇಳಿ ಬಂದಿತ್ತು. ಪ್ರಾಥಮಿಕ ತನಿಖೆ ನಂತರ ಬೆಂಗಳೂರು ದಕ್ಷಿಣ ಎಸ್‌ಪಿ ಶ್ರೀನಿವಾಸ ಅವರು ಪಿಎಸ್‌ಐ, ಎಎಸ್‌ಐ ಹಾಗೂ ನಾಲ್ವರು ಕಾನ್‌ಸ್ಟೇಬಲ್‌ಗಳನ್ನು ಅಮಾನತು ಗೊಳಿಸಿದ್ದಾರೆ. ಈ ಸ್ಥಳದ ಬಳಿಯೇ ಇವರನ್ನು ಕರ್ತವ್ಯಕ್ಕೆ ನಿಯೋಜಿಸಲಾಗಿತ್ತು ಎಂದು ಗೊತ್ತಾಗಿದ್ದು, ಕರ್ತವ್ಯ ಲೋಪ ಪರಿಗಣಿಸಿ ಅಮಾನತು ಮಾಡಲಾಗಿದೆ. ಪ್ರಧಾನಿ ಬರುವ ಎರಡು ಗಂಟೆ ಮೊದಲು ಕಾನ್‌ಸ್ಟೇಬಲ್ ಒಬ್ಬರು ಸ್ಫೋಟಕಗಳಿದ್ದ ಬಾಕ್ಸ್ ಪತ್ತೆಹಚ್ಚಿ ನೋಡಿ ನಂತರ ಹಿರಿಯ ಅಧಿಕಾರಿಗಳ ಗಮನಕ್ಕೆ ತಂದರು. ನಂತರ ಬಾಂಬ್ ನಿಷ್ಕ್ರಿಯದಳ ಪರಿಶೀಲಿಸಿದಾಗ ಅದರಲ್ಲಿ ಜಿಲೆಟಿನ್ ಕಡ್ಡಿಗಳು ಪತ್ತೆಯಾಗಿತ್ತು.

# ಭಾರತ-ಅಮೆರಿಕ ವ್ಯಾಪಾರ ಒಪ್ಪಂದ ಶೀಘ್ರದಲ್ಲೇ ಸಂಪೂರ್ಣ: ರುಬಿಯೊ ವಿಶ್ವಾಸ

**ನವದೆಹಲಿ, ಮೇ 24: ಭಾರತ ಮತ್ತು ಅಮೆರಿಕ ಭಾನುವಾರ ತಮ್ಮ ವಿಸ್ತರಿಸುತ್ತಿರುವ ಕಾರ್ಯತಂತ್ರದ ಪಾಲುದಾರಿಕೆಯಲ್ಲಿ ಹೊಸ ವೇಗವನ್ನು ಸೂಚಿಸಿವೆ, ಎರಡೂ ಕಡೆಯವರು "ಶೀಘ್ರದಲ್ಲೇ" ದ್ವಿಪಕ್ಷೀಯ ವ್ಯಾಪಾರ ಒಪ್ಪಂದವನ್ನು ತೀರ್ಮಾನಿಸಲಿದ್ದಾರೆ ಎಂದು ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರುಬಿಯೊ ವಿಶ್ವಾಸ ವ್ಯಕ್ತಪಡಿಸಿದ್ದಾರೆ, ಆದರೆ ವಿದೇಶಾಂಗ ಸಚಿವ ಎಸ್. ಜೈಶಂಕರ್ ಬಹು ಜಾಗತಿಕ ಶಕ್ತಿಕೇಂದ್ರಗಳಲ್ಲಿ ಬಲವಾದ ಸಂಬಂಧಗಳನ್ನು ಕಾಯ್ದುಕೊಳ್ಳುವ ನವದೆಹಲಿಯ ನೀತಿಯನ್ನು ಒತ್ತಿ ಹೇಳಿದರು. ನವದೆಹಲಿಯಲ್ಲಿ ವ್ಯಾಪಕ ಮಾತುಕತೆಗಳ ನಂತರ, ಇಬ್ಬರು ನಾಯಕರು ವ್ಯಾಪಾರ, ರಕ್ಷಣೆ, ಇಂಧನ, ನಿರ್ಣಾಯಕ ಖನಿಜಗಳು, ತಂತ್ರಜ್ಞಾನ ಮತ್ತು ಭಯೋತ್ಪಾದನೆ ನಿಗ್ರಹದಲ್ಲಿ ಬೆಳೆಯುತ್ತಿರುವ ಸಹಕಾರವನ್ನು ಎತ್ತಿ ತೋರಿಸಿದರು, ಇದು ಪ್ರಾದೇಶಿಕ ಮತ್ತು ಜಾಗತಿಕ ಸ್ಥಿರತೆಗೆ ಎರಡೂ ಕಡೆಯವರು ವಿವರಿಸಿದ ಸಂಬಂಧದ ವಿಶಾಲ ವ್ಯಾಪ್ತಿಯನ್ನು ಪ್ರತಿಬಿಂಬಿಸುತ್ತದೆ.**

## ಭಯೋತ್ಪಾದನೆಗೆ ಶೂನ್ಯ ಸಹಿಷ್ಣುತೆ: ಜೈಶಂಕರ್ ಪುನರುಚ್ಚರಿಸಿದ ಭಾರತ-ಅಮೆರಿಕ ನಿಲುವ



ಭಾರತದ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಅವರು ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರುಬಿಯೊ ಅವರೊಂದಿಗೆ ನಡೆಸಿದ ಜಂಟಿ ಸುದ್ದಿಗೋಷ್ಠಿಯಲ್ಲಿ ಭಯೋತ್ಪಾದನೆ ವಿರುದ್ಧ ಭಾರತದ ಶೂನ್ಯ ಸಹಿಷ್ಣುತೆ ನೀತಿಯನ್ನು ಪುನರುಚ್ಚರಿಸಿದರು. ಎರಡು ಸಮಾನ ರಾಷ್ಟ್ರೀಯ ಹಿತಾಸಕ್ತಿಗಳ ಮೇಲೆ ನಿಂತಿದೆ ಎಂದು ಪ್ರತಿಪಾದಿಸಿದರು. ಭಾನುವಾರ ಬೆಳಗ್ಗೆ ನಡೆದ ಮಾತುಕತೆ ಬಳಿಕ ನಡೆದ ಸುದ್ದಿಗೋಷ್ಠಿಯಲ್ಲಿ ಜೈಶಂಕರ್ ಅವರು ಮಾರ್ಕೊ ರೂಬಿಯೊ ಅವರನ್ನು ಭಾರತಕ್ಕೆ ಸ್ವಾಗತಿಸಿದರು. ಉಭಯ ದೇಶಗಳ ನಡುವೆ ನಿರಂತರ ಸಂಪರ್ಕ ನಡೆಯುತ್ತಿದೆ ಎಂದು ತಿಳಿಸಿದ ಅವರು, ಪಶ್ಚಿಮ ಏಷ್ಯಾ, ಭಾರತೀಯ ಉಪಖಂಡ ಮತ್ತು ಪೂರ್ವ ಏಷ್ಯಾದ ಬೆಳವಣಿಗೆಗಳ ಬಗ್ಗೆ ಚರ್ಚೆ ನಡೆಸಲಾಯಿತು. ಇದರ ಜೊತೆಗೆ ರಕ್ಷಣಾ ಸಹಕಾರ, ಆರ್ಥಿಕತೆ, ಇಂಧನ ಕ್ಷೇತ್ರ ಮತ್ತು ಭಯೋತ್ಪಾದನೆ ವಿರುದ್ಧ ಹೋರಾಟದ ವಿಷಯಗಳನ್ನು ಪ್ರಸ್ತಾಪಿಸಿದರು.

**ರಕ್ಷಣಾ ಮತ್ತು ವ್ಯಾಪಾರ ಸಹಕಾರಕ್ಕೆ:**

ಇತ್ತೀಚೆಗೆ ನವೀಕರಣಗೊಂಡ 10 ವರ್ಷದ ರಕ್ಷಣಾ ಸಹಭಾಗಿತ್ವ ಚೌಕಟ್ಟು ಒಪ್ಪಂದ ಮತ್ತು ಸಮಗ್ರ ಅಂಡರ್‌ವಾಟರ್ ಡೊಮೇನ್ ಅವೇರ್‌ನೆಸ್ ರಸ್ತೆನಕ್ಷೆಯ ಬಗ್ಗೆ ಜೈಶಂಕರ್ ಮಾಹಿತಿ. ಆರ್ಥಿಕ ಕ್ಷೇತ್ರದಲ್ಲಿ ಪರಸ್ಪರ ಲಾಭದಾಯಕ ಮಧ್ಯಂತರ ವ್ಯಾಪಾರ ಒಪ್ಪಂದದ ಅಂತಿಮ ಪಠ್ಯವನ್ನು ಪೂರ್ಣಗೊಳಿಸುವ ಅಗತ್ಯವಿದೆ ಎಂದು ವಹಿಸಲಾಗಿದೆ. ಸಮಗ್ರ ದ್ವಿಪಕ್ಷೀಯ ವ್ಯಾಪಾರ ಒಪ್ಪಂದದ ರೂಪುರೇಷೆ ಸಿದ್ಧಪಡಿಸಲು ಅಮೆರಿಕದ ತಂಡ ಶೀಘ್ರದಲ್ಲೇ ಭಾರತಕ್ಕೆ ಭೇಟಿ ನೀಡಲಿದೆ ಹೇಳಿದರು

**ಭಯೋತ್ಪಾದನೆಗೆ ಕಠಿಣ ನಿಲುವು:**

ಭಯೋತ್ಪಾದನೆ ಕುರಿತು ಮಾತನಾಡಿದ ಜೈಶಂಕರ್, 26/11 ಮುಂಬೈ ದಾಳಿಯ ಪ್ರಮುಖ ಸಂಚುಕೋರ ತಹವ್ವೂರ್ ರಾಣಾ ಅವರನ್ನು ಭಾರತಕ್ಕೆ ಹಸ್ತಾಂತರಿಸುವಲ್ಲಿ ಅಮೆರಿಕ ನೀಡಿದ ಸಹಕಾರಕ್ಕೆ ಧನ್ಯವಾದಗಳನ್ನು ಅರ್ಪಿಸಿದರು. "ಹಾಗೆಯೇ ಇದೆ. ಸವಾಲುಗಳನ್ನು ಎದುರಿಸುತ್ತಿದೆ. ಪ್ರಮುಖವಾದುದು ಭಯೋತ್ಪಾದನೆ. ನಿಲುವು ಸಂಪೂರ್ಣ ಶೂನ್ಯ ಸಹಿಷ್ಣುತೆಯಾಗಿದೆ," ಹೇಳಿದರು.

ಭಾರತಕ್ಕೆ ಭರವಸೆ ನೀಡಿದ ರುಬಿಯೊ, ಪಾಕಿಸ್ತಾನದ ಅಮೆರಿಕದ ನಿಶ್ಚಿತಾರ್ಥವು ಕಾರ್ಯತಂತ್ರದ ಪಾಲುದಾರಿಕೆಯನ್ನು ಹಾಳು ಸಂಕೇತ ಎಂದು ಹೇಳಿದರು:

ಪಾಕಿಸ್ತಾನ-ವಾಷಿಂಗ್ಟನ್‌ನ ಬೆಳೆಯುತ್ತಿರುವ ಸಂಬಂಧಗಳು ಭಾರತಕ್ಕೆ ಅದನ್ನೂ ಹಾಳುಮಾಡಬಹುದು ಎಂಬ ಮಾತುಗಳು ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರುಬಿಯೊ ಭಾನುವಾರ ದೃಢವಾಗಿ ತಿರಸ್ಕರಿಸಿದರು. ಯಾವುದೇದೇಶದೊಂದಿಗೆ ಅಮೆರಿಕದ ಸಂಬಂಧಗಳು ಭಾರತದೊಂದಿಗಿನ ಅದರ ಮೈತ್ರಿಯನ್ನು ದುರ್ಬಲಗೊಳಿಸುವುದಿಲ್ಲ. ಅಮೆರಿಕ-ಪಾಕಿಸ್ತಾನ ಸಂಬಂಧಗಳು ಮತ್ತು ಭಯೋತ್ಪಾದಕ ಗುಂಪುಗಳಿಗೆ ಮಿಲಿಟರಿ ಬೆಂಬಲಕ್ಕೆ ಸಂಬಂಧಿಸಿದ ಆರೋಪಗಳ ಕುರಿತು ಮಾಧ್ಯಮದ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿದ ರೂಬಿಯೊ, ಜವಾಬ್ದಾರಿಯುತ ರಾಷ್ಟ್ರಗಳು ಪ್ರಮುಖ ದೇಶಗಳೊಂದಿಗೆ ಯುದ್ಧತಂತ್ರದ ಮತ್ತು ರಾಜತಾಂತ್ರಿಕ ಇನ್ನಷ್ಟು ನೋಡಿ ನಿರ್ವಹಿಸುತ್ತವೆ ಎಂದರು.

# ತಟ್ಟೆಹಕ್ಕಲ್ ನದಿಯಲ್ಲಿ ಮುಳುಗಿ 8 ಜನರ ಸಾವು
## ಸಂತ್ರಸ್ತರಿಗೆ ಸಿಎಂ 5 ಲಕ್ಷ ರೂ. ಪರಿಹಾರ ಘೋಷಣೆ



**ಬೆಂಗಳೂರು ಮೇ24:** ಕಪ್ಪೆ ಚಿಪ್ಪು ಸಂಗ್ರಹಿಸಲು ವೆಂಕಟಾಪುರ ನದಿಗೆ ತೆರಳಿದ್ದ ವೇಳೆ ದಿಢೀರ್ ನೀರು ಏರಿಕೆಯಾಗಿ ಸಂಭವಿಸಿದ ದುರ್ಘಟನೆಯಲ್ಲಿ 8 ಜನರು ಮೃತಪಟ್ಟಿರುವ ಘಟನೆ ಉತ್ತರ ಕನ್ನಡ ಜಿಲ್ಲೆಯ ಭಟ್ಕಳ ತಾಲೂಕಿನ ಶಿರಾಲಿ ತಟ್ಟಿಹಕ್ಕಲು ಪ್ರದೇಶದಲ್ಲಿ ಭಾನುವಾರ ನಡೆದಿದೆ.

**ಘಟನೆಯ ವಿವರ:** ಒಟ್ಟು 14 ಜನರ ತಂಡವು ಇಂದು ಕಪ್ಪೆ ಚಿಪ್ಪುಗಳನ್ನು ಸಂಗ್ರಹಿಸಲು ವೆಂಕಟಾಪುರ ನದಿಗೆ ತೆರಳಿತ್ತು. ಈ ವೇಳೆ ನದಿಯಲ್ಲಿ ನೀರಿನ ಮಟ್ಟ ದಿಢೀರನೆ ಏರಿಕೆಯಾದ ಕಾರಣ, ಜನರು ನೀರಿನಲ್ಲಿ ಕೊಚ್ಚಿ ಹೋಗಿದ್ದಾರೆ.

**ದುರ್ಘಟನೆಯ ಮಾಹಿತಿ:** ಒಟ್ಟು 8 ಮಂದಿ (ಇದರಲ್ಲಿ 7 ಜನ ಮಹಿಳೆಯರು ಮತ್ತು ಓರ್ವ ಪುರುಷ ಸೇರಿದ್ದಾರೆ). ಓರ್ವ ಮಹಿಳೆ ಮತ್ತು ಓರ್ವ ಪುರುಷನ ಪತ್ತೆಗೆ ಶೋಧ ಕಾರ್ಯ ಮುಂದುವರೆದಿದೆ. ಮೂವರು ಮಹಿಳೆಯರು ಪ್ರಾಣಾಪಾಯದಿಂದ ಪಾರಾಗಿದ್ದು, ಅವರನ್ನು ರಕ್ಷಿಸಿ ಸ್ಥಳೀಯ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಒಟ್ಟು ಮೂವರನ್ನು ರಕ್ಷಿಸಲಾಗಿದೆ ಎಂದು ತಿಳಿದುಬಂದಿದೆ.





ಉತ್ತರ ಕನ್ನಡ ಜಿಲ್ಲೆಯ ಭಟ್ಕಳ ಸಮೀಪದ ತಟ್ಟೆಹಕ್ಕಲು ಕಡಲ ತೀರದಲ್ಲಿ ಸಂಭವಿಸಿದ ದುರ್ಘಟನೆಯಲ್ಲಿ ಒಂದೇ ಕುಟುಂಬದ ಎಂಟು ಮಂದಿ ನೀರಿನಲ್ಲಿ ಮುಳುಗಿ ಸಾವಿಗೀಡಾದ ಸುದ್ದಿ ಅತ್ಯಂತ ದುಃಖ ತಂದಿದೆ ಎಂದು ವಿಧಾನಸಭೆ ಪ್ರತಿಪಕ್ಷ ನಾಯಕ ಆರ್. ಅಶೋಕ್ ಹೇಳಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಮೃತರ ಆತ್ಮಕ್ಕೆ ಚಿರಶಾಂತಿ ಸಿಗಲಿ ಎಂದು ಪ್ರಾರ್ಥಿಸುತ್ತೇನೆ. ದುರ್ಘಟನೆಯಲ್ಲಿ ತಮ್ಮ ಆತ್ಮೀಯರನ್ನು ಕಳೆದುಕೊಂಡ ಕುಟುಂಬಗಳ ದುಃಖದಲ್ಲಿ ನಾನೂ ಭಾಗಿಯಾಗಿದ್ದೇನೆ. ಇನ್ನೂ ಕಾಣೆಯಾಗಿರುವವರಿಗಾಗಿ ಶೋಧ ಕಾರ್ಯ ಮುಂದುವರಿದಿದ್ದು, ಅವರು ಸುರಕ್ಷಿತವಾಗಿ ಪತ್ತೆಯಾಗಲಿ ಎಂದು ದೇವರಲ್ಲಿ ಪ್ರಾರ್ಥಿಸುತ್ತೇನೆ ಎಂದಿದ್ದಾರೆ. ಈ ರೀತಿಯ ದುರ್ಘಟನೆಗಳು ಮರುಕಳಿಸದಂತೆ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳುವುದು ಅತ್ಯಾವಶ್ಯಕ ಎಂದು ಆರ್. ಅಶೋಕ್ ಹೇಳಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ 5 ಲಕ್ಷ ರೂ. ಪರಿಹಾರ ಘೋಷಿಸಿದ್ದಾರೆ:

ಉತ್ತರ ಕನ್ನಡ ಜಿಲ್ಲೆಯ ಭಟ್ಕಳ ಸಮೀಪದ ತಟ್ಟೆಹಕ್ಕಲು ಕಡಲ ತೀರದಲ್ಲಿ ಕಪ್ಪೆಚಿಪ್ಪು ತರಲು ಹೋದವರ ಪೈಕಿ ಒಂದೇ ಕುಟುಂಬದ ಎಂಟು ಮಂದಿ ನೀರಿನಲ್ಲಿ ಮುಳುಗಿ ಸಾವಿಗೀಡಾಗಿದವರ ಕುಟುಂಬಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಐದು ಲಕ್ಷ ರೂಪಾಯಿ ಪರಿಹಾರ ಘೋಷಿಸಿದ್ದಾರೆ. ಸುದ್ದಿ ತಿಳಿದು ಸಂಕಟವಾಯಿತು. ಮೃತರ ಆತ್ಮಕ್ಕೆ ಚಿರಶಾಂತಿ ಸಿಗಲಿ ಎಂದು ಪ್ರಾರ್ಥಿಸಿದ್ದಾರೆ. ಇದೊಂದು ಅತ್ಯಂತ ದುರದೃಷ್ಟಕರ ಮತ್ತು ನೋವಿನ ಘಟನೆ. ದುರಂತದಲ್ಲಿ ಮಡಿದವರ ಕುಟುಂಬಕ್ಕೆ ಮಾನವೀಯ ನೆಲೆಯಲ್ಲಿ ರಾಜ್ಯ ಸರ್ಕಾರದಿಂದ ತಲಾ 5 ಲಕ್ಷ ರೂಪಾಯಿ ಪರಿಹಾರ ನೀಡಲಾಗುವುದು ಎಂದಿದ್ದಾರೆ. ಇನ್ನೂ ಕೆಲವರು ಈ ದುರ್ಘಟನೆಯಲ್ಲಿ ಕಾಣೆಯಾಗಿರುವ ಮಾಹಿತಿಯಿದ್ದು, ಅವರಿಗಾಗಿ ತೀವ್ರ ಹುಡುಕಾಟ ನಡೆಸಲಾಗುತ್ತಿದೆ. ಕಾಣೆಯಾದವರು ಬದುಕಿಬಂದು ತಮ್ಮವರನ್ನು ಕೂಡಿಕೊಳ್ಳಲಿ ಎಂದು ನಾವೆಲ್ಲರೂ ದೇವರಲ್ಲಿ ಪ್ರಾರ್ಥಿಸೋಣ.

# ಜವಾಬ್ದಾರಿಯುತ ಸರ್ಕಾರವಾಗಿ ಎಸ್‌ಐಆರ್ ಬಗ್ಗೆ ಜನರಲ್ಲಿ ಜಾಗೃತಿ ಡಿಸಿಎಂ ಡಿ.ಕೆ. ಶಿವಕುಮಾರ್



**ಬೆಂಗಳೂರು, ಮೇ 24:** "ಜವಾಬ್ದಾರಿಯುತ ಸರ್ಕಾರವಾಗಿ ನಾವು ಜನರಿಗೆ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಬಗ್ಗೆ ಜಾಗೃತಿ ಮೂಡಿಸಬೇಕು. ನಾವು ಆ ಕೆಲಸ ಮಾಡುತ್ತೇವೆ" ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಹೇಳಿದರು.

ಸುದ್ದಿಗಾರರ ಜೊತೆ ಮಾತನಾಡಿದ ಅವರು, "ಕರ್ನಾಟಕ ರಾಜ್ಯದ ಎಲ್ಲಾ ಜನರ ಹಕ್ಕು ಉಳಿಸಲು ಇಂದು ಪಕ್ಷದ ಮುಖಂಡರ ಸಭೆ ಕರೆಯಲಾಗಿದೆ. ಜನರಿಗೆ ಬೇಕಾದ ದಾಖಲೆಗಳನ್ನು ಒದಗಿಸಿಕೊಡಬೇಕು. ಇದು ಜವಾಬ್ದಾರಿಯುತ ಸರ್ಕಾರದ ಕೆಲಸ. ಕೇರಳದಲ್ಲಿ ಇದೇ ರೀತಿ ಮಾಡಲಾಗಿದೆ" ಎಂದು ತಿಳಿಸಿದರು. "ಮತದಾರರು ಅರ್ಜಿ ಹಾಕಿಕೊಳ್ಳಬೇಕು. ಇಲ್ಲದಿದ್ದರೆ ಮತದಾನದ ಹಕ್ಕನ್ನು ಕಳೆದುಕೊಳ್ಳಲಿದ್ದಾರೆ. ಕಾಂಗ್ರೆಸ್, ಬಿಜೆಪಿ, ದಳ ಸೇರಿದಂತೆ ಎಲ್ಲಾ ಪಕ್ಷಗಳು ಬಿಎಲ್‌ಎ ಗಳಿಗೆ ತರಬೇತಿ ನೀಡುತ್ತಿವೆ. ನಮ್ಮಿಂದ ಹಾಗೂ ಸರ್ಕಾರದಿಂದ ಏನೂ ತೊಂದರೆಯಾಗಬಾರದು ಎಲ್ಲರಿಗೂ ನ್ಯಾಯ ಒದಗಿಸಿಕೊಡಬೇಕು ಎಂಬುದು ನನ್ನ ಆಶಯ. ಚುನಾವಣೆ ಗೆಲ್ಲುವುದು, ಬಿಡುವುದು ಬೇರೆ ವಿಚಾರ. ಮತದಾನ ಕಳೆದುಕೊಳ್ಳಬೇಡಿ

### ಎಸ್ ಐಆರ್ ಬಗ್ಗೆ ಮನವರಿಕೆ ಮಾಡಬೇಕು

**"ಹಳ್ಳಿಜನಕ್ಕೆ ಎಸ್‌ಐಆರ್ ಬಗ್ಗೆ ಏನು ತಿಳಿದಿರುತ್ತದೆ. ನಾವುಗಳು ಇದನ್ನ ಮನವರಿಗೆ ಮಾಡಬೇಕು. ಲಕ್ಷಾಂತರ ಜನ ವಲಸೆ ಕಾರ್ಮಿಕರು ಸೇರಿದಂತೆ ಜೀವನೋಪಯಕ್ಕೆ ಗೋವಾ ಸೇರಿದಂತೆ ಅನೇಕ ಕಡೆಗೆ ವಲಸೆ ಹೋಗಿರುತ್ತಾರೆ. ಈ ವೇಳೆ ಮನೆಗೆ ಬಂದಾಗ ಯಾರು ಇಲ್ಲದಿದ್ದರೆ ತೊಂದರೆಯಾಗುತ್ತದೆ. ಎಸ್‌ಐಆರ್ ವೇಳೆ ಎಲಿಮಿನೇಷನ್ ಅರ್ಜಿಗೆ ಸಹಿಹಾಕಿಸಿಕೊಳ್ಳುತ್ತಾರೆ. ಮೂರು ಬಾರಿ ಅರ್ಜಿಗೆ ಸಹಿ ಮಾಡಬೇಕಾದ ಸ್ಥಿತಿಯಿದೆ. ಇದು ಆಗದೇ ಇದ್ದರೆ ಪಟ್ಟಿಯಲ್ಲಿ ಹೆಸರಿಲ್ಲದಂತಾಗುತ್ತದೆ"ಎಂದರು. "ಸ್ವತಃ ನಾನೇ ಎಲಿಮಿನೇಷನ್ ಅರ್ಜಿಗೆ ಸಹಿ ಹಾಕದೇ ಇದ್ದರೇ ನನ್ನ ಮತವೇ ನನಗೆ ಇರುವುದಿಲ್ಲ. ಮಹಾರಾಜನಾದರೂ ಮತ ಇಲ್ಲವಾಗುತ್ತದೆ. ಮುಂದಿನ ಚುನಾವಣೆಗೆ ಮತ ಹಾಕಿ ಎಂದು ಕಳಿಸಿಬಿಡುತ್ತಾರೆ.**

**ಅಮರ್ತ್ಯಸೇನ್ ಅವರದ್ದೇ ಮತವಿಲ್ಲದಾಗಿದೆ. ಈ ರೀತಿ ಆಗುವುದು ಬೇಡ. ಅವರವರ ಮತವನ್ನು ಉಳಿಸಿಕೊಳ್ಳಬೇಕು" ಎಂದರು.**

ಚುನಾವಣಾ ಆಯೋಗ ನೀಡುವ ಅರ್ಜಿ ತುಂಬಿಸಿ ದಾಖಲೆ ಸಮೇತ ವಾಪಸ್ ನೀಡಿದವರ ಮತ ಮಾತ್ರ ಉಳಿಯುತ್ತದೆ, ಅರ್ಜಿ ವಾಪಸ್ ನೀಡದವರ ಮತದಾನದ ಹಕ್ಕು ನಷ್ಟವಾಗಲಿದೆ. ಈ ಬಗ್ಗೆ ಬಿಎಲ್‌ಎಗಳ ಮೂಲಕ ನಾವು ಇವುಗಳನ್ನು ಖಾತರಿಪಡಿಸಬೇಕಾಗಿದೆ" ಎಂದರು.

"ಎಸ್‌ಐಆರ್‌ನಿಂದ ಈ ದೇಶದಲ್ಲಿ ಸಾಕಷ್ಟು ಅನಾಹುತಗಳು ನಡೆಯುತ್ತಿವೆ. ಅದಕ್ಕೆ ಇದರ ಬಗ್ಗೆ ನಾವು ಜಾಗೃತಿ ಮೂಡಿಸುವ ಕೆಲಸ ಮಾಡುತ್ತಿದ್ದೇವೆ. ಬಡ, ಸಾಮಾನ್ಯರಿಗೆ ಎಸ್‌ಐಆರ್ ಬಗ್ಗೆ ಪರಿಚಯ ಮಾಡಿಕೊಡಬೇಕಿದೆ. ಒಂದೊಂದು ರಾಜ್ಯದಲ್ಲಿ 50, 60 ಹಾಗೂ 90 ಲಕ್ಷದವರೆಗೆ ಮತಗಳನ್ನು ತೆಗೆದುಹಾಕಲಾಗುತ್ತಿದೆ. ಕರ್ನಾಟಕದಲ್ಲೂ ಎಸ್‌ಐಆರ್ ಪ್ರಾರಂಭವಾಗುತ್ತಿದೆ" ಎಂದರು. "ಮತದಾನದ ಹಕ್ಕನ್ನು ಕಳೆದುಕೊಂಡರೆ ಯಾವುದೇ ಸೌಲಭ್ಯಗಳನ್ನು ಪಡೆಯಲು ಸಾಧ್ಯವಾಗುವುದಿಲ್ಲ. ಗೃಹಲಕ್ಷ್ಮೀ ಯೋಜನೆ ಹಣ, ಪಿಂಚಣಿ, ಮನೆ, ಜಮೀನು ಸೇರಿದಂತೆ ಸರ್ಕಾರದ ಎಲ್ಲಾ ಯೋಜನೆಗಳನ್ನು ಕಳೆದುಕೊಳ್ಳಬೇಕಾಗುತ್ತದೆ. ಈ ದೃಷ್ಟಿಯಿಂದ ಸರ್ಕಾರ ಎಂದು ನಾವುಗಳು ಹೇಳಬೇಕು" ಎಂದರು.

"ಬಡವರ ಉಪಯೋಗಕ್ಕೆ ಜನ ಕಲ್ಯಾಣ ಯೋಜನೆಗಳನ್ನು ನೀಡಲಾಗುತ್ತಿದೆ. ಮತನಾದನದ ಹಕ್ಕು ಇಲ್ಲ ಎಂದು ಯೋಜನಾ ಸೌಲಭ್ಯಗಳನ್ನು ನಿರಾಕರಿಸಿದರೆ ಆನಂತರ ಜನರು ನಿಮ್ಮಿಂದಲೇ ಸೌಲಭ್ಯಗಳು ಇಲ್ಲ ಎನ್ನುತ್ತಾರೆ. ಬಿಜೆಪಿಯವರೇ ಎಸ್‌ಐಆರ್ ಮಾಡಿರಬಹುದು ಆದರೆ ಜನ ನಮ್ಮನ್ನು ಪ್ರಶ್ನೆ ಮಾಡುತ್ತಾರೆ" ಎಂದರು.

### ಪಕ್ಷವಿದ್ದರೆ ಸ್ಥಾನಮಾನ:

**ಸಂಪುಟ ವಿಸ್ತರಣೆ ಬಗೆಗಿನ ಗೊಂದಲ ಬಗೆಹರಿಯಲಿದೆಯೇ ಎಂದು ಕೇಳಿದಾಗ, "ಯಾವ ಗೊಂದಲವೂ ಇಲ್ಲ ಏನಿಲ್ಲಾ. ನೀನು ಇದ್ದರೆ ಮಾತ್ರ ನಿನ್ನ ಪಕ್ಷ. ಮೊದಲು ನೀನು ಹಾಗೂ ಪಕ್ಷ ಇರಬೇಕು ಆನಂತರ ಮಿಕ್ಕಿದ್ದೆಲ್ಲಾ ಸ್ಥಾನಮಾನ" ಎಂದು ಹೇಳಿದರು.**

**ಭಟ್ಕಳದಲ್ಲಿ ಕಪ್ಪೆಚಿಪ್ಪು ತೆಗೆಯಲು ಹೋಗಿ 8 ಮಂದಿ ಜಲಸಮಾಧಿಯಾದ ಬಗ್ಗೆ ಕೇಳಿದಾಗ, "ಈ ಘಟನೆ ಹಿನ್ನೆಲೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಾದ ದಿನೇಶ್ ಗುಂಡೂರಾವ್ ಅವರು ಸಭೆ ಆರಂಭವಾದ ಬಳಿಕ ಹೊರಡಲಿದ್ದಾರೆ. ಈ ಪ್ರಕರಣದಲ್ಲಿ ಏನು ಕ್ರಮಗಳನ್ನು ಕೈಗೊಳ್ಳಬೇಕೋ ಸರ್ಕಾರ ಅದನ್ನು ಮಾಡಲಿದೆ. ನಾಪತ್ತೆಯಾಗಿರುವವರ ಪತ್ತೆ ಕಾರ್ಯಚರಣೆ ಬಗ್ಗೆ ಜಿಲ್ಲಾಡಳಿತ ಜೊತೆ ಮಾತುಕತೆ ನಡೆಸಲಾಗಿದೆ" ಎಂದರು.**

# ರಾಜ್ಯಸಭಾ ಸ್ಥಾನಗಳ ಚರ್ಚೆಯಲ್ಲಿ ಸುಪ್ರಿಯಾ ಶ್ರೀನಾಥ್, ಪವನ್ ಖೇರಾ ಮತ್ತು ಬಿ.ಕೆ.ಹರಿಪ್ರಸಾದ್ ಹೆಸರು



ಬೆಂಗಳೂರು: ಜೂನ್ 18ರಂದು ನಡೆಯಲಿರುವ ಕರ್ನಾಟಕದ ನಾಲ್ಕು ರಾಜ್ಯಸಭಾ ಸ್ಥಾನಗಳ ಚುನಾವಣೆಗೆ ಮುನ್ನ, ಕಾಂಗ್ರೆಸ್ ರಾಷ್ಟ್ರೀಯ ನಾಯಕರಾದ ಸುಪ್ರಿಯಾ ಶ್ರೀನಾಟೆ ಮತ್ತು ಪವನ್ ಖೇರಾ ಅವರ ಹೆಸರುಗಳು ರಾಜ್ಯದಿಂದ ನಾಮನಿರ್ದೇಶನಕ್ಕೆ ಭಾರೀ ಚರ್ಚೆಗೆ ಗ್ರಾಸವಾಗಿವೆ. ಕಾಂಗ್ರೆಸ್ ಮೂರು ಸ್ಥಾನಗಳನ್ನು ಸುಲಭವಾಗಿ ಗೆಲ್ಲುವ ನಿರೀಕ್ಷೆಯಿರುವ ಹಿನ್ನೆಲೆ, 2023ರ ವಿಧಾನಸಭಾ ಚುನಾವಣೆಗೆ ಮುನ್ನ ಕರ್ನಾಟಕ ಕಾಂಗ್ರೆಸ್ ಘಟಕದೊಂದಿಗೆ ಇಬ್ಬರೂ ನಾಯಕರು ಆಕ್ರಮಣಕಾರಿ ಪ್ರಚಾರ ನಡೆಸಿದ್ದರಿಂದ ಅವರಿಗೆ ಅವಕಾಶ ನೀಡಬಹುದು ಎಂದು ಹೇಳಲಾಗುತ್ತಿದೆ. ಈ ನಡುವೆ, ಹಿರಿಯ ನಾಯಕ ಹಾಗೂ ವಿಧಾನ ಪರಿಷತ್ ಸದಸ್ಯ ಬಿ.ಕೆ.ಹರಿಪ್ರಸಾದ್ ಅವರ ಹೆಸರೂ ರಾಜ್ಯಸಭೆ ನಾಮನಿರ್ದೇಶನಕ್ಕೆ ಕೇಳಿಬರುತ್ತಿದೆ. ಜೂನ್ 30ರಂದು ಎಂಎಲ್‌ಸಿ ಹುದ್ದೆಯಿಂದ ನಿವೃತ್ತಿಯಾಗಲಿರುವ ಬಿ.ಕೆ. ಹರಿಪ್ರಸಾದ್, ಕಾಂಗ್ರೆಸ್ ಕಾರ್ಯಕಾರಿ ಸಮಿತಿಯ ಶಾಶ್ವತ ಸದಸ್ಯರಾಗಿದ್ದು, ಎಐಸಿಸಿ ಹರಿಯಾಣ ಉಸ್ತುವಾರಿಯೂ ಆಗಿದ್ದಾರೆ.

ಸಿದ್ದರಾಮಯ್ಯ ಸಚಿವ ಸಂಪುಟ ಪುನಾರಚನೆ ನಡೆದರೆ ಅವರು ಸಚಿವ ಸ್ಥಾನಕ್ಕೂ ಆಕಾಂಕ್ಷಿಯಾಗಿದ್ದಾರೆ ಎಂದು ತಿಳಿದುಬಂದಿದೆ. ಪಕ್ಷದ ಒಳವಲಯದ ಕೆಲವರು, ಸುಪ್ರಿಯಾ ಶ್ರೀನಾಟೆ ಮತ್ತು ಪವನ್ ಖೇರಾ ಅವರನ್ನು ಅವರ ರಾಜ್ಯಗಳಿಂದಲೇ ರಾಜ್ಯಸಭೆಗೆ ನಾಮನಿರ್ದೇಶನ ಮಾಡಬೇಕು ಹಾಗೂ ಕರ್ನಾಟಕದ ನಾಯಕರಿಗೆ ಅವಕಾಶ ನೀಡಬೇಕು ಎಂದು ಅಭಿಪ್ರಾಯಪಟ್ಟಿದ್ದಾರೆ. ಬಿ ಕೆ ಹರಿಪ್ರಸಾದ್ ಸಚಿವ ಸಂಪುಟ ಪುನಾರಚನೆಯಲ್ಲಿ ಸಚಿವರಾಗುವ ಸಾಧ್ಯತೆಯೂ ಇದೆ ಎಂದು ಅವರು ಹೇಳಿದ್ದಾರೆ. ರಾಜ್ಯಸಭಾ ನಾಮನಿರ್ದೇಶನಕ್ಕೆ ಪರಿಗಣಿಸಲ್ಪಡಬಹುದಾದ ಇತರ ಆಕಾಂಕ್ಷಿಗಳಲ್ಲಿ ಸುಪ್ರೀಂ ಕೋರ್ಟ್‌ನ ಹಿರಿಯ ವಕೀಲ ಮೋಹನ್ ಕಾತರಕಿ, ಮಾಜಿ ಶಾಸಕಿ ಅಂಜಲಿ ನಿಂಬಾಳ್ಕರ್, ಮಾಜಿ ರಾಜ್ಯಸಭಾ ಸದಸ್ಯ ರಾಜೀವ್ ಗೌಡ, ಮಾವು ಅಭಿವೃದ್ಧಿ ನಿಗಮ ಅಧ್ಯಕ್ಷ ಡಾ. ಬಿ.ಸಿ. ಮುದ್ದುಗಂಗಾಧರ್ ಹಾಗೂ ಮಾಜಿ ಕೇಂದ್ರ ಸಚಿವ ಕೆ ರೆಹಮಾನ್ ಖಾನ್ ಅವರ ಪುತ್ರ ಮನ್ಸೂರ್ ಅಲಿ ಖಾನ್ ಅವರ ಹೆಸರುಗಳೂ ಸೇರಿವೆ. 2024ರ ಲೋಕಸಭಾ ಚುನಾವಣೆಯಲ್ಲಿ ಬೆಂಗಳೂರು ಕೇಂದ್ರ ಕ್ಷೇತ್ರದಿಂದ ಮನ್ಸೂರ್ ಅಲಿ ಖಾನ್



ಪ್ರಧಾನಿ ನರೇಂದ್ರ ಮೋದಿ ತಮ್ಮನ್ನು ಭೇಟಿಯಾದ ಇಬ್ಬರು ಕಂದಮ್ಮಗಳೊಂದಿಗೆ ಕಾಲಕಳೆದ ಮಾಧುರ್ಯವನ್ನು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದ್ದಾರೆ.

# ಬಂಗಾಳ ಫಾಲ್ಟಾ ಚುನಾವಣೆ
## ಬಿಜೆಪಿ ಅಭ್ಯರ್ಥಿಗೆ ಭರ್ಜರಿ ಜಯ!




**ಕೋಲ್ಕತ್ತಾ, ಮೇ 24:** ದಕ್ಷಿಣ 24 ಪರಗಣ ಜಿಲ್ಲೆಯ ಫಾಲ್ಟಾ ವಿಧಾನಸಭಾ ಸ್ಥಾನವನ್ನು ಬಿಜೆಪಿ ದಾಖಲೆಯ ಅಂತರದಿಂದ ಗೆದ್ದಿದೆ. ಬಿಜೆಪಿ ಅಭ್ಯರ್ಥಿ ದೇಬಾಂಗ್ಶು ಪಾಂಡಾ ತಮ್ಮ ಹತ್ತಿರದ ಪ್ರತಿಸ್ಪರ್ಧಿ ಸಿಪಿಐಎಂನ ಶಂಭುನಾಥ್ ಕುರ್ಮಿ ಅವರನ್ನು 1.09021 ಮತಗಳ ಭಾರಿ ಅಂತರದಿಂದ ಸೋಲಿಸಿದರು. 22 ಸುತ್ತಿನ ಎಣಿಕೆಯ ನಂತರ ಚುನಾವಣೆ ಆಯೋಗ ಫಲಿತಾಂಶ ಪ್ರಕಟಿಸಿದ್ದು ದೇಬಾಂಗ್ಶು 149,666 ಮತಗಳನ್ನು ಪಡೆದರೆ, ಕುರ್ಮಿ 40,645 ಮತಗಳನ್ನು ಪಡೆದರು. ಕಾಂಗ್ರೆಸ್ ಅಭ್ಯರ್ಥಿ ಅಬ್ದುರ್ ರಜಾಕ್ ಮೊಲ್ಲಾ 100,84 ಮತಗಳನ್ನು ಪಡೆದರು. ಏತನ್ಮಧ್ಯೆ, ತೃಣಮೂಲದ ಜಹಾಂಗೀರ್ ಖಾನ್ ಕೇವಲ 7,783 ಮತಗಳನ್ನು ಪಡೆದು ನಾಲ್ಕನೇ ಸ್ಥಾನ ಪಡೆದರು.

ಮತದಾನಕ್ಕೆ 48 ಗಂಟೆಗಳ ಮೊದಲು ಜಹಾಂಗೀರ್ ಚುನಾವಣೆಯಿಂದ ಹಿಂದೆ ಸರಿಯುವುದಾಗಿ ಘೋಷಿಸಿದನು. ಆದರೆ ಆ ಹೊತ್ತಿಗೆ ವಾಪಸಾತಿ ಅವಧಿ ಮುಗಿದಿತ್ತು. ಆದ್ದರಿಂದ ಆತನ ಹೆಸರು ಇನ್ನೂ ಎಲೆಕ್ಟ್ರಾನಿಕ್ ಮತ ಯಂತ್ರಗಳಲ್ಲಿ (ಇವಿಎಂ) ಇತ್ತು. ಈ ಗೆಲುವಿನೊಂದಿಗೆ ಬಂಗಾಳದಲ್ಲಿ ಬಿಜೆಪಿ ಶಾಸಕರ ಸಂಖ್ಯೆ 208ಕ್ಕೆ ಏರಿದೆ. ಬಂಗಾಳ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿಯ ಗೆಲುವಿನ ಅಂತರಕ್ಕೆ ಇದು ಹೊಸ ದಾಖಲೆಯಾಗಿದೆ.




ರಾಜಧಾನಿ ದೆಹಲಿಯ ರಾಮಲೀಲಾ ಮೈದಾನದಿಂದ ಕೆಂಪುಕೋಟೆಯವರೆಗೆ ಭಾನುವಾರ ನಡೆದ ಜನಜಾತಿ ಸಾಂಸ್ಕೃತಿಕ ಸಮಾಗಮ್ ರ್‍ಯಾಲಿಯಲ್ಲಿ ಅಪಾರ ಸಂಖ್ಯೆಯ ಬುಡಕಟ್ಟು ಜನರು ಭಾಗವಹಿಸಿದ್ದರು.

# 500 ಶತಕೋಟಿ ಡಾಲರ್ ಅಮೆರಿಕ ವ್ಯಾಪಾರ ಹಕ್ಕು: ಕೇಂದ್ರ ಗುರಿಯಾಗಿಸಿಕೊಂಡ ಕಾಂಗ್ರೆಸ್

**ನವದೆಹಲಿ, ಮೇ 24:** ಮುಂದಿನ ಐದು ವರ್ಷಗಳಲ್ಲಿ ಭಾರತ 500 ಶತಕೋಟಿ ಅಮೆರಿಕನ್ ಡಾಲರ್ ಮೌಲ್ಯದ ಅಮೇರಿಕನ್ ಸರಕುಗಳನ್ನು ಖರೀದಿಸಲು ಬದ್ಧವಾಗಿದೆ ಎಂದು ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರುಬಿಯೊ ಹೇಳಿಕೊಂಡ ನಂತರ ಕಾಂಗ್ರೆಸ್ ಇಂದು ನರೇಂದ್ರ ಮೋದಿ ಸರ್ಕಾರದ ಮೇಲೆ ಬಲವಾದ ಮೌಖಿಕ ದಾಳಿ ನಡೆಸಿತು. ಭಾರತದ ಆರ್ಥಿಕ ಮತ್ತು ವಿದೇಶಾಂಗ ನೀತಿ ಹಿತಾಸಕ್ತಿಗಳನ್ನು ಪ್ರಧಾನಿ ರಾಜಿ ಮಾಡಿಕೊಂಡಿದ್ದಾರೆ ಎಂದು ವಿರೋಧ ಪಕ್ಷ ಆರೋಪಿಸಿದೆ. ಭಾರತದ ವಿದೇಶಾಂಗ ನೀತಿ ಮತ್ತು ವ್ಯಾಪಾರ ಬದ್ಧತೆಗಳಿಗೆ ಸಂಬಂಧಿಸಿದ ಪ್ರಮುಖ ಘೋಷಣೆಗಳನ್ನು ನವದೆಹಲಿಯ ಬದಲು ವಾಷಿಂಗ್ಟನ್‌ನಿಂದ ಪದೇ ಪದೇ ಏಕೆ ಮಾಡಲಾಗುತ್ತಿದೆ ಎಂದು ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್ ತೀಕ್ಷ್ಣವಾದ ಹೇಳಿಕೆಯಲ್ಲಿ ಪ್ರಶ್ನಿಸಿದ್ದಾರೆ. ಭಾರತವು ಐದು ವರ್ಷಗಳಲ್ಲಿ ಇಂಧನ, ತಂತ್ರಜ್ಞಾನ ಮತ್ತು ಕೃಷಿಯ ಮೇಲೆ ಕೇಂದ್ರೀಕರಿಸಿ 500 ಶತಕೋಟಿ ಅಮೆರಿಕನ್ ಡಾಲರ್ ಮೌಲ್ಯದ ಅಮೆರಿಕ ಸರಕುಗಳನ್ನು ಖರೀದಿಸುತ್ತದೆ ಎಂದು ರುಬಿಯೊ ಹೇಳಿಕೆ ಹಾಕಿದ್ದರು.

ಅವರ ನಡೆಯುತ್ತಿರುವ ಭಾರತ ಭೇಟಿ ಮತ್ತು ವ್ಯಾಪಕವಾದ ಭಾರತ–ಅಮೆರಿಕ ವ್ಯಾಪಾರ ಒಪ್ಪಂದದ ಕುರಿತು ಚರ್ಚೆಗಳ ನಡುವೆ ಅವರ ಹೇಳಿಕೆಗಳು ಬಂದವು. ಹಿಂದಿನ ನಿದರ್ಶನಗಳನ್ನು ಉಲ್ಲೇಖಿಸಿ, ಮೇ 10, 2025 ರಂದು, ಆಪರೇಷನ್ ಸಿಂಧೂರಕ್ಕೆ ಸಂಬಂಧಿಸಿದ ಕದನ ವಿರಾಮವನ್ನು ಘೋಷಿಸಿದ ಮೊದಲ ವ್ಯಕ್ತಿ ರುಬಿಯೊ ಎಂದು ರಮೇಶ್ ನೆನಪಿಸಿಕೊಂಡರು, ಯುಎಸ್ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಹಸ್ತಕ್ಷೇಪವು ಅದನ್ನು ಸಾಧ್ಯವಾಗಿಸಲು ಸಹಾಯ ಮಾಡಿದೆ ಎಂದು ಹೇಳಿಕೊಂಡರು. ವೆನೆಜುವೆಲಾದ ಅಧ್ಯಕ್ಷರ ಭಾರತ ಭೇಟಿಯ ಪ್ರಸ್ತಾವಿತ ಕುರಿತು ಮೇ 21 ರಂದು ರುಬಿಯೊ ಅವರ ಹೇಳಿಕೆಯನ್ನು ಅವರು ಉಲ್ಲೇಖಿಸಿದರು, ಭಾರತ ಅಥವಾ ವೆನೆಜುವೆಲಾ ಈ ಬೆಳವಣಿಗೆಯನ್ನು ಅಧಿಕೃತವಾಗಿ ದೃಢಪಡಿಸುವ ಮೊದಲೇ ಈ ಪ್ರಕಟಣೆ ಬಂದಿದೆ ಎಂದು ಹೇಳಿದರು. "ಇಂದು, ರುಬಿಯೊ ಅವರು ಮುಂದಿನ ಐದು ವರ್ಷಗಳಲ್ಲಿ ಮೋದಿ ಸರ್ಕಾರವು 500 ಶತಕೋಟಿ ಡಾಲರ್ ಮೌಲ್ಯದ ಅಮೆರಿಕನ್ ಸರಕುಗಳನ್ನು ಖರೀದಿಸಲು ಬದ್ಧವಾಗಿದೆ ಎಂದು ಹೇಳುವ ಮೂಲಕ ಮತ್ತೊಮ್ಮೆ ದೇಶವನ್ನು ಆಘಾತಗೊಳಿಸಿದ್ದಾರೆ" ಎಂದು ರಮೇಶ್ ಹೇಳಿದರು. ಅಂತಹ ಬದ್ಧತೆಯು ಯುನೈಟೆಡ್ ಸ್ಟೇಟ್ಸ್ ಮೇಲೆ



ಭಾರತದ ವ್ಯಾಪಾರ ಅವಲಂಬನೆಯನ್ನು ಗಮನಾರ್ಹವಾಗಿ ಹೆಚ್ಚಿಸುತ್ತದೆ ಎಂದು ಕಾಂಗ್ರೆಸ್ ನಾಯಕರು ವಾದಿಸಿದರು. ಪ್ರಸ್ತುತ 2026ರಲ್ಲಿ ಅಮೆರಿಕದಿಂದ ಭಾರತದ ವಾರ್ಷಿಕ ಆಮದುಗಳು 529 ಕೋಟಿ  ಡಾಲರ್ ಆಗಿದ್ದು, ಪ್ರಸ್ತಾವಿತ ವ್ಯವಸ್ಥೆಗೆ ಆಮದುಗಳಲ್ಲಿ ತೀವ್ರ ಏರಿಕೆಯ ಅಗತ್ಯವಿರುತ್ತದೆ ಎಂದು ಅವರು ಸೂಚಿಸಿದರು. ಪ್ರಸ್ತಾವಿತ ಭಾರತ–ಅಮೆರಿಕ ವ್ಯಾಪಾರ ಒಪ್ಪಂದದ ಬಗ್ಗೆ ರಮೇಶ್ ಹಲವಾರು ಪ್ರಶ್ನೆಗಳನ್ನು ಎತ್ತಿದರು. ಟ್ರಂಪ್ ಯುಗದ ಸುಂಕಗಳನ್ನು ರದ್ದುಗೊಳಿಸಿದ ಅಮೆರಿಕ ಸುಪ್ರೀಂ ಕೋರ್ಟ್ ತೀರ್ಪಿನ ನಂತರ ಮಲೇಷ್ಯಾದಂತಹ ದೇಶಗಳು ಈಗಾಗಲೇ ಅಮೆರಿಕ ಜೊತೆ ಇದೇ ರೀತಿಯ ವ್ಯಾಪಾರ ಒಪ್ಪಂದಗಳನ್ನು "ಶೂನ್ಯ ಮತ್ತು ಅನೂರ್ಜಿತ" ಎಂದು ಘೋಷಿಸಿವೆ ಎಂದು ಅವರು ಹೇಳಿದ್ದಾರೆ. "ಸುಂಕಗಳನ್ನು ರದ್ದುಗೊಳಿಸಿದ ಅಮೆರಿಕದ ಸುಪ್ರೀಂ ಕೋರ್ಟ್ ತೀರ್ಪಿನ ನಂತರ ಈ ಒಪ್ಪಂದದ ತರ್ಕ ಕುಸಿದಿದೆ" ಎಂದು ಅವರು ಆರೋಪಿಸಿದರು, ಭಾರತೀಯ ರೈತರು ಮತ್ತು ಕೈಗಾರಿಕೆಗಳಿಗೆ ಹಾನಿಯುಂಟುಮಾಡುವ ಪ್ರಮುಖ ರಿಯಾಯಿತಿಗಳನ್ನು ಸರ್ಕಾರ ನೀಡುತ್ತಿದೆ ಎಂದು ಆರೋಪಿಸಿದರು. ವಿರೋಧಾತ್ಮಕ ಆರ್ಥಿಕ ಸಂದೇಶ ಎಂದು ಅವರು ವಿವರಿಸಿದ ಬಗ್ಗೆ ಅವರು ಸರ್ಕಾರವನ್ನು ಮತ್ತಷ್ಟು ಪ್ರಶ್ನಿಸಿದರು. ವಿದೇಶಿ ವಿನಿಮಯವನ್ನು ಉಳಿಸಲು ಇಂಧನ ಬಳಕೆಯನ್ನು ಕಡಿಮೆ ಮಾಡಿ ವಿದೇಶಗಳಿಗೆ ಪ್ರಯಾಣಿಸುವಂತೆ ಪ್ರಧಾನಿ ನಾಗರಿಕರನ್ನು ಒತ್ತಾಯಿಸಿದ್ದಾರೆ, ಆದರೆ ಸರ್ಕಾರವು ಏಕಕಾಲದಲ್ಲಿ ಅಮೆರಿಕದಿಂದ ದೊಡ್ಡ ಪ್ರಮಾಣದ ಆಮದುಗಳಿಗೆ ಏಕೆ ಒಪ್ಪುತ್ತಿದೆ ಎಂದು ರಮೇಶ್ ಕೇಳಿದರು. ರಮೇಶ್ ಪ್ರಕಾರ, ಅಂತಹ ಆಮದುಗಳು ರೂಪಾಯಿಯ ಮೇಲೆ ಹೆಚ್ಚುವರಿ ಒತ್ತಡವನ್ನು ಉಂಟುಮಾಡಬಹುದು, ಇದು ಕಳೆದ ವರ್ಷದಲ್ಲಿ ಡಾಲರ್ ವಿರುದ್ಧ ಈಗಾಗಲೇ ಶೇಕಡಾ 12 ರಷ್ಟು ದುರ್ಬಲಗೊಂಡಿದೆ ಎಂದು ಅವರು ಹೇಳಿಕೊಂಡಿದ್ದಾರೆ. ತಮ್ಮ ತೀಕ್ಷ್ಣವಾದ ಹೇಳಿಕೆಗಳಲ್ಲಿ ಒಂದಾದ ಕಾಂಗ್ರೆಸ್ ನಾಯಕರು, ಸೌರಶಕ್ತಿ ಲಂಚ ಪ್ರಕರಣಕ್ಕೆ ಸಂಬಂಧಿಸಿದಂತೆ ಉದ್ಯಮಿ ಗೌತಮ್ ಅದಾನಿ ವಿರುದ್ಧದ "ಕ್ರಿಮಿನಲ್ ವಂಚನೆ ಆರೋಪಗಳನ್ನು" ಟ್ರಂಪ್ ಆಡಳಿತವು ವಜಾಗೊಳಿಸುವುದಕ್ಕೆ ಈ ವಿಷಯವನ್ನು ಸಂಬಂಧಿಸಿದ್ದಾರೆ. ಭಾರತದ ವಿದೇಶಾಂಗ ನೀತಿ ನಿರ್ಧಾರಗಳ ಸುತ್ತ ನಿರೂಪಣೆಯನ್ನು ರೂಪಿಸಲು ವಾಷಿಂಗ್ಟನ್ ಸರ್ಕಾರಕ್ಕೆ ಅವಕಾಶ ನೀಡಿದೆ ಎಂದು ಕಾಂಗ್ರೆಸ್ ಆರೋಪಿಸಿದೆ. ಪ್ರಧಾನಿ ತಮ್ಮ ಅಮೇರಿಕನ್ ಸ್ನೇಹಿತನನ್ನು ಸಮಾಧಾನಪಡಿಸಲು ಮತ್ತು ಮೆಚ್ಚಿಸಲು "ಹೆಚ್ಚುವರಿ ಮೈಲಿ ದೂರ ಹೋಗುತ್ತಿದ್ದಾರೆ" ಎಂದು ರಮೇಶ್ ಆರೋಪಿಸಿದರು. ಭಾರತ–ಅಮೆರಿಕ ಕಾರ್ಯತಂತ್ರದ ಪಾಲುದಾರಿಕೆ ಮತ್ತು ರುಬಿಯೊ ಅವರ ಭಾರತ ಭೇಟಿಯ ಕುರಿತು ಹೆಚ್ಚುತ್ತಿರುವ ಚರ್ಚೆಯ ಮಧ್ಯೆ ಈ ಹೇಳಿಕೆಗಳು ಬಂದಿವೆ, ಈ ಸಮಯದಲ್ಲಿ ಎರಡೂ ದೇಶಗಳು ವ್ಯಾಪಾರ, ಇಂಧನ ಸಹಕಾರ ಮತ್ತು ವ್ಯಾಪಕ ಭೌಗೋಳಿಕ ರಾಜಕೀಯ ವಿಷಯಗಳ ಬಗ್ಗೆ ಚರ್ಚಿಸಿವೆ.

## ದೇಶದಲ್ಲಿ ಅರಾಜಕತೆ ಸೃಷ್ಟಿಸಿ ಮೋದಿ ಸರ್ಕಾರ ಉರುಳಿಸುವ ಪಿತೂರಿ: ಬಿಜೆಪಿ ಆರೋಪ

**ನವದೆಹಲಿ, ಮೇ 24:** ಕಾಂಗ್ರೆಸ್ ನಾಯಕ ಹಾಗೂ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು ದೇಶದಲ್ಲಿ ಅರಾಜಕತೆಯನ್ನು ಸೃಷ್ಟಿಸುವ ಮೂಲಕ ನರೇಂದ್ರ ಮೋದಿ ನೇತೃತ್ವದ ಸರ್ಕಾರವನ್ನು ಅಸ್ಥಿರಗೊಳಿಸುವ ಪಿತೂರಿ ನಡೆಸುತ್ತಿದ್ದಾರೆ ಎಂದು ಬಿಜೆಪಿ ಆರೋಪಿಸಿದೆ. ಬಿಜೆಪಿ ಸಂಸದ ಮತ್ತು ರಾಷ್ಟ್ರೀಯ ವಕ್ತಾರ ಸಂಬೀತ್ ಪಾತ್ರ ಅವರು ವಿಡಿಯೋ ಸಂದೇಶವೊಂದರಲ್ಲಿ ಈ ಆರೋಪ ಮಾಡಿದ್ದಾರೆ. ಕಾಂಗ್ರೆಸ್ ಅಲ್ಪಸಂಖ್ಯಾತ ಇಲಾಖೆಯ ಸಲಹಾ ಮಂಡಳಿಯ ಸಭೆಯಲ್ಲಿ ರಾಹುಲ್ ಗಾಂಧಿ ಮೋದಿ ಸರ್ಕಾರ ಒಂದು ವರ್ಷದೊಳಗೆ ಉರುಳುತ್ತದೆ ಎಂದು ಹೇಳಿರುವುದನ್ನು ಉಲ್ಲೇಖಿಸಿ ಪಾತ್ರ ಅವರು ಪ್ರತಿಕ್ರಿಯಿಸಿದ್ದಾರೆ. ರಾಹುಲ್ ಗಾಂಧಿ ಗಲಭೆಗಳನ್ನು ಪ್ರಚೋದಿಸುವ ಮೂಲಕ



ಮತ್ತು ಅರಾಜಕತೆಯ ಮೂಲಕ ಸರ್ಕಾರವನ್ನು ಉರುಳಿಸಲು ಪ್ರಯತ್ನಿಸುತ್ತಿದ್ದಾರೆ. ಅವರು ಜಾರ್ಜ್ ಸೊರೋಸ್‌ನಂತಹ ವಿದೇಶಿ ಶಕ್ತಿಗಳ ಆಜ್ಞೆಯ ಮೇರೆಗೆ ಕಾರ್ಯ ನಿರ್ವಹಿಸುತ್ತಿದ್ದಾರೆ ಎಂದು ಸಂಬಿತ್ ಪಾತ್ರ ಆರೋಪಿಸಿದ್ದಾರೆ. ಭಾರತದಲ್ಲಿ ಪ್ರಜಾಪ್ರಭುತ್ವವನ್ನು ಕೊನೆಗೊಳಿಸುವ ಉದ್ದೇಶದಿಂದ ರಾಹುಲ್ ವಿದೇಶಿ ಅಜೆಂಡಾವನ್ನು ಅನುಸರಿಸುತ್ತಿದ್ದಾರೆ ಎಂದೂ ಅವರು ಹೇಳಿದ್ದಾರೆ. ಭಾರತದ ಜನರು ಬುದ್ಧಿವಂತರು ಮತ್ತು ಆಧ್ಯಾತ್ಮಿಕ ಪ್ರಜ್ಞೆಯುಳ್ಳವರು ಎಂದು ಹೇಳುವ ಮೂಲಕ ಪಾತ್ರ ಅವರು, ರಾಹುಲ್ ಗಾಂಧಿ ಅವರ ಪ್ರಯತ್ನಗಳು ಯಶಸ್ವಿಯಾಗುವುದಿಲ್ಲ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಪಶ್ಚಿಮ ಬಂಗಾಳ ಮತ್ತು ಅಸ್ಸಾಂನಲ್ಲಿ ನಡೆದ ಚುನಾವಣಾ ಫಲಿತಾಂಶಗಳನ್ನು ಉಲ್ಲೇಖಿಸಿ ಅವರು ಟೀಕಿಸಿದ್ದಾರೆ. ಭಾರತದಲ್ಲಿ ಸಂವಿಧಾನ ಮೇಲುಗೈ ಸಾಧಿಸುತ್ತದೆ. ಇದು 140 ಕೋಟಿ ಜನರ ಸರ್ಕಾರ. ಪ್ರಧಾನಿ ಮೋದಿ ಅವರ ನೇತೃತ್ವದಲ್ಲಿ ದೇಶ ಪ್ರಗತಿ ಸಾಧಿಸುತ್ತಿದೆ. ವಿದೇಶಿ ಯಜಮಾನರು ಈ ದೇಶಕ್ಕೆ ಯಾವುದೇ ಹಾನಿ ಮಾಡಲಾರರು ಎಂದು ಸಂಬೀತ್ ಪಾತ್ರ ಹೇಳಿದ್ದಾರೆ.

## ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ವಿವಾದ: ಮೋದಿ ಸರ್ಕಾರದ ವಿರುದ್ಧ ರಾಹುಲ್ ಮತ್ತೆ ವಾಗ್ದಾಳಿ–ವಿದ್ಯಾರ್ಥಿಗಳ ಭವಿಷ್ಯ ನಾಶ

**ನವದೆಹಲಿ, ಮೇ 24:** ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ವಿವಾದದ ಬಗ್ಗೆ ಕೇಂದ್ರ ಸರ್ಕಾರದ ವಿರುದ್ಧ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಭಾನುವಾರ ತಮ್ಮ ಟೀಕೆಯನ್ನು ತೀಕ್ಷ್ಣಗೊಳಿಸಿದ್ದಾರೆ, ನರೇಂದ್ರ ಮೋದಿ ಸರ್ಕಾರವು ದೇಶದ ಯುವಜನರಿಗೆ ದ್ರೋಹ ಬಗೆದಿದೆ ಮತ್ತು ಲಕ್ಷಾಂತರ ವಿದ್ಯಾರ್ಥಿಗಳ ಕಾಳಜಿಗಳ ಬಗ್ಗೆ ಅಸಡ್ಡೆ ಹೊಂದಿರುವ "ಪೇಪರ್ ಸೋರಿಕೆ ಮಾಫಿಯಾ" ಅನಿಯಂತ್ರಿತವಾಗಿ ಕಾರ್ಯನಿರ್ವಹಿಸಲು ಅವಕಾಶ ನೀಡಿದೆ ಎಂದು ಆರೋಪಿಸಿದ್ದಾರೆ. ಸಾಮಾಜಿಕ ಮಾಧ್ಯಮ ವೇದಿಕೆಯಲ್ಲಿ ಬಲವಾದ ಪದಗಳ ಹೇಳಿಕೆಯಲ್ಲಿ "ಲಕ್ಷಾಂತರ ಯುವಕರು ಬೀದಿಗಳಲ್ಲಿರುವಾಗ, 22 ಲಕ್ಷ ಮಕ್ಕಳ ಭವಿಷ್ಯ ಅಪಾಯದಲ್ಲಿದ್ದಾಗ ಮತ್ತು ಪ್ರಧಾನಿ ಮೌನವಾಗಿರುವಾಗ – ಸರ್ಕಾರವು ಪ್ರಶ್ನೆಗಳಿಗೆ ಉತ್ತರಿಸುವತ್ತ ಗಮನಹರಿಸುವುದಿಲ್ಲ, ಆದರೆ ತನ್ನನ್ನು ತಾನು ಉಳಿಸಿಕೊಳ್ಳುವತ್ತ ಗಮನಹರಿಸುತ್ತದೆ" ಎಂದು ಗಾಂಧಿ ಬರೆದಿದ್ದಾರೆ.



ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆ ನೀಡುವವರೆಗೆ ಮತ್ತು ಅಂತಹ ಪರೀಕ್ಷಾ ಸೋರಿಕೆಗಳು ಮರುಕಳಿಸದಂತೆ ನೋಡಿಕೊಳ್ಳಲು ಸುರಕ್ಷತಾ ಕ್ರಮಗಳನ್ನು ಪರಿಚಯಿಸುವವರೆಗೆ ಕಾಂಗ್ರೆಸ್ ತನ್ನ ಪ್ರತಿಭಟನೆಗಳನ್ನು ಮುಂದುವರಿಸುತ್ತದೆ ಎಂದು ಲೋಕಸಭೆಯಲ್ಲಿ ವಿರೋಧ ಪಕ್ಷದ ನಾಯಕ ಹೇಳಿದರು. "ಧರ್ಮೇಂದ್ರ ಪ್ರಧಾನ್ ರಾಜೀನಾಮೆ ನೀಡುವವರೆಗೆ ಮತ್ತು ನೀಟ್‌ನಂತಹ ಪ್ರಶ್ನೆಪತ್ರಿಕೆ ಸೋರಿಕೆಯನ್ನು ತಡೆಯಲು ಮೂರ್ಖತನ ರಹಿತ ವ್ಯವಸ್ಥೆಯನ್ನು ಜಾರಿಗೆ ತರುವವರೆಗೆ, ನಾವು ನಿಲ್ಲುವುದಿಲ್ಲ" ಎಂದು ಅವರು ಹೇಳಿದರು. "ಮೋದಿ ಸರ್ಕಾರದ ಅಡಿಯಲ್ಲಿ, ಪತ್ರಿಕೆ ಸೋರಿಕೆ ಮಾಫಿಯಾ ಅಭಿವೃದ್ಧಿ ಹೊಂದುತ್ತಿದೆ, ಆದರೆ ಜವಾಬ್ದಾರಿಯುತರು ಹಿಂದೆ ಕುಳಿತು ಪ್ರದರ್ಶನವನ್ನು ವೀಕ್ಷಿಸುತ್ತಿದ್ದಾರೆ" ಎಂದು ಅವರು ಹೇಳಿದರು. ನೀಟ್ ವಿವಾದವು ಪ್ರಮುಖ ರಾಜಕೀಯ ವಿಷಯವಾಗಿ ವಿಕಸನಗೊಂಡಿದೆ, ವಿರೋಧ ಪಕ್ಷಗಳು ದೊಡ್ಡ ಪ್ರಮಾಣದ ಅಕ್ರಮಗಳನ್ನು ಆರೋಪಿಸಿ ಕೇಂದ್ರದಿಂದ ಹೊಣೆಗಾರಿಕೆಯನ್ನು ಒತ್ತಾಯಿಸುತ್ತಿವೆ. ಈ ವಿಷಯವು ಹಲವಾರು ರಾಜ್ಯಗಳಲ್ಲಿ ವಿದ್ಯಾರ್ಥಿಗಳು ಮತ್ತು ರಾಜಕೀಯ ಗುಂಪುಗಳಿಂದ ಪ್ರತಿಭಟನೆಗಳನ್ನು ಹುಟ್ಟುಹಾಕಿದೆ, ಇದು ದೇಶದ ಅತ್ಯಂತ ಸ್ಪರ್ಧಾತ್ಮಕ ವೈದ್ಯಕೀಯ ಪ್ರವೇಶ ಪರೀಕ್ಷೆಗಳಲ್ಲಿ ಒಂದಾದ ವಿಶ್ವಾಸಾರ್ಹತೆ ಮತ್ತು ಸಮಗ್ರತೆಯ ಬಗ್ಗೆ ಗಂಭೀರ ಕಳವಳಗಳನ್ನು ಹುಟ್ಟುಹಾಕಿದೆ.

## ಬಾರಾಮುಲ್ಲಾದಲ್ಲಿ ಅಪಾರ ಪ್ರಮಾಣದ ಸ್ಫೋಟಕ ಪತ್ತೆ

**ಶ್ರೀನಗರ, ಮೇ 24:** ಜಮ್ಮು ಮತ್ತು ಕಾಶ್ಮೀರದ ಬಾರಾಮುಲ್ಲಾ ಜಿಲ್ಲೆಯಲ್ಲಿ ಭದ್ರತಾ ಪಡೆಗಳು ಭಯೋತ್ಪಾದಕರ ಅಡಗುತಾಣವನ್ನು ಭೇದಿಸಿ, ಗಮನಾರ್ಹ ಪ್ರಮಾಣದ ಸ್ಫೋಟಕಗಳನ್ನು ವಶಪಡಿಸಿಕೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಬಾರಾಮುಲ್ಲಾದ ಚಂದೂಸಾದ ನಿಲ್ಸರ್ ಕಂಡಿ ಪ್ರದೇಶದಲ್ಲಿ ಶನಿವಾರ ಜಂಟಿ ಭಯೋತ್ಪಾದನಾ ನಿಗ್ರಹ ಕಾರ್ಯಾಚರಣೆಯಲ್ಲಿ ಬಾರಾಮುಲ್ಲಾ ಪೊಲೀಸರು ಅಡಗುತಾಣವನ್ನು ಭೇದಿಸಿದ್ದಾರೆ. ಜಮ್ಮು ಮತ್ತು ಕಾಶ್ಮೀರ ಪೊಲೀಸರು ನೀಡಿದ ನಿರ್ದಿಷ್ಟ ಗುಪ್ತಚರ ಮಾಹಿತಿಯ ಮೇರೆಗೆ, ಪೊಲೀಸರು 52 ರಾಷ್ಟ್ರೀಯ ರೈಫಲ್ಸ್, ಸಿಆರ್‌ಪಿಎಫ್‌ನ 53 ಬೆಟಾಲಿಯನ್ ಮತ್ತು ಎಸ್‌ಎಸ್‌ಬಿಯ 2ನೇ ಬೆಟಾಲಿಯನ್ ಜೊತೆ ಜಂಟಿ ಕಾರ್ಯಾಚರಣೆಯನ್ನು ಪ್ರಾರಂಭಿಸಿದರು. ಕಾರ್ಯಾಚರಣೆಯ ಸಮಯದಲ್ಲಿ, ಭದ್ರತಾ ಪಡೆಗಳು ಅಡಗಿಸಿಟ್ಟ ಉಗ್ರರ ಅಡಗುದಾಣವನ್ನು ಪತ್ತೆಹಚ್ಚಿದವು ಮತ್ತು ಯುದ್ಧದಂತಹ ಅಂಗಡಿಗಳ ಗಣನೀಯ ಸಂಗ್ರಹವನ್ನು



ವಶಪಡಿಸಿಕೊಂಡವು. ವಶಪಡಿಸಿಕೊಂಡ ಸಾಮಗ್ರಿಗಳಲ್ಲಿ ರಾಕೆಟ್–ಪ್ರೊಪೆಲ್ಡ್ ಗ್ರೆನೇಡ್‌ಗಳಿಗೆ (ಆರ್‌ಪಿಜಿ) ಉದ್ದೇಶಿಸಲಾದ 14 ಸೋವಿಯತ್ ನಿರ್ಮಿತ OG-7V ಫ್ರಾಗ್ಮೆಂಟೇಶನ್ ಸುತ್ತುಗಳು, ಪ್ಲಾಸ್ಟಿಕ್ ಕಂಟೇನರ್‌ಗಳಲ್ಲಿ ಪ್ಯಾಕ್ ಮಾಡಲಾದವು ಮತ್ತು ಹಸಿರು ಪ್ಲಾಸ್ಟಿಕ್ ಟ್ಯೂಬ್‌ಗಳಲ್ಲಿ ಮರೆಮಾಡಲಾಗಿರುವ ಒಂಬತ್ತು PG-7P ಪ್ರೊಪೆಲೆಂಟ್ ಚಾರ್ಜ್‌ಗಳು/ಬೂಸ್ಟರ್‌ಗಳು ಸೇರಿವೆ ಎಂದು ಪೊಲೀಸರು ತಿಳಿಸಿದ್ದಾರೆ. "ಈ ಚೇತರಿಕೆ ಸಂಭಾವ್ಯ ಬೆದರಿಕೆಯನ್ನು ವಿಫಲಗೊಳಿಸಿದೆ ಮತ್ತು ಉತ್ತರ ಕಾಶ್ಮೀರದಲ್ಲಿ ನಡೆಯುತ್ತಿರುವ ಭಯೋತ್ಪಾದನಾ–ವಿರೋಧಿ ಕಾರ್ಯಾಚರಣೆಗಳಲ್ಲಿ ಇದು ಮಹತ್ವದ ಸಾಧನೆಯನ್ನು ಪ್ರತಿನಿಧಿಸುತ್ತದೆ" ಎಂದು ಪೊಲೀಸರು ತಿಳಿಸಿದ್ದಾರೆ. ಸಂಪೂರ್ಣ ನೈರ್ಮಲ್ಯೀಕರಣವನ್ನು ಖಚಿತಪಡಿಸಿಕೊಳ್ಳಲು ಮತ್ತು ಯಾವುದೇ ಸಂಭಾವ್ಯ ಬೆದರಿಕೆಯನ್ನು ತೊಡೆದುಹಾಕಲು ಪ್ರದೇಶದಲ್ಲಿ ಸುಮಾರು ಆರು ಗಂಟೆಗಳ ಕಾಲ ಕಾರ್ಯಾಚರಣೆ ಮುಂದುವರಿಯಿತು. ನಂತರ, ವಶಪಡಿಸಿಕೊಂಡ ಸ್ಫೋಟಕ ವಸ್ತುಗಳನ್ನು ಜೆ & ಕೆ ಪೊಲೀಸರ ಬಾಂಬ್ ಪತ್ತೆ ಮತ್ತು ವಿಲೇವಾರಿ ದಳ (ಬಿಡಿಡಿಎಸ್) ಸಂಪೂರ್ಣವಾಗಿ ಪರಿಶೀಲಿಸಿತು ಮತ್ತು ಸ್ಥಾಪಿತ ಸುರಕ್ಷತಾ ಪ್ರೋಟೋಕಾಲ್‌ಗಳಿಗೆ ಅನುಗುಣವಾಗಿ ಸ್ಥಳದಲ್ಲೇ ಸುರಕ್ಷಿತವಾಗಿ ನಾಶಪಡಿಸಲಾಯಿತು. ಈ ನಿಟ್ಟಿನಲ್ಲಿ, ಚಂದೂಸಾ ಪೊಲೀಸ್ ಠಾಣೆಯಲ್ಲಿ 4/5 ಸ್ಫೋಟಕ ವಸ್ತುಗಳ ಕಾಯ್ದೆ ಮತ್ತು 7/25 ಶಸ್ತ್ರಾಸ್ತ್ರ ಕಾಯ್ದೆಯಡಿಯಲ್ಲಿ ಎಫ್‌ಐಆರ್ ದಾಖಲಿಸಲಾಗಿದ್ದು, ತನಿಖೆಯನ್ನು ಪ್ರಾರಂಭಿಸಲಾಗಿದೆ.



ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮತ್ತು ರಾಷ್ಟ್ರೀಯ ಭದ್ರತಾ ಸಲಹೆಗಾರ ಮಾರ್ಕೊ ರೂಬಿಯೊ ಭಾರತದ ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಅವರನ್ನು ಟ್ರಸ್ಟ್ ಉಪಕ್ರಮ ಸೇರಿದಂತೆ ರಕ್ಷಣೆ, ಭದ್ರತೆ ಮತ್ತು ಕಾರ್ಯತಂತ್ರದ ತಂತ್ರಜ್ಞಾನ ಸಹಕಾರದ ಕುರಿತು ಉನ್ನತ ಮಟ್ಟದ ಚರ್ಚೆಯಲ್ಲಿ ಭೇಟಿಯಾದರು.

## ಬಿಸಿಲಿನ ತಾಪಕ್ಕೆ ತೆಲಂಗಾಣದಲ್ಲಿ ಒಂದೇ ದಿನ 51 ಮಂದಿ ಸಾವು

**ಹೈದರಾಬಾದ್, ಮೇ 24:** ತೆಲಂಗಾಣದಲ್ಲಿ ಜನರು ಬಿಸಿಲಿನ ತಾಪಕ್ಕೆ ತತ್ತರಿಸಿ ಹೋಗಿದ್ದಾರೆ. ಒಂದೇ ದಿನ ರಾಜ್ಯದ ವಿವಿಧೆಡೆ 51 ಜನರು ಸಾವನ್ನಪ್ಪಿದ್ದಾರೆ. ವರಂಗಲ್ ಜಿಲ್ಲೆಯಲ್ಲಿ ಅತಿ ಹೆಚ್ಚು, 23 ಜನರು ಸಾವನ್ನಪ್ಪಿದ್ದಾರೆ. ಕರೀಂನಗರ ಜಿಲ್ಲೆಯಲ್ಲಿ 11, ಖಮ್ಮಂನಲ್ಲಿ 7, ಆದಿಲಾಬಾದ್ ಮತ್ತು ನಲ್ಗೊಂಡದಲ್ಲಿ ತಲಾ ಐವರು ಅಸುನೀಗಿದ್ದಾರೆ. ಮೃತರ ಅಂತ್ಯಕ್ರಿಯೆಯಲ್ಲಿ ಭಾಗವಹಿಸಿದ್ದ ಓರ್ವ ವ್ಯಕ್ತಿ ಬಿಸಿಲಿನ ಹೊಡೆತದಿಂದ ಬಳಲಿ ಪ್ರಾಣ ಕಳೆದುಕೊಂಡಿದ್ದಾನೆ. ಮೃತರ ಕುಟುಂಬಗಳಿಗೆ ತಲಾ 4 ಲಕ್ಷ ರೂ. ಪರಿಹಾರ ನೀಡುವುದಾಗಿ ರಾಜ್ಯ ಕಂದಾಯ ಮತ್ತು ವಿಪತ್ತು ನಿರ್ವಹಣಾ ಸಚಿವ ಪೊಂಗುಲೇಟಿ ಶ್ರೀನಿವಾಸರೆಡ್ಡಿ ಘೋಷಿಸಿದ್ದಾರೆ. ವಿಪರೀತ ಬಿಸಿಲಿನ ಹಿನ್ನೆಲೆಯಲ್ಲಿ ಮುಂಜಾಗ್ರತಾ ಕ್ರಮಗಳ ಕುರಿತ ಚರ್ಚೆಗೆ ಸಚಿವ ರೆಡ್ಡಿ ಸಚಿವಾಲಯದಲ್ಲಿ ತುರ್ತುಸಭೆ ನಡೆಸಿದರು.




ಅತಿಹೆಚ್ಚು ತಾಪಮಾನ ದಾಖಲಾಗುವ ತಾಲೂಕುಗಳು ಮತ್ತು ಗ್ರಾಮಗಳನ್ನು ಗುರುತಿಸಬೇಕು ಮತ್ತು ಅಲ್ಲಿನ ಜನರಿಗೆ ಮುನ್ನೆಚ್ಚರಿಕೆ ನೀಡಬೇಕು ಎಂದು ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು. ತೆಲಂಗಾಣದ 15 ಜಿಲ್ಲೆಗಳಲ್ಲಿ 45 ಡಿಗ್ರಿಗಿಂತ ಹೆಚ್ಚಿನ ತಾಪಮಾನ ದಾಖಲಾಗಿದೆ. ಕೊತ್ತಗೂಡೆಮ್ ಜಿಲ್ಲೆಯಲ್ಲಿ ಅತ್ಯಧಿಕ ಗರಿಷ್ಠ ತಾಪಮಾನ 46.3 ಡಿಗ್ರಿ ದಾಖಲಾಗಿದೆ. ಶುಕ್ರವಾರ ಬೆಂಕಿ ಬಿಸಿಲಿಗೆ 34 ಜನರು ಸಾವನ್ನಪ್ಪಿದ್ದರು.

### ಆಂಧ್ರದಲ್ಲೂ 16 ಮಂದಿ ಬಲಿ

**ಆಂಧ್ರ ಪ್ರದೇಶದಲ್ಲೂ ಶನಿವಾರ ಒಂದೇ ದಿನದಲ್ಲಿ 16 ಮಂದಿ ಬಿಸಿಲ ತಾಪಕ್ಕೆ ಬಲಿಯಾಗಿದ್ದಾರೆ. ಇವುಗಳಲ್ಲಿ 12 ಸಾವುಗಳು ಎನ್ಟಿಆರ್, ಕೃಷ್ಣ ಮತ್ತು ಗುಂಟೂರು ಜಿಲ್ಲೆಗಳ ವ್ಯಾಪ್ತಿಯಲ್ಲಿ ಸಂಭವಿಸಿವೆ. ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ವರದಿಯ ಪ್ರಕಾರ, ಶನಿವಾರ, ಕೃಷ್ಣಾ ಜಿಲ್ಲೆಯ ಕನುಮೋಲುವಿನಲ್ಲಿ 45.8 ಡಿಗ್ರಿ ಮತ್ತು ಮಕವರಪಲೆಂನಲ್ಲಿ (ಅನಕಪಲ್ಲಿ ಜಿಲ್ಲೆ) 45.5 ಡಿಗ್ರಿ ಗರಿಷ್ಠ ತಾಪಮಾನ ದಾಖಲಾಗಿದೆ. ರಾಜ್ಯದ 13 ಜಿಲ್ಲೆಗಳ 95 ತಾಲೂಕುಗಳಲ್ಲಿ 42 ಡಿಗ್ರಿಗಿಂತ ಹೆಚ್ಚಿನ ತಾಪಮಾನ ದಾಖಲಾಗಿದೆ ಎಂದು ಪ್ರಾಧಿಕಾರ ತಿಳಿಸಿದೆ.**

## ಲಖನೌದಲ್ಲಿ ಬಾಲಕಿಯ ಮೇಲೆ ಸಾಮೂಹಿಕ ಅತ್ಯಾಚಾರ

**ಲಖನೌ, ಮೇ 24:** ದೆಹಲಿ ವಿಶ್ವವಿದ್ಯಾಲಯದ ಪದವಿಪೂರ್ವ ವಿದ್ಯಾರ್ಥಿನಿಯನ್ನು ಲಖನೌದಲ್ಲಿ ಮೂವರು ವ್ಯಕ್ತಿಗಳು ಮಾದಕ ದ್ರವ್ಯ ಸೇವಿಸಿ 3 ದಿನಗಳ ಕಾಲ ಸಾಮೂಹಿಕ ಅತ್ಯಾಚಾರ ಎಸಗಿದ್ದಾರೆ. ಯುಪಿಎಸ್‌ಸಿ ಆಕಾಂಕ್ಷಿಯಾಗಿದ್ದ ಸಂತ್ರಸ್ತೆ ಜೌನ್ಪುರದಿಂದ ದೆಹಲಿಗೆ ರೈಲಿನಲ್ಲಿ ಪ್ರಯಾಣಿಸುತ್ತಿದ್ದಾಗ ಆರೋಪಿಗಳಿಂದ ಹಲ್ಲೆಗೊಳಗಾದ ನಂತರ ಲಖನೌದ ಚಾರ್‌ಬಾಗ್ ನಿಲ್ದಾಣದಲ್ಲಿ ಇಳಿದಳು. ನಂತರ ಆರೋಪಿಯು ಸಂತ್ರಸ್ತೆಯನ್ನು ಸುಶಾಂತ್ ಗಾಲ್ಫ್ ಸಿಟಿ ಪ್ರದೇಶದಲ್ಲಿರುವ ತನ್ನ ಬಾಡಿಗೆ ಕೋಣೆಗೆ ಕರೆದೊಯ್ದು, ಅಲ್ಲಿ ಅವಳಿಗೆ ಕಾಫಿಗೆ ನಿದ್ರೆ ಮಾತ್ರೆಗಳನ್ನು ಬೆರೆಸಿ ಪ್ರಜ್ಞಾಹೀನಳನ್ನಾಗಿ ಮಾಡಿದನೆಂದು ಆರೋಪಿಸಲಾಗಿದೆ. ನಂತರ ಯುವಕ, ತನ್ನ ಸ್ನೇಹಿತನೊಬ್ಬನೊಂದಿಗೆ ಸೇರಿ ಆಕೆಯ ಮೇಲೆ ಸಾಮೂಹಿಕ ಅತ್ಯಾಚಾರ ಎಸಗಿದ್ದಾನೆ. ನಂತರ, ಮತ್ತೊಬ್ಬ ವ್ಯಕ್ತಿ ಅವರೊಂದಿಗೆ



ಸೇರಿಕೊಂಡರು ಮತ್ತು ಅವರು 3 ದಿನಗಳ ಕಾಲ ಆಕೆಯ ಮೇಲೆ ಪದೇ ಪದೇ ಸಾಮೂಹಿಕ ಅತ್ಯಾಚಾರ ಎಸಗಿದ್ದಾರೆ.

ಈ ಘಟನೆ ಕಳೆದ ಮೇ 15 ರಂದು ನಡೆದಿದೆ ಎಂದು ಹೇಳಲಾಗುತ್ತದೆ. ನಂತರ, ಆರೋಪಿಯು ಬಾಲಕಿಯನ್ನು ಚಾರ್‌ಬಾಗ್ ನಿಲ್ದಾಣದಿಂದ ಸುಹೇಲ್ದೇವ್ ಎಕ್ಸ್‌ಪ್ರೆಸ್ ರೈಲಿನ ಮೂಲಕ ದೆಹಲಿಗೆ ಕಳುಹಿಸಿದನು. ಸಂತ್ರಸ್ತೆ ರೈಲಿನಿಂದ ತನ್ನ ಕುಟುಂಬಕ್ಕೆ ಘಟನೆಯ ಬಗ್ಗೆ ತಿಳಿಸಿದಳು, ಅವರು ಜಿಆರ್‌ಪಿಯನ್ನು ಸಂಪರ್ಕಿಸಿದರು. ದೆಹಲಿಯ ಆನಂದ್‌ವಿಹಾರ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ದೆಹಲಿಯಲ್ಲಿ ವೈದ್ಯಕೀಯ ಪರೀಕ್ಷೆ ನಡೆಸಲಾಯಿತು ಮತ್ತು ಭಾರತೀಯ ನ್ಯಾಯ ಸಂಹಿತಾದ ಸಂಬಂಧಿತ ವಿಭಾಗಗಳ ಅಡಿಯಲ್ಲಿ ಶೂನ್ಯ ಎಫ್‌ಐಆರ್ ದಾಖಲಿಸಲಾಗಿದೆ. ಹೆಚ್ಚಿನ ತನಿಖೆಗಾಗಿ ಪ್ರಕರಣವನ್ನು ಲಕ್ನೋದ ಸುಶಾಂತ್ ಗಾಲ್ಫ್ ಸಿಟಿ ಪೊಲೀಸ್ ಠಾಣೆಗೆ ವರ್ಗಾಯಿಸಲಾಗಿದೆ. ಶಿವಂ ಯಾದವ್, ಸನ್ನಿ ಯಾದವ್ ಮತ್ತು ಅಪರಿಚಿತ ವ್ಯಕ್ತಿಯ ವಿರುದ್ಧ ಸಾಮೂಹಿಕ ಅತ್ಯಾಚಾರ, ತಪ್ಪಾದ ಬಂಧನ, ವಿಷಪ್ರಾಶನ ಆರೋಪದಡಿಯಲ್ಲಿ ಎಫ್‌ಐಆರ್ ದಾಖಲಿಸಲಾಗಿದೆ ಎಂದು ಲಖನೌ ಪೊಲೀಸರು ಇಂದು ಇಲ್ಲಿ ತಿಳಿಸಿದ್ದಾರೆ. ಆರೋಪಿಗಳನ್ನು ಬಂಧಿಸಲು ನಾಲ್ಕು ತಂಡಗಳನ್ನು ರಚಿಸಲಾಗಿದೆ. ಬೇಗನೆ ಆರೋಪಿಗಳನ್ನು ಬಂಧಿಸುವ ನಿರೀಕ್ಷೆಯಿದೆ.

## ತ್ವಿಶಾ ಶರ್ಮಾ ಅನುಮಾನಾಸ್ಪದ ಸಾವು ಪ್ರಕರಣ: ಇಂದು ಸುಪ್ರೀಂನಲ್ಲಿ ವಿಚಾರಣೆ

**ನವದೆಹಲಿ, ಮೇ 24:** ದೇಶಾದ್ಯಂತ ಸಂಚಲನ ಮೂಡಿಸಿರುವ ನಟಿ ತ್ವಿಶಾ ಶರ್ಮಾ ಅನುಮಾನಾಸ್ಪದ ಸಾವು ಪ್ರಕರಣವನ್ನು ಸುಪ್ರೀಂ ಕೋರ್ಟ್ ಸ್ವಯಂಪ್ರೇರಿತ ವಿಚಾರಣೆಗೆ ಕೈಗೆತ್ತಿಕೊಂಡಿದೆ. ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ನೇತೃತ್ವದ ನ್ಯಾಯಮೂರ್ತಿಗಳಾದ ಜೋಯ್ಮಾಲ್ಯ ಬಾಗ್ಚಿ ಮತ್ತು ವಿಪುಲ್ ಎಂ.ಪಾಂಚೋಲಿ ಅವರನ್ನೊಳಗೊಂಡ ಪೀಠವು ಇಂದು ವಿಚಾರಣೆ ನಡೆಯಲಿದೆ.



33 ವರ್ಷದ ಮಾಡೆಲ್–ನಟಿ ತ್ವಿಶಾ ಶರ್ಮಾ ಮೇ 12ರಂದು ಭೋಪಾಲ್‌ನ ಕಟಾರಾ ಹಿಲ್ಸ್ ಪ್ರದೇಶದಲ್ಲಿರುವ ಪತಿಯ ಮನೆಯಲ್ಲಿ ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿದ್ದರು. ನಂತರ ವರದಕ್ಷಿಣೆಗಾಗಿ ಕಿರುಕುಳ ನೀಡಿದ ಆರೋಪದ ಮೇಲೆ ತ್ವಿಶಾ ಪತಿ, ವಕೀಲ ಸಮರ್ಥ್ ಸಿಂಗ್ ಮತ್ತು ಅವರ ಅತ್ತೆ ಮತ್ತು ಮಾಜಿ ಜಿಲ್ಲಾ ನ್ಯಾಯಾಧೀಶೆ ಗಿರಿಬಾಲಾ ಸಿಂಗ್ ವಿರುದ್ಧ ಎಫ್‌ಐಆರ್ ದಾಖಲಾಗಿದೆ.

ಪ್ರಕರಣದ ಬೆನ್ನಲ್ಲೇ ನಾಪತ್ತೆಯಾಗಿದ್ದ ಪತಿಯನ್ನು ಶನಿವಾರವಷ್ಟೇ ಪೊಲೀಸರು ಬಂಧಿಸಿ, ಏಳು ದಿನಗಳ ಕಾಲ ಕಸ್ಟಡಿಗೆ ಪಡೆದಿಕೊಂಡಿದ್ದಾರೆ. ಈ ಪ್ರಕರಣವನ್ನು 'ಪತಿಯ ಮನೆಯಲ್ಲಿ ಮಹಿಳೆಯ ಅಸ್ವಾಭಾವಿಕ ಸಾವಿನಲ್ಲಿ ಸಾಂಸ್ಥಿಕ ಪಕ್ಷಪಾತ ಮತ್ತು ಕಾರ್ಯವಿಧಾನದ ವ್ಯತ್ಯಾಸಗಳು' ಎಂದು ಸುಪ್ರೀಂ ವಿಚಾರಣೆಗೆ ಪಟ್ಟಿ ಮಾಡಿದೆ. ಪ್ರಕರಣವನ್ನು ಈಗಾಗಲೇ ಎಸ್ ಐಟಿಗೆ ವಹಿಸಿದ್ದ ಮಧ್ಯಪ್ರದೇಶ ಸರ್ಕಾರವು ಶುಕ್ರವಾರ ಕೇಂದ್ರ ತನಿಖಾ ದಳಕ್ಕೆ (ಸಿಬಿಐ)ಕ್ಕೆ ವರ್ಗಾಯಿಸಲು ಶಿಫಾರಸು ಮಾಡಿದೆ. ಪ್ರಕರಣ ಸಂಬಂಧ ತಮ್ಮ ಹೇಳಿಕೆಯನ್ನು ದಾಖಲಿಸಲು ಪೊಲೀಸರು ಇನ್ನೂ ಸಂಪರ್ಕಿಸಿಲ್ಲ ಎಂದು ಸಹ ಆರೋಪಿಯಾಗಿರುವ ತ್ವಿಶಾ ಅತ್ತೆ ಗಿರಿಬಾಲಾ ಸಿಂಗ್ ಹೇಳಿದ್ದಾರೆ.

## ಮರುಪರೀಕ್ಷಾ ದಿನದಂದು ನೀಟ್ ಆಕಾಂಕ್ಷಿಗಳಿಗೆ ಉಚಿತ ಬಸ್ ಪ್ರಯಾಣ ರಾಜ್ಯಗಳಿಗೆ ಆಮ್‌ಆದ್ಮಿ ಪಕ್ಷ ಒತ್ತಾಯ

**ನವದೆಹಲಿ, ಮೇ 24:** ಪ್ರಶ್ನೆ ಪತ್ರಿಕೆ ಸೋರಿಕೆ ಮತ್ತು ರದ್ದತಿಯ ನಂತರ ನೀಟ್ ಆಕಾಂಕ್ಷಿಗಳು ಮರುಪರೀಕ್ಷೆಯಿಂದಾಗಿ ಸಂಕಷ್ಟ ಮತ್ತು ಆರ್ಥಿಕ ಹೊರೆಯನ್ನು ಎದುರಿಸುತ್ತಿದ್ದಾರೆ ಎಂದು ಎಎಪಿ ಇಂದು ಹೇಳಿಕೊಂಡಿದೆ ಮತ್ತು ಪರೀಕ್ಷಾ ದಿನದಂದು ವಿದ್ಯಾರ್ಥಿಗಳಿಗೆ ಬಸ್ ಪ್ರಯಾಣವನ್ನು ಉಚಿತಗೊಳಿಸುವಂತೆ ಎಲ್ಲಾ ರಾಜ್ಯ ಸರ್ಕಾರಗಳಿಗೆ ಮನವಿ ಮಾಡಿದೆ. ಕೇಜ್ರಿವಾಲ್ ಕುರಿತು ಹಂಚಿಕೊಂಡ ವೀಡಿಯೊ ಮನವಿಯಲ್ಲಿ, ಎಎಪಿ ನೇತೃತ್ವದ ಪಂಜಾಬ್ ಸರ್ಕಾರ ಈಗಾಗಲೇ ಪಂಜಾಬ್ ರೋಡ್ವೇಸ್ ಬಸ್‌ಗಳಲ್ಲಿ ನೀಟ್ ಆಕಾಂಕ್ಷಿಗಳಿಗೆ ಉಚಿತ ಪ್ರಯಾಣವನ್ನು ಘೋಷಿಸಿದೆ ಮತ್ತು ಹರಿಯಾಣ ಮತ್ತು ಬಿಹಾರವು ಅದನ್ನು ಅನುಸರಿಸಿದೆ ಎಂದು ಹೇಳಿಕೊಂಡಿದೆ. "ನಮ್ಮ ನಾಯಕತ್ವವನ್ನು ಅನುಸರಿಸಿ, ಹರಿಯಾಣ ಮತ್ತು ಬಿಹಾರದ ಮುಖ್ಯಮಂತ್ರಿಗಳು ಈಗ ಇದೇ ರೀತಿಯ ಘೋಷಣೆಗಳನ್ನು ಮಾಡಿದ್ದಾರೆ. ಇತರ ಎಲ್ಲಾ ಮುಖ್ಯಮಂತ್ರಿಗಳು ತಮ್ಮ ರಾಜ್ಯಗಳಲ್ಲಿಯೂ ಸಹ ಈ ಘೋಷಣೆಯನ್ನು ಮಾಡಬೇಕೆಂದು ನಾನು ವಿನಂತಿಸುತ್ತೇನೆ" ಎಂದು ಅವರು ಹೇಳಿದರು. ಮರುಪರೀಕ್ಷೆಯನ್ನು 21 ರಂದು ನಿಗದಿಪಡಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ. ಮತ್ತು ಇತರ ರಾಜ್ಯಗಳು ಈ ಉಪಕ್ರಮಕ್ಕೆ ಸೇರುತ್ತವೆ ಎಂಬ ಭರವಸೆಯನ್ನು ವ್ಯಕ್ತಪಡಿಸಿದರು. ರದ್ದತಿಯ ನಂತರ ಮತ್ತೆ ಪರೀಕ್ಷೆಗೆ ಹಾಜರಾಗಲು ಒತ್ತಾಯಿಸಲ್ಪಡುತ್ತಿರುವ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪ್ರಯಾಣವು ಹೆಚ್ಚಿನ ಪರಿಹಾರ

## ಇರಾನ್ ಬಳಿ ಯಾವುದೇ ಪರಮಾಣು ಶಸ್ತ್ರಾಸ್ತ್ರಗಳು ಇಲ್ಲ: ಡಾ.ಇಲಾಹಿ

**ವಾರಣಾಸಿ, ಮೇ 24:** ಇರಾನ್‌ನ ಸರ್ವೋಚ್ಚ ನಾಯಕ ಅಯತೊಲ್ಲಾ ಅಲಿ ಖಮೇನಿ ಅವರ ಪ್ರತಿನಿಧಿ ಡಾ. ಅಬ್ದುಲ್ ಮಜೀದ್ ಹಕೀಮ್ ಇಲಾಹಿ ಭಾನುವಾರ ಇರಾನ್ ಪರಮಾಣು ಶಸ್ತ್ರಾಸ್ತ್ರಗಳನ್ನು ಹೊಂದಿಲ್ಲ ಅಥವಾ ಹೊಂದಲು ಉದ್ದೇಶಿಸಿಲ್ಲ ಎಂದು ಹೇಳಿದ್ದಾರೆ, ಪರಮಾಣು ಶಸ್ತ್ರಾಸ್ತ್ರಗಳ ವಿರುದ್ಧ ಟೆಹ್ರಾನ್‌ನ ನಿಲುವು ಸರ್ವೋಚ್ಚ ನಾಯಕ ಹೊರಡಿಸಿದ ಧಾರ್ಮಿಕ ಆದೇಶದಲ್ಲಿ ಬೇರೂರಿದೆ ಎಂದು ಪ್ರತಿಪಾದಿಸಿದ್ದಾರೆ. ಸುಮಾರು ಮೂರು ದಶಕಗಳ ಹಿಂದೆ ಹೊರಡಿಸಲಾದ ಫತ್ವಾ ಮೂಲಕ ಅಯತೊಲ್ಲಾ ಖಮೇನಿ ಪರಮಾಣು ಶಸ್ತ್ರಾಸ್ತ್ರಗಳನ್ನು ಹೊಂದಿರುವುದು "ನಿಷೇಧಿತ" ಎಂದು



ಘೋಷಿಸಿದ್ದಾರೆ ಎಂದು ಡಾ. ಇಲಾಹಿ ಹೇಳಿದರು. "ಮೂವತ್ತು ವರ್ಷಗಳ ಹಿಂದೆ, ನಾವು ಪರಮಾಣು ಶಸ್ತ್ರಾಸ್ತ್ರಗಳನ್ನು ಹೊಂದಿಲ್ಲ ಎಂದು ನಾವು ಸ್ಪಷ್ಟಪಡಿಸಿದ್ದೇವೆ. ನಮಗೆ ಅವು ಬೇಡ ಎಂದು ಸ್ಪಷ್ಟಪಡಿಸಲಾಯಿತು. ಇರಾನ್ನ ಸರ್ವೋಚ್ಚ ನಾಯಕ ಅಯತೊಲ್ಲಾ ಅಲಿ ಖಮೇನಿ ಪರಮಾಣು ಶಸ್ತ್ರಾಸ್ತ್ರಗಳನ್ನು ಹೊಂದಿರುವುದು ನಿಷೇಧಿತ ಎಂದು ಘೋಷಿಸುವ ಫತ್ವಾ ಹೊರಡಿಸಿದ್ದಾರೆ.

ನಾವು ಯಾವುದೇ ಪರಮಾಣು ಬಾಂಬ್‌ಗಳನ್ನು ಹೊಂದಿಲ್ಲ ಮತ್ತು ಭವಿಷ್ಯದಲ್ಲಿ ಅವುಗಳನ್ನು ಹೊಂದುವ ಉದ್ದೇಶವಿಲ್ಲ" ಎಂದು ಅವರು ಹೇಳಿದರು.

# ರಾಜ್ಯದಲ್ಲಿ ಎಸ್ಐಆರ್ ಮೂಲಕ 75 ಲಕ್ಷ ಮತದಾರರನ್ನು ಹೊರಗಿಡುವ ಹುನ್ನಾರ: ಕಾಂಗ್ರೆಸ್ ವಕ್ತಾರ ಲಕ್ಷ್ಮಣ್ ಆರೋಪ

**ಬೆಂಗಳೂರು, ಮೇ.24:** ರಾಜ್ಯದಲ್ಲಿ ಮತದಾರರ ಪಟ್ಟಿ ತೀವ್ರ ಪರಿಷ್ಕರಣೆಗೆ ಮುನ್ನ ನಡೆದಿರುವ ಮ್ಯಾಪಿಂಗ್‌ನಲ್ಲಿ 75ಲಕ್ಷ ಜನರನ್ನು ಹೊರಗಿಡಲಾಗಿದೆ ಎಂದು ಕೆಪಿಸಿಸಿ ವಕ್ತಾರ ಎಂ. ಲಕ್ಷ್ಮಣ್ ಗಂಭೀರ ಆರೋಪ ಮಾಡಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮತದಾರರ ಪಟ್ಟಿ ತೀವ್ರ ಪರಿಷ್ಕರಣೆ ಕುರಿತು ಸಮಗ್ರ ವಿಶ್ಲೇಷಣೆ ನಡೆಸಿದ ಅವರು, ಬಿಜೆಪಿ ಮತ್ತು ಚುನಾವಣಾ ಆಯೋಗದ ಜಂಟಿ ಸಹಯೋಗದಲ್ಲಿ 2028ರ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು ಪರಿಷ್ಕರಣೆ ಮಾಡಲಾಗುತ್ತಿದೆ ಎಂದು ಆರೋಪಿಸಿದರು.

ಜೂನ್ 20ರ ನಂತರ ಮತದಾರರ ಪಟ್ಟಿ ಪರಿಷ್ಕರಣೆಯಾಗಲಿದೆ. ಅದಕ್ಕೂ ಮುನ್ನ ನಡೆದಿರುವ ಮ್ಯಾಪಿಂಗ್ನಲ್ಲಿ ಭಾರಿ ಸಂಚು ನಡೆದಿದೆ. ಮೈಸೂರು ಜಿಲ್ಲೆಯ 11 ವಿಧಾನಸಭಾ ಕ್ಷೇತ್ರಗಳಲ್ಲಿ 28 ಲಕ್ಷ ಮತದಾರರ ಪೈಕಿ 3.5 ಲಕ್ಷ ಮತದಾರರನ್ನು ಮ್ಯಾಪಿಂಗ್ನಿಂದ ಹೊರಗಿಡಲಾಗಿದೆ. ಚಾಮುಂಡೇಶ್ವರಿ ಕ್ಷೇತ್ರದಲ್ಲಿ 72 ಸಾವಿರ ಮತದಾರರನ್ನು, ನರಸಿಂಹರಾಜ ಕ್ಷೇತ್ರದಲ್ಲಿ 60 ಸಾವಿರ ಜನರನ್ನು ಹೊರಗಿಟ್ಟಿದ್ದಾರೆ. ನರಸಿಂಹರಾಜ ಕ್ಷೇತ್ರದಲ್ಲಿ ತನ್ವೀರ್ ಸೇಠ್ ಗೆಲ್ಲುತ್ತಿದ್ದಾರೆ. ಹೊರಗಿಟ್ಟಿರುವ 60 ಸಾವಿರ ಪೈಕಿ 36 ಸಾವಿರ ಮುಸ್ಲಿಂ ಮತದಾರರು ಸೇರಿದ್ದಾರೆ.

ಚಾಮರಾಜ ಕ್ಷೇತ್ರದಲ್ಲಿ 36 ಸಾವಿರ ಜನರನ್ನು ಹೊರಗಿಟ್ಟಿದ್ದಾರೆ. ಅದರಲ್ಲಿ 18 ಸಾವಿರ ಮುಸ್ಲಿಮರು. ಈ ಕ್ಷೇತ್ರದಲ್ಲಿ ಗೆಲುವಿನ ಅಂತರವೇ 4.5 ಸಾವಿರ ಎಂದು ಹೇಳಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರತಿನಿಧಿಸುತ್ತಿರುವ ವರುಣಾ ಕ್ಷೇತ್ರದಲ್ಲಿ 23 ಸಾವಿರ ಮತದಾರರನ್ನು



ಹೊರಗಿಡಲಾಗಿದೆ. ನಾವು ಇದನ್ನು ಜಿಲ್ಲಾಧಿಕಾರಿ, ಉಪ ವಿಭಾಗಾಧಿಕಾರಿ ಮತ್ತು ತಹಶೀಲ್ದಾರ್ ಸಮಕ್ಷಮದಲ್ಲಿ ಚರ್ಚಿಸಿದ್ದೇವೆ. ಸ್ವತಃ ಮುಖ್ಯಮಂತ್ರಿಯವರೇ ಚಿಂತೆಗೆ ಒಳಗಾಗಿದ್ದರು.

ಒಂದು ಗಂಟೆಗೂ ಹೆಚ್ಚು ಕಾಲ ಸಭೆ ನಡೆದಿದೆ. ಅಧಿಕಾರಿಗಳಿಂದ ಸ್ಪಷ್ಟ ಮಾಹಿತಿ ಸಿಗಲಿಲ್ಲ. ಮತ್ತೆ ಮಧ್ಯಾಹ್ನ ಮೂರು ಗಂಟೆಗಳ ಕಾಲ ಚರ್ಚೆ ನಡೆಸಲಾಗಿದೆ. ಆಗಲೂ ಅಧಿಕಾರಿಗಳು ಅದೇ ಉತ್ತರ ನೀಡುತ್ತಿದ್ದರು. ಮ್ಯಾಪಿಂಗ್‌ನಿಂದ ಕೈಬಿಟ್ಟವರನ್ನು ಮತ್ತೆ ಸೇರಿಸುತ್ತೇವೆ ಎಂದು ಸಬೂಬು ಹೇಳಿದ್ದಾರೆ. ಯಾರನ್ನು ಕೈಬಿಡಲಾಗಿದೆ ಎಂಬ ಪಟ್ಟಿ ಕೊಡಲು ಸಿದ್ಧರಿಲ್ಲ. ಮತಗಟ್ಟೆ ಅಧಿಕಾರಿಗಳ ಬಳಿಯೇ ಮಾಹಿತಿ ಪಡೆಯಬೇಕಾಗಿದೆ ಎಂದು ದೂರಿದರು.

ನಾವು ಸಾಫ್ಟ್‌ವೇರ್ ಬಳಸಿ ವಿಶ್ಲೇಷಣೆ ನಡೆಸಿದಾಗ ಆಘಾತಕಾರಿ ಮಾಹಿತಿ ತಿಳಿದುಬಂದಿದೆ. ಕೈಬಿಟ್ಟವರ ಪೈಕಿ ಶೇ.90ರಷ್ಟು ಜನ ಅಲ್ಪಸಂಖ್ಯಾತರು ಮತ್ತು ಪರಿಶಿಷ್ಟ ಸಮುದಾಯಗಳಿಗೆ ಸೇರಿದ ಕಾಂಗ್ರೆಸ್ ಮತದಾರರಾಗಿದ್ದಾರೆ ಎಂದು ಹೇಳಿದರು. ರಾಜ್ಯದಲ್ಲಿ ಕಾಂಗ್ರೆಸ್ನ ಹಾಲಿ ಶಾಸಕರಿರುವ 97 ಕ್ಷೇತ್ರಗಳನ್ನು ಗುರಿಯಾಗಿಸಿಕೊಂಡು ಎಸ್ಐಆರ್ ನಡೆಸಲಾಗುತ್ತಿದೆ. ಮತಗಟ್ಟೆ ಏಜೆಂಟ್–1 ಆಗಿ ಸ್ಥಳೀಯ ಶಾಸಕರು ಅಥವಾ ಮಾಜಿ ಶಾಸಕರನ್ನು ರಾಜಕೀಯ ಪಕ್ಷಗಳು ನೇಮಿಸಬೇಕು. ಬೂತ್ ಮಟ್ಟದಲ್ಲಿ ಏಜೆಂಟ್–2 ಅನ್ನು ನೇಮಿಸಬೇಕಾಗಿದೆ.

ರಾಜ್ಯದಲ್ಲಿ 60 ಸಾವಿರ ಮತಗಟ್ಟೆಗಳಿವೆ. ಕಾಂಗ್ರೆಸ್‌ನಿಂದ ಕೇವಲ 28 ಸಾವಿರ ಏಜೆಂಟ್‌ಗಳ ಪಟ್ಟಿಗೆ ಮಾತ್ರ ಆಯೋಗ ಅನುಮತಿ ನೀಡಿದೆ. ಇನ್ನೂ 30 ಸಾವಿರ ಏಜೆಂಟ್–2 ಪಟ್ಟಿಗೆ ಅನುಮತಿ ನೀಡಿಲ್ಲ. ಬಿಎಲ್‌ಒಗಳ ಜೊತೆ ಬಿಎಲ್‌ಎಗಳು ಮನೆ ಮನೆಗೆ ತೆರಳಲು ಅವಕಾಶವಿದೆ. ಬಿಜೆಪಿ ಬೆಂಬಲಿತ ಆರ್‌ಎಸ್‌ಎಸ್ ಕಾರ್ಯಕರ್ತರಿಗೆ ಉತ್ತಮ ತರಬೇತಿ ನೀಡಲಾಗಿದೆ. ಪ್ರತಿಯೊಬ್ಬರ ಬಳಿಯೂ ಮತದಾರರ ಪಟ್ಟಿ ಇದೆ. ಯಾರು ಯಾವ ಪಕ್ಷದ ಮತದಾರರು ಎಂಬ ಮಾಹಿತಿ ಅವರ ಬಳಿ ಇದೆ.

ಬಿಎಲ್‌ಒಗಳ ಜೊತೆ ಸೇರಿ ಕಾಂಗ್ರೆಸ್ ಬೆಂಬಲಿತ ಮತದಾರರನ್ನು ಸುಲಭವಾಗಿ ಕೈಬಿಡುತ್ತಿದ್ದಾರೆ. ಬಿಎಲ್‌ಒಗಳು ಕಾಂಗ್ರೆಸ್ ಏಜೆಂಟ್‌ಗಳನ್ನು ಜೊತೆ ಕರೆದುಕೊಂಡು ಹೋಗುತ್ತಿಲ್ಲ ಎಂದು ದೂರಿದರು.

ರಾಜ್ಯ ಚುನಾವಣಾ ಆಯೋಗದ ಮುಖ್ಯಾಧಿಕಾರಿ ಅನೂಪ್ ಕುಮಾರ್ ಅವರು, 2002ರಲ್ಲಿ ಮತದಾರರ ಪಟ್ಟಿಯಲ್ಲಿ ಹೆಸರು ಇದ್ದರೆ ಮ್ಯಾಪಿಂಗ್ ಸುಲಭವಾಗುತ್ತದೆ. ಇಲ್ಲದಿದ್ದರೆ ತಂದೆ–ತಾತ ಯಾವ ಮತಗಟ್ಟೆಯಲ್ಲಿ ಮತ ಹಾಕಿದ್ದರು ಎಂಬ ಮಾಹಿತಿ ನೀಡಬೇಕು ಎಂದು ಹೇಳಿದ್ದಾರೆ ಎಂದು ತಿಳಿಸಿದರು. ನನ್ನ ಹೆಸರು ಮೊದಲು ಲಕ್ಷ್ಮಣ್ ಎಂದಿತ್ತು. ಈಗ ಎಂ. ಲಕ್ಷ್ಮಣ್ ಆಗಿದೆ. ತಂದೆ ನಿಧನರಾದ ಬಳಿಕ ಲೇಟ್ ಎಂದು ಸೇರಿಸಲಾಗಿದೆ. ಈ ಸಣ್ಣ ವ್ಯತ್ಯಾಸಕ್ಕೆ ಆರಂಭದಲ್ಲಿ ನನ್ನ ಹೆಸರು ಮ್ಯಾಪಿಂಗ್‌ನಲ್ಲಿ ಇರಲಿಲ್ಲ. ಲೋಕಸಭಾ ಚುನಾವಣೆಯ ಅಭ್ಯರ್ಥಿಯಾಗಿದ್ದ ಕಾರಣದಿಂದ ನಾನು ಸ್ವತಃ ಹೋಗಿ ಮ್ಯಾಪಿಂಗ್ ಮಾಡಿಸಿಕೊಂಡೆ. ಇಲ್ಲದಿದ್ದರೆ ನನ್ನ ಹೆಸರೂ ಕೈಬಿಡಲಾಗುತ್ತಿತ್ತು ಎಂದು ಹೇಳಿದರು.ಅಪ್ಪ–ತಾತ ಎಲ್ಲೆಲ್ಲಿ ಮತ ಹಾಕಿದ್ದರು ಎಂಬ ದಾಖಲೆ ತರುವುದು ಸಾಧ್ಯವೇ ಹೆಣ್ಣುಮಕ್ಕಳಿಗೆ ಮದುವೆಯಾದ ಬಳಿಕ ಗಂಡನ ಹೆಸರು ಸೇರ್ಪಡೆಯಾಗುತ್ತದೆ. ಬಹುಶಃ ಅದಕ್ಕಾಗಿಯೇ ಮ್ಯಾಪಿಂಗ್ ಆಗುತ್ತಿಲ್ಲ ಎಂದು ಪ್ರಶ್ನಿಸಿದರು.ಮುಂದಿನ ದಿನಗಳಲ್ಲಿ ಮತದಾರರ ಪಟ್ಟಿಯಲ್ಲಿ ಹೆಸರು ಇಲ್ಲದಿದ್ದರೆ ಸರ್ಕಾರಿ ಸೌಲಭ್ಯಗಳೂ ದೊರಕದ ಪರಿಸ್ಥಿತಿ ಬರಬಹುದು. ಪಶ್ಚಿಮ ಬಂಗಾಳದಲ್ಲೇ ಈಗಾಗಲೇ ಅಂತಹ ಕಾರ್ಯಾಚರಣೆಗಳು ಆರಂಭವಾಗಿವೆ ಎಂದು ಹೇಳಿದರು.

ಐಎಎಸ್ ಅಧಿಕಾರಿಗಳು ಕೇಂದ್ರ ಸರ್ಕಾರದ ನೌಕರರಂತೆ ರಾಜ್ಯದಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ಆಯೋಗದ ಮಾತು ಕೇಳಿಕೊಂಡು ಮತದಾರರನ್ನು ಪಟ್ಟಿಯಿಂದ ಕೈಬಿಡುತ್ತಿದ್ದಾರೆ ಎಂದು ಆರೋಪಿಸಿದರು.1968, 1971, 1975 ಹಾಗೂ 2011 ಸೇರಿ ಐದು ಬಾರಿ ಮತದಾರರ ಪಟ್ಟಿ ತೀವ್ರ ಪರಿಷ್ಕರಣೆ ನಡೆದಿದೆ. ಆಗೆಲ್ಲ ಕೈಬಿಟ್ಟವರನ್ನು ಮತ್ತೆ ಪಟ್ಟಿಗೆ ಸೇರಿಸಲಾಗುತ್ತಿತ್ತು. ಆದರೆ ಈ ಬಾರಿ ಮತದಾರರ ಸಂಖ್ಯೆಯನ್ನು ಕಡಿಮೆ ಮಾಡಲಾಗುತ್ತಿದೆ ಎಂದು ಆತಂಕ ವ್ಯಕ್ತಪಡಿಸಿದರು. ರಾಜ್ಯದಲ್ಲಿ ಶೇ.86ರಷ್ಟು ಮ್ಯಾಪಿಂಗ್ ಪೂರ್ಣಗೊಂಡಿದೆ.

# ಮತದಾರರ ಪಟ್ಟಿ ಪರಿಷ್ಕರಣೆ, ಕಟ್ಟೆಚ್ಚರ ವಹಿಸಿ ಕಾರ್ಯಕರ್ತರಿಗೆ ಕಾಂಗ್ರೆಸ್ ಎಚ್ಚರಿಕೆ



**ಬೆಂಗಳೂರು, ಮೇ.24:** ಮುಂದಿನ ವಿಧಾನಸಭಾ ಚುನಾವಣೆ ಮತ್ತು ನಂತರದ ಲೋಕಸಭಾ ಚುನಾವಣೆ ಯನ್ನು ದೃಷ್ಟಿಯಲ್ಲಿಟ್ಟುಕೊಂಡು ಕೇಂದ್ರ ಚುನಾವಣಾ ಆಯೋಗ ಜೂನ್ 20ರಿಂದ ಆರಂಭಿಸಲಿರುವ ಮತದಾರರ ಪಟ್ಟಿ ತೀವ್ರ ವಿಶೇಷ ಪರಿಷ್ಕರಣೆಯ ಸಂದರ್ಭದಲ್ಲಿ ಜಾಗೃತರಾಗಿರುವಂತೆ ಕಾಂಗ್ರೆಸ್ ಪಕ್ಷ ತನ್ನ ಕಾರ್ಯಕರ್ತರಿಗೆ ಹಾಗೂ ಮುಖಂಡರಿಗೆ ಕಟ್ಟೆಚ್ಚರ ನೀಡಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ದೇವನಹಳ್ಳಿಯ ಸಮೀಪದ ಖಾಸಗಿ ಹೋಟೆಲ್‌ನಲ್ಲಿ ಕಾಂಗ್ರೆಸ್ ಸಂಸದರು, ಮಾಜಿ ಸಂಸದರು, ಶಾಸಕರು, ಮಾಜಿ ಶಾಸಕರು, ವಿಧಾನಪರಿಷತ್ ಸದಸ್ಯರು, ಮಾಜಿ ವಿಧಾನಪರಿಷತ್ ಸದಸ್ಯರು, ಕಳೆದ ಚುನಾವಣೆಗಳಲ್ಲಿ ವಿಧಾನಸಭೆ ಹಾಗೂ ಲೋಕಸಭೆ ಚುನಾವಣೆಯಲ್ಲಿ ಸ್ಪರ್ಧಿಸಿದ್ದ ಪರಾಜಿತ ಅಭ್ಯರ್ಥಿಗಳ ಜೊತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸಮಾಲೋಚನೆ ನಡೆಸಿದ್ದಾರೆ. ಕೇಂದ್ರ ಚುನಾವಣಾ ಆಯೋಗ ನಡೆಸುವ ಮತದಾರರ ಪಟ್ಟಿ ತೀವ್ರ ಪರಿಷ್ಕರಣೆ, ಬಿಜೆಪಿಯೇತರ ಸರ್ಕಾರಗಳಿಗೆ ಮುಳುವಾಗುತ್ತಿದೆ. ಈ ಹಿನ್ನಲೆಯಲ್ಲಿ ಕರ್ನಾಟಕ ಕಾಂಗ್ರೆಸ್ ಪಕ್ಷ ಮುಂಚಿತವಾಗಿಯೇ ಎಚ್ಚೆತ್ತುಕೊಂಡಿದೆ. ಇತ್ತೀಚೆಗೆ ನಡೆದ ಸಚಿವ ಸಂಪುಟ ಸಭೆಯಲ್ಲಿ ಎಸ್ಐಆರ್ ಬಗ್ಗೆ ಸುದೀರ್ಘ ಚರ್ಚೆ ನಡೆದಿದ್ದು, ಸಚಿವರ ಅಭಿಪ್ರಾಯ ಸಂಗ್ರಹಿಸಲಾಗಿದೆ. ಪಕ್ಷದ ವತಿಯಿಂದ ಕೆಲವು ನಿರ್ದೇಶನಗಳನ್ನು ನೀಡಲಾಗಿದೆ. ಉಳಿದಂತೆ ಶಾಸಕರು, ವಿಧಾನ ಪರಿಷತ್ ಸದಸ್ಯರ ಅಭಿಪ್ರಾಯಗಳನ್ನು ಸಂಗ್ರಹಿಸಿ ಕೆಲವು ನಿರ್ದೇಶನಗಳನ್ನು ನೀಡಬೇಕಿದೆ. ಈ ಹಿನ್ನಲೆಯಲ್ಲಿ ಸಿದ್ದರಾಮಯ್ಯ ಅವರು ಮಹತ್ವದ ಸಭೆ ನಡೆಸುತ್ತಿದ್ದಾರೆ.

ಈ ಮೊದಲು ಬಿಹಾರದಲ್ಲಿ ಮೊದಲ ಹಂತದ ಮತದಾರರ ಪಟ್ಟಿ ಪರಿಷ್ಕರಣೆಯಾಗುವ ವೇಳೆ ಸುಮಾರು 47 ಲಕ್ಷ ಮತದಾರರನ್ನು ಕೈಬಿಡಲಾಗಿತ್ತು. ನಂತರದ ಚುನಾವಣೆಯಲ್ಲಿ ಆಡಳಿತ ವಿರೋಧಿ ಅಲೆಯನ್ನು ಮೀರಿ ಎನ್ಡಿಎ ಮೈತ್ರಿಕೂಟ ಅಧಿಕಾರಕ್ಕೇರಿತ್ತು. ಎರಡನೇ ಹಂತದ ಮತದಾರರ ಪಟ್ಟಿಯಲ್ಲಿ ಉತ್ತರ ಪ್ರದೇಶದಲ್ಲಿ 2.05 ಕೋಟಿ (ಶೇ.13.21), ಪಶ್ಚಿಮ ಬಂಗಾಳದಲ್ಲಿ 83.86 ಲಕ್ಷ (ಶೇ.20.9), ಗುಜರಾತ್ನಲ್ಲಿ 68 ಲಕ್ಷ (ಶೇ.14.5), ಮಧ್ಯಪ್ರದೇಶದಲ್ಲಿ 34.25 ಲಕ್ಷ (ಶೇ.5.96), ಛತ್ತೀಸ್ಗಢದಲ್ಲಿ 25 ಲಕ್ಷ (ಶೇ.11.8), ರಾಜಸ್ಥಾನದಲ್ಲಿ 31 ಲಕ್ಷ (ಶೇ.5.7), ತಮಿಳುನಾಡಿನಲ್ಲಿ 74 ಲಕ್ಷ (ಶೇ.11.5), ಕೇರಳದಲ್ಲಿ 9 ಲಕ್ಷ (ಶೇ.3.24), ಗೋವಾದಲ್ಲಿ 1.28 ಲಕ್ಷ (ಶೇ.10.8), ಪುದುಚೇರಿಯಲ್ಲಿ 77 ಸಾವಿರ (ಶೇ.7.54), ಅಂಡಮಾನ್–ನಿಕೋಬಾರ್‌ನಲ್ಲಿ 52 ಸಾವಿರ ಮತದಾರರನ್ನು ಕೈಬಿಡಲಾಗಿತ್ತು. ಒಟ್ಟು 10 ರಾಜ್ಯಗಳು ಹಾಗೂ 2 ಕೇಂದ್ರಾಡಳಿತ ಪ್ರದೇಶಗಳಲ್ಲಿ 5.18 ಕೋಟಿ (ಶೇ.10.92) ಮತದಾರರನ್ನು ಕೈಬಿಡಲಾಗಿದೆ. ಪಶ್ಚಿಮ ಬಂಗಾಳದಲ್ಲಿ ಬಿಜೆಪಿಯ ಭರ್ಜರಿ ಗೆಲುವಿಗೆ ಎಸ್ಐಆರ್ ಕಾರಣ ಎಂದು ಆರೋಪಿಸಲಾಗುತ್ತಿದೆ. ಬಿಜೆಪಿಯೇತರ ಪಕ್ಷಗಳು ಎಸ್ಐಆರ್ ಅನ್ನು ತೀವ್ರವಾಗಿ ವಿರೋಧಿಸಿವೆ. ಅದರಲ್ಲೂ ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ್ದರು. ಆದರೆ ಎಸ್ಐಆರ್‌ಗೆ ಸಂವಿಧಾನಾತ್ಮಕ ಆಧಾರ ಇರುವುದರಿಂದ ನ್ಯಾಯಾಲಯದಿಂದ ಪ್ರತಿಪಕ್ಷಗಳಿಗೆ ಯಾವುದೇ ನೆರವು ಸಿಗಲಿಲ್ಲ.

## ಕೈಪಿಡಿಗೆ ಕಟ್ಟೆಚ್ಚರದ ಸೂಚನೆ:

ಇತ್ತೀಚೆಗೆ ನಡೆದ ಸಂಪುಟ ಸಭೆಯಲ್ಲಿ ಈ ಬಗ್ಗೆ ವಿಶ್ಲೇಷಣೆ ನಡೆದಿದ್ದು, ಅನೇಕ ಮಾರ್ಗಗಳ ಬಗ್ಗೆ ಚರ್ಚೆಗಳು ನಡೆದಿವೆ. ಇಂದು ನಡೆಯುವ ಸಭೆಯಲ್ಲಿ ಪ್ರಮುಖವಾಗಿ ಶಾಸಕರು ಹಾಗೂ ಪರಾಜಿತ ಅಭ್ಯರ್ಥಿಗಳು ತಮ್ಮ ಕ್ಷೇತ್ರಗಳಲ್ಲಿ ನಡೆಯುವ ಮತದಾರರ ಪಟ್ಟಿ ಪರಿಷ್ಕರಣೆ ಮೇಲೆ ತೀವ್ರ ನಿಗಾ ವಹಿಸಬೇಕು. ಕೇಂದ್ರ ಚುನಾವಣಾ ಆಯೋಗ ಬಿಎಲ್‌ಒಗಳನ್ನು ನೇಮಿಸಿದೆ. ಮತಗಟ್ಟೆ ಏಜೆಂಟರನ್ನು ನೇಮಿಸಲು ರಾಜಕೀಯ ಪಕ್ಷಗಳಿಂದ ಪಟ್ಟಿ ಪಡೆಯಲಾಗುತ್ತಿದೆ. ಇದನ್ನು ಸದ್ಬಳಕೆ ಮಾಡಿಕೊಂಡು ಪ್ರತಿಯೊಂದು ಹಂತದಲ್ಲೂ ಎಚ್ಚರಿಕೆಯಿಂದ ಕಾರ್ಯನಿರ್ವಹಿಸುವಂತೆ ಮುಖ್ಯಮಂತ್ರಿ ಹಾಗೂ ಉಪ ಮುಖ್ಯಮಂತ್ರಿ ಪಕ್ಷದ ಮುಖಂಡರಿಗೆ ಸೂಚನೆ ನೀಡಿದ್ದಾರೆ. ಮತಗಟ್ಟೆ ಏಜೆಂಟರನ್ನು ನೇಮಿಸುವಾಗ ಜಾಗ್ರತೆ ವಹಿಸಬೇಕು. ಅವರ ಹಿನ್ನೆಲೆಯನ್ನು ಸಂಪೂರ್ಣವಾಗಿ ಪರಿಶೀಲಿಸಬೇಕು. ಈ ಮೊದಲು ಇತರ ಪಕ್ಷಗಳಲ್ಲಿ ಇದ್ದು, ಹೊಸದಾಗಿ ಕಾಂಗ್ರೆಸ್‌ಗೆ ಬರುವವರನ್ನು ಪರಿಗಣಿಸಬಾರದು. ಆರ್‌ಎಸ್‌ಎಸ್ ಸೇರಿದಂತೆ ಬಿಜೆಪಿ ಬೆಂಬಲಿತ ಸಂಘಟನೆಗಳ ಜೊತೆ ಗುರುತಿಸಿಕೊಂಡಿರುವವರು ಅಥವಾ ಆ ಸಂಘಟನೆಗಳ ಮಾಜಿ ಕಾರ್ಯಕರ್ತರು ನೇಮಕವಾಗದಂತೆ ಎಚ್ಚರಿಕೆ ವಹಿಸಲು ಸೂಚಿಸಲಾಗಿದೆ. ಈ ಮೊದಲು ರಾಹುಲ್ ಗಾಂಧಿ ದೇಶಾದ್ಯಂತ ಮತದಾರರ ಪಟ್ಟಿಯಲ್ಲಿ ಅಕ್ರಮಗಳ ಆರೋಪ ಮಾಡಿದ್ದಾಗ, ಕರ್ನಾಟಕದ ಮಹದೇವಪುರ ವಿಧಾನಸಭಾ ಕ್ಷೇತ್ರವನ್ನು ಉಲ್ಲೇಖಿಸಿದ್ದರು. ಆ ವೇಳೆ ಕಾಂಗ್ರೆಸ್ನ ಸಚಿವರಾಗಿದ್ದ ಕೆ.ಎನ್. ರಾಜಣ್ಣ, ಪಕ್ಷದ ನಿರ್ಲಕ್ಷ್ಯವನ್ನು ಪ್ರಶ್ನಿಸಿದ್ದರು. ಮತದಾರರ ಪಟ್ಟಿ ಪರಿಷ್ಕರಣೆಯ ವೇಳೆ ಕಾಂಗ್ರೆಸ್ ಪಕ್ಷದಿಂದ ನೇಮಕವಾಗಿದ್ದ ಮತಗಟ್ಟೆ ಏಜೆಂಟರು ಏನು ಮಾಡುತ್ತಿದ್ದರು ಎಂದು ಪ್ರಶ್ನಿಸಿದ್ದರು. ನಂತರದ ಬೆಳವಣಿಗೆಯಲ್ಲಿ ರಾಜಣ್ಣ ಅವರನ್ನು ಸಂಪುಟದಿಂದ ವಜಾಗೊಳಿಸಲಾಗಿತ್ತು. ಮುಂದೆ ಇದೇ ರೀತಿಯ ಸಮಸ್ಯೆಗಳು ಉಂಟಾಗಬಾರದು ಎಂಬ ಕಾರಣಕ್ಕಾಗಿ ಕಾಂಗ್ರೆಸ್ ಪಕ್ಷ ಈಗಲೇ ಎಚ್ಚೆತ್ತುಕೊಂಡಿದೆ.

# ಗಿಗ್ ಕಾರ್ಮಿಕರಿಗೆ ಕಲ್ಯಾಣ ಕಾಯಿದೆ ಜಾರಿ ಯುವ ಕಾಂಗ್ರೆಸ್ ಅಧ್ಯಕ್ಷ ಮಂಜುನಾಥ್ ಸ್ಪಷ್ಟನೆ



ಕರ್ನಾಟಕ ಪ್ರದೇಶ ಯುವ ಕಾಂಗ್ರೆಸ್ ಅಧ್ಯಕ್ಷ ಎಚ್.ಎಸ್.ಮಂಜುನಾಥ್ ಗೌಡ ಭಾನುವಾರ ಬೆಂಗಳೂರಿನ ಕೆಪಿಸಿಸಿ ಕಚೇರಿಯಲ್ಲಿ ಗಿಗ್ ಕಾರ್ಮಿಕರ ಕುರಿತ ಪೋಸ್ಟರ್ ಬಿಡುಗಡೆ ಮಾಡಿದರು. ನಟರಾಜ್ ಗೌಡ ಹಾಗೂ ಇತರ ಕಾಂಗ್ರೆಸ್ ನಾಯಕರು ಉಪಸ್ಥಿತರಿದ್ದರು.

**ಬೆಂಗಳೂರು, ಮೇ.24:** ರಾಜ್ಯ ಸರ್ಕಾರ ಗಿಗ್ ಕಾರ್ಮಿಕರಿಗೆ ಕಲ್ಯಾಣ ಕಾಯ್ದೆ ಜಾರಿಗೆ ತಂದಿದ್ದು, ರಾಜಕೀಯವಾಗಿ ಮತ್ತು ವೇಗವಾಗಿ ಬೆಳೆಯುತ್ತಿರುವ ಪ್ಲಾಟ್‌ಫಾರ್ಮ್ ಆರ್ಥಿಕತೆಯಲ್ಲಿ ಕಾರ್ಮಿಕ ಹಕ್ಕುಗಳ ಕುರಿತು ಹೊಸ ಚರ್ಚೆಗೆ ನಾಂದಿ ಹಾಡಿದೆ. ಒಂದೆಡೆ, ಕಾಂಗ್ರೆಸ್ ಸರ್ಕಾರ ಈ ಉಪಕ್ರಮವನ್ನು ಅಸಂಘಟಿತ ಕಾರ್ಮಿಕರ ಕಲ್ಯಾಣಕ್ಕೆ ಮಹತ್ವದ ಹೆಜ್ಜೆಯಾಗಿದೆ ಎಂದರೆ, ಮತ್ತೊಂದೆಡೆ ಪ್ರತಿಪಕ್ಷಗಳು ಮತ್ತು ಕಾರ್ಮಿಕ ಕಾರ್ಯಕರ್ತರು ಕಾನೂನನ್ನು ಎಷ್ಟು ಪರಿಣಾಮಕಾರಿಯಾಗಿ ಜಾರಿಗೆ ತರಲಾಗುತ್ತದೆ ಎಂದು ಪ್ರಶ್ನಿಸುತ್ತಿದ್ದಾರೆ.

ಈ ಕುರಿತು ಮಾಧ್ಯಮಗೋಷ್ಠಿ ನಡೆಸಿ ಮಾತನಾಡಿದ ಕರ್ನಾಟಕ ಯುವ ಕಾಂಗ್ರೆಸ್ ಅಧ್ಯಕ್ಷ ಮಂಜುನಾಥ್ ಗೌಡ, ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ದೇಶದಲ್ಲಿ ಮೊದಲ ಬಾರಿಗೆ ಗಿಗ್ ಕಾರ್ಮಿಕರಿಗೆ ಮೀಸಲಾದ ಕಾನೂನು ಚೌಕಟ್ಟನ್ನು ಪರಿಚಯಿಸಿದೆ. ಸಾಂಪ್ರದಾಯಿಕ ಕಾರ್ಮಿಕ ಕಾನೂನುಗಳಿಂದ ಹೊರಗಿರುವ ಲಕ್ಷಾಂತರ ಗಿಗ್ ಕಾರ್ಮಿಕರು, ಬೈಕ್ ಟ್ಯಾಕ್ಸಿ ಸವಾರರು ಮತ್ತು ಅಪ್ಲಿಕೇಶನ್ ಆಧಾರಿತ ಕಾರ್ಮಿಕರಿಗೆ ಈ ಉಪಕ್ರಮವು ಮನ್ನಣೆ ಮತ್ತು ಕಾನೂನು ರಕ್ಷಣೆಯನ್ನು ಒದಗಿಸುತ್ತದೆ ಎಂದು ಹೇಳಿದರು.

"ಕಲ್ಯಾಣ ಮಂಡಳಿಯು ಕಾರ್ಮಿಕರಿಗೆ ಹಿಂದೆಂದೂ ಇಲ್ಲದ ಕಾನೂನು ಮಾನ್ಯತೆ ಮತ್ತು ರಕ್ಷಣೆಯನ್ನು ನೀಡುತ್ತದೆ. ಗಿಗ್ ಕಾರ್ಮಿಕರು ಇಎಸ್ಐ, ಪಿಎಫ್ ಅಥವಾ ಅಪಘಾತ ವಿಮೆಯಂತಹ ಪ್ರಯೋಜನಗಳಿಲ್ಲದೆ ಕೆಲಸ ಮಾಡುತ್ತಿದ್ದರು. ಅವರ ಆರೋಗ್ಯ ಕಾಳಜಿ ಮತ್ತು ಕುಂದುಕೊರತೆಗಳನ್ನು ವರ್ಷಗಳ ಕಾಲ ನಿರ್ಲಕ್ಷಿಸಲಾಗಿತ್ತು. ಪ್ರಸ್ತಾವಿತ ಕರ್ನಾಟಕ ಪ್ಲಾಟ್‌ಫಾರ್ಮ್ ಆಧಾರಿತ ಗಿಗ್ ವರ್ಕರ್ಸ್ ಸಾಮಾಜಿಕ ಭದ್ರತೆ ಮತ್ತು ಕಲ್ಯಾಣ ಕಾನೂನು ಕಾರ್ಮಿಕರ ನೋಂದಣಿ, ಕಲ್ಯಾಣ ಮಂಡಳಿ ರಚನೆ, ಕುಂದುಕೊರತೆ ಪರಿಹಾರ ಕಾರ್ಯವಿಧಾನಗಳು ಮತ್ತು ಡಿಜಿಟಲ್ ಅಗ್ರಿಗೇಟರ್ ಕಂಪನಿಗಳ ಮೇಲೆ ವಿಧಿಸಲಾದ ಶುಲ್ಕದ ಮೂಲಕ ಬೆಂಬಲಿತ ಕಲ್ಯಾಣ ನಿಧಿಯನ್ನು ಒಳಗೊಂಡಿದೆ. ಸರ್ಕಾರವು ಕುಂದುಕೊರತೆ ಕಾರ್ಯವಿಧಾನವನ್ನು ಸಹ ಕಾರ್ಯಗತಗೊಳಿಸಿದೆ. ಅದರ ಮೂಲಕ ಕಾರ್ಮಿಕರು ಔಪಚಾರಿಕವಾಗಿ ದೂರುಗಳನ್ನು ಸಲ್ಲಿಸಬಹುದು.

ಕಲ್ಯಾಣ ಮಂಡಳಿಯು 4 ಲಕ್ಷ ರೂ.ಗಳವರೆಗಿನ ವಿಮಾ ರಕ್ಷಣೆ ಮತ್ತು ಅಪಘಾತ ಪರಿಹಾರ ಸೇರಿದಂತೆ ಪ್ರಯೋಜನಗಳನ್ನು ಒದಗಿಸುತ್ತದೆ. ಕಾಂಗ್ರೆಸ್ ಸರ್ಕಾರವು ಗಿಗ್ ಕಾರ್ಮಿಕರನ್ನು ವಿಶಾಲವಾದ ಕಾರ್ಮಿಕ ಹಕ್ಕುಗಳ ಚೌಕಟ್ಟಿನ ಅಡಿಯಲ್ಲಿ ತರಲು ಮತ್ತು ಕಂಪನಿಗಳಿಂದ ಸಾಮಾಜಿಕ ಜವಾಬ್ದಾರಿಯನ್ನು ಖಚಿತಪಡಿಸಿಕೊಳ್ಳಲು ಉದ್ದೇಶಿಸಿದೆ ಎಂದು ಮಂಜುನಾಥ್ ಗೌಡ ತಿಳಿಸಿದರು. ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿಯವರ ಸೂಚನೆಗಳನ್ನು ಅನುಸರಿಸಿ ಯುವ ಕಾಂಗ್ರೆಸ್ ಈಗಾಗಲೇ ಸುಮಾರು 8,000 ಕಾರ್ಮಿಕರನ್ನು ಸದಸ್ಯರನ್ನಾಗಿ ದಾಖಲಿಸಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರೊಂದಿಗೆ ಸಂವಾದ ಕಾರ್ಯಕ್ರಮಗಳನ್ನು ನಡೆಸಿದ ನಂತರ ಪಕ್ಷವು ಅವರಿಗಾಗಿ ಪ್ರಮುಖ ಸಮಾವೇಶವನ್ನು ಆಯೋಜಿಸಲು ಯೋಜಿಸಿದೆ ಎಂದು ಹೇಳಿದರು. ದೇಶಾದ್ಯಂತ ಗಿಗ್ ಕಾರ್ಮಿಕರೊಂದಿಗೆ ಚರ್ಚೆಗಳನ್ನು ಪ್ರಾರಂಭಿಸಿದ್ದಕ್ಕಾಗಿ ಮತ್ತು ಅವರ ಕೆಲಸದ ಪರಿಸ್ಥಿತಿಗಳು, ಆದಾಯದ ಅಭದ್ರತೆ ಮತ್ತು ಸಾಮಾಜಿಕ ರಕ್ಷಣೆಯ ಕೊರತೆಯ ಬಗ್ಗೆ ಕಳವಳ ವ್ಯಕ್ತಪಡಿಸಿದ್ದಕ್ಕಾಗಿ ರಾಹುಲ್ ಗಾಂಧಿಯನ್ನು ಮಂಜುನಾಥ್ ಶ್ಲಾಘಿಸಿದರು. ಆರ್ಥಿಕ ಸಂಕಷ್ಟ ಮತ್ತು ನಿರುದ್ಯೋಗದಿಂದಾಗಿ ಅನೇಕ ಕಾರ್ಮಿಕರು ಗಿಗ್ ಆರ್ಥಿಕತೆಯನ್ನು ಪ್ರವೇಶಿಸುತ್ತಿದ್ದಾರೆ ಎಂದರು. ಬೆಂಗಳೂರಿನಲ್ಲಿ ವಿತರಣಾ ಕಾರ್ಯನಿರ್ವಾಹಕರು ಮತ್ತು ಬೈಕ್ ಟ್ಯಾಕ್ಸಿ ಸವಾರರು ಹೆಚ್ಚುತ್ತಿರುವ ಇಂಧನ ಬೆಲೆಗಳು ತಮ್ಮ ಗಳಿಕೆಯನ್ನು ಕಡಿಮೆ ಮಾಡಿವೆ ಎಂದು ದೂರಿದ್ದಾರೆ. ಆದರೆ ಒಕ್ಕೂಟಗಳು ಅಪ್ಲಿಕೇಶನ್ ಆಧಾರಿತ ಕಂಪನಿಗಳಿಂದ ಉತ್ತಮ ಪಾವತಿಗಳನ್ನು ಒತ್ತಾಯಿಸಿವೆ. ಮಹಿಳಾ ಗಿಗ್ ಕೆಲಸಗಾರರು ಶೌಚಾಲಯಗಳು, ವಿಶ್ರಾಂತಿ ಸ್ಥಳಗಳು, ಕುಡಿಯುವ ನೀರಿನ ಸೌಲಭ್ಯಗಳ ಕೊರತೆ ಮತ್ತು ಸುರಕ್ಷತೆ ಮತ್ತು ದೀರ್ಘ ಕೆಲಸದ ಸಮಯದ ಬಗ್ಗೆ ಕಳವಳ ವ್ಯಕ್ತಪಡಿಸಿದ್ದಾರೆ. ವಿರೋಧ ಪಕ್ಷದ ನಾಯಕರು ಮತ್ತು ಕಾರ್ಮಿಕ ಕಾರ್ಯಕರ್ತರು ಸರ್ಕಾರವು ಸರಿಯಾದ ಅನುಷ್ಠಾನವನ್ನು ಖಚಿತಪಡಿಸಿಕೊಳ್ಳದೆ "ಶೀರ್ಷಿಕೆ ಘೋಷಣೆಗಳನ್ನು" ಮಾಡುತ್ತಿದೆ ಎಂದು ಆರೋಪಿಸಿದ್ದಾರೆ. ಕನಿಷ್ಠ ಗಳಿಕೆ, ಅಪಘಾತ ವಿಮೆ ಮತ್ತು ಆರೋಗ್ಯ ಪ್ರಯೋಜನಗಳನ್ನು ಖಾತರಿಪಡಿಸದ ಹೊರತು, ಕಲ್ಯಾಣ ಭರವಸೆಗಳು ಸಾಂಕೇತಿಕವಾಗಿ ಉಳಿಯಬಹುದು. ಅನಿಯಂತ್ರಿತ ಖಾತೆ ಅಮಾನತುಗಳು, ವೇದಿಕೆಗಳಿಂದ ಅಲ್ಗಾರಿದಮ್ ಆಧಾರಿತ ನಿಯಂತ್ರಣ ಮತ್ತು ಕಾರ್ಮಿಕರಿಗೆ ಸಾಮೂಹಿಕ ಚೌಕಾಸಿ ಹಕ್ಕುಗಳ ಅನುಪಸ್ಥಿತಿಯ ಬಗ್ಗೆ ಕಾರ್ಯಕರ್ತರು ಕಳವಳ ವ್ಯಕ್ತಪಡಿಸಿದ್ದಾರೆ.

# ನೀಟ್‌ಗೆ ಹಾಜರಾಗಿದ್ದ ಯುವತಿ ಆತ್ಮಹತ್ಯೆಗೆ ಶರಣು

**ಬೆಂಗಳೂರು ಮೇ 24:** ರಾಷ್ಟ್ರೀಯ ಅರ್ಹತಾ ಮತ್ತು ಪ್ರವೇಶ ಪರೀಕ್ಷೆ (ನೀಟ್)ಗೆ ಹಾಜರಾಗಿದ್ದ ವಿದ್ಯಾರ್ಥಿನಿ ನಗರದ ತಮ್ಮ ಮನೆಯಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಈ ವಿಚಾರವನ್ನು ವಿದ್ಯಾರ್ಥಿನಿಯ ತಂದೆ ಭಾನುವಾರ ದೃಢಪಡಿಸಿದರು. ಸಾವನ್ನಪ್ಪಿದ ವಿದ್ಯಾರ್ಥಿನಿಯನ್ನು ಭಾಗ್ಯಶ್ರೀ (18) ಎಂದು ಗುರುತಿಸಲಾಗಿದೆ. ಶೈಕ್ಷಣಿಕವಾಗಿ ಉತ್ತಮ ಸಾಧನೆ ಮಾಡುತ್ತಿದ್ದ ಮಗಳು, ಪಿಯುಸಿ ಪರೀಕ್ಷೆಯಲ್ಲಿ ಶೇ.92 ಅಂಕ ಗಳಿಸಿ ಉತ್ತೀರ್ಣಳಾಗಿದ್ದಳು ಎಂದು ತಂದೆ ಹೇಳಿದರು.

ನಮ್ಮ ಕುಟುಂಬದಲ್ಲಿ ಯಾವುದೇ ತೊಂದರೆ ಅಥವಾ ಸಮಸ್ಯೆ ಇರಲಿಲ್ಲ. ನಾವು ಸಂತೋಷದಿಂದ ಬದುಕುತ್ತಿದ್ದೆವು. ಅವಳು ನೀಟ್ನಲ್ಲಿ ಉತ್ತಮ ಸಾಧನೆ ಮಾಡಿದ್ದಳು. ಎಲ್ಲವೂ ಚೆನ್ನಾಗಿಯೇ ನಡೆಯುತ್ತಿತ್ತು. ಬಹುಶಃ ಮತ್ತೆ ನೀಟ್ ಮತ್ತೆ ಬರೆಯುವ ಬಗ್ಗೆ ಅವಳ ಮನಸ್ಸಿನಲ್ಲಿ ಕೆಲವು ಭಾವನೆಗಳಿದ್ದಿರಬಹುದು. ನಾನು ಯಾರನ್ನೂ ದೂಷಿಸುವುದಿಲ್ಲ. ಅವಳ ನೋವು ಅಥವಾ ಸಂಕಟ ನಮಗೆ ಗೊತ್ತಿಲ್ಲ. ನಾನೇನು ಹೇಳಲಿ?" ಎಂದು ರಾಜಶೇಖರ್ ಕಣ್ಣೀರು ಸುರಿಸುತ್ತಾ ಮಾಧ್ಯಮದವರೊಂದಿಗೆ ಬೇಸರದಿಂದ ನುಡಿದರು. ವಿದ್ಯಾರ್ಥಿನಿ ಯಾವುದೇ ಡೆತ್ ನೋಟ್ ಬರೆದಿಲ್ಲ ಅಥವಾ ಸಾವಿಗೆ ಯಾವುದೇ ಕಾರಣ ನೀಡಿಲ್ಲ ಎಂದು ಪೊಲೀಸ್ ಮೂಲಗಳು ಮಾಹಿತಿ ನೀಡಿವೆ. ಸ್ಟೇಷನ್ ಬಜಾರ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಪ್ರಶ್ನೆ ಪತ್ರಿಕೆ ಸೋರಿಕೆಯಾದ ಕಾರಣ ಮೇ 3ರಂದು ನಡೆದ ನೀಟ್–ಯುಜಿಯನ್ನು ರದ್ದುಗೊಳಿಸಲಾಗಿತ್ತು. ಜೂನ್ 21ರಂದು ಮರು ಪರೀಕ್ಷೆ ನಡೆಸಲು ರಾಷ್ಟ್ರೀಯ ಪರೀಕ್ಷಾ ಪ್ರಾಧಿಕಾರ (ಎನ್ಟಿಎ) ತೀರ್ಮಾನಿಸಿದೆ.

# ಶ್ರೀನಿವಾಸ್ ಮೂರ್ತಿಗೆ ಜೆಡಿಎಸ್ ಬುಲಾವ್ ವಿಚಾರ ಎಚ್‌ಡಿಕೆ ಒಪ್ಪಿಗೆ

**ಬೆಂಗಳೂರು ಮೇ 24:** ಬಿಜೆಪಿ ನಾಯಕ ಅಖಂಡ ಶ್ರೀನಿವಾಸಮೂರ್ತಿ ಮತ್ತೆ ಜೆಡಿಎಸ್ ಸೇರ್ಪಡೆಗೊಳ್ಳುತ್ತಿದ್ದಾರೆಂಬ ಮಾತುಗಳು ಕೇಳಿ ಬಂದಿದ್ದು, ಇದು ರಾಜಕೀಯ ವಲಯದಲ್ಲಿ ಕುತೂಹಲ ಮೂಡಿಸಿವೆ.ಕೇಂದ್ರ ಸಚಿವ ಹಾಗೂ ಜೆಡಿಎಸ್ ನಾಯಕ ಎಚ್.ಡಿ.ಕುಮಾರಸ್ವಾಮಿಯವರು ಇತ್ತೀಚೆಗೆ ಶ್ರೀನಿವಾಸ್ ಮೂರ್ತಿ ನಿವಾಸಕ್ಕೆ ಭೇಟಿ ನೀಡಿ ಪಕ್ಷಕ್ಕೆ ಮರಳುವಂತೆ ಆಹ್ವಾನ ನೀಡಿದ್ದಾರೆ ಎನ್ನಲಾಗಿದೆ.

ಈ ಕುರಿತು ಪ್ರತಿಕ್ರಿಯಿಸಿದ ಶ್ರೀನಿವಾಸ್ ಮೂರ್ತಿ, ಕುಮಾರಸ್ವಾಮಿ ಭೇಟಿ ನೀಡಿದ್ದು ಹಾಗೂ ಜೆಡಿಎಸ್ ಸೇರುವಂತೆ ಆಹ್ವಾನಿಸಿರುವುದು ನಿಜ ಎಂದು ದೃಢಪಡಿಸಿದ್ದಾರೆ.

ಆದರೆ ಇನ್ನೂ ಯಾವುದೇ ಅಂತಿಮ ನಿರ್ಧಾರ ಕೈಗೊಂಡಿಲ್ಲ ಎಂದು ತಿಳಿಸಿದ್ದಾರೆ. ಮುಂದಿನ ತಿಂಗಳು ನಿರ್ಧಾರ ತೆಗೆದುಕೊಳ್ಳುತ್ತೇನೆ ಎಂದು ಹೇಳಿದ್ದಾರೆ. 2013ರಲ್ಲಿ ಜೆಡಿಎಸ್ ಮೂಲಕ ರಾಜಕೀಯ ಪ್ರವೇಶಿಸಿದ್ದ ಶ್ರೀನಿವಾಸ್‌ಮೂರ್ತಿ ನಂತರ ಪಕ್ಷ ತೊರೆದು ಕಾಂಗ್ರೆಸ್ ಸೇರಿದ್ದರು.

# ಆರ್ಯಭಟ ಅಂತಾರಾಷ್ಟ್ರೀಯ ಪ್ರಶಸ್ತಿಗೆ ಭಾಜನರಾದ ಚೆಕ್ ಗಣರಾಜ್ಯದ ಗೌರವ ರಾಯಭಾರಿ ಪುಷ್ಪಕ್ ಪ್ರಕಾಶ್

**ಬೆಂಗಳೂರು, ಮೇ.24:** ಪುಷ್ಪಕ್ ಏರೋಸ್ಪೇಸ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಸಂಸ್ಥೆಯ ಸಂಸ್ಥಾಪಕರು ಹಾಗೂ ವ್ಯವಸ್ಥಾಪಕ ನಿರ್ದೇಶಕರಾದ ಪುಷ್ಪಕ್ ಪ್ರಕಾಶ್ ಅವರಿಗೆ ಪ್ರತಿಷ್ಠಿತ ಆರ್ಯಭಟ ಅಂತಾರಾಷ್ಟ್ರೀಯ ಪ್ರಶಸ್ತಿ 2026ಗೆ ಭಾಜನರಾಗಿದ್ದಾರೆ. ?ಉದ್ಯಮಶೀಲತೆ ಮತ್ತು ಅಂತಾರಾಷ್ಟ್ರೀಯ ಸಂಬಂಧಗಳು? ವಿಭಾಗದಲ್ಲಿ ಸಲ್ಲಿಸಿದ ಗಣನೀಯ ಸೇವೆಯನ್ನು ಪರಿಗಣಿಸಿ ಪ್ರಶಸ್ತಿ ನೀಡಿ ಗೌರವಿಸಲಾಗಿದೆ. ಪುಷ್ಪಕ್ ಪ್ರಕಾಶ್ ಅವರು ಚೆಕ್ ಗಣರಾಜ್ಯದ ಗೌರವ ರಾಯಭಾರಿಯಾಗಿ ಭಾರತ ಮತ್ತು ಚೆಕ್ ಗಣರಾಜ್ಯ ಸೇರಿದಂತೆ ಹಲವು ದೇಶಗಳ ನಡುವೆ ಬಲವಾದ ಅಂತಾರಾಷ್ಟ್ರೀಯ ಸಂಬಂಧಗಳನ್ನು ಬೆಳೆಸುವಲ್ಲಿ ಪ್ರಮುಖ ಪಾತ್ರವಹಿಸಿದ್ದಾರೆ. ಅವರ ಪ್ರಯತ್ನಗಳು ಕೈಗಾರಿಕಾ, ಸಾಂಸ್ಕೃತಿಕ ಮತ್ತು ವ್ಯಾಪಾರ ವಲಯದ ಸಹಕಾರವನ್ನು ವೃದ್ಧಿಸುವಲ್ಲಿ ಮಹತ್ವದ ಪಾತ್ರವಹಿಸಿದ್ದಾರೆ.

ರವೀಂದ್ರ ಕಲಾಕ್ಷೇತ್ರದಲ್ಲಿ ಆಯೋಜಿಸಲಾದ ಸಮಾರಂಭದಲ್ಲಿ ನಿವೃತ್ತ ನ್ಯಾಯಮೂರ್ತಿ ರಾಜೇಂದ್ರ ಬಾದಾಮಿಕರ್, ದೂರದರ್ಶನದ ನಿವೃತ್ತ ಹೆಚ್ಚುವರಿ ಮಹಾ ನಿರ್ದೇಶಕರಾದ ನಾಡೋಜ ಡಾ. ಮಹೇಶ್ ಜೋಶಿ ಅವರು ಪ್ರಶಸ್ತಿ ಪ್ರದಾನ ಮಾಡಿದರು.

ದೇಶದ ಏರೋಸ್ಪೇಸ್ ಮತ್ತು ರಕ್ಷಣಾ



ತಯಾರಿಕಾ ಕ್ಷೇತ್ರಕ್ಕೆ, ನಿರ್ದಿಷ್ಟವಾಗಿ ಅಂತರಿಕ್ಷ ಮತ್ತು ಕಾರ್ಯತಂತ್ರ ಯೋಜನೆಗಳಿಗೆ ಪುಷ್ಪಕ್ ಪ್ರಕಾಶ್ ಅವರು ನಿರಂತರ ಕೊಡುಗೆ ನೀಡಿದ್ದಾರೆ. ಪುಷ್ಪಕರ್ ಏರೋಸ್ಪೇಸ್ ಅಂಡ್ ಡಿಫೆನ್ಸ್ ಸಂಸ್ಥೆ ತನ್ನ ಯಶಸ್ವೀ 35ನೇ ವರ್ಷದ ಸಂಭ್ರಮವನ್ನು ಆಚರಿಸುತ್ತಿರುವ ಸಂದರ್ಭದಲ್ಲಿ ಈ ಮನ್ನಣೆ ದೊರೆತಿದೆ.

ಕಳೆದ ಹಲವು ದಶಕಗಳಿಂದ ಸಂಸ್ಥೆಯು ಚಂದ್ರಯಾನ, ಮಂಗಳಯಾನ, ಆದಿತ್ಯ–ಎಲ್1, ಕಾರ್ಟೋಸ್ಯಾಟ್, ಜಿ.ಎಸ್.ಎ.ಟಿ ಹಾಗೂ ಐ.ಆರ್.ಎನ್.ಎಸ್.ಎಸ್ ಸೇರಿದಂತೆ ಇಸ್ರೋ ಮತ್ತು ರಕ್ಷಣಾ ಯೋಜನೆಗಳಿಗೆ ತನ್ನ ಕೊಡುಗೆಯನ್ನು ನೀಡುತ್ತಿದೆ. ಪುಷ್ಪಕ್ ಸಂಸ್ಥೆಯು ಪಿ.ಎಸ್.ಎಲ್.ವಿ, ಜಿ.ಎಸ್.ಎಲ್.ವಿ ಹಾಗೂ ಎಲ್.ವಿ.ಎಂ3 [ಮಾರ್ಕ್–3] ಉಡಾವಣಾ ವಾಹನಗಳ ಕಾರ್ಯಕ್ರಮಗಳಲ್ಲಿ ಸಹ ಮಹತ್ವದ ಕೊಡುಗೆ ನೀಡಿದೆ. ಮುಂದಿನ ಭಾರತದ ಮಹತ್ವಾಕಾಂಕ್ಷಿ ಗಗನಯಾನ ಮಿಷನ್ನಲ್ಲಿಯೂ ಸಂಸ್ಥೆ ತನ್ನ ಪಾತ್ರವನ್ನು ನಿರ್ವಹಿಸುತ್ತಿದೆ. ದೇಶ ನಿರ್ಮಾಣಕ್ಕೆ ಸಂಬಂಧಿಸಿದ ಅಂತರಿಕ್ಷ ಯೋಜನೆಗಳ ಕೊಡುಗೆಗಾಗಿ ಪುಷ್ಪಕ್ ಸಂಸ್ಥೆಗೆ ಇಸ್ರೋದಿಂದ ಹಲವು ಬಾರಿ ಗೌರವ ಸ್ವೀಕರಿಸಿದೆ.

ಪ್ರಶಸ್ತಿ ಸ್ವೀಕರಿಸಿದ ಬಳಿಕ ಮಾತನಾಡಿದ ಪುಷ್ಪಕ್ ಪ್ರಕಾಶ್, ಈ ಪ್ರಶಸ್ತಿ ಇನ್ನಷ್ಟು ನಿಷ್ಠೆ, ಹೊಸತನ ಮತ್ತು ಗುಣಮಟ್ಟದೊಂದಿಗೆ ಏರೋಸ್ಪೇಸ್, ರಕ್ಷಣಾ ಮತ್ತು ಅಂತರಿಕ್ಷ ಕಾರ್ಯಕ್ರಮಗಳಿಗೆ ಸೇವೆ ಸಲ್ಲಿಸಲು ಪ್ರೇರಣೆ ದೊರೆತಿದೆ. ಬೆಂಗಳೂರು ವಿಶ್ವದ ಅಗ್ರಗಣ್ಯ ನಗರವಾಗಿದ್ದು, ಬೆಂಗಳೂರು, ಕರ್ನಾಟಕದ ಕೀರ್ತಿಯನ್ನು ಹೆಚ್ಚಿಸಲು ಶ್ರಮಿಸುವುದಾಗಿ ಹೇಳಿದರು.

# ಡಿಜಿಟಲ್ ಅರೆಸ್ಟ್: ಬೆಂಗಳೂರಿನ ವೃದ್ಧ ಮಹಿಳೆಗೆ 24 ಕೋಟಿ ವಂಚನೆ

**ಬೆಂಗಳೂರು, ಮೇ.24:** ಹಣ ವರ್ಗಾವಣೆಯಲ್ಲಿ ಅಕ್ರಮ ನಡೆದಿದೆ ಎಂದು ಮಹಿಳೆಯೊಬ್ಬರನ್ನು ಡಿಜಿಟಲ್ ಅರೆಸ್ಟ್ ಮಾಡಿದ್ದ ಸೈಬರ್ ವಂಚಕರ ತಂಡ ಸುಮಾರು 24 ಕೋಟಿ ರೂ. ದೋಚಿರುವ ಆಘಾತಕಾರಿ ಸಂಗತಿ ನಗರದಲ್ಲಿ ನಡೆದಿದೆ.

ಇಷ್ಟೊಂದು ದೊಡ್ಡ ಮೊತ್ತದ ಸೈಬರ್ ವಂಚನೆ ಬೆಂಗಳೂರಿನಲ್ಲಿ ನಡೆದಿರುವುದು ಜನರನ್ನು ಹಾಗೂ ಪೊಲೀಸರನ್ನು ಬೆಚ್ಚಿ ಬೀಳಿಸಿದೆ. ಶಿವಾಜಿನಗರದ ನಿವಾಸಿಯಾದ ಲಕ್ಷ್ಮೀ ರಾಮಮೂರ್ತಿ ಎಂಬುವವರು ತಮ ಆಸ್ತಿಗಳನ್ನು ಮಾರಿದ ಹಿನ್ನೆಲೆಯಲ್ಲಿ ಅವರು ಕೋಟ್ಯಾಂತರ ರೂ.ಗಳನ್ನು ಬ್ಯಾಂಕ್ನಲ್ಲಿ ಇರಿಸಿದ್ದರು.

ಇದರ ಮಾಹಿತಿ ಅರಿತ ಸೈಬರ್ ವಂಚಕರು ಅವರಿಗೆ ಕಳೆದ ಜನವರಿಯಲ್ಲಿ ದೂರವಾಣಿ ಕರೆ ಮಾಡಿ ನೀವು ಅಕ್ರಮವಾಗಿ ಹಣ ವರ್ಗಾವಣೆ ದಂಧೆಯಲ್ಲಿ ತೊಡಗಿರುವ ಬಗ್ಗೆ ಖಚಿತ ಮಾಹಿತಿ ಸಿಕ್ಕಿದೆ ಎಂದು ಇಡಿ ಅಧಿಕಾರಿಗಳ ಹೆಸರಿನಲ್ಲಿ ಬೆದರಿಸಿದ್ದಾರೆ.

ನಂತರ ನಿಮನ್ನು ಬಂಧಿಸುತ್ತೇವೆ ಎಂದು ಅವರಲ್ಲಿ ಭಯ ಹುಟ್ಟಿಸಿ ಜನವರಿಯಿಂದ ಮೇ ವರೆಗೆ ಡಿಜಿಟಲ್ ಅರೆಸ್ಟ್ ಮಾಡಿ ಹಂತ ಹಂತವಾಗಿ 24 ಕೋಟಿ ರೂ.ಗಳನ್ನು ಸೈಬರ್ ವಂಚಕರು ದೋಚಿದ್ದಾರೆ. ಇಷ್ಟಕ್ಕೆ ಮುಗಿಯದೇ ಸೈಬರ್ ವಂಚಕರು ಇನ್ನಷ್ಟು ಹಣ ಕೇಳಿದ್ದಾಗ ವೃದ್ಧ ಮಹಿಳೆ ತಮ ಬಳಿಯಿದ್ದ 1.30 ಕೆಜಿ ಚಿನ್ನದ ಒಡವೆಗಳನ್ನು ಕಂಟೋನೆಂಟ್ ಬ್ರಾಂಚ್ನ ಐಸಿಐಸಿಐ ಬ್ಯಾಂಕ್ಗೆ ತಂದಾಗ ಅನುಮಾನಗೊಂಡ ಮ್ಯಾನೇಜರ್ ಅವರನ್ನು ವಿಚಾರಿಸಿದ್ದಾರೆ. ನಂತರ ಅವರ ಮುಖದಲ್ಲಿದ್ದ ಭೀತಿಯನ್ನು ನೋಡಿ ಕೂಡಲೇ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ.

ಪೊಲೀಸ್ ತಂಡ ಅಲ್ಲಿಗೆ ಬಂದು ವಿಚಾರಿಸಿದ್ದಾಗ ಆತಂಕದಲ್ಲಿದ್ದದ್ದನ್ನು ನೋಡಿ ಅವರನ್ನು ಸಮಾಧಾನ ಪಡಿಸಿ ಅವರ ಬಗ್ಗೆ ವಿಚಾರಿಸಿದ್ದಾಗ ಡಿಜಿಟಲ್ ಅರೆಸ್ಟ್ ಆಗಿರುವ ಬಗ್ಗೆ ಹೇಳಿದ್ದಾಗ ಒಮ್ಮೆ ಅಧಿಕಾರಿಗಳು ಕೂಡ ದಿಗ್ಭ್ರಮೆಗೊಂಡಿದ್ದಾರೆ. ನಂತರ ಮಹಿಳೆಯ ಮಕ್ಕಳ ಬಗ್ಗೆ ವಿಚಾರಿಸಿದ್ದಾಗ ಅವರು ವಿದೇಶದಲ್ಲಿರುವುದು ಗೊತ್ತಾಗಿದೆ. ತಕ್ಷಣ ಕಾರ್ಯಪ್ರವೃತ್ತರಾದ ಸಿಸಿಬಿ ಸೈಬರ್ ಠಾಣೆ ಪೊಲೀಸರು ಪ್ರಕರಣ ದಾಖಲಿಸಿ ಸೈಬರ್ ವಂಚಕರಿಗೆ ಬ್ಯಾಂಕ್ ಅಕೌಂಟ್ ಮೂಲಕ ವರ್ಗಾವಣೆ ಮಾಡಿದ್ದ ಮಾಹಿತಿಯನ್ನು ಕಲೆ ಹಾಕಿ ಪರಿಶೀಲಿಸಿದಾಗ ಅಲ್ಲಿ ಕೇವಲ 60 ಲಕ್ಷ ಇರುವುದು ಗೊತ್ತಾಗಿದೆ. ಪ್ರಸ್ತುತ ಕ್ಷಿಪ್ರ ಕಾರ್ಯಾಚರಣೆ ನಡೆಸಿರುವ ಪೊಲೀಸರ ತಂಡ ಮುಂಬೈ, ಅಲಹಾಬಾದ್, ದೆಹಲಿ ಮೂಲದ ಆರೋಪಿಗಳನ್ನು ಬಂಧಿಸಿದ್ದಾರೆ.

ಸೈಬರ್ ವಂಚಕರು ತಿಳಿಸಿದ್ದ ಸುಮಾರು 22 ಚಾಲ್ತಿ ಖಾತೆಗಳಿಗೆ ಹಣ ವರ್ಗಾವಣೆ ಮಾಡಲಾಗಿದೆಯೆಂದು ಗೊತ್ತಾಗಿದೆ. ಪ್ರಸ್ತುತ ಗೌರವ ಕುಮಾರ್, ಓಂ ಪ್ರಕಾಶ್, ರಜಪೂತ್ ಸೇರಿದಂತೆ ಐವರನ್ನು ಬಂಧಿಸಿ ತನಿಖೆ ಮುಂದುವರಿಸಲಾಗಿದೆಯೆಂದು ಅಧಿಕಾರಿಗಳು ತಿಳಿಸಿದ್ದಾರೆ. ಇನ್ನು ಹಲವರು ಈ ಪ್ರಕರಣದಲ್ಲಿ ಭಾಗಿಯಾಗಿದ್ದು, ಅವರು ದೋಚಿರುವ ಕೋಟ್ಯಾಂತರ ರೂಪಾಯಿ ಹಣವನ್ನು ಪತ್ತೆಹಚ್ಚಲು ವ್ಯಾಪಕ ಕಾರ್ಯಾಚರಣೆಯನ್ನು ಆರಂಭಿಸಲಾಗಿದೆ ಯೆಂದು ಹೇಳಿದ್ದಾರೆ.

## ಅಭಿವೃದ್ಧಿ ಕಾಮಗಾರಿಗಳ ವೇಗ ಹೆಚ್ಚಿಸಲು ಒತ್ತಾಯ



**ರಾಯಚೂರು, ಮೇ. 24:** ಜಿಲ್ಲೆಯಲ್ಲಿ ಈಗಾಗಲೇ ನಡೆದಿರುವ ಕಾಮಗಾರಿಗಳ ವೇಗ ಹೆಚ್ಚಿಸಲು ಕ್ರಮ ಕೈಗೊಳ್ಳಬೇಕು. ಹಲವು ವರ್ಷಗಳಿಂದ ನನೆಗುದಿಗೆ ಬಿದ್ದಿರುವ ಯೋಜನೆಗಳಿಗೂ ಮರುಜೀವ ನೀಡಬೇಕು ಎಂದು ರಾಯಚೂರು ಜಿಲ್ಲಾ ವಾಣಿಜ್ಯೋದ್ಯಮ ಸಂಘ ಒತ್ತಾಯಿಸಿದೆ. ಸಂಘದ ಅಧ್ಯಕ್ಷ ಎಸ್.ಕಮಲ್‌ಕುಮಾರ ನೇತೃತ್ವದ ನಿಯೋಗ ಜಿಲ್ಲಾಧಿಕಾರಿ ಪೂವಿತಾ ಎಸ್.ಅವರನ್ನು ಭೇಟಿ ಮಾಡಿ, ಮನವಿಪತ್ರ ಸಲ್ಲಿಸಿತು.

ವರ್ತುಲ ರಸ್ತೆ, ಶಕ್ತಿನಗರ ಸಮೀಪದ ಕೃಷ್ಣಾ ಸೇತುವೆ, ಷಟ್ಪಥ ರಸ್ತೆ, ಜಿಲ್ಲೆಯಲ್ಲಿನ ರಾಷ್ಟ್ರೀಯ ಹೆದ್ದಾರಿ ಯೋಜನೆಯ ಕಾಮಗಾರಿಗಳ ವೇಗ ಹೆಚ್ಚಿಸಬೇಕು. ಗ್ರೀನ್‌ಫಿಲ್ಡ್ ವಿಮಾನ ನಿಲ್ದಾಣ ಕಾಮಗಾರಿ ತ್ವರಿತಗೊಳಿಸಬೇಕು. ಮೆಗಾ ಲಾಜಿಸ್ಟಿಕ್ಸ್ ಪಾರ್ಕ್ ಸ್ಥಾಪನೆ ಮಾಡಬೇಕು. ರೈಲ್ವೆ ಸರಕುಗಳ ಶೆಡ್ ಸ್ಥಳಾಂತರ ಮಾಡಬೇಕು. ಕೈಗಾರಿಗಳಿಗೆ ಭೂ ಸ್ವಾಧೀನ, ಗದ್ವಾಲ್ ಮತ್ತು ಮಂಚಲಾ ಪುರದಲ್ಲಿ ಕೈಗಾರಿಕಾ ಸೌಲಭ್ಯಗಳ ಉನ್ನತೀಕರಣ ಮಾಡಬೇಕು ಎಂದು ಮನವಿ ಮಾಡಿದರು.

ಇ-ಖಾತಾ, ವ್ಯಾಪಾರ ಪರವಾನಗಿ, ಕಟ್ಟಡ ಅನುಮತಿ ಕೊಡಬೇಕು. ಮರ್ಚೆಡ್ ಮತ್ತು ಮಂಚಲಾಪುರ ಕೆರೆ ಪ್ರದೇಶದಲ್ಲಿ ಪಕ್ಷಿಧಾಮ ಸ್ಥಾಪನೆ ಮಾಡಬೇಕು. ಜಿಲ್ಲಾ ಕೇಂದ್ರದಲ್ಲಿ ಕೌಶಲ ಅಭಿವೃದ್ಧಿ ಕೇಂದ್ರ ಸ್ಥಾಪನೆ ಮಾಡಬೇಕು. ರಾಯಚೂರಿನಲ್ಲಿ ಮೆಗಾ ಜವಳಿ ಪಾರ್ಕ್ ನಿರ್ಮಾಣ ಮಾಡಬೇಕು. ಸಿಂಧನೂರಿನಿಂದ ರಾಯಚೂರು ರೈಲುಮಾರ್ಗ ಶೀಘ್ರದಲ್ಲೇ ಪೂರ್ಣಗೊಳ್ಳಲಿದ್ದು, ಅದಕ್ಕೆ ಪೂರಕವಾಗಿ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಸಂಘದ ಕಾರ್ಯದರ್ಶಿ ಜಂಬಣ್ಣ.ವೈ, ಮಾಜಿ ಅಧ್ಯಕ್ಷ ಮೈಲಾಪುರ ಎನ್.ಮೂರ್ತಿ, ಹಿರಿಯ ಉಪಾಧ್ಯಕ್ಷೆ ಸಾವಿತ್ರಿ ಪುರುಷೋತ್ತಮ, ಕಾರ್ಯಕಾರಿ ಸಮಿತಿ ಸದಸ್ಯ ಅಂಬಟ್ಟಿ ವೆಂಕಟರಾಜ್ ಗುಪ್ತ, ಮುರಾರಿಲಾಲ್ ಅಗರ್ವಾಲ್, ವಸಂತರಾವ್ ಪತಂಗೆ ಹಾಗೂ ಆರ್.ನಾರಾಯಣ ರಾವ್ ಉಪಸ್ಥಿತರಿದ್ದರು.

# ಮುಂಬರುವ ಚುನಾವಣೆಯಲ್ಲಿ ಬಿಜೆಪಿ ಗೆಲುವಿಗೆ ರಾಷ್ಟ್ರೀಯ ಅಧ್ಯಕ್ಷರಿಂದ ಸಲಹೆ: ಸಿ.ಟಿ.ರವಿ

ಚಿಕ್ಕಮಗಳೂರು,ಮೇ.24: ಮುಂಬರುವ ಚುನಾವಣೆಗಳಲ್ಲಿ ಬಿಜೆಪಿ ಅಧಿಕಾರಕ್ಕೆ ತರುವ ನಿಟ್ಟಿನಲ್ಲಿ ವಹಿಸಬೇಕಾದ ಕ್ರಮಗಳ ಕುರಿತು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರಾದ ನಿತಿನ್ ನವೀನ್ ಅವರು ಸಲಹೆ ಮತ್ತು ಸೂಚನೆಗಳನ್ನು ನೀಡಿದ್ದಾರೆ ಎಂದು ಮಾಜಿ ಸಚಿವ ಸಿ.ಟಿ.ರವಿ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಈಗ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ನ ವೈಫಲ್ಯಗಳನ್ನು ಜನರಿಗೆ ಎತ್ತಿತೋರಿಸಿ ಬಿಜೆಪಿ ವಿಶ್ವಾಸಾರ್ಹ ಪಕ್ಷ ಎಂಬುದನ್ನು ಮನವರಿಕೆ ಮಾಡಿಕೊಡಲು ಎಲ್ಲರೂ ಸಂಘಟನಾತ್ಮಕವಾಗಿ ಶ್ರಮಿಸಬೇಕು. ಪಕ್ಷಕ್ಕಾಗಿ ಕಟಿಬದ್ಧರಾಗಿ ದುಡಿಯಬೇಕು ಎಂದು ರಾಷ್ಟ್ರೀಯ ಅಧ್ಯಕ್ಷರು ಸಲಹೆ ನೀಡಿದರು ಎಂದು ವಿವರ ನೀಡಿದರು. ನಿತಿನ್ ನವೀನ್ ಅವರು ಅಧ್ಯಕ್ಷರಾದ ನಂತರ ಕರ್ನಾಟಕಕ್ಕೆ ಅಧಿಕೃತ ಭೇಟಿ ನೀಡಿದ್ದಾರೆ. ಪಕ್ಷದ ಸಂಸದರು, ಶಾಸಕರು, ಜಿಲ್ಲಾಧ್ಯಕ್ಷರ ಮಟ್ಟದ ಮೇಲಿನವರೊಂದಿಗೆ ಸಂವಾದ ನಡೆಸಿದರು. ಪಕ್ಷದ ಪರಿಶ್ರಮದಿಂದಾಗಿ ಇಂದು 22ಕ್ಕೂ ಹೆಚ್ಚು ರಾಜ್ಯಗಳಲ್ಲಿ ಬಿಜೆಪಿ ಅಧಿಕಾರದಲ್ಲಿದೆ. 400ಕ್ಕೂ ಹೆಚ್ಚು ಸಂಸದರಿದ್ದಾರೆ, 2000 ಕ್ಕೂ ಹೆಚ್ಚು ಶಾಸಕರಿದ್ದಾರೆ. ಇದು ಪಕ್ಷದ ಮೇಲೆ ಜನರು ಇಟ್ಟು ವಿಶ್ವಾಸದಿಂದ ಸಾಧ್ಯವಾಗಿದೆ. ಇದೇ ನಂಬಿಕೆಯನ್ನು ಮುಂದಿನ ಚುನಾವಣೆಗಳಲ್ಲಿ ಉಳಿಸಿಕೊಳ್ಳಬೇಕು. ಪ್ರತಿಯೊಬ್ಬ ಮುಖಂಡರು, ಶಾಸಕರು ಕಾರ್ಯಕರ್ತರೊಂದಿಗೆ ಆತ್ಮೀಯ ಸಂಬಂಧ ಇಟ್ಟುಕೊಳ್ಳಬೇಕು. ಜನರೊಟ್ಟಿಗೆ ಸಂವಾದ ನಡೆಸಬೇಕು, ಜನಪರ ಕಾರ್ಯಗಳ ಮೂಲಕವೇ ಗೆಲ್ಲಬೇಕು, ಜನಪರ ಹೋರಾಟಗಳ ಮೂಲಕ ಸಮಸ್ಯೆಗಳ ನಿವಾರಣೆಗೆ ಪರಿಹಾರ ಕೊಡಬೇಕು ಎಂಬ ಮಾತನ್ನು ಹೇಳಿದರು ಎಂದು ತಿಳಿಸಿದರು.



ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ಜನರಿಗೆ ಯಾವ ವಿಶ್ವಾಸವನ್ನು ಮೂಡಿಸಿ ಹೇಗೆ ಅಧಿಕಾರಕ್ಕೆ ಬಂದಿತ್ತೋ ಆ ವಿಶ್ವಾಸವನ್ನು ಉಳಿಸಿಕೊಳ್ಳಲು ವಿಫಲ ವಾಗಿದೆ. ಹೆಚ್ಚಿನ ಸಚಿವರ ಮೇಲೆ ಆರೋಪಗಳಿವೆ, ಮುಖ್ಯಮಂತ್ರಿಗಳು ಭ್ರಷ್ಟಾಚಾರ ಆರೋಪ ದಿಂದ ಮುಕ್ತರಾಗಿಲ್ಲ. ಜನರ ಬದುಕನ್ನು ಹಸನು ಮಾಡುವ ಭರವಸೆ ಕೊಟ್ಟ ಕಾಂಗ್ರೆಸ್ ಬೆಲೆ ಏರಿಕೆ ಮೂಲಕ ಜನ ಸಾಮಾನ್ಯರ ಬದುಕನ್ನು ದುಸ್ತರ ಮಾಡಿದೆ. ಅಗತ್ಯ ವಸ್ತುಗಳ ಬೆಲೆ ಏರಿಕೆ ಹಿಂದೆ ಕಾಂಗ್ರೆಸ್ ನೀತಿ ಇದೆ. ಕೇವಲ ಗ್ಯಾರಂಟಿ ಪ್ರಚಾರದಲ್ಲಿ ಸರ್ಕಾರ ತೊಡಗಿದೆ. ಆದರೆ ಜನರ ಬದುಕಿಗೆ ಗ್ಯಾರಂಟಿ ಇಲ್ಲದಾಗಿದೆ. ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ. ಯುವಕರು ಹತಾಶರಾಗಿದ್ದಾರೆ. ಅತಿ ಹೆಚ್ಚು ಮಹಿಳೆಯರ ನಾಪತ್ತೆ ಪ್ರಕರಣ ಆಗಿದೆ. ಹೀಗೆ ಎಲ್ಲದರಲ್ಲೂ ಕಾಂಗ್ರೆಸ್ ವಿಫಲವಾಗಿದೆ. ಇದೊಂದೇ ಬಿಜೆಪಿ ಅಧಿಕಾರಕ್ಕೆ ಬರಲು ಸಹಾಯ ಮಾಡದು. ಮುಂದೆ ನಾವೇ ಅಧಿಕಾರಕ್ಕೆ ಬರುವ ಭ್ರಮೆಯಲ್ಲಿ ಇರಬೇಡಿ ಎಂದು ಎಚ್ಚರಿಕೆ ನೀಡಿದರು ಎಂದು ನುಡಿದರು.

ತಮಿಳುನಾಡಿನಲ್ಲಿ ಡಿಎಂಕೆ ವೈಫಲ್ಯ ಎದ್ದು ಕಾಣುತ್ತಿತ್ತು. ಇದೊಂದೇ ಎಐಡಿಎಡಿಎಂಕೆ ಅಧಿಕಾರಕ್ಕೆ ಬರಲು ಸಹಾಯ ಮಾಡಬಹುದು ಎಂದು ಭಾವಿಸಲಾಗಿತ್ತು. ಆದರೆ ಟಿವಿಕೆ ಪಕ್ಷ ಮಧ್ಯೆ ಬಂದು ಅಧಿಕಾರ ಪಡೆಯಿತು. ಕರ್ನಾಟಕದಲ್ಲೂ ಬಿಜೆಪಿ ನಾಯಕರು ಮುಂದೆ ನಮ್ಮದೇ ಅಧಿಕಾರ ಎಂದು ಸುಮ್ಮನೆ ಕೂರಬೇಡಿ. ದೇಶದಲ್ಲಿ ಕಾಂಗ್ರೆಸ್‌ಗೆ ಮೋದಿ ಅವರು ಒಳ್ಳೆಯ ಪರ್ಯಾಯ ಹೇಗೆ ಕೊಟ್ಟರೋ ಅದೇ ರೀತಿ ರಾಜ್ಯದಲ್ಲಿ ಕಾಂಗ್ರೆಸ್ಗೆ ಬಿಜೆಪಿ ಉತ್ತಮ ಪರ್ಯಾಯ ಎಂದು ಜನ ಭಾವಿಸುವ ರೀತಿ ಅಧಿಕಾರಕ್ಕೆ ಬರಬೇಕು ಎಂದು ಹೇಳಿದರು ಎಂದರು.

ಕಾಂಗ್ರೆಸ್ ವೈಫಲ್ಯ ಇಟ್ಟುಕೊಂಡು ನಿರಂತರವಾಗಿ ಹೋರಾಟದ ಮೂಲಕ ತಂಡವಾಗಿ ಕೆಲಸ ಮಾಡಬೇಕು. ಪ್ರತಿ ವಿಧಾನಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ನ ಮೂರು ವರ್ಷಗಳ ಆಡಳಿತ ವೈಫಲ್ಯ ಕುರಿತು ಆರೋಪಪಟ್ಟಿ ತಯಾರಿಸಿ ಜನರ ಮುಂದಿಡಲು ಯೋಜನೆ ರೂಪಿಸಿ. ಕರ್ನಾಟಕವು ಕೇವಲ ದಕ್ಷಿಣ ಭಾರತದಲ್ಲಿ ಮಾತ್ರವಲ್ಲ ದೇಶದಲ್ಲೇ ಬಲವಾದ ಸಂಘಟನೆ ಹೊಂದಿರುವ ರಾಜ್ಯವಾಗಿದೆ. ಇಲ್ಲಿ ಜನಪರ ಹೋರಾಟ ಮಾಡಿದರೆ ಜನರೇ ಅಧಿಕಾರಕ್ಕೆ ಬರುವ ಶಕ್ತಿಯನ್ನು ಕೊಡುತ್ತಾರೆ ಎಂಬುದನ್ನು ಅರಿಯಿರಿ. ವ್ಯಕ್ತಿ ಹಿತಕ್ಕಾಗಿ ಕೆಲಸ ಮಾಡದೇ ಜನರ ಮತ್ತು ಪಕ್ಷದ ಹಿತ ರಕ್ಷಿಸುವ ಕೆಲಸ ಮಾಡಿ. ರಾಜ್ಯದಲ್ಲಿನ ಅರಾಜಕ ಶಕ್ತಿ ಬಗ್ಗೆಯೂ ಎಚ್ಚರ ವಹಿಸಿ ಎಂದು ಸಲಹೆ ನೀಡಿದರು ಎಂದು ಹೇಳಿದರು. ಕರ್ನಾಟಕದ ಅಸ್ಮಿತೆ ಜೊತೆಗೆ ರಾಷ್ಟ್ರದ ಗೌರವ ಉಳಿಸಿ ನಾವು ಕೆಲಸ ಮಾಡಬೇಕಾಗಿದೆ. ದೇಶದ ಸಮಗ್ರತೆಗೆ ಅಡ್ಡಿಯಾಗದಂತೆ ಎಲ್ಲಾ ರಾಜ್ಯಗಳಲ್ಲಿ ಪ್ರಾದೇಶಿಕ ಅಸ್ಮಿತೆ ಉಳಿಸಿಕೊಂಡು ರಾಷ್ಟ್ರದ ಸಮಗ್ರತೆ ಕಾಪಾಡಿ ಎಂದು ಸಲಹೆ ನೀಡಿದ್ದಾಗಿ ತಿಳಿಸಿದರು.

ಮುಂದಿನ ಮೂರು ದಿನಗಳ ಪ್ರವಾಸದ ವೇಳೆ ವಿವರವಾಗಿ ಚರ್ಚೆ ಮಾಡಲಾಗುವುದು. ವಿಧಾನ ಪರಿಷತ್, ವಿಧಾನಸಭೆ ಉಪ ಚುನಾವಣೆ, ಜಿಬಿಎ ಚುನಾವಣೆ ಕಡೆಗೆ ಗಮನಕೊಡಿ. ಗೆಲ್ಲಲು ಕಾರ್ಯಯೋಜನೆ ತಯಾರಿಸಿ. ಕೋರ್ ಕಮಿಟಿ ಈ ಬಗ್ಗೆ ಅವಲೋಕನ ಮಾಡಲಿ ಎಂದರು. ಎಸ್‌ಐಆರ್ ಸಂಬಂಧ ಕಾಂಗ್ರೆಸ್ ಸಂವಿಧಾನ ವಿರೋಧಿ ಹೇಳಿಕೆ ನೀಡುತ್ತಿದೆ. ನೆಹರು, ರಾಜೀವ್ ಗಾಂಧಿ, ಇಂದಿರಾಗಾಂಧಿ ಮತ್ತು ಮನಮೋಹನ್ ಸಿಂಗ್ ಅವರು ಎಸ್‌ಐಆರ್ ಮಾಡಿದರೆ ಸರಿ. ಆದರೆ ಬಿಜೆಪಿ ಮಾಡಿದರೆ ತಪ್ಪು ಎನ್ನುವಂತಾಗಿದೆ. ಕಾಂಗ್ರೆಸ್ಗೆ ಎಲ್ಲವನ್ನೂ ವಿರೋಧಿಸುವ ಸಿಂಡ್ರೋಮ್ ಇದೆ ಎಂದು ವ್ಯಂಗ್ಯವಾಡಿದರು.

## ಹಳ್ಳಿ ಜನರಿಗೆ ಅಲ್ಪ ಶಿಕ್ಷಣ ಸಿಗುವುದು ಸರ್ಕಾರಿ ಶಾಲೆಗಳಿಂದ: ಸರ್ಕಾರಿ ಶಾಲೆಗಳನ್ನು ಮುಚ್ಚಿ, ಹೆಬ್ಬೆಟ್ಟು ಮಾಡಲು ಹೊರಟಿದೆ ಸರ್ಕಾರ




**ಬಳ್ಳಾರಿ, ಮೇ 24.** ತಾಲೂಕಿನ ಕಮ್ಮರಚೇಡು ಪಕ್ಕದ ಮಾಳಗಡ್ಡೆ ಕ್ಯಾಂಪ್ ಸರ್ಕಾರಿ ಶಾಲೆ ಮಕ್ಕಳನ್ನು ಕೆಪಿಎಸ್ ಶಾಲೆಗೆ ಕಳುಹಿಸಲು ಒಪ್ಪಿಗೆ ಇರುವುದಿಲ್ಲ ಎಂದು ಎಐಡಿಎಸ್‌ಓ ಹಾಗೂ ಸಾರ್ವಜನಿಕ ಶಿಕ್ಷಣ ಉಳಿಸಿ ಸಮಿತಿಯ ನೇತೃತ್ವದಲ್ಲಿ ಶಾಲೆ ಮುಂದೆ "ನಮ್ಮೂರ ಶಾಲೆ ನಮ್ಮದು, ನಮ್ಮೂರಲ್ಲಿ ಉಳಿಯಲಿ" ಬ್ಯಾನರ್ ಕಟ್ಟಿ ನಮ್ಮೂರ ಶಾಲೆ ನಮ್ಮೂರಲ್ಲಿ ಉಳಿಸಬೇಕೆಂದು ಆಗ್ರಹಿಸಿ ಹೋರಾಟ ನಡೆಸಿದರು.

ಹೋರಾಟವನ್ನು ಉದ್ದೇಶಿಸಿ ಎಐಡಿಎಸ್‌ಓ ಜಿಲ್ಲಾ ಅಧ್ಯಕ್ಷರು ಕೆ ಈರಣ್ಣ ಅವರು ಮಾತನಾಡಿ... ಮಾಳಗಡ್ಡೆ ಕ್ಯಾಂಪ್ ಅನ್ನೋ ಊರಿನ ಜನರೆಲ್ಲಾ ಬಹುತೇಕ ರೈತರು. ಬೆಳಿಗ್ಗೆ ಆರು ಗಂಟೆಗೆ ಬುತ್ತಿ ಕಟ್ಟಿಕೊಂಡು ಹೊಲಗಳಿಗೆ ಕೆಲಸಕ್ಕೆ ಹೋಗಿ ಜೀವನ ಸಾಗಿಸುತ್ತಿರುವ ಸಾಮಾನ್ಯ ಜನರು. ಇಲ್ಲಿನ ಬಹಳಷ್ಟು ಜನರು ತಮ್ಮ ಹೆಸರನ್ನು ಬರೆಯಲು ಬಾರದ ಅವಿದ್ಯಾವಂತ ರೈತರು.. ಈಗಲೂ ಕೂಡ ಎಷ್ಟೋ ಜನ ಹೆಬ್ಬೆಟ್ಟು. ಇಂತಹ ಊರಿನಲ್ಲಿ ಬೆರಳೆಣಿಕೆಯಷ್ಟು ಜನ ವಿದ್ಯಾವಂತರು. ಇಲ್ಲಿ ಅಲ್ಪ ಸ್ವಲ್ಪ ಶಿಕ್ಷಣ ಸಿಗುತ್ತದೆ ಎಂದರೆ ಅದು ಸರ್ಕಾರಿ ಶಾಲೆಗಳಿಂದ ಮಾತ್ರ. ಆದರೆ ರಾಜ್ಯ ಸರಕಾರ ಕೆಪಿಎಸ್ ಮ್ಯಾಗ್ನೆಟ್ ಯೋಜನೆ ಜಾರಿಗೆ ತಂದು, ಸರ್ಕಾರಿ ಶಾಲೆ ಮುಚ್ಚಿ ಶಿಕ್ಷಣ ಬೇಕಾದರೆ ಕೆಪಿಎಸ್ ಮ್ಯಾಗ್ನೆಟ್ ಶಾಲೆಗೆ ಬನ್ನಿ ಅಂತ 40ಕ್ಕೂ ಹೆಚ್ಚು ವಿದ್ಯಾರ್ಥಿಗಳು ಓದುವ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಮುಚ್ಚುಲು ಮುಂದಾಗಿದೆ. ಈ ಊರಿನ ಶಾಲೆ ಮುಚ್ಚಿದರೆ 3-4ಕಿ.ಮೀ ದೂರ ವಿಷ್ಣೇಶ್ವರ ಕ್ಯಾಂಪ್‌ನಲ್ಲಿ ಕೆಪಿಎಸ್ ಮ್ಯಾಗ್ನೆಟ್ ಶಾಲೆಗೆ, ಸಣ್ಣ ಸಣ್ಣ ಮಕ್ಕಳು ಹೇಗೆ ಹೋಗಲು ಸಾಧ್ಯ? . ಎಲ್ಲಾ ರೈತರ ಮಕ್ಕಳು ಬೇರೆ ಬೇರೆ ಹಳ್ಳಿಗಳಿಗೆ ಹೋಗಿ ಶಿಕ್ಷಣ ಪಡೆಯಲು ಸಾಧ್ಯವಿಲ್ಲ.

ನಮ್ಮೂರ ಶಾಲೆ ನಮ್ಮೂರಲ್ಲಿ ಉಳಿಸಬೇಕೆಂದು ಊರಿನ ಗ್ರಾಮಸ್ಥರು, ಪೋಷಕರು ಅಂತರಾಳದ ಮಾತು ಆಗಿದೆ. ಆದ್ದರಿಂದ ತನ್ನ ಹಟಮಾರಿ ಧೋರಣೆ ಬಿಟ್ಟು ಸರ್ಕಾರಿ ಶಾಲೆಗಳನ್ನು ಮುಚ್ಚುವ ಕೆಪಿಎಸ್ ಮ್ಯಾಗ್ನೆಟ್ ಯೋಜನೆ ಕೈಬಿಡಲು ಆಗ್ರಹಿಸಿದರು.

## ತಂತ್ರಜ್ಞಾನ ಬಳಕೆಗೆ ವಿವೇಚನೆ ಅಗತ್ಯ: ಐಪಿಎಸ್ ಶಾಲೂ



**ಕಲಬುರಗಿ, ಮೇ. 24:** ತಂತ್ರಜ್ಞಾನವು ಎರಡು ಅಲಗಿನ ಖಡ್ಗವಿದ್ದಂತೆ. ಅದರಿಂದ ಆಗುವ ಪ್ರಯೋಜನಗಳು ಹಾಗೂ ದುಷ್ಪರಿಣಾಮಗಳ ಅರಿವು ಹೊಂದಿರಬೇಕು. ತಂತ್ರಜ್ಞಾನವನ್ನು ವಿವೇಚನೆಯಿಂದ ಬಳಸಬೇಕು ಎಂದು ಪೊಲೀಸ್ ಕಮಿಷನರೇಟ್‌ನ ಡಿಸಿಪಿ ಐಪಿಎಸ್ ಶಾಲೂ ಹೇಳಿದರು.

ನಗರದ ಪಿಡಿಎ ಸ್ಯಾಕ್ ಸಭಾಂಗಣದಲ್ಲಿ ನಡೆದ ಎಂಜಿನಿಯರಿಂಗ್ ಕಾಲೇಜು ವಿದ್ಯಾರ್ಥಿಗಳ ತಾಂತ್ರಿಕ-ಸಾಂಸ್ಕೃತಿಕ ಉತ್ಸವ 'ನಿರ್ಮಾಣ-2026' ಕಾರ್ಯ ಕ್ರಮ ಉದ್ಘಾಟಿಸಿ, ನಾವೆಲ್ಲ ಇಂದು ತಾಂತ್ರಿಕ ಯುಗದಲ್ಲಿ ಬದುಕುತ್ತಿದ್ದೇವೆ. ತಂತ್ರಜ್ಞಾನವು ನಮ್ಮೆಲ್ಲರ ಬದುಕಿನಲ್ಲಿ ಹಾಸುಹೊಕ್ಕಾಗಿದೆ. ಇಂಥ ಯುಗದಲ್ಲಿ ನಾವೆಲ್ಲ ಯಶಸ್ಸು ಕಾಣಲು ನಾವೀನ್ಯತೆ ಹಾಗೂ ಸೃಜನಶೀಲತೆಯಿಂದ ಕೆಲಸ ಮಾಡಬೇಕು. ಸೈಬರ್ ಭದ್ರತೆ ಆಧುನಿಕ ಜಗತ್ತಿನ ಪ್ರಮುಖ ಸವಾಲಾಗಿದೆ. ಒಟಿಪಿ, ಎಪಿಕೆ ಫೈಲ್, ಡಿಜಿಟಲ್ ಅರೆಸ್ಟ್ ಸೇರಿದಂತೆ ಹಲವರು ಬಗೆಯ ಸೈಬರ್ ವಂಚನೆ ಪ್ರಕರಣಗಳಲ್ಲಿ ಅಕ್ಷರವಂತರೇ ಮೋಸ ಹೋಗುತ್ತಿದ್ದಾರೆ. ನಾವೆಲ್ಲ ಮೊಬೈಲ್ ಫೋನ್ ಬಳಸುತ್ತಿದ್ದರೂ, ಅದರ ದುಷ್ಪರಿಣಾಮಗಳ ಬಗೆಗೆ ಹೆಚ್ಚಿನ ಅರಿವು ಇಲ್ಲ. ಭಯ ಇಲ್ಲವೇ ಮನದ ದುರಾಸೆಯ ಕಾರಣಕ್ಕೆ ಸೈಬರ್ ಪ್ರಕರಣಗಳಲ್ಲಿ ಜನ ವಂಚನೆಗೆ ಒಳಗಾಗುತ್ತಿದ್ದಾರೆ. ಇಂಥ ಸಂದರ್ಭಗಳಲ್ಲಿ ಪೊಲೀಸರ ನೆರವು ಪಡೆಯಬೇಕು. ಕಾಲೇಜು ವಿದ್ಯಾರ್ಥಿಗಳು ಮಾದಕ ವ್ಯಸನ ಮೋಹಕ್ಕೆ ಸಿಲುಕದೇ ಉತ್ತಮ ಬದುಕು ರೂಪಿಸಿಕೊಳ್ಳಬೇಕು. ರಸ್ತೆ ಸಂಚಾರ ನಿಯಮಗಳನ್ನು ಪಾಲಿಸಬೇಕು. ಸಂಚಾರ ಪೊಲೀಸರು ದಂಡ ಹಾಕಿ ಜನರಿಗೆ ಕಿರಿಕಿರಿ ಮಾಡಲ್ಲ. ಅವರು ನಿಮ್ಮ ಅಮೂಲ್ಯ ಜೀವ, ಜೀವನದ ರಕ್ಷಣೆಗೆ ಸಂಚಾರ ನಿಯಮ ಪಾಲಿಸುವಂತೆ ಎಚ್ಚರಿಸುತ್ತಾರೆ. ನಿಯಮ ಉಲ್ಲಂಘಿಸಿದಾಗ ದಂಡ ವಿಧಿಸುತ್ತಾರೆ ಎಂದರು.

ಇನ್‌ಫಿನಾನ್ ಟೆಕ್ನಾಲಜಿಸ್ ಕಂಪನಿಯ ಹಿರಿಯ ನಿರ್ದೇಶಕ ಪ್ರಕಾಶ ಬಾಲಸುಬ್ರಮಣ್ಯಂ ಮಾತನಾಡಿದರು. ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಎಚ್‌ಕೆಇ ಸಂಸ್ಥೆಯ ಅಧ್ಯಕ್ಷ ಶಶೀಲ್ ನಮೋಶಿ ಮಾತನಾಡಿದರು. ಪಿಡಿಎ ಎಂಜಿನಿಯ ರಿಂಗ್ ಕಾಲೇಜು ಪ್ರಾಚಾರ್ಯ ಎಸ್.ಆರ್.ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿದರು. 'ನಿರ್ಮಾಣ-2026' ಸಂಯೋಜಕ ಪ್ರೊ.ಜಯಪ್ರಕಾಶ ಎ.ಕೆ. ಎರಡು ದಿನಗಳ ತಾಂತ್ರಿಕ-ಸಾಂಸ್ಕೃತಿಕ ಚಟುವಟಿಕೆ ಮೇಲೆ ಬೆಳಕು ಚೆಲ್ಲಿದರು.

### ಸರ್ಕಾರಿ ಜಾಗ ಒತ್ತುವರಿದಾರರು ಪ್ರಭಾವಿಗಳಾಗಿದ್ದರೂ ಕ್ರಮ

## ನಿರ್ದಾಕ್ಷಿಣ್ಯವಾಗಿ ತೆರವು ಕಾರ್ಯಾಚರಣೆ ಕೈಗೊಳ್ಳಿ: ವೆಂಕಟೇಶ್ ಹೆಗಡೆ



**ಬಳ್ಳಾರಿ ಮೇ 24.** ಜಿಲ್ಲಾಡಳಿತ ಸರ್ಕಾರಿ ಜಾಗ ಒತ್ತುವರಿ ಜಾಗವನ್ನು ಗುರುತಿಸಿ, ತೆರವುಗೊಳಿಸುವ ಕಾರ್ಯಾಚರಣೆ ಕೈಗೊಂಡು ಒತ್ತುವರಿಯಾದ ಸರ್ಕಾರಿ ಜಾಗಗಳನ್ನು ಪುನಃ ವಶಪಡಿಸಿಕೊಳ್ಳುತ್ತಿರುವುದು ಅತ್ಯಂತ ಸಂತಸದ ಸಂಗತಿ ಆಗಿದೆ. ಅದಾಗಲೇ ಸುಮಾರು 500 ಕೋಟಿ ರೂಪಾಯಿ ಮೌಲ್ಯದ 80-90 ಎಕರೆ ಜಮೀನನ್ನು ವಾಪಸ್ ಸರ್ಕಾರಕ್ಕೆ ಸೇರ್ಪಡೆ ಮಾಡಿರುವ ಕಾರ್ಯವು ಶ್ಲಾಘನೀಯ.

ಈ ಕಾರ್ಯಾಚರಣೆ ಮುಂದುವರಿಯಬೇಕು. ಬಳ್ಳಾರಿ ಜಿಲ್ಲಾದ್ಯಂತ ವಿಶೇಷವಾಗಿ ಮಹಾ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಒತ್ತುವರಿ ಆಗಿರುವ ಎಲ್ಲಾ ಜಮೀನುಗಳ ತೆರವು ಕಾರ್ಯಾಚರ್ಣೆ ಮಾಡಬೇಕು. ಎಲ್ಲಾ ಜಾಗಗಳನ್ನು ವಾಪಸ್ ಪಡೆಯಬೇಕು. ಯಾವುದೇ ಒತ್ತಡಕ್ಕೆ ಮಣಿಯದೆ, ಒತ್ತುವರಿದಾರರು ಎಷ್ಟೇ ಪ್ರಭಾವಿಗಳಾಗಿದ್ದರೂ ಮಣೆ ಹಾಕದೆ ತೆರವು ಕಾರ್ಯಾಚರಣೆ ಕೈಗೊಳ್ಳಬೇಕು. ಕಾರ್ಯಾಚರಣೆ ಮೂಲಕ ವಶಪಡಿಸಿಕೊಂಡಿರುವ ಜಮೀನುಗಳಿಗೆ ತಂತಿಬೇಲಿ ನಿರ್ಮಾಣ ಮಾಡಿ, ಜಾಗದಲ್ಲಿ ಫಲಕ ಅಳವಡಿಸಿ, ಇದು ಸರ್ಕಾರಕ್ಕೆ ಸೇರಿದ್ದು ಎಂಬುದನ್ನು ತಿಳಿಸಬೇಕು. ಇದರ ಜೊತೆಗೆ ಯಾರ್ಯಾರು ಒತ್ತುವರಿ ಮಾಡಿದ್ದರು ಎಂಬುದರ ಸಂಪೂರ್ಣ ವಿವರಗಳನ್ನು ಸಾರ್ವಜನಿಕವಾಗಿ ಬಹಿರಂಗಪಡಿಸಬೇಕು. ಒಟ್ಟಾರೆ ಸರ್ಕಾರದ ಮರು ವಶಕ್ಕೆ ಬಂದಂತಹ ಜಮೀನುಗಳ ಪಟ್ಟಿಯನ್ನು ಸಾರ್ವಜನಿಕವಾಗಿ ಬಿಡುಗಡೆ ಮಾಡಬೇಕು.

ಎಲ್ಲಾ ಸರ್ಕಾರಿ ಜಾಗಗಳ ಒತ್ತುವರಿ ತೆರವು ಕಾರ್ಯಾಚರಣೆ ಕೈಗೊಂಡ ಬಳಿಕ ಇದೇ ಜಾಗಗಳಲ್ಲಿ ಸಾಧ್ಯವಿದ್ದರೆ ಪಾರ್ಕ್ ನಿರ್ಮಾಣ ಮಾಡುವ, ಮನೆ ಇಲ್ಲದವರಿಗೆ ಮನೆ ಕಟ್ಟಿಕೊಡುವ, ಮತ್ತು ನಿವೇಶನ ಹಂಚಿಕೆಮಾಡುವ ಕಾರ್ಯವನ್ನು ಹಾಗೂ ಸರ್ಕಾರದ ನಿಯೋಜನೆಗಾಗಿ ಮೀಸಲಿಡವುದು. ಜಿಲ್ಲಾಡಳಿತ ಕೈಗೊಳ್ಳಬೇಕು.ಅಥವಾ ವಾಣಿಜ್ಯ ಪ್ರದೇಶದಲ್ಲಿ ಇದ್ದರೆ ಇಲ್ಲಿ ಮಳಿಗೆ ನಿರ್ಮಾಣ ಮಾಡಿ ಪಾಲಿಕೆಗೆ ಸ್ಥಳೀಯ ಆದಾಯ ಹೆಚ್ಚಳ ಆಗುವ ರೀತಿ ನೋಡಿಕೊಳ್ಳಬೇಕು.ಯಾವುದೇ ಕಾರಣಕ್ಕೂ ಒತ್ತಡ, ಪ್ರಭಾವ, ಯಾವುದೇ ಪಕ್ಷದ ನಾಯಕರ ಮಾತಿಗೆ ಕಿವಿಗೊಡದೆ ಒತ್ತುವರಿ ತೆರವು ಕಾರ್ಯಾಚರಣೆ ಕೈಗೊಳ್ಳಬೇಕು. ಮುಖ್ಯವಾಗಿ ಒತ್ತುವರಿಗೆ ಕಾರಣರಾದ ನಾಯಕರು ಯಾವುದೇ ಪಕ್ಷಕ್ಕೆ ಸೇರಿದವರಾಗಿರಲಿ, ಅವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹೂಡಬೇಕು. ಬಡ, ಬಗ್ಗರಿಂದ ಹಣ ವಸೂಲಿ ಮಾಡಿ ಜಾಗ ಮಾರಾಟ ಮಾಡಿದ್ದರೆ ಆ ಬಡವರ ಹಣವನ್ನು ವಾಪಸ್ ಕೊಡಿಸಲು ಸಹ ಜಿಲ್ಲಾಡಳಿತ ಕ್ರಮ ವಹಿಸಬೇಕು ಎಂದು ವೆಂಕಟೇಶ್ ಹೆಗಡೆ, ವಕೀಲರು ತಿಳಿಸಿದ್ದಾರೆ.

# ಮೇ 31ರಂದು ಜಾಣಜಾಣೆಯರ ನಗೆ ಹಬ್ಬ ಉಚಿತವಾಗಿ ಕಲಾವಿದರಿಗೆ 10 ಲಕ್ಷ ರೂ. ಆರೋಗ್ಯ ವಿಮಾ ಪಾಲಿಸಿ




**ಬೆಂಗಳೂರು, ಮೇ.24:** ಜಾಣಜಾಣೆಯರ ಸಾಹಿತಿ ಕಲಾವಿದರ ಟ್ರಸ್ಟ್ ವತಿಯಿಂದ ಜಾಣಜಾಣೆಯರ ನಗೆ ಉತ್ಸವ, ಟ್ರಸ್ಟ್ ಉದ್ಘಾಟನೆ ಹಾಗೂ ಕಲಾವಿದರ ನೆರವಿಗಾಗಿ ಆರೋಗ್ಯ ವಿಮಾ ಯೋಜನೆ ಚಾಲನೆ ಕಾರ್ಯಕ್ರಮವು ಮೇ 31ರಂದು ಸಂಜೆ 5 ಗಂಟೆಗೆ ಚೌಡಯ್ಯ ಮೆಮೋರಿಯಲ್ ಹಾಲ್‌ನಲ್ಲಿ ಅದ್ದೂರಿಯಾಗಿ ನಡೆಯಲಿದೆ ಎಂದು ಚೌಡಯ್ಯ ಸ್ಮಾರಕ ಭವನದ ಕಾರ್ಯದರ್ಶಿ ಡಾ. ಸುಮಾಸುಧೀಂದ್ರ ಮಾಧ್ಯಮಕ್ಕೆ ಮಾಹಿತಿ ನೀಡಿದರು.

ಈ ಕುರಿತು ನಡೆಯುವ ಪತ್ರಿಕಾಗೋಷ್ಠಿಯಲ್ಲಿ ಹಾಸ್ಯ ಕಲಾವಿದ ಎಂ.ಎಸ್. ನರಸಿಂಹ ಮೂರ್ತಿ, ಚೌಡಯ್ಯ ಮೆಮೋರಿಯಲ್ ಹಾಲ್ ಕಾರ್ಯದರ್ಶಿ ಡಾ. ಸುಮ ಸುಧೀಂದ್ರ, ಟ್ರಸ್ಟಿ ಉದಯ್ ಎಂ., ರಂಗಭೂಮಿ ಹಾಗೂ ಚಲನಚಿತ್ರ ಕಲಾವಿದೆ ಗೀತಾ ಸುರತ್ಕಲ್, ಮೀನಾ ರವರು ಮಾಧ್ಯಮ ಉದ್ದೇಶಿಸಿ ಮಾತನಾಡಲಿದ್ದಾರೆ. ಕಳೆದ 30 ವರ್ಷಗಳಿಂದ ಜಾಣಜಾಣೆಯರು ಸಂಸ್ಥೆ ರಾಜ್ಯಾದ್ಯಂತ ನಗೆಜಾಗರಣೆ ಮತ್ತು ನಗೆ ಉತ್ಸವಗಳನ್ನು ಆಯೋಜಿಸಿ ಜನಮನ ಗೆದ್ದಿದೆ. ಭರತನಾಟ್ಯ, ಶಾಸ್ತ್ರೀಯ ಸಂಗೀತ, ಯಕ್ಷಗಾನ, ಮಿಮಿಕ್ರಿ ಸೇರಿದಂತೆ ವಿವಿಧ ಕಲಾ ಪ್ರಕಾರಗಳನ್ನು ಸದಭಿರುಚಿಯ ಹಾಸ್ಯದೊಂದಿಗೆ ಜನರಿಗೆ ತಲುಪಿಸುವ ಮೂಲಕ ಸಂಸ್ಥೆ ವಿಶಿಷ್ಟ ಗುರುತನ್ನು ಪಡೆದಿದೆ. ವಯೋಸಹಜ ಆರೋಗ್ಯ ಸಮಸ್ಯೆಗಳು ಅನೇಕ ಕಲಾವಿದರನ್ನು ಸಂಕಷ್ಟಕ್ಕೆ ತಳ್ಳುತ್ತಿರುವ ಹಿನ್ನೆಲೆಯಲ್ಲಿ ಬಡ ಹಾಗೂ ಅಶಕ್ತ ಕಲಾವಿದರಿಗೆ ನೆರವಾಗುವ ಉದ್ದೇಶದಿಂದ 'ಜಾಣ ಜಾಣೆಯರ ಸಾಹಿತಿ ಕಲಾವಿದರ ಟ್ರಸ್ಟ್' ಸ್ಥಾಪನೆಯಾಗಿದೆ. ಪಂಚವೀಣಾ ಖ್ಯಾತಿಯ ಅಂತಾರಾಷ್ಟ್ರೀಯ ವೀಣಾ ವಿದುಷಿ ಡಾ. ಸುಮ ಸುಧೀಂದ್ರ ಟ್ರಸ್ಟ್‌ಗೆ ಕೈಜೋಡಿಸಿದ್ದು, ಸಮಾಜ ಸೇವಾ ನಿರತ ಸಚಿವರಾದ ದಿನೇಶ್ ಗುಂಡೂರಾವ್, ಎಂ.ಆರ್. ಸೀತಾರಾಮ್, ಎಂ.ಕೃಷ್ಣಪ್ಪ, ಡಿ.ಕೆ. ಸುರೇಶ್, ಪ್ರಿಯಾಕೃಷ್ಣ, ರಕ್ಷ ರಾಮಯ್ಯ ಹಾಗೂ ಹಿರಿಯ ವಕೀಲ ಚಂದ್ರಮೌಳಿ ಮಾರ್ಗದರ್ಶನದಲ್ಲಿ ಟ್ರಸ್ಟ್ ಕಾರ್ಯ ನಿರ್ವಹಿಸುತ್ತಿದೆ.

ಉದ್ಘಾಟನಾ ದಿನವಾದ ಮೇ 31ರಂದು 60 ಕಲಾವಿದರಿಗೆ ತಲಾ 10 ಲಕ್ಷ ರೂ. ಮೌಲ್ಯದ ಆರೋಗ್ಯ ವಿಮಾ ಪಾಲಿಸಿಯನ್ನು ಉಚಿತವಾಗಿ ವಿತರಿಸಲಾಗುತ್ತದೆ. ಇದೇ ಸಂದರ್ಭದಲ್ಲಿ ಮೂರು ಗಂಟೆಗಳ ನಿರಂತರ ನಗೆರಸದೌತಣ ನೀಡಲು ರಾಜ್ಯದ ಖ್ಯಾತ ಹಾಸ್ಯ ಕಲಾವಿದರು ಭಾಗವಹಿಸಲಿದ್ದಾರೆ. ಮಿಮಿಕ್ರಿ ದಯಾನಂದ್, ಪ್ರೊ. ಎಂ. ಕೃಷ್ಣಗೌಡ, ಮಿಮಿಕ್ರಿ ಗೋಪಿ, ಗಂಗಾವತಿ ಪ್ರಾಣೇಶ್, ಕೋಗಳಿ ಕೊಟ್ರೇಶ್, ಕಿರ್ಲೋಸ್ಕರ್ ಸತ್ಯ, ಶಿವಾರ ಉಮೇಶ್, ಪ್ರಹ್ಲಾದಾ ಚಾರ್ಯ ಹಾಗೂ ಎಂ.ಎಸ್. ನರಸಿಂಹಮೂರ್ತಿ ವಿಶೇಷ ನಗೆಹಬ್ಬ ದಲ್ಲಿ ಪಾಲ್ಗೊಳ್ಳಲಿ ದ್ದಾರೆ. ಖ್ಯಾತ ಸಂಗೀತ ನಿರ್ದೇಶಕ ಗುರುಕಿರಣ್ ವಿಶೇಷ ಅತಿಥಿಯಾಗಿ ಭಾಗವಹಿಸ ಲಿದ್ದು, ಐಪಿಎಲ್‌ನಲ್ಲಿ ಜನಪ್ರಿಯತೆ ಪಡೆದ ಡ್ರಮ್ಸ್ ದೇವ್ ವಿಶೇಷ ಪ್ರದರ್ಶನ ನೀಡಲಿದ್ದಾರೆ. ಮಿಮಿಕ್ರಿ ದಯಾನಂದ್ ಅವರ ಸಂಪೂರ್ಣ ತಂಡವೂ ರಂಜನಾ ಕಾರ್ಯಕ್ರಮ ನೀಡಲಿದೆ.

## ಕಾರ್ಮಿಕ ಕನಿಷ್ಠ ವೇತನ ಹೆಚ್ಚಳ: ತೆಕ್ಕಿಲ್ ಸಂತಸ



ಸಿದ್ದರಾಮಯ್ಯ ನೇತೃತ್ವದ ಕರ್ನಾಟಕ ಸರ್ಕಾರವು ರಾಜ್ಯದ ವಿವಿಧ ವಲಯಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕಾರ್ಮಿಕರ ಕನಿಷ್ಠ ವೇತನವನ್ನುಗಣನೀಯವಾಗಿ ಹೆಚ್ಚಳಮಾಡುವ ಮೂಲಕ ಐತಿಹಾಸಿಕ ಮತ್ತು ಶ್ರಮಿಕಸ್ನೇಹಿ ನಿರ್ಧಾರವನ್ನು ಕೈಗೊಂಡಿದ್ದು ಸರ್ಕಾರದ ಈ ಜನಪರವಾದ ಕ್ರಮದಿಂದಾಗಿ ಇಡೀ ರಾಜ್ಯಾದ್ಯಂತ ಇರುವ ಸುಮಾರು ಎರಡು ಕೋಟಿಯಷ್ಟು ಹೆಚ್ಚು ಕಾರ್ಮಿಕರು ಮತ್ತು ಅವರ ಕುಟುಂಬದವರು ನೇರ ಆರ್ಥಿಕ ಸೌಲಭ್ಯ ಹಾಗೂ ಸಾಮಾಜಿಕ ಭದ್ರತೆಯನ್ನು ಪಡೆಯುವಂತಾಗಿದೆ.

'ಶ್ರಮಜೀವಿಗಳ ಬದುಕಿಗೆ ಆಸರೆಯಾಗಿ, ಅವರ ಆರ್ಥಿಕ ಸುಧಾರಣೆಗೆ ಇಷ್ಟೊಂದು ದೊಡ್ಡ ಮಟ್ಟದ ಕೊಡುಗೆ ನೀಡಿದ ಕಾರ್ಮಿಕ ಸಚಿವ ಸಂತೋಷ್ ಎಸ್ ಲಾಡ್ ಕೆಪಿಸಿಸಿ ಅಧ್ಯಕ್ಷರೂ ಉಪ ಮುಖ್ಯಮಂತ್ರಿಗಳಾದ ಡಿ ಕೆ ಶಿವಕುಮಾರ್ ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ವೈಯಕ್ತಿಕವಾಗಿ ಹಾಗೂ ಮಂಡಳಿಯ ಪರವಾಗಿ ಕರ್ನಾಟಕ ಸರಕಾರದ ಕಾರ್ಮಿಕ ಕನಿಷ್ಠ ವೇತನ ಸಲಹಾ ಮಂಡಳಿ ಅಧ್ಯಕ್ಷರಾದ ಟಿ.ಎಂ. ಶಾಹಿದ್ ತೆಕ್ಕಿಲ್ ಕೃತಜ್ಞತೆಗಳು ಮತ್ತು ಅಭಿನಂದನೆಗಳನ್ನು ಸಲ್ಲಿಸಿ ಇದು ಅತ್ಯಂತ ಹೆಮ್ಮೆಯ ಹಾಗು ಐತಿಹಾಸಿಕ ನಿರ್ಧಾರ ಎಂದಿದ್ದಾರೆ ಕಾಂಗ್ರೆಸ್ ಪಕ್ಷದ ಪ್ರಣಾಳಿಕೆಯಲ್ಲಿ ಕಾರ್ಮಿಕ ಹಕ್ಕುಗಳನ್ನು ರಕ್ಷಿಸುವ ಆಶ್ವಾಸನೆ ಪ್ರಣಾಳಿಕೆ ನೀಡಿದ್ದು ಕೇಂದ್ರ ಸರಕಾರದ ಕಾರ್ಮಿಕ ವಿರೋಧಿ ನಾಲ್ಕು ಸಂಕೇತದ ಮಧ್ಯದಲ್ಲಿ ರಾಜ್ಯದ ಪ್ರತಿಯೊಬ್ಬ ಕಾರ್ಮಿಕನ ಮುಖದಲ್ಲೂ ಈ ಮಂದಹಾಸ ಮೂಡಿಸಿದ ಇಂತಹ ನಿರ್ಧಾರ ಸಹಿತ ಹಲವಾರು ಜನಪರ ಯೋಜನೆಗಳು ಸರ್ಕಾರದಿಂದ ನಿರಂತರವಾಗಿ ಮೂಡಿ ಬಂದಿದೆ.

ರಾಜ್ಯ ಸರ್ಕಾರದ ಈ ಐತಿಹಾಸಿಕ ನಿರ್ಧಾರಕ್ಕೆ ನಮ್ಮ ಮಂಡಳಿಯು ಸದಾ ಕೃತಜ್ಞವಾಗಿರುತ್ತದೆ ಎಂದು ಕರ್ನಾಟಕ ರಾಜ್ಯ ಕನಿಷ್ಠ ವೇತನ ಸಲಹಾ ಮಂಡಳಿ ಕರ್ನಾಟಕ ಸರ್ಕಾರದ ಅಧ್ಯಕ್ಷರಾದ ಟಿ ಎಂ ತೆಕ್ಕಿಲ್ ಸಂತಸ ವ್ಯಕ್ತಪಡಿಸಿದ್ದಾರೆ.

## ಬಸವತತ್ವ ನಿಷ್ಠರು ರಾಜಕೀಯದ ಕೊಳೆ ತೆಗೆಯಲಿ: ಡಾ. ವಾಸು ಸಲಹೆ




**ಬೀದರ್, ಮೇ. 24:** ಬಸವ ವಾದಿಗಳು, ಅನುಯಾಯಿಗಳು, ಬಸವತತ್ವ ನಿಷ್ಠರು ರಾಜಕೀಯದ ಕೊಳೆ ತೆಗೆಯಲು ಮುಂದಾಗಬೇಕು ಎಂದು 'ಜಾಗೃತ ಕರ್ನಾಟಕ' ಸಂಘಟನೆಯ ಡಾ. ಎಚ್.ವಿ. ವಾಸು ಸಲಹೆ ಮಾಡಿದರು.

ನಗರದ ಬಸವಗಿರಿಯಲ್ಲಿ ಅಕ್ಕ ಅನ್ನಪೂರ್ಣತಾಯಿಯವರ ಸ್ಮರಣೋತ್ಸವ ಅಂಗವಾಗಿ ಹಮ್ಮಿಕೊಂಡಿರುವ ಎರಡು ದಿನಗಳ 'ಬಸವೋತ್ಸವ'ದ ಉದ್ಘಾಟನಾ ಸಮಾರಂಭದಲ್ಲಿ ಅನುಭಾವ ಮಂಡಿಸಿದರು. ಒಳ್ಳೆಯ ಜನ ರಾಜಕಾರಣದಿಂದ ದೂರ ಇರಬಾರದು. ರಾಜಕೀಯ ಹಾಗೂ ಸಂಸಾರದಲ್ಲಿ ಒಳ್ಳೆಯ ಆಯ್ಕೆಗೆ ಬಸವಣ್ಣನವರ ಕಳಬೇಡ ವಚನ ನೆನಪಿನಲ್ಲಿಟ್ಟುಕೊಳ್ಳಬೇಕು ಎಂದು ಹೇಳಿದರು.

ಸಮಾಜ, ಸರ್ಕಾರ ಹಾಗೂ ಸಂಸಾರದಲ್ಲಿ ಬದಲಾವಣೆ ತರುವ ಶಕ್ತಿ ವಚನಗಳಿಗಿದೆ. ಎಂಟು ನೂರು ವರ್ಷ ಭೂಗತವಾಗಿದ್ದ ವಚನಗಳನ್ನು ಬೆಳಕಿಗೆ ತಂದವರು ಫ.ಗು. ಹಳಕಟ್ಟಿ. ಬಸವ ತತ್ವ ಪ್ರಸಾರ ಮಾಡಿದವರಲ್ಲಿ ಅಕ್ಕ ಅನ್ನಪೂರ್ಣತಾಯಿ ಅವರ ಹೆಸರು ಮೇಲ್ಪಂಕ್ತಿಯಲ್ಲಿದೆ. ಅಕ್ಕ ಅನ್ನಪೂರ್ಣ ತಾಯಿ ಅವರ ಕಾರ್ಯವನ್ನೇ ಮುಂದುವರಿಸಿರುವ ಪ್ರಭುದೇವ ಸ್ವಾಮೀಜಿ ಅವರ ಕಾರ್ಯ ರಾಜ್ಯಕ್ಕೆ ಮಾದರಿಯಾಗುತ್ತಿದೆ ಎಂದು ಹೇಳಿದರು.

ಸಾನ್ನಿಧ್ಯ ವಹಿಸಿದ್ದ ಲಿಂಗಾಯತ ಮಹಾಮಠದ ಪ್ರಭುದೇವ ಸ್ವಾಮೀಜಿ, ಪ್ರಜಾಪ್ರಭುತ್ವದ ಬೀಜ ವಚನಗಳಲ್ಲೇ ಇದೆ. ಸಂವಿಧಾನದ ಆಶಯಗಳು, ಬದುಕನ್ನು ಉನ್ನತಿಗೇರಿಸುವ ಮೌಲ್ಯಗಳು ವಚನಗಳಲ್ಲಿ ಅಡಕವಾಗಿವೆ ಎಂದು ತಿಳಿಸಿದರು.

ಶರಣರ ನಾಡಿನಲ್ಲಿರುವ ನಾವು ವಚನಗಳ ಶ್ರೇಷ್ಠತೆಯ ಅರಿವಿಲ್ಲದೆ, ನಿಧಿ ಮೇಲೆ ಕುಳಿತು ತುತ್ತು ಅನ್ನಕ್ಕೆ ಕೈಚಾಚುವವರಂತಾಗಿದ್ದೇವೆ. ಅಂದು ಶರಣರು ಅಡುಗೆ ಮಾಡಿ ಇಟ್ಟಿದ್ದಾರೆ. ಈಗ ಅದನ್ನು ಬಡಿಸುವ ಕಾರ್ಯ ಪ್ರಾಮಾಣಿಕವಾಗಿ ಮಾಡಬೇಕಾಗಿದೆ ಎಂದರು.

ಕಲಬುರಗಿಯ ಅಕ್ಕಮಹಾದೇವಿ ಆಶ್ರಮದ ಮಾತೆ ಪ್ರಭುಶ್ರೀ ಮಾತನಾಡಿ, ಅಕ್ಕ ಅನ್ನಪೂರ್ಣತಾಯಿ ಸೈಕಲ್ ತುಳಿದು ಬಸವ ತತ್ವ ಪ್ರಚಾರಗೈದಿದ್ದರು. ಮಠ ಕಟ್ಟಿದ್ದರು. ಬಸವ ತತ್ವದ ಪುನರುತ್ಥಾನಗೈದಿದ್ದಾರೆ ಎಂದು ಹೇಳಿದರು.

ಬಿಜೆಪಿ ಮುಖಂಡ ನಾಗರಾಜ ಕರ್ಪೂರ ಮಾತನಾಡಿ, ಯುವಕರಿಗೆ ಅಕ್ಕ ಅನ್ನಪೂರ್ಣತಾಯಿ ಅವರ ಮಾತುಗಳೇ ಪ್ರೇರಣೆ ಎಂದು ಹೇಳಿದರು. ರಾಷ್ಟ್ರೀಯ ಬಸವ ದಳದ ಜಿಲ್ಲಾ ಅಧ್ಯಕ್ಷ ಸೋಮಶೇಖರ ಪಾಟೀಲ ಗಾದಗಿ ಉದ್ಘಾಟಿಸಿದರು. ಕಲಬುರಗಿಯ ಬಸವ ಸೇವಾ ಪ್ರತಿಷ್ಠಾನದ ಅಧ್ಯಕ್ಷ ರಾಜಶೇಖರ ಯಂಕಂಚಿ ಅಧ್ಯಕ್ಷತೆ ವಹಿಸಿದ್ದರು. ನಂಜನಗೂಡಿನ ಎಚ್.ಎಂ. ಮಂಜುಳಾ ಮಧು, ಬೇಲೂರಿನ ಉರಿಲಿಂಗ ಪೆದ್ದಿ ಮಠದ ಪಂಚಾಕ್ಷರಿ ಸ್ವಾಮೀಜಿ, ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯ ಪರಿಷತ್ ಸದಸ್ಯ ರಾಜಕುಮಾರ ಮಾಳಗೆ, ಉದ್ಯಮಿ ವೀರಶೆಟ್ಟಿ ಪಟ್ನೆ, ನೀಲಮ್ಮನ ಬಳಗದ ಸಂಗೀತಾ ಆರ್. ಪಾಟೀಲ, ಸಾಹಿತಿ ರಮೇಶ ಮಠಪತಿ ಇದ್ದರು.

ಕೊಪ್ಪಳದ ವಿಶ್ವಗುರು ಬಸವೇಶ್ವರ ಟ್ರಸ್ಟ್ ಅಧ್ಯಕ್ಷ ವೀರಭದ್ರಪ್ಪ ನಂದ್ಯಾಳ್ ಷ???ಸ್ಥಲ ಧ್ವಜಾರೋಹಣಗೈದರು. ಶರಣ ಶರಣೆಯರು ವಚನ ಪಾರಾಯಣ ಮಾಡಿದರು. ಅಶ್ವಿನಿ ರಾಜಕುಮಾರ ಅವರ ಸಂಗೀತ ಮೆರುಗು ನೀಡಿತು. ಬಸವಕಲ್ಯಾಣದ ಅನುಭವ ಮಂಟಪದ ಸಂಚಾಲಕ ಶಿವಾನಂದ ಸ್ವಾಮೀಜಿ ಸಾಮೂಹಿಕವಾಗಿ ವಚನ ಓದಿಸಿ, ವಚನ ಪಾರಾಯಣಕ್ಕೆ ಚಾಲನೆ ನೀಡಿದರು. ಇದಕ್ಕೂ ಮುನ್ನ ಅಕ್ಕ ಅನ್ನಪೂರ್ಣತಾಯಿ ಅವರ ಐಕ್ಯ ಮಂಟಪದಲ್ಲಿ ಗುರುಬಸವ ಪೂಜೆ, ಪ್ರಾರ್ಥನೆ ಸಲ್ಲಿಸಿ, ಅಕ್ಕನವರಿಗೆ ಗೌರವ ಸಮರ್ಪಿಸಲಾಯಿತು.

ಪ್ರಿಯಾ ಎಲಿ, ಪೂರ್ಣಚಂದ್ರ ಮೈನಾಳೆ ವಚನ ನೃತ್ಯ ಪ್ರದರ್ಶಿಸಿದರು. ಚಂದ್ರಕಾಂತ ಪಟ್ನೆ, ಕಂಟೆಪ್ಪ ಗಂದಿಗುಡೆ, ಚಂದ್ರಶೇಖರ ಹೆಬ್ಬಾಳೆ ಹಾಗೂ ರೇವಣಪ್ಪ ಮೂಲಗೆ ವಚನ ಸಂಗೀತ ನಡೆಸಿಕೊಟ್ಟರು. ನೀಲಮ್ಮನ ಬಳಗದ ಗುರುಶ್ರೀ ಮಠಪತಿ ನಿರೂಪಿಸಿದರು. ಲಿಂಗಾಯತ ಸೇವಾ ದಳದ ಅಭಿಷೇಕ ಮಠಪತಿ ಸ್ವಾಗತಿಸಿದರು.



ಸ್ಯಾಂಕಿ ಕೆರೆ ಉಳಿಸಿ ಜನಜಾಗೃತಿ ಹೋರಾಟವನ್ನು ವಾಯ್ಸ್ ಆಫ್ ಸದಾಶಿವನಗರ ಸಂಘಟನೆ ಕೈಗೊಂಡಿದೆ

# ಕೋಮುಗಲಭೆ ಪ್ರಕರಣಗಳ ವಾಪಸ್: ಹೈಕೋರ್ಟ್ ಮೆಟ್ಟಿಲೇರಲು ಶ್ರೀರಾಮಸೇನೆ ನಿರ್ಧಾರ

**ಕಲಬುರಗಿ, ಮೇ. 24:** ಜಿಲ್ಲೆಯ ಆಳಂದ ಲಾಡ್ಲೇ ಮಷಾಕ್ ದರ್ಗಾ ಅವರಣದಲ್ಲಿರುವ ರಾಘವ ಚೈತನ್ಯ ಶಿವಲಿಂಗದ ಮೇಲೆ ಮಲಮೂತ್ರ ವಿಸರ್ಜನೆ ಮಾಡಿ ಅಪವಿತ್ರಗೊಳಿಸಿದ್ದಲ್ಲದೇ, ಮಹಾಶಿವರಾತ್ರಿಯಂದು ಪೂಜೆಗೆ ಆಗಮಿಸಿದ್ದ ಅಂದಿನ ಕೇಂದ್ರ ಸಚಿವ ಭಗವಂತ ಖೂಬಾ, ಜಿಲ್ಲಾಧಿಕಾರಿ ಮತ್ತು ಪೊಲೀಸರ ಮೇಲೆ ಕಲ್ಲೆಸೆದು ಹಲ್ಲೆ ಹಲ್ಲೆ ನಡೆಸಿದವರ ವಿರುದ್ಧ ಪ್ರಕರಣಗಳನ್ನು ವಾಪಸು ಪಡೆದಿರುವ ರಾಜ್ಯ ಸರ್ಕಾರದ ನಡೆ, ಓಲೈಕೆಯ ಪರಾಕಾಷ್ಠೆಯಾಗಿದೆ.

ಈಗಾಗಲೇ ಇಂಥ ಓಲೈಕೆಯಿಂದಲೇ ಪಶ್ಚಿಮ ಬಂಗಾಳದ ಮಮತಾ ದೀದೀ ಸರ್ಕಾರ ಬಿದ್ದು ಹೋಗಿದೆ. ಅದೇ ರೀತಿ ಕೇರಳದ ಪಿಣರಾಯಿ ವಿಜಯನ್ ಸರ್ಕಾರಕ್ಕೂ ಕೂಡ ಜನರು ಮನೆಗಪ್ಪಣೆ ನೀಡಿದ್ದಾರೆ. ಇವೆಲ್ಲ ಕಣ್ಣೆದುರಿರುವಾಗಲೇ ಸಿಎಂ ಸಿದ್ದರಮಯ್ಯ ಅವರು ಆಳಂದ ಪ್ರಕರಣಕ್ಕೆ ಸಂಬಂಧಿಸಿದಂತೆ ಹಲ್ಲೆಕೋರರ ವಿರುದ್ಧದ ಪ್ರಕರಣಗಳನ್ನು ಹಿಂಪಡೆದಿದ್ದು, ಇದರ ವಿರುದ್ಧ ತಾವು ಹೈಕೋರ್ಟ್ ಮೊರೆ ಹೋಗುವುದಾಗಿ ಶ್ರೀರಾಮ ಸೇನೆ ಸಂಸ್ಥಾಪಕ ಅಧ್ಯಕ್ಷ ಪ್ರಮೋದ ಮುತಾಲಿಕ ತಿಳಿಸಿದರು.



ನಗರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಗಲಭೆಗಳಿಗೆ ಸಂಬಂಧಿಸಿದ ಸುಮಾರು 52 ಕ್ರಿಮಿನಲ್ ಮೊಕದ್ದಮೆಗಳನ್ನು ಹಿಂಪಡೆಯಲು ರಾಜ್ಯ ಸರ್ಕಾರ ನಿರ್ಧರಿಸಿದ್ದು ಅತ್ಯಂತ ದುರ್ದೈವದ ಸಂಗತಿಯಾಗಿದ್ದು. ಇದರಿಂದ ಮತ್ತಷ್ಟು ಗಲಭೆಗಳಿಗೆ ಪುಷ್ಟಿ ಕೊಡುವ ಕ್ರಮ ರಾಜ್ಯ ಸರ್ಕಾರ ಕೈಕೊಂಡಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸರ್ಕಾರದ ಈ ಜನವಿರೋಧಿ ಮತ್ತು ಏಕಪಕ್ಷೀಯ ನಿರ್ಧಾರವನ್ನು ಪ್ರಶ್ನಿಸಿ ಶೀಘ್ರದಲ್ಲೇ ಉಚ್ಚ ನ್ಯಾಯಾಲಯದಲ್ಲಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ ದಾಖಲಿಸುವುದಾಗಿ ಅವರು ಎಚ್ಚರಿಕೆ ನೀಡಿದ ಅವರು, ಮತಬ್ಯಾಂಕ್ ಮತ್ತು ತುಷ್ಟೀಕರಣ ರಾಜಕಾರಣಕ್ಕಾಗಿ ಕಾಂಗ್ರೆಸ್ ಸರ್ಕಾರವು ಸಮಾಜದ ಶಾಂತಿ ಕದಡಿದ ಗಂಭೀರ ಆರೋಪಿಗಳನ್ನು ರಾಜಾರೋಷವಾಗಿ ಮುಕ್ತಗೊಳಿಸಲು ಹೊರಟಿದೆ ಎಂದು ಆರೋಪಿಸಿದರು.

ಕಾನೂನು ಸುವ್ಯವಸ್ಥೆಯನ್ನು ಗಾಳಿಗೆ ತೂರಿ, ಸಾರ್ವಜನಿಕ ಆಸ್ತಿಪಾಸ್ತಿ ನಷ್ಟ ಹಾಗೂ ಸರ್ಕಾರಿ ಅಧಿಕಾರಿಗಳ ಮೇಲೆ ಹಲ್ಲೆ ನಡೆಸಿದವರ ಮೇಲಿನ ಕೇಸ್‌ಗಳನ್ನು ವಾಪಸ್ ಪಡೆದಿರುವುದು ಅಪರಾಧ ಕೃತ್ಯಗಳಿಗೆ ಪ್ರೋತ್ಸಾಹ ನೀಡಿದಂತಾಗುತ್ತದೆ ಎಂದು ಅವರು ದೂರಿದರು. ಸರ್ಕಾರವು ಕೇವಲ ರಾಜಕೀಯ ಪ್ರೇರಿತ ಕೇಸ್‌ಗಳನ್ನು ಹಿಂಪಡೆಯುತ್ತಿರುವುದಾಗಿ ನೀಡುತ್ತಿರುವ ಸಮರ್ಥನೆ ಕಣ್ಣೊರೆಸುವ ತಂತ್ರವಾಗಿದೆ. ನ್ಯಾಯಾಲಯದಲ್ಲಿ ವಿಚಾರಣೆ ಹಂತದಲ್ಲಿರುವ ಗಂಭೀರ ಪ್ರಕರಣ ಗಳನ್ನು ರಾಜಕೀಯ ಲಾಭಕ್ಕಾಗಿ ಹಿಂಪಡೆಯಲು ಬಿಡುವುದಿಲ್ಲ. ಈ ನಿರ್ಧಾರದ ವಿರುದ್ಧ ಕಾನೂನಾತ್ಮಕ ಹೋರಾಟ ನಡೆಸಲು ಶ್ರೀರಾಮಸೇನೆ ಸಜ್ಜಾಗಿದ್ದು, ಹೈಕೋರ್ಟ್‌ನಲ್ಲಿ ಸರ್ಕಾರದ ವಿರುದ್ಧ ಪಿಐಎಲ್ ದಾಖಲಿಸಿ ಸೂಕ್ತ ತಡೆ ತರಲಾಗುವುದು ಎಂದು ಮುತಾಲಿಕ್ ಸ್ಪಷ್ಟಪಡಿಸಿದರು.

# ಅಧಿಕ ಮಾಸದಲ್ಲಿ ಸತ್ಕರ್ಮಗಳಿಗೆ ಪುಣ್ಯಪ್ರಾಪ್ತಿ: ಕೃಷ್ಣ ಕಾಕಲವಾರ



ಕಲಬುರಗಿಯ ಕರುಣೇಶ್ವರ ನಗರದ ಜೈ ವೀರ ಹನುಮಾನ್ ಮಂದಿರದಲ್ಲಿ ಅಧಿಕ ಮಾಸ ಪ್ರಾರಂಭದ ಅಂಗವಾಗಿ ಹಮ್ಮಿಕೊಂಡಿದ್ದ ಧಾರ್ಮಿಕ ಉಪನ್ಯಾಸ ಕಾರ್ಯಕ್ರಮದಲ್ಲಿ ನಿವೃತ್ತ ಸಂಸ್ಕೃತ ಪ್ರಾಧ್ಯಾಪಕ ಕೃಷ್ಣ ಕಾಕಲವಾರ ಅವರು ಮಾತನಾಡಿದರು.

**ಕಲಬುರಗಿ, ಮೇ. 24:** ಅಧಿಕ ಮಾಸದಲ್ಲಿ ಮಾಡುವ ಎಲ್ಲಾ ಧಾರ್ಮಿಕ ಹಾಗೂ ಸತ್ಕಾರ್ಯಗಳಿಗೆ 'ಅಧಿಕಸ್ಯ ಅಧಿಕ ಫಲಂ' ಎಂಬಂತೆ ಅಪಾರ ಪುಣ್ಯಫಲ ದೊರೆಯುತ್ತದೆ ಎಂದು ನಿವೃತ್ತ ಸಂಸ್ಕೃತ ಪ್ರಾಧ್ಯಾಪಕ ಕೃಷ್ಣ ಕಾಕಲವಾರ ಹೇಳಿದರು.

ಇಲ್ಲಿನ ಕರುಣೇಶ್ವರ ನಗರದ ಜೈ ವೀರ ಹನುಮಾನ್ ಮಂದಿರದಲ್ಲಿ ಅಧಿಕ ಮಾಸ ಪ್ರಾರಂಭದ ಅಂಗವಾಗಿ ಹಮ್ಮಿಕೊಂಡಿದ್ದ ಧಾರ್ಮಿಕ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿ, ಧಾರ್ಮಿಕರು ಹಾಗೂ ಭಕ್ತರು ತಮ್ಮ ಶಕ್ತಿ–ಸಾಮರ್ಥ್ಯಕ್ಕೆ ಅನುಗುಣವಾಗಿ ದಾನಧರ್ಮ ಕಾರ್ಯಗಳಲ್ಲಿ ತೊಡಗಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಶ್ರೀಮದ್ಭಾಗವತ, ರಾಮಾಯಣ, ಮಹಾಭಾರತ ಹಾಗೂ ಹರಿಕಥಾಮೃತಸಾರದಂತಹ ಪವಿತ್ರ ಗ್ರಂಥಗಳ ಶ್ರವಣದಿಂದ ಆತ್ಮಶುದ್ಧಿ ಮತ್ತು ಪುಣ್ಯ ಪ್ರಾಪ್ತಿಯಾಗುತ್ತದೆ. ಪ್ರಾಚೀನ ಭಾರತೀಯ ಗಣಿತ ಮತ್ತು ಖಗೋಳ ವಿಜ್ಞಾನದ ಆಧಾರದ ಮೇಲೆ ಮೂರು ವರ್ಷಗಳಿಗೊಮ್ಮೆ ಅಧಿಕ ಮಾಸ ಬರುತ್ತದೆ. ಸೂರ್ಯ ಮತ್ತು ಚಂದ್ರರ ಪರಿಭ್ರಮಣ ವ್ಯತ್ಯಾಸದಿಂದ ವರ್ಷಕ್ಕೆ ಸುಮಾರು 11 ದಿನಗಳ ಅಂತರ ಉಂಟಾಗುತ್ತದೆ ಎಂದರು.

ದೇವಸ್ಥಾನದ ಸದಸ್ಯ ವಿನುತ ಜೋಶಿ ಮಾತನಾಡಿದರು. ದೇವಸ್ಥಾನ ಸಮಿತಿ ಅಧ್ಯಕ್ಷ ಅವಿನಾಶ್ ಕುಲಕರ್ಣಿ, ಶಂಕರರಾವ್ ಸಿಂದಗಿಕರ್, ಕಿಶನರಾವ್ ಕುಲಕರ್ಣಿ, ಲಕ್ಷ್ಮಿಕಾಂತ ಕುಲಕರ್ಣಿ, ಮುರಳಿಧರರಾವ್ ಕುಲಕರ್ಣಿ, ನರಸಿಂಗರಾವ್ ಕುಲಕರ್ಣಿ, ವಿಶ್ವಾಸ್ ಮೋಘೇಕರ್, ಪಿ.ವಿ. ಜೋಶಿ, ಪ್ರಸನ್ನ ದೇಶಪಾಂಡೆ, ಶ್ರೀಷಾ ಕುಲಕರ್ಣಿ, ಅರ್ಚಕರಾದ ಪ್ರದ್ಯುಮ್ನಾಚಾರ್ಯ ಜೋಶಿ, ವೆಂಕಟೇಶಾಚಾರ್ಯ ನೇಲೋಗಿ, ವ್ಯವಸ್ಥಾಪಕರಾದ ಚಂದ್ರಕಾಂತ ಕಡೆಗಂಚಿ, ಸವಿತಾ ಕುಲಕರ್ಣಿ, ವೀಣಾ ಸಾತಖೇಡ, ಗೋದಾವರಿ ಕುಲಕರ್ಣಿ, ವನಮಾಲ ಓಂಕಾರ, ಕವಿತಾ ಶರ್ಮಾ ಉಪಸ್ಥಿತರಿದ್ದರು.

# ವಿಮಾನನಿಲ್ದಾಣ ಕಾಮಗಾರಿ ಪರಿಶೀಲಿಸಿದ ರಾಯಚೂರು ಡಿ.ಸಿ.

**ರಾಯಚೂರು, ಮೇ. 24:** ನಗರದ ಹೊರ ವಲಯದ ಯರಮರಸ್ ಬಳಿ ನಿರ್ಮಾಣ ಹಂತದಲ್ಲಿರುವ ವಿಮಾನ ನಿಲ್ದಾಣದ ಕಾಮಗಾರಿ ಸ್ಥಳಕ್ಕೆ ಜಿಲ್ಲಾಧಿಕಾರಿ ಪೂವಿತಾ ಎಸ್. ಭೇಟಿ ನೀಡಿ ಪರಿಶೀಲನೆ ನಡೆಸಿ, ವಿಮಾನ ನಿಲ್ದಾಣದ ರನ್ ವೇ ಕಾಮಗಾರಿಯ ವೀಕ್ಷಣೆ ನಡೆಸಿ ಕಾಮಗಾರಿಯ ಪ್ರಗತಿಯ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದರು. ಒಟ್ಟು 1.7 ಕಿ.ಮೀ ಉದ್ದದ ರನ್ ವೇ ಪೈಕಿ ಇದುವರೆಗೆ 850 ಮೀಟರ್ ನಷ್ಟು ರನ್ ವೇಗೆ ಮರಂ ಹಾಕಿದ್ದು ಬಾಕಿ ಕಾಮಗಾರಿ ಪ್ರಗತಿ ಹಂತದಲ್ಲಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

ಬಳಿಕ ಜಿಲ್ಲಾಧಿಕಾರಿ, ಪ್ಯಾಸೆಂಜರ್ ಟರ್ಮಿನಲ್ ಕಟ್ಟಡಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಈ ಕಟ್ಟಡಕ್ಕೆ ಈಗಾಗಲೇ ಕಾಲಂ ಮತ್ತು ಚಾವಣಿ ಹಾಕಿದ್ದು, ಈಗ ರೂಫ್ ಟ್ರಸ್ ಕಾಮಗಾರಿ ಕೈಗೊಳ್ಳಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದರು. ಇದೇ ವೇಳೆ ಎಲೆಕ್ಟ್ರಿಕಲ್ ಸಬ್ ಸ್ಟೇಷನ್ ಬಿಲ್ಡಿಂಗ್–1 ಮತ್ತು ಬಿಲ್ಡಿಂಗ್ 2ರ ಕಾಮಗಾರಿಗಳ ಬಗ್ಗೆ ಪರಿಶೀಲಿಸಿದರು. 12 ಸೆಕ್ಯುರಿಟಿ ವಾಚ್ ಟವರ್ ಪೈಕಿ 8 ಟವರ್‌ಗಳ ನಿರ್ಮಾಣ ಕಾರ್ಯ ನಡೆದಿದೆ. ನಿಲ್ದಾಣದ ಆವರಣದ ಒಳಭಾಗದ ರಸ್ತೆಗಳ ನಿರ್ಮಾಣ ಕಾಮಗಾರಿಯೂ ಪ್ರಗತಿಯಲ್ಲಿದೆ. ವಿಮಾನ ನಿಲ್ದಾಣದ ಒಟ್ಟು 8 ಕಿ.ಮೀ ಆವರಣ ಗೋಡೆ ನಿರ್ಮಾಣ ಕಾರ್ಯ ಪೂರ್ಣಗೊಂಡಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು.



ವಿಮಾನ ನಿಲ್ದಾಣದ ಕಾಮಗಾರಿಯ ವೇಗ ಹೆಚ್ಚಿಸಿ, ಬಾಕಿ ಉಳಿಸಿದ ಎಲ್ಲ ಕಾರ್ಯಗಳನ್ನು ಕಾಲಮಿತಿಯೊಳಗೆ ಪೂರ್ಣಗೊಳಿಸಬೇಕು ಎಂದು ಜಿಲ್ಲಾಧಿಕಾರಿ ಗುತ್ತಿಗೆದಾರರು ಮತ್ತು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಹೊರ ವಲಯದ ದಂಡ್ ಗ್ರಾಮದ 108 ಹಾಗೂ ಏಗನೂರು ಗ್ರಾಮದ 30 ಮನೆಗಳ ಹಸ್ತಾಂತರ ಹಿನ್ನೆಲೆಯಲ್ಲಿ ನೂತನವಾಗಿ ನಿರ್ಮಾಣವಾಗುತ್ತಿರುವ ಲೇಔಟ್‌ಗಳಿಗೆ ಭೇಟಿ ನೀಡಿ ಪರಿಶೀಲನೆ ಮಾಡಿದರು.

# ಬಕ್ರೀದ್‌ನಲ್ಲಿ ಗೋಹತ್ಯೆ ತಡೆಗೆ ಆಗ್ರಹ



**ಬೀದರ್, ಮೇ. 24:** ಇದೇ ಮೇ 28ರಂದು ಬಕ್ರೀದ್ ಹಬ್ಬದ ಸಂದರ್ಭದಲ್ಲಿ ರಾಜ್ಯದ ವಿವಿಧ ಭಾಗಗಳಲ್ಲಿ ಅಕ್ರಮವಾಗಿ ಗೋವು, ಎಮ್ಮೆ ಹಾಗೂ ಕರುಗಳ ಸಾಗಾಟ, ಕಾನೂನು ಬಾಹಿರ ಗೋಹತ್ಯೆ ನಡೆಯುವ ಸಾಧ್ಯತೆ ಇದ್ದು, ರಾಜ್ಯ ಸರ್ಕಾರ ಹಾಗೂ ಪೊಲೀಸ್ ಇಲಾಖೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕೆಂದು ಹಿಂದೂ ಜನಜಾಗೃತಿ ಸಮಿತಿ ಆಗ್ರಹಿಸಿದೆ. ಈ ಸಂಬಂಧ ಸಮಿತಿ ಪದಾಧಿಕಾರಿಗಳು ನಗರದಲ್ಲಿ ಗೃಹಸಚಿವರ ಹೆಸರಿಗೆ ಬರೆದ ಮನವಿ ಪತ್ರವನ್ನು ಜಿಲ್ಲಾಧಿಕಾರಿ ಕಚೇರಿಯ ಅಧಿಕಾರಿಗೆ ಸಲ್ಲಿಸಿದರು.

ಕರ್ನಾಟಕ ಸರ್ಕಾರ ಗೋಹತ್ಯೆ ನಿಷೇಧ ಮತ್ತು ಗೋಸಂರಕ್ಷಣಾ ಕಾಯ್ದೆ ಜಾರಿಗೆ ತಂದರೂ ಸಹ, ಹಿಂದಿನ ವರ್ಷಗಳಲ್ಲಿ ಕೆಲವು ಕಡೆಗಳಲ್ಲಿ ರಸ್ತೆಬದಿ, ಜನವಸತಿ ಪ್ರದೇಶಗಳು ಹಾಗೂ ತಾತ್ಕಾಲಿಕ ಶೆಡ್‌ಗಳಲ್ಲಿ ಕಾನೂನುಬಾಹಿರವಾಗಿ ಗೋಹತ್ಯೆ ನಡೆದಿರುವ ಬಗ್ಗೆ ದೂರುಗಳು ಬಂದಿವೆ. ಇಂಥ ಕೃತ್ಯಗಳು ಕಾನೂನು ಸುವ್ಯವಸ್ಥೆಗೆ ಧಕ್ಕೆಯುಂಟು ಮಾಡುವುದರ ಜೊತೆಗೆ ಹಿಂದೂ ಸಮಾಜದ ಧಾರ್ಮಿಕ ಭಾವನೆಗಳಿಗೂ ನೋವುಂಟು ಮಾಡುತ್ತವೆ ಎಂದು ತಿಳಿಸಿದ್ದಾರೆ.

ರಾಜ್ಯ ಸರ್ಕಾರವು ತಕ್ಷಣ ವಿಶೇಷ ಪೊಲೀಸ್ ಹಾಗೂ ಆಡಳಿತಾತ್ಮಕ ಕ್ರಮಗಳನ್ನು ಕೈಗೊಳ್ಳಬೇಕು. ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳಲ್ಲಿ ವಿಶೇಷ ಚೆಕ್‌ಪೋಸ್ಟ್‌ಗಳನ್ನು ಸ್ಥಾಪಿಸಿ, ಪಶು ಸಾಗಾಟ ವಾಹನಗಳ ಕಟ್ಟುನಿಟ್ಟಿನ ತಪಾಸಣೆ ನಡೆಸಬೇಕು ಎಂದು ಆಗ್ರಹಿಸಿದ್ದಾರೆ.

ಪಶು ಸಾಗಾಟಕ್ಕೆ ಸಂಬಂಧಿಸಿದ ದಾಖಲೆಗಳು, ಪರವಾನಗಿಗಳು ಹಾಗೂ ಕಾನೂನುಬದ್ಧ ನಿಯಮಗಳನ್ನು ಪರಿಶೀಲಿಸಿ, ಅಕ್ರಮ ಸಾಗಾಟ ಕಂಡುಬಂದಲ್ಲಿ ತಕ್ಷಣ ಕಠಿಣ ಕ್ರಮ ಕೈಗೊಳ್ಳಬೇಕು. ರಸ್ತೆ ಬದಿ, ಜನವಸತಿ ಪ್ರದೇಶಗಳು ಹಾಗೂ ತಾತ್ಕಾಲಿಕ ಸ್ಥಳಗಳಲ್ಲಿ ಯಾವುದೇ ರೀತಿಯ ಕಾನೂನು ಬಾಹಿರ ಗೋಹತ್ಯೆಗೆ ಅವಕಾಶ ನೀಡಬಾರದು ಎಂದು ಒತ್ತಾಯಿಸಿದ್ದಾರೆ.

ರಾಜ್ಯದ ಎಲ್ಲಾ ಪೊಲೀಸ್ ಠಾಣೆಗಳು ಹಾಗೂ ಜಿಲ್ಲಾ ಆಡಳಿತಗಳಿಗೆ ವಿಶೇಷ ಸೂಚನೆ ನೀಡಿ, ಸೂಕ್ಷ್ಮ ಪ್ರದೇಶಗಳಲ್ಲಿ ಹೆಚ್ಚುವರಿ ಭದ್ರತೆ ಒದಗಿಸಬೇಕು. ಅಕ್ರಮ ಗೋ ಸಾಗಾಟ ಮತ್ತು ಗೋಹತ್ಯೆಯಲ್ಲಿ ಭಾಗಿಯಾಗುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಂಡು ಪ್ರಕರಣ ದಾಖಲಿಸಬೇಕು ಎಂದು ಸರ್ಕಾರವನ್ನು ಆಗ್ರಹಿಸಿದ್ದಾರೆ. ರಾಜ್ಯದಲ್ಲಿ ಶಾಂತಿ, ಕಾನೂನು ಸುವ್ಯವಸ್ಥೆ ಹಾಗೂ ಸಾಮಾಜಿಕ ಸೌಹಾರ್ದ ಕಾಪಾಡುವ ನಿಟ್ಟಿನಲ್ಲಿ ಸರ್ಕಾರವು ತಕ್ಷಣ ಪರಿಣಾಮಕಾರಿ ಕ್ರಮ ಕೈಗೊಳ್ಳಬೇಕೆಂದು ಕೋರಿದ್ದಾರೆ.

ಹಿಂದೂ ರಾಷ್ಟ್ರ ಸಮನ್ವಯ ಸಮಿತಿ ಬೀದರ್ ಜಿಲ್ಲಾ ಸಂಯೋಜಕ ಶ್ರೀಕಾಂತ್ ಮೋದಿ, ಗೋ ಸೇವಾ ಗತಿವಿಧಿ, ಕರ್ನಾಟಕ ಉತ್ತರ ಪ್ರಾಂತ ಸಹ ಸಂಯೋಜಕ ಚನ್ನಬಸವಂತ ರೆಡ್ಡಿ, ಹಿಂದೂ ರಾಷ್ಟ್ರ ಸಮನ್ವಯ

# ಬಳ್ಳಾರಿಯಲ್ಲಿ ಸರ್ವರ್ ಸಮಸ್ಯೆ ನಿವಾರಿಸಿ: ಮೀನಳ್ಳಿ ತಾಯಣ್ಣ ಆಗ್ರಹ

**ಬಳ್ಳಾರಿ, ಮೇ 24.** ರಾಜ್ಯದ ಎಲ್ಲಾ ನ್ಯಾಯಬೆಲೆ ಅಂಗಡಿ ಮಾಲೀಕರಿಗೆ ವಿ ಎಸ್ ಎಸ್ ಏನ್ ಕಾರ್ಯದರ್ಶಿಯವರಿಗೆ ತಿಳಿಸುವುದೇನೆಂದರೆ ಹೋದ ತಿಂಗಳಿಂದ ಈ ತಿಂಗಳು ತುಂಬಾ ಸರ್ವರ್ ಸಮಸ್ಯೆ ಹೆಚ್ಚಾಗಿದ್ದು ರಾಜ್ಯ ದ್ಯಂತ ಕಾರ್ಡುದಾರರು ಅಂಗಡಿಯ ಮುಂದೆ ಬಂದು ಗಲಾಟೆ ಮಾಡುವುದು ಸರಕಾರಕ್ಕೆ ಶಾಪ ಹಾಕುವುದು ಅಂಗಡಿ ಮಾಲೀಕರಿಗೂ ಶಾಪ ಹಾಕಿ ಗಲಾಟೆ ನಡೆಯುತ್ತಿದೆ ಇಡೀ ರಾಜ್ಯದ್ಯಂತ ಈ ಬೆಳವಣಿಗೆ ಯಾವಾಗಲೂ ಹಾಗಿರಲಿಲ್ಲ ಈ ಎರಡು ತಿಂಗಳಿಂದ ಸಮಸ್ಯೆಗಳನ್ನು ಎದುರಿಸಲು ನಮ್ಮಲ್ಲಿ ತುಂಬಾ ತೊಂದರೆಯಾಗುತ್ತಿದೆ.



ರಾಜ್ಯ ಅಧ್ಯಕ್ಷರಾದ ಕೃಷ್ಣಪ್ಪನವರು ಪ್ರತಿದಿನ ಬೆಂಗಳೂರು ಕಾರ್ಯದರ್ಶಿಯವರ ಆಫೀಸ್ ಆಯುಕ್ತರ ಆಫೀಸ್ ಎನ್‌ಐಸಿ ಅವರ ಆಫೀಸ್ ಪ್ರತಿದಿನ ತಿರುಗುತ್ತಿದ್ದಾರೆ ಆದರೂ ಸಹ ಸರಿಪಡಿಸುತ್ತಿಲ್ಲ ಆದ್ದರಿಂದ ಸರ್ಕಾರಕ್ಕೆ ಮನವಿ ಮಾಡುತ್ತೇವೆ ಆದ್ದರಿಂದ 26 ನೇ ತಾರೀಕು ಮಂಗಳವಾರ ರಾಜ್ಯದ ಎಲ್ಲಾ ತಾಲೂಕ್ನಿಂದಲೂ 4 ರಿಂದ 5 ಜನ ಕರೆದುಕೊಂಡು ಬಂದು ಫ್ರೀಡಂ ಪಾರ್ಕ್ ಹತ್ರ ಸಭೆ ಮಾಡೋಣ ಕಾರ್ಯದರ್ಶಿ ಅವರು 18ನೇ ತಾರೀಖ್ ಎನ್ ಐ ಸಿ ಅವರ ಜೊತೆ ಮಾತನಾಡಿ ಈ ಗಂಟೆಯಿಂದಲೇ ಸರ್ವರ್ ಸಮಸ್ಯೆ ಇರಬಾರದು 12 ದಿವಸದೊಳಗೆ ವಿತರಣೆ ಗೆ ಅವಕಾಶ ಮಾಡಿಕೊಡಬೇಕೆಂದು ಆದೇಶ ಮಾಡಿದ್ದಾರೆ.

ಆಯುಕ್ತರು ಸಹ ನಿಮ್ಮೆಲ್ಲರ ಸಮಸ್ಯೆಗಳನ್ನು ಬಗೆಹರಿಸು ತ್ತೇನೆ ಎಂದು ಹೇಳಿದ್ದರು ಸಹ ಇನ್ನು ಬಗೆಹರಿದಿಲ್ಲ ಆದ್ದರಿಂದ ದಯಮಾಡಿ ರಾಜ್ಯದ ಎಲ್ಲಾ ತಾಲೂಕಿನಿಂದಲೂ ಮಾಲೀಕರು ಬಂದು ಭಾಗವಹಿಸಿ ಮುಂದಿನ ಬೆಳವಣಿಗೆಗೆ ಚರ್ಚೆ ಮಾಡೋಣ ನಾವೆಲ್ಲರೂ ಸುಮ್ಮನೆ ಕೂತರೆ ಕೂಲಿ ಕಾರ್ಮಿಕರಿಗೆ ಮತ್ತು ನಮ್ಮ ಮಾಲಕರಿಗೆ ದಿನನಿತ್ಯ ಸಮಸ್ಯೆಗಳೇ ಆಗಿವೆ ಆದ್ದರಿಂದ ಈ ಸಭೆಯನ್ನು ತುರ್ತಾಗಿ ಕರೆಯಲಾಗಿದೆ ಎಂದು ಮೀನಳ್ಳಿ ತಾಯಣ್ಣ ರಾಜ್ಯ ಕಾರ್ಯಧ್ಯಕ್ಷರು ಹಾಗೂ ಬಳ್ಳಾರಿ ಜಿಲ್ಲಾ ಅಧ್ಯಕ್ಷರು ಸರ್ಕಾರಿ ಪಡಿತರ

# ರೈತರಿಗೆ ತರಕಾರಿ ಬೀಜ ಕಿಟ್ ವಿತರಣೆ

**ಬೀದರ್, ಮೇ. 24:** ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ ರೈತರಿಗೆ ತರಕಾರಿ ಬೀಜಗಳ ಕಿಟ್ ವಿತರಣೆಗೆ ಶಾಸಕ ಡಾ. ಶೈಲೇಂದ್ರ ಕೆ. ಬೆಲ್ದಾಳೆ ಅವರು ನಗರದ ತಮ್ಮ ಕಚೇರಿಯಲ್ಲಿ ಚಾಲನೆ ನೀಡಿದರು.

ಬೀದರ್ ದಕ್ಷಿಣ ಕ್ಷೇತ್ರದಲ್ಲಿ ರೈತರ ಆರ್ಥಿಕ ಅಭಿವೃದ್ಧಿ ಹಾಗೂ ತೋಟಗಾರಿಕೆ ಬೆಳೆಗಳ ಉತ್ತೇಜನಕ್ಕೆ ಬೀಜಗಳನ್ನು ವಿತರಿಸಲಾಗಿದೆ. ಕೃಷಿ ಕ್ಷೇತ್ರದ ಬಲವರ್ಧನೆಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರ ರೈತಪರ ಯೋಜನೆಗಳನ್ನು ಪರಿಣಾಮಕಾರಿಯಾಗಿ ಜಾರಿಗೆ ತರುತ್ತಿದೆ.




ರೈತರು ಆ ಯೋಜನೆಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ವಿಶೇಷವಾಗಿ ತೋಟಗಾರಿಕೆ ಬೆಳೆಗಳು ಕಡಿಮೆ ಅವಧಿಯಲ್ಲಿ ಉತ್ತಮ ಆದಾಯ ತಂದುಕೊಡುವ ಸಾಮರ್ಥ್ಯ ಹೊಂದಿರುವುದರಿಂದ ರೈತರು ತರಕಾರಿ ಬೆಳೆಗಳತ್ತ ಹೆಚ್ಚಿನ ಆಸಕ್ತಿ ತೋರಬೇಕು ಎಂದು ತಿಳಿಸಿದರು.

ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ರೈತರ ಆರ್ಥಿಕ ಸಬಲೀಕರಣದ ಉದ್ದೇಶದಿಂದ ಸರ್ಕಾರ ವಿವಿಧ ಸಹಾಯಧನ ಹಾಗೂ ಪ್ರೋತ್ಸಾಹದಾಯಕ ಯೋಜನೆಗಳನ್ನು ಜಾರಿಗೆ ತಂದಿದೆ. ರೈತರು ಆಧುನಿಕ ಕೃಷಿ ಪದ್ಧತಿಗಳನ್ನು ಅಳವಡಿಸಿಕೊಂಡು ಹೆಚ್ಚಿನ ಉತ್ಪಾದನೆ ಸಾಧಿಸಬೇಕು. ಗ್ರಾಮೀಣ ಭಾಗದ ರೈತರಿಗೆ ಕೃಷಿ ಚಟುವಟಿಕೆಗಳಲ್ಲಿ ನೆರವು ನೀಡುವ ನಿಟ್ಟಿನಲ್ಲಿ ಗುಣಮಟ್ಟದ ಬೀಜ, ರಸಗೊಬ್ಬರ ಸೇರಿದಂತೆ ಅಗತ್ಯ ಮೂಲ ಸೌಕರ್ಯಗಳನ್ನು ಕಲ್ಪಿಸಲು ಕೇಂದ್ರ ಹಾಗೂ ರಾಜ್ಯ ಸರ್ಕಾರ ಬದ್ಧವಾಗಿದೆ ಎಂದರು.

ಮಾರುಕಟ್ಟೆಯಲ್ಲಿ ಉತ್ತಮ ಬೇಡಿಕೆ ಇರುವ ಬೆಳೆಗಳನ್ನು ಬೆಳೆಸುವ ಮೂಲಕ ಸ್ವಾವಲಂಬಿ ಬದುಕು ರೂಪಿಸಿಕೊಳ್ಳಬಹುದು ಎಂದರು.

ರೈತರು ಕೃಷಿಯೊಂದಿಗೆ ತೋಟಗಾರಿಕೆ ಚಟುವಟಿಕೆಗಳನ್ನು ಸಂಯೋಜನೆ ಮಾಡಿಕೊಂಡು ಆರ್ಥಿಕವಾಗಿ ಮತ್ತಷ್ಟು ಸದೃಢರಾಗ ಬೇಕು. ರೈತರು ಸರ್ಕಾರದ ಯೋಜನೆ ಗಳನ್ನು ಸದುಪಯೋಗಪಡಿಸಿಕೊಂಡು ಕೃಷಿ ಕ್ಷೇತ್ರದಲ್ಲಿ ಹೊಸ ಸಾಧನೆ ಮಾಡಬೇಕು ಎಂದರು.

# ಮಲಬಾರ್ ಗೋಲ್ಡ್ ವತಿಯಿಂದ 129 ವಿದ್ಯಾರ್ಥಿಗಳಿಗೆ 10.42 ಲಕ್ಷ ಸ್ಕಾಲರ್‌ಶಿಪ್: ಸಾಮಾಜಿಕ ಸೇವೆಗಳಿಗೆ ನಾರಾ ಭರತ್‌ರೆಡ್ಡಿ ಶ್ಲಾಘನೆ

**ಬಳ್ಳಾರಿ, ಮೇ 24:** ಪ್ರತಿಷ್ಠಿತ ಭಾರತದ ಮುಂಚೂಣಿಯಲ್ಲಿರುವ ವ್ಯವಹಾರಿಕ ಸಮೂಹ ಸಂಸ್ಥೆ ಮತ್ತು ಮಲಬಾರ್ ಗೋಲ್ಡ್ & ಡೈಮಂಡ್ಸ್‌ನ ಪೋಷಕ ಸಂಸ್ಥೆಯಾಗಿರುವ ಮಲಬಾರ್ ಗ್ರೂಪ್ ಕರ್ನಾಟಕದ ಬಳ್ಳಾರಿಯ ಶೋರೂಮಿನಲ್ಲಿ 21/05/26 ರಂದು ಅರ್ಹ ವಿದ್ಯಾರ್ಥಿನಿಯರಿಗೆ ವಿದ್ಯಾರ್ಥಿವೇತನವನ್ನು ವಿತರಿಸುವ ಕಾರ್ಯಕ್ರಮವನ್ನು ಬಳ್ಳಾರಿ ನಗರದ ಶಾಸಕರಾದ ನಾರಾ ಭರತ್ ರೆಡ್ಡಿಯವರು ಉದ್ಘಾಟಿಸಿದರು.

ಆನಂತರ ಅವರು ಮಾತನಾಡುತ್ತಾ, ಮಲಬಾರ್ ಚಾರಿಟೇಬಲ್ ಟ್ರಸ್ಟ್‌ನಿಂದ ಶಿಕ್ಷಣ ಸಬಲೀಕರಣ, ಮಹಿಳಾ ಸಬಲೀಕರಣ ಕಾರ್ಯಕ್ರಮದ ಅಂಗವಾಗಿ ಬಳ್ಳಾರಿಯ 129 ವಿದ್ಯಾರ್ಥಿನಿಯರಿಗೆ 10.42 ಲಕ್ಷ ರೂ ವಿದ್ಯಾರ್ಥಿ ವೇತನ ನೀಡುತ್ತಿರುವುದು ಅತ್ಯಂತ ಅಭಿನಂದನೀಯ ಕೆಲಸ.. ಮುಂದಿನ ದಿನಗಳಲ್ಲಿ ಈ ಟ್ರಸ್ಟ್‌ನಿಂದ ಇನ್ನೂ ಹೆಚ್ಚಿನ ಸಾಮಾಜಿಕ ಕಾರ್ಯಗಳು ಆಗಬೇಕು. ಮಲಬಾರ್ ಕಂಪನಿ ಅತ್ಯಂತ ಜನಪ್ರಿಯ ಬಂಗಾರದ ಆಭರಣಗಳು ಮತ್ತು ವಜ್ರದ ಆಭರಣಗಳ ಕಂಪನಿಯಾಗಿದ್ದು, ತನ್ನ ಜನಪ್ರೀಯತೆ ಜೊತೆಗೆ ಜನಪರ ಕಾರ್ಯಕ್ರಮಗಳನ್ನು ಮಾಡುತ್ತಾ ಬಂದಿದೆ. ಕಳೆದ 27 ವರ್ಷದಲ್ಲಿ ನೂರಾರು ಶಾಖೆಗಳನ್ನು ದೇಶದಾದ್ಯಂತ ಸ್ಥಾಪಿಸಿರುವ ಕಂಪನಿ ತನ್ನ ಚಾರಿಟೇಬಲ್ ಟ್ರಸ್ಟ ಸಿಎಸ್‌ಆರ್ ಅನುದಾನದಲ್ಲಿ ವಿದ್ಯಾರ್ಥಿನಿಯರಿಗೆ ವಿದ್ಯಾರ್ಥಿ ವೇತನ ನೀಡುವ ಮೂಲಕ ಸಾಮಾಜಿಕ ಜವಾಬ್ದಾರಿಯನ್ನು ತೋರಿದೆ ಎಂದರು. ಬಳ್ಳಾರಿಯ ಬಡ್ತಿ ಮುಖ್ಯಗುರುಗಳ ಸಂಘದ ಅಧ್ಯಕ್ಷರಾದ ಮೆಹತಾಬ್ ಅವರು ಮಾತನಾಡುತ್ತಾ ಮಲಬಾರ್ ಗೋಲ್ಡ್ ತನ್ನ ಕಂಪನಿಯ ಲಾಭಾಂಶದಲ್ಲಿ ವಿದ್ಯಾರ್ಥಿನಿಯರಿಗೆ ವಿದ್ಯಾರ್ಥಿ ವೇತನ, ಸಾರ್ವಜನಿಕರಿಗೆ ವಸತಿ ಯೋಜನೆ, ಅಪೌಷ್ಠಿಕ ಮಕ್ಕಳಿಗೆ ಪೌಷ್ಠಿಕ ಆಹಾರ ವಿತರಣೆ, ಊಟದ ವ್ಯವಸ್ಥೆ ಸೇರಿದಂತೆ ಸಾಕಷ್ಟು ಸಾಮಾಜಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಇಂತಹ ಸಾಮಾಜಿಕ ಕಳಕಳಿಯನ್ನು ಹೊಂದಿರುವ ಕಂಪನಿ ಎಂದು ಹೇಳಿಕೊಳ್ಳಲು ಸಂತೋಷವಾಗುತ್ತದೆ ಎಂದರು.

ಮಲಬಾರ್ ಗೋಲ್ಡ್‌ನ ರೀಜನಲ್ ಸಿಎಸ್‌ಆರ್ ಇಂಚಾರ್ಜ್ ಹೈದರ್ ಅವರು ಮಾತನಾಡುತ್ತಾ, ಆರಂಭದಿಂದಲೂ ಮಲಬಾರ್ ಗ್ರೂಪ್ ತನ್ನ ಸಾಮಾಜಿಕ ಕಲ್ಯಾಣ ಚಟುವಟಿಕೆಗಳ ಮೂಲಕ ಸಮಗ್ರ ಬೆಳವಣಿಗೆಗೆ ಪೂರಕವಾದ ಬದ್ಧತೆಯನ್ನು ಪ್ರದರ್ಶಿಸುತ್ತಿದೆ. 1999 ರಲ್ಲಿ ಮಲಬಾರ್ ಚಾರಿಟೆಬಲ್ ಟ್ರಸ್ಟ್ (ಎಂಸಿಟಿ) ಅನ್ನು ರಚನೆ ಮಾಡಲಾಯಿತು. ಇದರ ಮೂಲಕ ಸಮಾಜಮುಖಿ ಕಾರ್ಯಗಳನ್ನು ಮುಂದುವರಿಸುವುದು ಮತ್ತು ವಿಸ್ತರಣೆ ಮಾಡುವ ಕಾರ್ಯಗಳನ್ನು ನಡೆಸಲಾಗುತ್ತಿದೆ. ಸಮೂಹ ಸಂಸ್ಥೆಯು ತನ್ನ ವಾರ್ಷಿಕ ನಿವ್ವಳ ಲಾಭದ ಶೇ.5 ರಷ್ಟು ಭಾಗವನ್ನು ಶಿಕ್ಷಣ, ವಸತಿ, ಆರೋಗ್ಯ ರಕ್ಷಣೆ, ಪರಿಸರ ಕಾಳಜಿ ಮತ್ತು ಬಡತನ ನಿರ್ಮೂಲನೆಯನ್ನು ಒಳಗೊಂಡ ಸಿಎಸ್‌ಆರ್ ಉಪಕ್ರಮಗಳಿಗೆ ಮೀಸಲಿಡುತ್ತಿದೆ. ಇದು ದುರ್ಬಲ ವರ್ಗದ ಸಮುದಾಯಗಳ ಸಬಲೀಕರಣದ ಉನ್ನತಿಗೆ ಸಹಕಾರಿಯಾಗುತ್ತಿದೆ. 2007ರಲ್ಲಿ ಆರಂಭವಾದ ಮಲಬಾರ್ ರಾಷ್ಟ್ರೀಯ ವಿದ್ಯಾರ್ಥಿವೇತನ ಕಾರ್ಯಕ್ರಮವು ಅದರ ಸಿಎಸ್‌ಆರ್ ಚೌಕಟ್ಟಿನಡಿಯಲ್ಲಿ ಒಂದು ಅತ್ಯಂತ ಪ್ರಮುಖವಾದ ಉಪಕ್ರಮವಾಗಿದೆ.




ಇಲ್ಲಿವರೆಗೆ ಈ ಕಾರ್ಯಕ್ರಮವನ್ನು ಬೆಂಬಲಿಸುವ ನಿಟ್ಟಿನಲ್ಲಿ 77.40 ಕೋಟಿ ರೂಪಾಯಿಗಳನ್ನು ವಿನಿಯೋಗಿಸಲಾಗಿದ್ದು, ಭಾರತದಾದ್ಯಂತ 1,15,000ಕ್ಕೂ ಹೆಚ್ಚು ವಿದ್ಯಾರ್ಥಿನಿಯರಿಗೆ ಆರ್ಥಿಕ ನೆರವು ನೀಡಲಾಗಿದೆ ಮತ್ತು ಕರ್ನಾಟಕ ರಾಜ್ಯದ 31,500ಕ್ಕೂ ಹೆಚ್ಚು ವಿದ್ಯಾರ್ಥಿನಿಯರಿಗೆ 21.57 ಕೋಟಿ ರೂಪಾಯಿಗಳ ನೆರವನ್ನು ನೀಡಲಾಗಿದೆ.

ವಿದ್ಯಾರ್ಥಿನಿಯರ ಶಿಕ್ಷಣದ ಮೇಲೆ ಕೇಂದ್ರೀಕರಿಸುವ ಮೂಲಕ ಮಲಬಾರ್ ಗ್ರೂಪ್ ವ್ಯಕ್ತಿಗಳನ್ನು ಮಾತ್ರವಲ್ಲದೇ ಇಡೀ ಸಮುದಾಯಗಳ ಜೀವನ ಮಟ್ಟವನ್ನು ಸುಧಾರಿಸುವ ಗುರಿಯನ್ನು ಹೊಂದಿದೆ. ಈ ಮೂಲಕ ಭವಿಷ್ಯದ ಪೀಳಿಗೆಗಳು ಸಾಮಾಜಿಕ ಮತ್ತು ಆರ್ಥಿಕ ಪ್ರಗತಿಗೆ ಸಾಧನಗಳೊಂದಿಗೆ ಸಜ್ಜುಗೊಂಡಿವೆ ಎಂಬುದನ್ನು ಖಚಿತಪಡಿಸುತ್ತದೆ.

ಕರ್ನಾಟಕದಲ್ಲಿನ 672 ಕಾಲೇಜುಗಳ 7614 ಹೆಣ್ಣು ಮಕ್ಕಳ ವ್ಯಾಸಂಗಕ್ಕೆ ನೆರವಾಗುವ ದೃಷ್ಟಿಯಿಂದ ಒಟ್ಟು 6.11 ಕೋಟಿ ರೂಪಾಯಿಗಳ ವಿದ್ಯಾರ್ಥಿ ವೇತನವನ್ನು ವಿತರಣೆ ಮಾಡಲಾಗುತ್ತಿದೆ ಎಂದರು. ವಿದ್ಯಾರ್ಥಿವೇತನ ಕಾರ್ಯಕ್ರಮವಲ್ಲದೇ, ಮಲಬಾರ್ ಗ್ರೂಪ್‌ನ ಹಂಗರ್ ಫ್ರೀ ವರ್ಲ್ಡ್ ಯೋಜನೆಯು ದೇಶದಾದ್ಯಂತದ ದುರ್ಬಲ ವರ್ಗದವರಿಗೆ ಪೌಷ್ಟಿಕ ಆಹಾರವನ್ನು ಒದಗಿಸುತ್ತಿದೆ. ಮಲಬಾರ್ ಗ್ರೂಪ್ ವೃದ್ಧ ಮಹಿಳೆಯರಿಗಾಗಿ ಗ್ರಾಂಡ್ ಮಾ ಹೋಂ ಯೋಜನೆಯನ್ನೂ ಆರಂಭಿಸಿದೆ. ಇಲ್ಲಿ ನಿರ್ಗತಿಕ ಮಹಿಳೆಯರು, ವೃದ್ಧೆಯರಿಗೆ ಸಂಪೂರ್ಣ ಉಚಿತವಾಗಿ ಸುಸಜ್ಜಿತ ಆಶ್ರಯವನ್ನು ನೀಡಲಾಗುತ್ತಿದೆ. ಅವರಿಗೆ ಪೌಷ್ಟಿಕ ಆಹಾರ, ಔಷಧೋಪಚಾರ, ಆರೈಕೆ ಮಾಡಲಾಗುತ್ತಿದೆ. ಪ್ರಸ್ತುತ, ಭಾರತದಾದ್ಯಂತ 4 ಗ್ರಾಂಡ್ ಮಾ ಹೋಂ ಗಳನ್ನು ಹೊಂದಿದೆ. ಬೆಂಗಳೂರು, ಕೇರಳ ಹಾಗೂ ಹೈದ್ರಾಬಾದ್‌ನಲ್ಲಿ ಈ ಮನೆಗಳು ಕಾರ್ಯ ನಿರ್ವಹಿಸುತ್ತಿವೆ. ಇಂತಹ ಮನೆಗಳನ್ನು ಕೇರಳದ ಪ್ರಮುಖ ನಗರಗಳು, ಚೆನ್ನೈ, ಕೋಲ್ಕತ್ತಾ, ದೆಹಲಿ ಮತ್ತು ಮುಂಬೈನಲ್ಲೂ ಆರಂಭಿಸುವ ಉದ್ದೇಶವನ್ನು ಹೊಂದಲಾಗಿದೆ. ಶಾಲೆಯಿಂದ ಹೊರಗುಳಿದ ಮಕ್ಕಳ ಶಿಕ್ಷಣಕ್ಕಾಗಿ ನಾವು 20 ರಾಜ್ಯಗಳಲ್ಲಿ 1543 ಮೈಕ್ರೋ–ಲರ್ನಿಂಗ್ ಸೆಂಟರ್‌ಗಳನ್ನು ಸ್ಥಾಪನೆ ಮಾಡಿದ್ದೇವೆ. ಇದುವರೆಗೆ 64,000 ವಿದ್ಯಾರ್ಥಿಗಳಿಗೆ ಬೆಂಬಲ ನೀಡಿದ್ದೇವೆ

ಸಂಸ್ಥೆಯ ಸಿಎಸ್‌ಆರ್ ಉಪಕ್ರಮಗಳು ದುರ್ಬಲ ವರ್ಗದ ಸಮುದಾಯಗಳಿಗೆ ವೈದ್ಯಕೀಯ ನೆರವು, ವಸತಿ ನಿರ್ಮಾಣ ಸೇರಿದಂತೆ ಇನ್ನಿತರೆ ಕಾರ್ಯಕ್ರಮಗಳನ್ನು ನೀಡುವ ಮೂಲಕ ಈ ಸಮುದಾಯಗಳ ಜೀವನ ಮಟ್ಟವನ್ನು ಸುಧಾರಣೆ ಮಾಡುವ ಉದ್ದೇಶವನ್ನು ಹೊಂದಿದೆ. ಇಲ್ಲಿವರೆಗೆ ಮಲಬಾರ್ ಗ್ರೂಪ್ ಇಂತಹ ಅನೇಕ ಸಾಮಾಜಿಕ ಜವಾಬ್ದಾರಿ ಕಾರ್ಯಕ್ರಮಗಳಿಗೆ 388 ಕೋಟಿ ರೂಪಾಯಿಗಳನ್ನು ವಿನಿಯೋಗ ಮಾಡಿದೆ. ಈ ಮೂಲಕ ಸುಸ್ಥಿರ ಅಭಿವೃದ್ಧಿಗೆ ತನ್ನ ಬದ್ಧತೆಯನ್ನು ಪ್ರದರ್ಶಿಸಿದೆ. ಶಿಕ್ಷಣ ಮತ್ತು ಹಸಿವು ಸಮಸ್ಯೆಗಳಿಗೆ ಪರಿಹಾರದಂತಹ ಪ್ರಭಾವಶಾಲಿ ಉಪಕ್ರಮಗಳ ಮೇಲೆ ಮಲಬಾರ್ ಗ್ರೂಪ್‌ನ ನಿರಂತರ ಗಮನವು ಸಮುದಾಯಗಳು ಸಬಲೀಕರಣಗೊಂಡಾಗ ಮತ್ತು ಸಾಧ್ಯವಿರುವ ಎಲ್ಲಾ ರೀತಿಯಲ್ಲಿ ಬೆಂಬಲಿಸಿದಾಗ ಮಾತ್ರ ಸುಸ್ಥಿತ ಬೆಳವಣಿಗೆ ಸಾಧ್ಯ ಎಂಬುದನ್ನು ಕಂಪನಿಯು ನಂಬುತ್ತದೆ. ಈ ಗ್ರೂಪ್ ತನ್ನ ವ್ಯಾಪಾರ ಮತ್ತು ಸಾಮಾಜಿಕ ಜವಾಬ್ದಾರಿಗಳನ್ನು ವಿಸ್ತರಿಸುವುದನ್ನು ಮುಂದುವರಿಸಿ ಕೊಂಡು ಬರುತ್ತಿರುವುದರಿಂದ ಈ ಸಮರ್ಪಣೆಯು ಭವಿಷ್ಯದ ಎಲ್ಲಾ ಪ್ರಯತ್ನಗಳ ಹೃದಯದಲ್ಲಿ ಅಚ್ಚಳಿಯದೇ ಉಳಿಯುತ್ತದೆ ಎಂದರು.

ಈ ಸಂದರ್ಭದಲ್ಲಿ ಮಲಬಾರ್ ಗೋಲ್ಡ್ ಅಂಡ್ ಡೈಮಂಡ್ ಶಾಖೆಯ ಮುಖ್ಯಸ್ಥರಾದ ಹರ್ಷದ್,ಲಿಜೇಶ್, ಕಾಂಗ್ರೆಸ್ ಮುಖಂಡರಾದ ಸುಬ್ಬರಾಯುಡು, ಕಪ್ಪಗಲ್ ಚಂದ್ರಶೇಖರ್ ಆಚಾರಿ, ಎಮ್ಮಿಗನೂರು ಜಡೇಶ್, ಮಲಬಾರ್ ಗೋಲ್ಡ್‌ನ ವೀರೇಶ್, ಆದೀಶ್,ಶೈನಜ್, ಇತರ ನಿರ್ವಹಣಾ ತಂಡದ ಸದಸ್ಯರು, ಗ್ರಾಹಕರು, ಹಿತೈಷಿಗಳು ಮತ್ತು ವಿದ್ಯಾರ್ಥಿಗಳು, ಪೋಷಕರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದು ಕಾರ್ಯಕ್ರಮವನ್ನು ಅದ್ದೂರಿಯಾಗಿ ಯಶಸ್ವಿಗೊಳಿಸಿದರು.

# ಇರಾನ್ ಜತೆ ಒಪ್ಪಂದ ಮಾಡಿಕೊಳ್ಳಲು ಆತುರಪಡಬೇಡಿ ಸಂಧಾನಕಾರರಿಗೆ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸೂಚನೆ



**ವಾಷಿಂಗ್ಟನ್, ಮೇ 24:** "ಸಮಯ ನಮ್ಮ ಕಡೆಗಿದೆ" ಎಂದು ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳುತ್ತಾ, ಇರಾನ್ ಜೊತೆ ಒಪ್ಪಂದ ಮಾಡಿಕೊಳ್ಳಲು ಆತುರಪಡಬೇಡಿ ಎಂದು ಸಂಧಾನಕಾರರಿಗೆ ಸೂಚನೆ ನೀಡಿದ್ದಾರೆ, ಹಾರ್ಮುಜ್ ಜಲಸಂಧಿಯಲ್ಲಿನ ಅಮೆರಿಕದ ದಿಗ್ಬಂಧನವು "ಒಪ್ಪಂದವನ್ನು ತಲುಪುವವರೆಗೆ, ಪ್ರಮಾಣೀಕರಿಸುವವರೆಗೆ ಮತ್ತು ಸಹಿ ಹಾಕುವವರೆಗೆ" ಪೂರ್ಣ ಬಲದಲ್ಲಿ ಮತ್ತು ಪರಿಣಾಮಕಾರಿಯಾಗಿರುತ್ತದೆ ಎಂದು ಹೇಳಿದರು. ಎರಡೂ ಕಡೆಯವರು ತಮ್ಮ ಸಮಯವನ್ನು ತೆಗೆದುಕೊಂಡು ಅದನ್ನು ಸರಿಯಾಗಿ ಮಾಡಿಕೊಳ್ಳಬೇಕು. ಯಾವುದೇ ತಪ್ಪುಗಳಿರಬಾರದು. ಇರಾನ್ ಜೊತೆಗಿನ ನಮ್ಮ ಸಂಬಂಧವು ಹೆಚ್ಚು ವೃತ್ತಿಪರ ಮತ್ತು ಉತ್ಪಾದಕವಾಗುತ್ತಿದೆ" ಎಂದು ಅವರು ಹೇಳಿದರು. ಇರಾನ್ ಪರಮಾಣು ಶಸ್ತ್ರಾಸ್ತ್ರಗಳನ್ನು ಅಭಿವೃದ್ಧಿಪಡಿಸಲು ಸಾಧ್ಯವಿಲ್ಲ ಎಂದು "ಅರ್ಥಮಾಡಿಕೊಳ್ಳಬೇಕು" ಮತ್ತು "ಒಪ್ಪಂದ ಮಾಡಿಕೊಳ್ಳಲು ಆತುರಪಡಬೇಡಿ" ಎಂದು ಅವರು ಅಮೆರಿಕದ ಸಂಧಾನಕಾರರಿಗೆ ತಿಳಿಸಿದ್ದರು ಎಂದು ಅವರು ಹೇಳಿದರು. ಇರಾನ್ ಜೊತೆಗಿನ ಯಾವುದೇ ಅಂತಿಮ ಒಪ್ಪಂದವು "ಪರಮಾಣು ಬೆದರಿಕೆಯನ್ನು ತೆಗೆದುಹಾಕಬೇಕು" ಎಂದು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಈ ಹಿಂದೆ ಹೇಳಿದ್ದರು, "ಇರಾನ್ ಅಣ್ವಸ್ತ್ರಗಳನ್ನು ಹೊಂದಿರುವುದಿಲ್ಲ" ಎಂಬುದು ಅವರ ನೀತಿಯಾಗಿದೆ ಎಂದು ಹೇಳಿದರು. "ಇರಾನ್ ಜೊತೆಗಿನ ಯುದ್ಧದ ಹೊಸ ಬೆದರಿಕೆ ಇನ್ನೂ ದೊಡ್ಡದಾಗಿದೆ", ಏಕೆಂದರೆ "ಅಮೆರಿಕದ ಅಧ್ಯಕ್ಷರು ಇನ್ನೂ ಮಿಲಿಟರಿ ದಾಳಿಗಳನ್ನು ಪ್ರಾರಂಭಿಸುವ ಅವಕಾಶವನ್ನು ತೆರೆದಿಡುತ್ತಾರೆ. ಪ್ರಸ್ತಾವಿತ ಒಪ್ಪಂದವು ಟೆಹ್ರಾನ್ ತನ್ನ ಯುರೇನಿಯಂ ಅನ್ನು ತ್ಯಜಿಸುವ ಮತ್ತು ಬೇಷರತ್ತಾಗಿ ಜಲಸಂಧಿಯನ್ನು ಪುನಃ ತೆರೆಯುವ ಒಪ್ಪಂದವನ್ನು ಒಳಗೊಂಡಿದೆ ಎಂದು ಅಮೆರಿಕದ ಅಧಿಕಾರಿಗಳು ಹೇಳಿದ್ದಾರೆ. ಆದರೆ ಇರಾನ್ನ ರಾಜ್ಯ-ಸಂಬಂಧಿತ ಫಾರ್ಸ್ ನ್ಯೂಸ್ ಏಜೆನ್ಸಿ ಅಂತಹ ಯಾವುದೇ ಬದ್ಧತೆಗಳಿಲ್ಲ ಎಂದು ಹೇಳಿದೆ, ಟೆಹ್ರಾನ್ ವಿಶ್ವದ ತೈಲ ಪೂರೈಕೆಯ ಸುಮಾರು ಐದನೇ ಒಂದು ಭಾಗ ಹಾದುಹೋಗುವ ಮಾರ್ಗಗಳು, ಸಮಯ, ಪರವಾನಗಿಗಳು ಮತ್ತು ಕಾರ್ಯತಂತ್ರದ ಜಲಮಾರ್ಗದ ಮೂಲಕ ಪ್ರವೇಶದ ಮೇಲೆ ಸಾರ್ವಭೌಮ ನಿಯಂತ್ರಣವನ್ನು ಮುಂದುವರಿಸುತ್ತದೆ ಎಂದು ಒತ್ತಾಯಿಸಿತು. ವಾಷಿಂಗ್ಟನ್ ರಾಜತಾಂತ್ರಿಕ ವಲಯಗಳಲ್ಲಿ ಹರಡುತ್ತಿರುವ ವರದಿಗಳ ಪ್ರಕಾರ, ಪ್ರಸ್ತಾವಿತ ಚೌಕಟ್ಟಿನಲ್ಲಿ ಇರಾನ್‌ಗೆ ಭಾಗಶಃ ನಿರ್ಬಂಧಗಳ ಪರಿಹಾರ ಮತ್ತು ಟೆಹ್ರಾನ್‌ನ ಪರಮಾಣು ಕಾರ್ಯಕ್ರಮದ ಕುರಿತು ನವೀಕರಿಸಿದ ಆದರೆ ವ್ಯಾಖ್ಯಾನಿಸದ ಚರ್ಚೆಗಳಿಗೆ ಬದಲಾಗಿ ಸಮುದ್ರ ಸಂಚಾರವನ್ನು ಹಂತಹಂತವಾಗಿ ಪುನಃ ತೆರೆಯುವುದು ಸೇರಿದಂತೆ ಯುಎಸ್ನಿಂದ ಹಲವಾರು ರಿಯಾಯಿತಿಗಳನ್ನು ಒಳಗೊಂಡಿರಬಹುದು. ಪ್ರಸ್ತುತ ಪ್ರಸ್ತಾವನೆಯು ಆ ಮತ್ತು ಇತರ ಬಾಕಿ ಇರುವ ಪ್ರಶ್ನೆಗಳ ಕುರಿತು ನಿರಂತರ ರಾಜತಾಂತ್ರಿಕತೆಗಾಗಿ ಕನಿಷ್ಠ 30 ದಿನಗಳನ್ನು ಮೀಸಲಿಟ್ಟಿದೆ ಎಂದು ವರದಿಯಾಗಿದೆ. ಇರಾನ್ ತನ್ನ ಪಾಲಿಗೆ ಟ್ರಂಪ್ ಚೌಕಟ್ಟಿನ ಕೆಲವು ಭಾಗಗಳನ್ನು ಹಿಂದಕ್ಕೆ ತಳ್ಳಿದೆ. ಇರಾನ್ ವಾಸ್ತವವಾಗಿ ಒಪ್ಪಿಕೊಂಡ ಷರತ್ತಿನ ಮೇಲೆ ಈ ಜಲಸಂಧಿಯನ್ನು "ಸಂಪೂರ್ಣವಾಗಿ ಪುನಃ ತೆರೆಯಲಾಗುತ್ತದೆ". ಸಂಘರ್ಷ-ಪೂರ್ವ ಮಟ್ಟಕ್ಕೆ ಸಾಗಣೆಯನ್ನು ಪುನಃಸ್ಥಾಪಿಸಲು ಟೆಹ್ರಾನ್ ಮಾತ್ರ ಬದ್ಧವಾಗಿದೆ, ಇದು ಅನಿಯಂತ್ರಿತ ಮಾರ್ಗಕ್ಕೆ ಸಮನಾಗಿರುವುದಿಲ್ಲ. ಈ ಒಪ್ಪಂದವನ್ನು ಎರಡು ಹಂತಗಳಲ್ಲಿ ಜಾರಿಗೆ ತರಲಾಗುತ್ತದೆ ಎಂದು ಹೇಳಲಾಗುತ್ತದೆ. ಮೊದಲನೆಯದಾಗಿ, ಇರಾನ್ ಜಲಸಂಧಿಯ ಮೂಲಕ ಸಮುದ್ರ ಸಂಚಾರವನ್ನು ಯುದ್ಧಪೂರ್ವ ಮಟ್ಟಕ್ಕೆ ಪುನಃಸ್ಥಾಪಿಸುತ್ತದೆ, ಪರಮಾಣು ಶಸ್ತ್ರಾಸ್ತ್ರಗಳನ್ನು ಅನುಸರಿಸುವುದಿಲ್ಲ ಮತ್ತು ಇಂಧನ ಮತ್ತು ತೈಲ ರಫ್ತುಗಳನ್ನು ಪುನರಾರಂಭಿಸುವುದಾಗಿ ಪ್ರತಿಜ್ಞೆ ಮಾಡುತ್ತದೆ. ಎರಡನೇ ಹಂತವು 30 ರಿಂದ 60 ದಿನಗಳವರೆಗೆ ಇರುತ್ತದೆ ಎಂದು ನಿರೀಕ್ಷಿಸಲಾಗಿದೆ, ಇರಾನ್ನ ಪರಮಾಣು ಕಾರ್ಯಕ್ರಮದ ಸುತ್ತಲಿನ ಕಠಿಣ ಪ್ರಶ್ನೆಗಳನ್ನು ಮತ್ತು ವಿಶಾಲವಾದ ಪ್ರಾದೇಶಿಕ ಚಿತ್ರವನ್ನು ಪರಿಶೀಲಿಸುತ್ತದೆ.

# ಆರೆಂಜ್ ಕೌಂಟಿಯಲ್ಲಿ ರಾಸಾಯನಿಕ ಟ್ಯಾಂಕ್ ಸೋರಿಕೆ ಕ್ಯಾಲಿಫೋರ್ನಿಯಾ ನಿವಾಸಿಗಳ ಸ್ಥಳಾಂತರ



**ಆರೆಂಜ್ ಕೌಂಟಿ, ಮೇ 23:** ಕ್ಯಾಲಿಫೋರ್ನಿಯಾದ ಆರೆಂಜ್ ಕೌಂಟಿಯಲ್ಲಿರುವ ಏರೋಸ್ಪೇಸ್ ಸೌಲಭ್ಯದಲ್ಲಿ ಸೋರಿಕೆಯಾಗುವ ಕೈಗಾರಿಕಾ ಟ್ಯಾಂಕ್ ಸಾವಿರಾರು ಗ್ಯಾಲನ್‌ಗಳಷ್ಟು ವಿಷಕಾರಿ ರಾಸಾಯನಿಕಗಳನ್ನು ಹೊಂದಿದ್ದು, ಅದು ಸ್ಫೋಟಗೊಳ್ಳುವ ಸಾಧ್ಯತೆಯಿದೆ ಎಂದು ಅಧಿಕಾರಿಗಳು ಎಚ್ಚರಿಸಿದ ನಂತರ ಗಾರ್ಡನ್ ಗ್ರೋವ್ ಮತ್ತು ವಿಶಾಲವಾದ ಆರೆಂಜ್ ಕೌಂಟಿಯ ಹಲವಾರು ನಗರಗಳಲ್ಲಿ 44,000 ಕ್ಕೂ ಹೆಚ್ಚು ನಿವಾಸಿಗಳನ್ನು ಸ್ಥಳಾಂತರಿಸಲಾಯಿತು. ಅಧಿಕಾರಿಗಳ ಪ್ರಕಾರ, ಗಾರ್ಡನ್ ಗ್ರೋವ್‌ನಲ್ಲಿರುವ ಏರೋಸ್ಪೇಸ್ ಸೌಲಭ್ಯದಲ್ಲಿರುವ ರಾಜಿ ಮಾಡಿಕೊಂಡ ಟ್ಯಾಂಕ್‌ನಲ್ಲಿ ಸುಮಾರು 7,000 ಗ್ಯಾಲನ್‌ಗಳಷ್ಟು ಮಿಥೈಲ್ ಮೆಥಾಕ್ರಿಲೇಟ್ ಇತ್ತು – ಇದು ಪ್ಲಾಸ್ಟಿಕ್ ತಯಾರಿಕೆಯಲ್ಲಿ ಬಳಸುವ ಹೆಚ್ಚು ಸುಡುವ ಮತ್ತು ಬಾಷ್ಪಶೀಲ ರಾಸಾಯನಿಕವಾಗಿದೆ. "ಇದು ವಿಫಲಗೊಳ್ಳುತ್ತದೆ. ನಮಗೆ ಯಾವಾಗ ಎಂದು ತಿಳಿದಿಲ್ಲ" ಎಂದು ಆರೆಂಜ್ ಕೌಂಟಿ ಅಗ್ನಿಶಾಮಕ ಪ್ರಾಧಿಕಾರದ ಮುಖ್ಯಸ್ಥ ಕ್ರೇಗ್ ಕೋವೆ ಪತ್ರಿಕಾಗೋಷ್ಠಿಯಲ್ಲಿ ಹೇಳಿದರು, ಅಗ್ನಿಶಾಮಕ ಸೇವೆಯಲ್ಲಿ ಮೂರು ದಶಕಗಳಿಗೂ ಹೆಚ್ಚು ಕಾಲ ಅವರು ಎದುರಿಸಿದ ಅತ್ಯಂತ ಅಪಾಯಕಾರಿ ಘಟನೆಗಳಲ್ಲಿ ಈ ಪರಿಸ್ಥಿತಿ ಸೇರಿದೆ ಎಂದು ಎಚ್ಚರಿಸಿದ್ದಾರೆ ಎಂದು ಸಿಬಿಎಸ್ ನ್ಯೂಸ್ ವರದಿ ಮಾಡಿದೆ.

"ಇದು ನಾನು ನೋಡಿದಷ್ಟು ಕೆಟ್ಟದಾಗಿದೆ" ಎಂದು ಕೋವೆ ನಂತರ ಸ್ಥಳೀಯ ಮಾಧ್ಯಮಕ್ಕೆ ತಿಳಿಸಿದರು. "ಇದು ನಿಜ, ಗೊಂದಲ ಮಾಡಿಕೊಳ್ಳಬೇಡಿ." ಸೈಪ್ರೆಸ್, ಸ್ಟಾಂಟನ್, ಅನಾಹೈಮ್, ಬ್ಯೂನಾ ಪಾರ್ಕ್ ಮತ್ತು ವೆಸ್ಟ್‌ಮಿನಿಸ್ಟರ್‌ನ ಕೆಲವು ಭಾಗಗಳನ್ನು ಒಳಗೊಂಡ ಒಂದು ಮೈಲಿ ವ್ಯಾಪ್ತಿಯೊಳಗಿನ ಮನೆಗಳು ಮತ್ತು ವ್ಯವಹಾರಗಳನ್ನು ಒಳಗೊಳ್ಳಲು ಸ್ಥಳಾಂತರಿಸುವ ಆದೇಶಗಳನ್ನು ವಿಸ್ತರಿಸಲಾಯಿತು.

ಸ್ಥಳದಲ್ಲಿರುವ ಮೂರು ರಾಸಾಯನಿಕ ಟ್ಯಾಂಕ್‌ಗಳಲ್ಲಿ ಒಂದು ತಂಪಾಗಿಸುವ ವ್ಯವಸ್ಥೆಯ ವೈಫಲ್ಯವನ್ನು ಅನುಭವಿಸಿದೆ ಎಂದು ಅಗ್ನಿಶಾಮಕ ಅಧಿಕಾರಿಗಳು ತಿಳಿಸಿದ್ದಾರೆ, ಇದು ಬೃಹತ್ ರಾಸಾಯನಿಕ ಸೋರಿಕೆ ಅಥವಾ ಹತ್ತಿರದ ಇಂಧನ ಮತ್ತು ರಾಸಾಯನಿಕ ಟ್ಯಾಂಕ್‌ಗಳನ್ನು ಹೊತ್ತಿಸಬಹುದಾದ ಉಷ್ಣ ರನ್‌ಅವೇ ಸ್ಫೋಟದ ಅಪಾಯವನ್ನು ಸೃಷ್ಟಿಸಿದೆ. "ಅಕ್ಷರಶಃ ಎರಡು ಆಯ್ಕೆಗಳು ಉಳಿದಿವೆ" ಎಂದು ಕೋವಿ ಹೇಳಿದರು. "ಒಂದು, ಟ್ಯಾಂಕ್ ವಿಫಲಗೊಂಡು ಪಾರ್ಕಿಂಗ್ ಸ್ಥಳ ಮತ್ತು ಸುತ್ತಮುತ್ತಲಿನ ಪ್ರದೇಶಕ್ಕೆ ಸುಮಾರು 6,000 ರಿಂದ 7,000 ಗ್ಯಾಲನ್‌ಗಳಷ್ಟು ಕೆಟ್ಟ ರಾಸಾಯನಿಕಗಳನ್ನು ಚೆಲ್ಲುತ್ತದೆ. ಅಥವಾ ಎರಡು, ಟ್ಯಾಂಕ್ ಉಷ್ಣತೆಗೆ ಏರಿ ಸ್ಫೋಟಗೊಳ್ಳುತ್ತದೆ."

ಪ್ರಸ್ತುತ ಗಾಳಿಯಲ್ಲಿ ಯಾವುದೇ ಸಕ್ರಿಯ ವಿಷಕಾರಿ ಗಂಧಕವಿಲ್ಲ ಎಂದು ಅಧಿಕಾರಿಗಳು ಒತ್ತಿ ಹೇಳಿದರು, ಅಗ್ನಿಶಾಮಕ ದಳದವರು ಟ್ಯಾಂಕ್‌ಗಳನ್ನು ಸರಿಸುಮಾರು 61 ಡಿಗ್ರಿ ಫ್ಯಾರನ್‌ಹೀಟ್‌ನಲ್ಲಿ ತಂಪಾಗಿಸಲು ಮಾನವರಹಿತ ನೀರಿನ ಫಿರಂಗಿಗಳನ್ನು ಬಳಸುತ್ತಿದ್ದಾರೆ. ಸ್ಥಳಾಂತರಿಸುವ ವಲಯಗಳ ಹೊರಗೆ ನಿವಾಸಿಗಳು ಒಳಾಂಗಣದಲ್ಲಿಯೇ ಇರಬೇಕೆಂದು ಸೂಚಿಸಲಾಗಿದ್ದರೂ, ಯಾವುದೇ ಹಾನಿಕಾರಕ ಕಣಗಳು ಇನ್ನೂ ಪತ್ತೆಯಾಗಿಲ್ಲ ಎಂದು ವಾಯು ಮೇಲ್ವಿಚಾರಣಾ ತಂಡಗಳು ತಿಳಿಸಿವೆ. ತುರ್ತು ಆಶ್ರಯಗಳು ಮತ್ತು ಸಾರ್ವಜನಿಕ ಮಾಹಿತಿ ಹಾಟ್‌ಲೈನ್‌ಗಳನ್ನು ಸ್ಥಾಪಿಸಲಾಗಿದೆ ಆದರೆ ಸ್ಥಳಾಂತರಿಸುವ ಆದೇಶಗಳು ಅನಿರ್ದಿಷ್ಟವಾಗಿ ಜಾರಿಯಲ್ಲಿವೆ.

# ಉಕ್ರೇನ್ ಮೇಲೆ ರಷ್ಯಾ ದಾಳಿಯಲ್ಲಿ ಒರೆಶ್ನಿಕ್ ಕ್ಷಿಪಣಿ ಬಳಕೆ: ನಾಲ್ವರ ಸಾವು, 80ಕ್ಕೂ ಹೆಚ್ಚು ಜನರಿಗೆ ಗಾಯ

ಮಾಸ್ಕೋ/ಕೈವ್, ಮೇ 24: ಉಕ್ರೇನ್ ವಿರುದ್ಧ ರಷ್ಯಾ ಭಾರಿ ದಾಳಿ ನಡೆಸಿದ್ದು, ನೂರಾರು ಡ್ರೋನ್ ಮತ್ತು ಡಜನ್‌ಗಟ್ಟಲೆ ಕ್ಷಿಪಣಿಗಳನ್ನು ಹಾರಿಸಿದ್ದು, ಇದರಲ್ಲಿ ಕನಿಷ್ಠ ನಾಲ್ಕು ಜನರು ಸಾವನ್ನಪ್ಪಿದ್ದಾರೆ ಮತ್ತು 80 ಜನರು ಗಾಯಗೊಂಡಿದ್ದಾರೆ ಎಂದು ಉಕ್ರೇನಿಯನ್ ಅಧಿಕಾರಿಗಳು ಭಾನುವಾರ ತಿಳಿಸಿದ್ದಾರೆ. ಏತನ್ಮಧ್ಯೆ, ಭಾನುವಾರ ರಾತ್ರಿಯ ದಾಳಿಯಲ್ಲಿ ಉಕ್ರೇನ್ ಮೇಲೆ ಒರೆಶ್ನಿಕ್ ಹೈಪರ್‌ಸಾನಿಕ್ ಬ್ಯಾಲಿಸ್ಟಿಕ್ ಕ್ಷಿಪಣಿಯನ್ನು ಉಡಾಯಿಸಿರುವುದಾಗಿ ರಷ್ಯಾ ಭಾನುವಾರ ದೃಢಪಡಿಸಿದೆ. ಗಮನಾರ್ಹವಾಗಿ, ನಾಲ್ಕು ವರ್ಷಗಳ ಯುದ್ಧದಲ್ಲಿ ಪರಮಾಣು ಸಾಮರ್ಥ್ಯದ ಶಸ್ತ್ರಾಸ್ತ್ರವನ್ನು ಬಳಸಲಾಗುತ್ತಿರುವುದು ಇದು ಮೂರನೇ ಬಾರಿ ಎಂದು ರಷ್ಯಾದ ಸುದ್ದಿ ಸಂಸ್ಥೆಗಳು ವರದಿ ಮಾಡಿವೆ. ಉಕ್ರೇನಿಯನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಅವರು ಕೈವ್ ಪ್ರಮುಖ ಗುರಿಯಾಗಿತ್ತು ಎಂದು ಹೇಳಿದರು, ಆದರೆ ಇತರ ಪ್ರದೇಶಗಳು ಸಹ ದಾಳಿಗೊಳಗಾದವು, ಕನಿಷ್ಠ 83 ಜನರು ಗಾಯಗೊಂಡರು. ವಸತಿ ಕಟ್ಟಡಗಳು ಮತ್ತು ಶಾಲೆಗಳಿಗೆ ಹಾನಿಯಾಗಿರುವ ವರದಿಗಳಿವೆ. ಇದನ್ನು ಉಕ್ರೇನ್ ಮೇಲೆ ಸಣ್ಣ ದಾಳಿ ಎಂದು ಕರೆದ ರಷ್ಯಾದ ರಕ್ಷಣಾ ಸಚಿವಾಲಯ, ಒರೆಶ್ನಿಕ್ ಹೈಪರ್‌ಸಾನಿಕ್ ಕ್ಷಿಪಣಿಯನ್ನು ದಾಳಿಯಲ್ಲಿ ಬಳಸಲಾಗಿದೆ ಎಂದು ಹೇಳಿದೆ, ಇದನ್ನು ಉಕ್ರೇನ್ನ "ನಾಗರಿಕ ಮೂಲಸೌಕರ್ಯದ ಮೇಲಿನ ದಾಳಿಗೆ" ಪ್ರತಿಕ್ರಿಯೆಯಾಗಿ ಬಂದಿರುವುದಾಗಿ ವಿವರಿಸಿದೆ. "ರಷ್ಯಾದ ಭೂಪ್ರದೇಶದಲ್ಲಿನ ನಾಗರಿಕ ಮೂಲಸೌಕರ್ಯದ ಮೇಲೆ ಉಕ್ರೇನ್ ನಡೆಸಿದ ಭಯೋತ್ಪಾದಕ ದಾಳಿಗೆ ಪ್ರತಿಕ್ರಿಯೆಯಾಗಿ, ರಷ್ಯಾದ ಒಕ್ಕೂಟದ ಸಶಸ್ತ್ರ ಪಡೆಗಳು ಒರೆಶ್ನಿಕ್ ಬ್ಯಾಲಿಸ್ಟಿಕ್ ಕ್ಷಿಪಣಿಗಳು, ಇಸ್ಕಂದರ್ ವಾಯು-ಉಡಾವಣಾ ಬ್ಯಾಲಿಸ್ಟಿಕ್ ಕ್ಷಿಪಣಿಗಳು, ಕಿಂಜಾಲ್ ಹೈಪರ್‌ಸಾನಿಕ್ ವಾಯುಉಡಾವಣಾ ಬ್ಯಾಲಿಸ್ಟಿಕ್ ಕ್ಷಿಪಣಿಗಳು ಮತ್ತು ಸಿರ್ಕಾನ್ ಕ್ಷಿಪಣಿ ಕ್ರೂಸ್ ಬಳಸಿಕೊಂಡು ಬೃಹತ್ ದಾಳಿ ನಡೆಸಿವೆ" ಎಂದು ರಕ್ಷಣಾ ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ. ಇದು ಧ್ವನಿಯ 10 ಪಟ್ಟು ಹೆಚ್ಚು ವೇಗದಲ್ಲಿ ಚಲಿಸುತ್ತದೆ ಎಂದು ವರದಿಯಾಗಿದೆ, ಪ್ರತಿಬಂಧಿಸಲು ಅಸಾಧ್ಯವಾಗಿದೆ ಮತ್ತು ಸಾಂಪ್ರದಾಯಿಕ ಮತ್ತು ಪರಮಾಣು ಸಿಡಿತಲೆಗಳನ್ನು ಸಾಗಿಸುವ ಸಾಮರ್ಥ್ಯವನ್ನು ಹೊಂದಿದೆ ಎಂದು ತಿಳಿದುಬಂದಿದೆ.

"ಉಕ್ರೇನಿಯನ್ ನಾಗರಿಕ ಮೂಲಸೌಕರ್ಯದ ಮೇಲೆ ಯಾವುದೇ ದಾಳಿಗಳನ್ನು ಯೋಜಿಸಲಾಗಿಲ್ಲ ಅಥವಾ ನಡೆಸಲಾಗಿಲ್ಲ" ಎಂದು ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ. ರಷ್ಯಾದ ಪಡೆಗಳು ಉಕ್ರೇನಿಯನ್ ಮಿಲಿಟರಿ-ಕೈಗಾರಿಕಾ ಸಂಕೀರ್ಣ ಸೌಲಭ್ಯಗಳು, ಮಿಲಿಟರಿ ಮೂಲಸೌಕರ್ಯ, ನೆಲದ ಪಡೆಗಳ ಮುಖ್ಯ ಕಮಾಂಡ್‌ನ ನೆಲೆಗಳು, ಉಕ್ರೇನಿಯನ್ ರಕ್ಷಣಾ ಸಚಿವಾಲಯದ ಮುಖ್ಯ ಗುಪ್ತಚರ ನಿರ್ದೇಶನಾಲಯ ಮತ್ತು ಉಕ್ರೇನಿಯನ್ ಸಶಸ್ತ್ರ ಪಡೆಗಳ ಇತರ ಕಮಾಂಡ್ ನೆಲೆಗಳನ್ನು ಧ್ವಂಸಗೊಳಿಸಿವೆ ಎಂದು ಸಚಿವಾಲಯವನ್ನು ಉಲ್ಲೇಖಿಸಿ ಸ್ಪುಟ್ನಿಕ್ ವರದಿ ಮಾಡಿದೆ. ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರು ಶುಕ್ರವಾರ ಸ್ಟಾರೋಬಿಲ್ಸ್ಕ ಪಟ್ಟಣದಲ್ಲಿರುವ ವಿದ್ಯಾರ್ಥಿ ನಿಲಯದ ಮೇಲೆ ಉಕ್ರೇನ್ ಮಾರಕ ದಾಳಿ ನಡೆಸಿದೆ ಎಂದು ಆರೋಪಿಸಿದ್ದಾರೆ, ಇದರಲ್ಲಿ 21 ಜನರು ಸಾವನ್ನಪ್ಪಿದ್ದಾರೆ. ಉಕ್ರೇನ್‌ನ ಸಶಸ್ತ್ರ ಪಡೆಗಳ ಜನರಲ್ ಸ್ಟಾಫ್ ಶುಕ್ರವಾರ ರಾತ್ರಿ ರಷ್ಯಾ ಆಕ್ರಮಿತ ಪೂರ್ವ ಉಕ್ರೇನ್ನ ಸ್ಟಾರೋಬಿಲ್ಸ್ಕ ಬಳಿ ದಾಳಿ ನಡೆಸಿದೆ ಎಂದು ಹೇಳಿತು, ಆದರೆ ಅದು ರಷ್ಯಾದ ಗಣ್ಯ ಮಿಲಿಟರಿ ಘಟಕದ ಮೇಲೆ ದಾಳಿ ನಡೆಸಿದೆ ಎಂದು ಸಮರ್ಥಿಸಿಕೊಂಡಿತು.



## ಒರೆಶ್ನಿಕ್ ಕ್ಷಿಪಣಿ ಬಳಕೆಗೆ EU ಖಂಡನೆ

ಉಕ್ರೇನ್ ಮೇಲೆ ರಾತ್ರಿಯಿಡೀ ನಡೆದ ಬೃಹತ್ ದಾಳಿಯಲ್ಲಿ ರಷ್ಯಾ ಪರಮಾಣು ಸಾಮರ್ಥ್ಯದ ಒರೆಶ್ನಿಕ್ ಹೈಪರ್‌ಸಾನಿಕ್ ಕ್ಷಿಪಣಿಯನ್ನು ಬಳಸಿದೆ ಎಂದು ವರದಿಯಾಗಿದೆ, ಇದು ಕನಿಷ್ಠ ನಾಲ್ಕು ಜನರನ್ನು ಕೊಂದು 80 ಕ್ಕೂ ಹೆಚ್ಚು ಜನರನ್ನು ಗಾಯಗೊಳಿಸಿತು. ಯುರೋಪಿಯನ್ ಕೌನ್ಸಿಲ್ ಅಧ್ಯಕ್ಷ ಆಂಟೋನಿಯೊ ಕೋಸ್ಟಾ ಕೂಡ ದಾಳಿಯನ್ನು ಖಂಡಿಸಿದರು. ಒರೆಶ್ನಿಕ್ ಕ್ಷಿಪಣಿಯ ವರದಿಯ ಬಳಕೆಯನ್ನು ಅವರು "ರಾಜಕೀಯ ಹೆದರಿಕೆಯ ತಂತ್ರ" ಎಂದು ಬಣ್ಣಿಸಿದರು ಮತ್ತು ಪರಮಾಣು ಸಿಡಿತಲೆಗಳನ್ನು ಹೊತ್ತೊಯ್ಯುವ ಸಾಮರ್ಥ್ಯ ವಿರುವ ಶಸ್ತ್ರಾಸ್ತ್ರಗಳನ್ನು ನಿಯೋಜಿಸುವುದು "ಅಜಾಗರೂಕ ಪರಮಾಣು ಬ್ರಿಂಕ್ಮ್ಯಾನ್ಶಿಪ್" ಎಂದು ಎಚ್ಚರಿಸಿದರು.

# ಹಾರ್ಮುಜ್ ಶೀಘ್ರ ಮತ್ತೆ ಮುಕ್ತ: ಸ್ಟಾರ್ಮರ್

**ಲಂಡನ್, ಮೇ 24:** ಯುಕೆ ಪ್ರಧಾನಿ ಕೀರ್ ಸ್ಟಾರ್ಮರ್ ಭಾನುವಾರ "ಯುಎಸ್ ಮತ್ತು ಇರಾನ್ ನಡುವಿನ ಒಪ್ಪಂದದತ್ತ ಪ್ರಗತಿಯನ್ನು" ಸ್ವಾಗತಿಸಿದರು, ಅಮೆರಿಕ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೊ ನಡೆಯುತ್ತಿರುವ ಮಾತುಕತೆಗಳಲ್ಲಿ ಗಮನಾರ್ಹ ಪ್ರಗತಿಯನ್ನು ಸೂಚಿಸಿದ ಸ್ವಲ್ಪ ಸಮಯದ ನಂತರ ಮತ್ತು ದಿನದ ನಂತರ ಹೆಚ್ಚಿನ ಘೋಷಣೆಗಳನ್ನು ಮಾಡಬಹುದೆಂದು ಸುಳಿವು ನೀಡಿದರು. ಅಮೆರಿಕದ ಅಭಿಪ್ರಾಯಗಳು ಮತ್ತು ನಿರ್ಧಾರಗಳನ್ನು ಪ್ರತಿಧ್ವನಿಸುತ್ತಾ, ಸ್ಟಾರ್ಮರ್, "ಇರಾನ್ ಎಂದಿಗೂ ಪರಮಾಣು ಶಸ್ತ್ರಾಸ್ತ್ರವನ್ನು ಅಭಿವೃದ್ಧಿಪಡಿಸಲು ಅನುಮತಿಸಬಾರದು" ಎಂದು ಪ್ರತಿಪಾದಿಸಿದರು. ಸ್ಟಾರ್ಮರ್ ಹೇಳಿದರು, "ಸಂಘರ್ಷವನ್ನು ಕೊನೆಗೊಳಿಸುವ ಮತ್ತು ಬೇಷರತ್ತಾದ ಮತ್ತು ಅನಿಯಂತ್ರಿತ ಸಂಚರಣೆ ಸ್ವಾತಂತ್ರ್ಯದೊಂದಿಗೆ ಹಾರ್ಮುಜ್ ಜಲಸಂಧಿಯನ್ನು ಮತ್ತೆ ತೆರೆಯುವ ಒಪ್ಪಂದವನ್ನು ನಾವು ನೋಡಬೇಕಾಗಿದೆ." ಬ್ರಿಟಿಷ್ ನಾಗರಿಕರನ್ನು ಸಂಘರ್ಷದ ಪರಿಣಾಮದಿಂದ ರಕ್ಷಿಸಲು ಬ್ರಿಟನ್ ಸರ್ಕಾರ "ಯುಕೆ ಮಾಡಬಹುದಾದ ಎಲ್ಲವನ್ನೂ" ಮಾಡುತ್ತದೆ ಎಂದು ಪ್ರಧಾನಿ ಹೇಳಿದರು ಮತ್ತು "ಈ ಕ್ಷಣವನ್ನು ವಶಪಡಿಸಿಕೊಳ್ಳಲು ಮತ್ತು ದೀರ್ಘಾವಧಿಯ ರಾಜತಾಂತ್ರಿಕ ಇತ್ಯರ್ಥವನ್ನು ಸಾಧಿಸಲು" ಬ್ರಿಟನ್ ಅಂತರರಾಷ್ಟ್ರೀಯ ಪಾಲುದಾರರೊಂದಿಗೆ ಕೆಲಸ ಮಾಡುತ್ತದೆ ಎಂದು ಹೇಳಿದರು.

ನವದೆಹಲಿಯಲ್ಲಿ ವಿದೇಶಾಂಗ ಸಚಿವ ಸುಬ್ರಹ್ಮಣ್ಯಂ ಜೈಶಂಕರ್ ಅವರೊಂದಿಗೆ ಜಂಟಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ರುಬಿಯೊ, ಇರಾನ್ ಒಳಗೊಂಡ ಚರ್ಚೆಗಳಲ್ಲಿ "ಗಮನಾರ್ಹ ಪ್ರಗತಿ" ಸಾಧಿಸಲಾಗಿದೆ ಎಂದು ಹೇಳಿದ ನಂತರ ಈ ಹೇಳಿಕೆಗಳು ಬಂದವು, ಆದರೆ ಮಾತುಕತೆಗಳು ಇನ್ನೂ ಅಂತಿಮ ಹಂತವನ್ನು ತಲುಪಿಲ್ಲ. "ಗಮನಾರ್ಹ ಪ್ರಗತಿ ಸಾಧಿಸಲಾಗಿದೆ, ಆದರೆ ಅಂತಿಮ ಪ್ರಗತಿಯಲ್ಲ. ಇನ್ನೂ ಮಾಡಬೇಕಾದ ಕೆಲಸವಿದೆ" ಎಂದು ರುಬಿಯೊ ಹೇಳಿದರು. ಹಾರ್ಮುಜ್ ಜಲಸಂಧಿಗೆ ಸಂಬಂಧಿಸಿದ ಸಕಾರಾತ್ಮಕ ಬೆಳವಣಿಗೆಗಳ ಬಗ್ಗೆ ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಸುಳಿವು ನೀಡಿದರು, ಕಳೆದ 48 ಗಂಟೆಗಳಲ್ಲಿ ರಾಜತಾಂತ್ರಿಕ ಪ್ರಯತ್ನಗಳು ಪ್ರಸ್ತುತ ಪ್ರಗತಿ ಮುಂದುವರಿದರೆ "ಟೋಲ್‌ಗಳಿಲ್ಲದೆ ಹಾರ್ಮುಜ್ ಜಲಸಂಧಿಯನ್ನು ಸಂಪೂರ್ಣವಾಗಿ ತೆರೆಯಬಹುದು" ಎಂದು ಹೇಳಿದರು.




**ಜಾರ್ಖಂಡ್‌ನ ರಾಂಚಿಯಲ್ಲಿರುವ ಬಿರ್ಸಾ ಮುಂಡಾ ಫುಟ್‌ಬಾಲ್ ಕ್ರೀಡಾಂಗಣದಲ್ಲಿ ಭಾನುವಾರ ನಡೆದ 29ನೇ ರಾಷ್ಟ್ರೀಯ ಸೀನಿಯರ್ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್‌ನಲ್ಲಿ ಪುರುಷರ ಹೈಜಂಪ್ ಸ್ಪರ್ಧೆಯ ನಂತರ ಮಹಾರಾಷ್ಟ್ರದ ಅಥ್ಲೀಟ್ ಸರ್ವೇಶ್ ಅನಿಲ್ ಕುಶಾರೆ (ಕೇಂದ್ರ) ಮತ್ತು ಸಹ ಕ್ರೀಡಾಪಟುಗಳು ಚಿನ್ನದ ಪದಕವನ್ನು ಪಡೆದರು.**

# ಮುಂಬೈ ಮಣಿಸಿ 4ನೇ ತಂಡವಾಗಿ ಪ್ಲೇಆಫ್‌ಗೇರಿದ ರಾಜಸ್ಥಾನ

**ಮುಂಬೈ, ಮೇ 24:** ಮುಂಬೈನ ವಾಂಖೆಡೆ ಮೈದಾನದಲ್ಲಿ ನಡೆದ ಐಪಿಎಲ್ 69ನೇ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ಹಾಗೂ ರಾಜಸ್ಥಾನ ರಾಯಲ್ಸ್ ತಂಡಗಳು ಮುಖಾಮುಖಿಯಾಗಿದ್ದವು. ಇದು ಲೀಗ್ ಹಂತದಲ್ಲಿ ಎರಡು ತಂಡಗಳ ಕೊನೆಯ ಪಂದ್ಯವಾಗಿತ್ತು. ಪ್ಲೇಆಫ್ ದೃಷ್ಟಿಯಿಂದ ಈ ಪಂದ್ಯ ರಾಜಸ್ಥಾನ್‌ಗೆ ಬಹಳ ಮುಖ್ಯವಾಗಿತ್ತು. ಇಂದಿನ ಪಂದ್ಯದಲ್ಲಿ ಗೆದ್ದರಷ್ಟೇ ರಾಜಸ್ಥಾನ ಪ್ಲೇಆಫ್‌ನಲ್ಲಿ ತನ್ನ ಸ್ಥಾನವನ್ನು ಖಚಿತಪಡಿಸಿಕೊಳ್ಳುತ್ತಿತ್ತು. ಅದರಂತೆ ಗೆಲ್ಲಲೇಬೇಕಾದ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ತಂಡವನ್ನು ಮಣಿಸಿದ ರಾಜಸ್ಥಾನ ರಾಯಲ್ಸ್ ತಂಡ 4ನೇ ತಂಡವಾಗಿ ಪ್ಲೇಆಫ್‌ಗೆ ಅರ್ಹತೆ ಪಡೆದುಕೊಂಡಿದೆ. ರಾಜಸ್ಥಾನ್ ಗೆಲುವಿನಿಂದ ಪಂಜಾಬ್ ಕಿಂಗ್ಸ್ ಹಾಗೂ ಕೆಕೆಆರ್ ತಂಡಗಳ ಪ್ಲೇಆಫ್‌ಗೇರುವ ಕನಸು ಕಮರಿ ಹೋಗಿದೆ. ಈ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ರಾಜಸ್ಥಾನ್ 205 ರನ್ ಕಲೆಹಾಕಿತು. ಈ ಗುರಿಯ ಬೆನ್ನುಹತ್ತಿದ ಮುಂಬೈ 175 ರನ್‌ಗಳಿಸಲಷ್ಟೇ ಶಕ್ತವಾಗಿ 30 ರನ್‌ಗಳಿಂದ ಸೋಲೊಪ್ಪಿಕೊಂಡಿತು.



### ರಾಜಸ್ಥಾಮಕ್ಕೆ ಆರಂಭಿಕ ಆಘಾತ

ಈ ಪಂದ್ಯದಲ್ಲಿ, ಮೊದಲು ಬ್ಯಾಟ್ ಮಾಡಿದ ರಾಜಸ್ಥಾನ ರಾಯಲ್ಸ್ 20 ಓವರ್‌ಗಳಲ್ಲಿ 8 ವಿಕೆಟ್‌ಗಳ ನಷ್ಟಕ್ಕೆ 205 ರನ್ ಗಳಿಸಿತು. ಆದಾಗ್ಯೂ ತಂಡಕ್ಕೆ ಉತ್ತಮ ಆರಂಭ ಸಿಗಲಿಲ್ಲ. ಆರಂಭಿಕರಾದ ಯಶಸ್ವಿ ಜೈಸ್ವಾಲ್ 27 ರನ್‌ಗಳಿಗೆ ಮತ್ತು ವೈಭವ್ ಸೂರ್ಯವಂಶಿ 4 ರನ್‌ಗಳಿಗೆ ಔಟಾದರು. 38 ರನ್‌ಗಳ ನಂತರ ಧ್ರುವ್ ಜುರೆಲ್ ಕೂಡ ವಿಕೆಟ್ ಕಳೆದುಕೊಂಡರು. ನಾಯಕ ರಿಯಾನ್ ಪರಾಗ್ ಕೂಡ 14 ರನ್‌ಗಳಿಗೆ ಸುಸ್ತಾದರು. ಹೀಗಾಗಿ ರಾಜಸ್ಥಾನ ತಂಡ ಪ್ರಮುಖ 5 ವಿಕೆಟ್‌ಗಳನ್ನು ಕಳೆದುಕೊಂಡು 119 ರನ್ ಕಲೆಹಾಕಿತ್ತು.

### ಆರ್ಚರ್ ಸ್ಫೋಟಕ ಬ್ಯಾಟಿಂಗ್

ಇಲ್ಲಿಂದ ತಂಡದ ಇನ್ನಿಂಗ್ಸ್ ನಿಭಾಯಿಸಿದ ಜೋಫ್ರಾ ಆರ್ಚರ್ ತಂಡವನ್ನು 200 ರನ್‌ಗಳ ಗಡಿಗೆ ತಂದರು. ಜೋಫ್ರಾ ಆರ್ಚರ್ ಕೇವಲ 15 ಎಸೆತಗಳಲ್ಲಿ 213.33 ಸ್ಟ್ರೈಕ್ ರೇಟ್‌ನಲ್ಲಿ 32 ರನ್ ಗಳಿಸಿದರು. ಇದರಲ್ಲಿ 1 ಬೌಂಡರಿ ಮತ್ತು 3 ಸಿಕ್ಸರ್‌ಗಳು ಸೇರಿದ್ದವು. ಆರ್ಚರ್ ಜೊತೆಗೆ ಜಡೇಜಾ ಹಾಗೂ ಬರ್ಗರ್ ಕೂಡ ಉಪಯುಕ್ತ ಇನ್ನಿಂಗ್ಸ್ ಆಡುವ ಮೂಲಕ ತಂಡವನ್ನು 205 ರನ್‌ಗಳಿಗೆ ಕೊಂಡೊಯ್ದರು. ಮುಂಬೈ ಇಂಡಿಯನ್ಸ್ ಪರ ದೀಪಕ್ ಚಾಹರ್ ಮತ್ತು ಶಾರ್ದೂಲ್ ಠಾಕೂರ್ ತಲಾ 2 ವಿಕೆಟ್‌ಗಳನ್ನು ಪಡೆದರು.

### ಸೂರ್ಯಕುಮಾರ್ ಏಕಾಂಗಿ ಹೋರಾಟ

206 ರನ್‌ಗಳ ಗುರಿಯ ಸವಾಲನ್ನು ಗೆಲ್ಲಲು ಮುಂಬೈ ಇಂಡಿಯನ್ಸ್‌ಗೂ ಉತ್ತಮ ಆರಂಭ ಸಿಗಲಿಲ್ಲ. ಜೋಫ್ರಾ ಆರ್ಚರ್ ಮೊದಲ ಓವರ್‌ನಲ್ಲೇ ರೋಹಿತ್ ಶರ್ಮಾ ಅವರನ್ನು ಶೂನ್ಯಕ್ಕೆ ಔಟ್ ಮಾಡಿದರು. ನಂತರ ನಮನ್ ಧೀರ್ ಕೂಡ ಆರ್ಚರ್‌ಗೆ ಬಲಿಯಾದರು. ರಯಾನ್ ರಿಕಲ್ಟನ್ 12 ರನ್ ಬಾರಿಸಿ ಬರ್ಗರ್‌ಗೆ ವಿಕೆಟ್ ಒಪ್ಪಿಸಿದರು. ಆದಾಗ್ಯೂ ಒಂದು ತುದಿಯಲ್ಲಿ ತಂಡದ ಇನ್ನಿಂಗ್ಸ್ ನಿಭಾಯಿಸಿದ ಸೂರ್ಯಕುಮಾರ್ ಯಾದವ್ 60 ರನ್‌ಗಳ ಹೋರಾಟದ ಇನ್ನಿಂಗ್ಸ್ ಆಡಿದರಾದರೂ ತಂಡವನ್ನು ಗೆಲುವಿನ ದಡಮುಟ್ಟಿಸುವಲ್ಲಿ ವಿಫಲರಾದರು. ಸೂರ್ಯಕುಮಾರ್ ಹೊರತುಪಡಿಸಿ ವಿಲ್ ಜ್ಯಾಕ್ಸ್ 33 ಮತ್ತು ಹಾರ್ದಿಕ್ ಪಾಂಡ್ಯ 34 ರನ್‌ಗಳ ಇನ್ನಿಂಗ್ಸ್ ಆಡಿದರು.


ರಾಜಸ್ಥಾನ ಪರ ಆಲ್‌ರೌಂಡರ್ ಪ್ರದರ್ಶನ ನೀಡಿದ ಜೋಫ್ರಾ ಆರ್ಚರ್ ಬೌಲಿಂಗ್‌ನಲ್ಲಿ 3 ವಿಕೆಟ್ ಪಡೆದರೆ, ಬ್ರಿಜೇಶ್ ಶರ್ಮಾ ಕೂಡ ಎರಡು ವಿಕೆಟ್ ಪಡೆಯುವ ಮೂಲಕ ತಂಡದ ಗೆಲುವಿಗೆ ಗಣನೀಯ ಕೊಡುಗೆ ನೀಡಿದರು. ಇವಲ್ಲದೆ, ಯುವ ಸ್ಪಿನ್ನರ್ ಯಶರಾಜ್ ಪೂಂಜಾ ಕೂಡ ಎರಡು ವಿಕೆಟ್ ಪಡೆದರು.

# ನಾಳೆಯಿಂದ ಬೆಂಗಳೂರಲ್ಲಿ ಅಂತಾರಾಷ್ಟ್ರೀಯ ಪ್ಯಾರಾ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್

**ಬೆಂಗಳೂರು, ಮೇ 24:** ಭಾರತೀಯ ಪ್ಯಾರಾಲಿಂಪಿಕ್ಸ್ ಸಮಿತಿ(ಪಿಸಿಐ) ಆಯೋಜಿಸುವ 8ನೇ ಆವೃತ್ತಿಯ ಭಾರತೀಯ ಮುಕ್ತ ಪ್ಯಾರಾ ಅಥ್ಲೆಟಿಕ್ಸ್ ಅಂತಾರಾಷ್ಟ್ರೀಯ್ ಚಾಂಪಿಯನ್‌ಶಿಪ್ ಮೇ 26ರಿಂದ 28ರ ವರೆಗೆ ಬೆಂಗಳೂರಿನಲ್ಲಿ ನಡೆಯಲಿದೆ. ನಗರದ ಕಂಠೀರವ ಕ್ರೀಡಾಂಗಣದಲ್ಲಿ 3 ದಿನಗಳ ಕಾಲ ನಡೆಯಲಿರುವ ಚಾಂಪಿಯನ್ಶಿಪ್ನಲ್ಲಿ ಭಾರತ ಸೇರಿ ಒಟ್ಟು 5 ರಾಷ್ಟ್ರಗಳ ಕ್ರೀಡಾಪಟುಗಳು ಪಾಲ್ಗೊಳ್ಳಲಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಭಾರತೀಯ ಪ್ಯಾರಾಲಿಂಪಿಕ್ಸ್ ಸಮಿತಿ ಅಧ್ಯಕ್ಷ ದೇವೆಂದ್ರ ಝುಝಾರಿಯಾ ಅವರು ಚಾಂಪಿಯನ್‌ಶಿಪ್ ಬಗ್ಗೆ ಮಾಹಿತಿ ನೀಡಿದರು. ಈ ಚಾಂಪಿಯನ್‌ಶಿಪ್, ಅಕ್ಟೋಬರ್ 18ರಿಂದ 24ರ ವರೆಗೆ ಜಪಾನ್‌ನಲ್ಲಿ ನಡೆಯಲಿರುವ 5ನೇ ಆವೃತ್ತಿಯ ಏಷ್ಯನ್ ಪ್ಯಾರಾ ಕ್ರೀಡಾಕೂಟಕ್ಕೆ ಆಯ್ಕೆ ಟ್ರಯಲ್ಸ್ ಆಗಿರಲಿದೆ ಎಂದು ಅವರು ತಿಳಿಸಿದರು.

ಚಾಂಪಿಯನ್‌ಶಿಪ್‌ನಲ್ಲಿ ಭಾರತದ 341 ಕ್ರೀಡಾಪಟುಗಳು ಪಾಲ್ಗೊಳ್ಳಲಿದ್ದಾರೆ. ಪ್ಯಾರಾಲಿಂಪಿಕ್ಸ್, ವಿಶ್ವ ಪ್ಯಾರಾ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್, ಏಷ್ಯನ್ ಪ್ಯಾರಾ ಗೇಮ್ಸ್ ಪದಕ ವಿಜೇತರು ಕೂಟದಲ್ಲಿ ಭಾಗವಹಿಸಲಿದ್ದಾರೆ. ಎರಡು ಬಾರಿ ಪ್ಯಾರಾಲಿಂಪಿಕ್ಸ್ ಹಾಗೂ ಮೂರು ಬಾರಿ ವಿಶ್ವ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್ ಚಿನ್ನ ವಿಜೇತ ಜಾವೆಲಿನ್‌ಪಟು ಸುಮಿತ್ ಅಂಟಿಲ್ ಚಾಂಪಿಯನ್‌ಶಿಪ್‌ನ ಪ್ರಮುಖ ಆಕರ್ಷಣೆ ಎನಿಸಿಕೊಳ್ಳಲಿದ್ದಾರೆ.




ಇದರ ಜೊತೆಗೆ ಕಿರ್ಗಿಸ್ತಾನ, ಫಿಲಿಪ್ಪೀನ್ಸ್, ಶ್ರೀಲಂಕಾ, ಥಾಯ್ಲೆಂಡ್‌ನ ಸ್ಪರ್ಧಿಗಳೂ ಭಾಗವಹಿಸಲಿದ್ದಾರೆ. ಅಫ್ಘಾನಿಸ್ತಾನದ ಕೆಲ ಸ್ಪರ್ಧಿಗಳೂ ಕೂಟದಲ್ಲಿ ಪಾಲ್ಗೊಳ್ಳುವ ನಿರೀಕ್ಷೆಯಿದೆ.

ಚಾಂಪಿಯನ್‌ಶಿಪ್‌ನಲ್ಲಿ 100 ಮೀಟರ್, 200 ಮೀಟರ್, 400 ಮೀಟರ್, 800 ಮೀಟರ್, 1500 ಮೀಟರ್, ಹೈಜಂಪ್, ಲಾಂಗ್ ಜಂಪ್, ಡಿಸ್ಕಸ್ ಎಸೆತ, ಶಾಟ್‌ಪುಟ್, ಜಾವೆಲಿನ್ ಥ್ರೋ, ಕ್ಲಬ್ ಥ್ರೋ ಸೇರಿದಂತೆ ಪುರುಷ ಹಾಗೂ ಮಹಿಳೆಯರ ಒಟ್ಟು 155 ವಿಭಾಗಗಳಲ್ಲಿ ಸ್ಪರ್ಧೆಗಳು ನಡೆಯಲಿವೆ ಎಂದು ಅವರು ಮಾಹಿತಿ ನೀಡಿದರು.

ಬಳಿಕ ಮಾತನಾಡಿದ ಸುಮಿತ್ ಅಂಟಿಲ್ ಅವರು ಏಷ್ಯನ್ ಪ್ಯಾರಾ ಗೇಮ್ಸ್‌ನಲ್ಲಿ ಪಾಲ್ಗೊಳ್ಳುವ ಕ್ರೀಡಾಪಟುಗಳು ಹಿಂದೆಂದಿಗಿಂತ ಈ ವರ್ಷ ಹೆಚ್ಚಿನ ಪದಕ ಗೆಲ್ಲುವ ವಿಶ್ವಾಸ ವ್ಯಕ್ತಪಡಿಸಿದರು. ಕಳೆದ ಏಷ್ಯನ್ ಪ್ಯಾರಾ ಗೇಮ್ಸ್‌ನಲ್ಲಿ ಭಾರತ 108 ಪದಕಗಳನ್ನು ಗೆದ್ದಿತ್ತು. ಈ ಬಾರಿ ಭಾರತೀಯ ಕ್ರೀಡಾಪಟುಗಳು ಮತ್ತಷ್ಟು ಪದಕ ಸಾಧನೆ ಮಾಡಲಿದ್ದಾರೆ ಎಂದು ಭರವಸೆ ವ್ಯಕ್ತಪಡಿಸಿದರು. ಸುದ್ದಿಗೋಷ್ಠಿಯಲ್ಲಿ ಹೈಯರ್ ಇಂಡಿಯಾ ಸಂಸ್ಥೆಯ ಅಧ್ಯಕ್ಷ ಎನ್.ಎಸ್.ಸತೀಶ್, ಭಾರತೀಯ ಪ್ಯಾರಾಲಿಂಪಿಕ್ಸ್ ಸಮಿತಿಯ ಮುಖ್ಯಸ್ಥ ಡಾ.ಸತ್ಯನಾರಾಯಣ ಸೇರಿದಂತೆ ಪ್ರಮುಖರು ಉಪಸ್ಥಿತರಿದ್ದರು.

### ಕರ್ನಾಟಕದ 15 ಪ್ಯಾರಾ ಅಥ್ಲೀಟ್‌ಗಳು ಭಾಗಿ

ಚಾಂಪಿಯನ್‌ಶಿಪ್‌ನಲ್ಲಿ ಕರ್ನಾಟಕದ 15 ಕ್ರೀಡಾಪಟುಗಳು ಭಾಗವಹಿಸಲಿದ್ದಾರೆ. ಮಂಜುಳಾ, ಭಾರತಿ ಭಾರತೇಶ್, ಗಂಗವ್ವ ನೀಲಪ್ಪ, ಹರ್ಷಿತಾ, ಶೈಲಾ ಶಿಲ್ಪಾ, ಮೇಧಾ ಜಯಂತ್, ರಾಧಾ ವೆಂಕಟೇಶ್, ರಕ್ಷಿತಾ ರಾಜು, ಸೌಮ್ಯ, ಬಸವರಾಜ ಕುರುಬ, ಸಚ್ಚಿದಾನಂದ ದೇವಾಡಿಗ, ಗುರುರಾಜು, ಶಂಕರಪ್ಪ ಶರತ್, ರಕ್ಷಿತ್ ಹೊಸನಗರ ಸೋಮಶೇಖರ, ಸಿದ್ದಾರ್ಥ್ ಮಂಜುನಾಥ್ ಸ್ಪರ್ಧಿಸಲಿದ್ದಾರೆ.




**ಭಾರತೀಯ ಕ್ರೀಡಾ ಪ್ರಾಧಿಕಾರದ ಎನ್‌ಸಿಒಇ ಗಾಂಧಿನಗರದಲ್ಲಿ ಭಾನುವಾರ ಕೇಂದ್ರ ಸಚಿವ ಮನ್ಸುಖ್ ಮಾಂಡವಿಯಾ ಅವರು ಸಮಗ್ರ ಕ್ರೀಡಾ ಮೂಲಸೌಕರ್ಯ ಸೌಲಭ್ಯಗಳನ್ನು ಉದ್ಘಾಟಿಸಿದರು.**